ಸಂಪುಟ: 05 ಸಂಚಿಕೆ: 170 ಪುಟಗಳು: 08 ಬುಧವಾರ 03 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**


ಅಧಿಕಾರ, ಅಹಂಕಾರ, ದುರಹಂಕಾರ ಯಾರಿಗೂ ಶಾಶ್ವತವಲ್ಲ ಅದು ಕೇವಲ ಸಮಯವಿದ್ದಾಗ ಮಾತ್ರ ಎಂಬ ಅರಿವಿದ್ದರೆ ಸಾಕು.

## ಯಡಿಯೂರಪ್ಪ, ಎಚ್‌ಡಿ ರೇವಣ್ಣ, ರನ್ಯಾ ರಾವ್ ವಿರುದ್ಧದ ವಿವಿಧ ಪ್ರಕರಣಗಳ ಹೈಕೋರ್ಟ್ ವಿಚಾರಣೆ

• ಉದಯವಾಹಿನಿ, ಬೆಂಗಳೂರು

ಬಿಎಸ್ ಯಡಿಯೂರಪ್ಪ, ಎಚ್‌ಡಿ ರೇವಣ್ಣ, ರನ್ಯಾ ರಾವ್ ವಿರುದ್ಧದ ವಿವಿಧ ಪ್ರಕರಣಗಳ ವಿಚಾರಣೆಯನ್ನು ಮಂಗಳವಾರ ಕರ್ನಾಟಕ ಹೈಕೋರ್ಟ್ ನಡೆಸಿತು. ಎಲ್ಲಾ ಪ್ರಕರಣಗಳ ವಿಚಾರಣೆಯು ಮುಂದೂಡಲಾಗಿದ್ದು, ರೇವಣ್ಣ ಹಾಗೂ ಯಡಿಯೂರಪ್ಪ ಅವರಿಗೆ ರಿಲೀಫ್ ಸಿಕ್ಕಿದೆ.





ಮನೆಕೆಲಸದ ಮಹಿಳೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಸಂಬಂಧ ಜೆಡಿಎಸ್ ಶಾಸಕ ಎಚ್ ಡಿ ರೇವಣ್ಣ ವಿರುದ್ಧ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದ ರದ್ದತಿ ಕೋರಿ ರೇವಣ್ಣ ಸಲ್ಲಿಸಿರುವ ಅರ್ಜಿಯ ವಿಚಾರಣೆಯು ಹೈಕೋರ್ಟ್‌ನಲ್ಲಿ ನ್ಯಾಯಮೂರ್ತಿ ಎಂ ಐ ಅರುಣ್ ಅವರ ಏಕಸದಸ್ಯ ಪೀಠವು ನಡೆಸಿತು. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ. ರವಿವರ್ಮ ಕುಮಾರ್ ಹಾಜರಾಗಿದ್ದು, ಮೆರಿಟ್ ಮೇಲೆ ಯಾವುದೇ ಪ್ರಕರಣ ಇಲ್ಲದಿರುವುದರಿಂದ ರೇವಣ್ಣ ಅರ್ಜಿಯನ್ನು ವಜಾಗೊಳಿಸಬೇಕು ಎಂದು ಪೀಠಕ್ಕೆ ಮನವಿ ಮಾಡಿದರು.

**ಸೆಪ್ಟೆಂಬರ್ 10 ಕ್ಕೆ ವಿಚಾರಣೆ ಮುಂದೂಡಿಕೆ**

ಘಟನೆ ನಡೆದು ಮೂರು ವರ್ಷಗಳ ಬಳಿಕ ಪ್ರಕರಣ ದಾಖಲಿಸಲಾಗಿದ್ದು, ಆರೋಪಿತ ಅಪರಾಧಕ್ಕೆ ಕಡಿಮೆ ಶಿಕ್ಷೆ ಇರುವುದರಿಂದ ಅದನ್ನು ವಜಾಗೊಳಿಸಬೇಕು ಎಂದು ಅರ್ಜಿದಾರರ ಪರ ವಕೀಲರು ಮನವಿ ಮಾಡಿದರು. ಆರೋಪ ಪಟ್ಟಿ ಮತ್ತು ಸಂಜ್ಞೇ ಪರಿಗಣಿಸಿರುವುದನ್ನು ಪ್ರಶ್ನಿಸದೇ ಇರುವುದರಿಂದ ಅರ್ಜಿಯು ಊರ್ಜಿತವಾಗುವುದಿಲ್ಲ ಎಂದು ಸರ್ಕಾರಿ ಅಭಿಯೋಜಕರು ಕೋರ್ಟ್‌ನ ಗಮನಕ್ಕೆ ತಂದರು. ಈ ಎಲ್ಲಾ ಅಂಶಗಳನ್ನು ದಾಖಲಿಸಿದ ಕೋರ್ಟ್ ಅರ್ಜಿ ವಿಚಾರಣೆಯನ್ನು ಸೆಪ್ಟೆಂಬರ್ 10 ಕ್ಕೆ ಮುಂದೂಡಿತು.

**ವಿವಿಧ ಪ್ರಕರಣಗಳ ವಿಚಾರಣೆ**

**ಯಡಿಯೂರಪ್ಪ ವಿಚಾರಣೆ ಮುಂದೂಡಿಕೆ**

ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ. ಈ ಪ್ರಕರಣವನ್ನು ರದ್ದುಪಡಿಸುವಂತೆ ಕೋರಿ ಯಡಿಯೂರಪ್ಪ ಮತ್ತು ಇತರೆ ಆರೋಪಿಗಳು ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಎಂ ಐ ಅರುಣ್ ಅವರ ಏಕಸದಸ್ಯ ಪೀಠ ಅರ್ಜಿ ವಿಚಾರಣೆ ನಡೆಸಿತು. ಯಡಿಯೂರಪ್ಪ ಪರ ವಕೀಲರ ಮನವಿಯ ಮೇರೆಗೆ ವಿಚಾರಣೆಯನ್ನು ಸೆ. 15ಕ್ಕೆ ಮುಂದಕ್ಕೆ ಹಾಕಿದೆ.

**ಕೋರಿಕೆ ಮೇರೆಗೆ ರನ್ಯಾ ರಾವ್ ವಿಚಾರಣೆ ಮುಂದೂಡಿಕೆ**

ಚಿನ್ನ ಕಳ್ಳ ಸಾಗಣೆ ಕೇಸ್‌ನಲ್ಲಿ ಆರೋಪಿಗಳಾಗಿರುವ ರನ್ಯಾ ರಾವ್ ಮತ್ತು ತರುಣ್ ಕೊಂಡೂರು ರಾಜು ಅವರನ್ನು ಕಾಫಿಪೋಸಾ ಅಡಿ ಕಂದಾಯ ಗುಪ್ತಚರ ನಿರ್ದೇಶನಾಲಯವು ವಶಕ್ಕೆ ಪಡೆದಿರುವ ಆದೇಶ ಪ್ರಶ್ನಿಸಿರುವ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಮತ್ತು ಕೆ ರಾಜೇಶ್ ರೈ ಅವರ ವಿಭಾಗೀಯ ಪೀಠ ವಿಚಾರಣೆ ನಡೆಸಿತು. ಕೇಂದ್ರ ಸರ್ಕಾರದ ಕೋರಿಕೆಯ ಮೇರೆಗೆ ವಿಚಾರಣೆಯನ್ನು ಸೆಪ್ಟೆಂಬರ್ 11ಕ್ಕೆ ಮುಂದೂಡಲಾಗಿದೆ ಎಂದು ಬಾರ್ ಅಂಡ್ ಬೆಂಚ್ ವರದಿ ಮಾಡಿದೆ.

## ಸೆಪ್ಟೆಂಬರ್ ಕ್ರಾಂತಿ ಬಗ್ಗೆ ಸ್ಫೋಟಕ ಸುಳಿವು ಕೊಟ್ಟ ರಾಜೇಂದ್ರ

• ಉದಯವಾಹಿನಿ, ಬೆಂಗಳೂರು

ನಾವು ಸಿಎಂ ಸಿದ್ದರಾಮಯ್ಯ ಅವರ ಪರವಾಗಿ ಇದ್ದೇವೆ ಎಂಬ ಕಾರಣಕ್ಕಾಗಿ ಅನ್ಯಾಯ ಆಗಿದೆ. ನಾವು ಇನ್ನು ಹತ್ತು ವರ್ಷ ಬಿಟ್ಟರೂ ಸಿದ್ದರಾಮಯ್ಯನವರ ಪರವೇ ಇರುತ್ತೇವೆ. ಬೇರೆ ಯಾರನ್ನೋ ತೋರಿಸಿದರೆ ನಮಗೆ ಮತ ಪಡೆಯೋದು ಅಷ್ಟರಲ್ಲೇ ಇದೆ ಎಂದು ಕೆ ಎನ್ ರಾಜಣ್ಣ ಅವರ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ರಾಜೇಂದ್ರ ವಾಗ್ದಾಳಿ ನಡೆಸಿದರು. ಸೆಪ್ಟೆಂಬರ್ ಕ್ರಾಂತಿ ಬಾಲಕೃಷ್ಣ ಅವರಿಂದಲೇ ಶುರು ಆಗುತ್ತದೆ. ರಾಜಣ್ಣ ಹೇಳಿದ್ದ ಸೆಪ್ಟೆಂಬರ್ ಕ್ರಾಂತಿ ಇದೇ ಆಗಿದೆ. ಇವರ ಟೀಂ ಬಿಜೆಪಿಗೆ ಹೋಗಬಹುದು.

ಸಿಎಂ ಮಾಡ್ತೀವಿ ಅಂದ್ರೆ ಇವರೆಲ್ಲ ಬಿಜೆಪಿಗೆ ಹೋಗಬಹುದು ಎಂದು ಸ್ಫೋಟಕ ಮಾಹಿತಿ ನೀಡಿದರು. ಬಹಿರಂಗವಾಗಿ ಕೆ ಎನ್ ರಾಜಣ್ಣ ಅವರನ್ನು ಬಿಜೆಪಿಯವರು ಭೇಟಿಯಾಗಿಲ್ಲ. ರಾಜಣ್ಣ ಅವರನ್ನು ಸಂಚು ಪಿತೂರಿಯಿಂದ ರಾಜೀನಾಮೆ ಪಡೆದಿದ್ದಾರೆ ಬಿಟ್ಟರೆ, ಭ್ರಷ್ಟಾಚಾರ ಮಾಡಿ ಸಚಿವ ಸ್ಥಾನ ಬಿಟ್ಟಿಲ್ವಲ್ಲಾ ರಾಜಣ್ಣ ಯಾವತ್ತೂ ಪಕ್ಷದ ವಿರುದ್ಧ ಮಾತಾಡಿಲ್ವಲ್ಲಾ ಎಂದು ಪ್ರಶ್ನಿಸಿದರು. ಡಿಕೆಶಿವಕುಮಾರ್ ಜೊತೆಗೆ ಕೆಲವರು ಕಾಲು ಹೊರಗಡೆ ಇಟ್ಟಿದ್ದಾರೆ ಎಂಬುದು ಸತ್ಯವಾ ಎಂಬ ಪ್ರಶ್ನೆ ಗೆ ಹೌದು ಎಂದ ರಾಜೇಂದ್ರ, ನಾವು ಸಿದ್ದರಾಮಯ್ಯ ಪರ ಇದ್ದೇವೆ ಅಂತಲೇ ಇಷ್ಟೆಲ್ಲ ಮಾಡಿದ್ದಾರೆ. ನಮಗೆ ಆಗಿರೋ ಅನ್ಯಾಯದ ಪ್ರಕಾರ ಮತ್ತೆ ಸಚಿವ ಸ್ಥಾನ ಕೊಡಬೇಕು. ಎಸ್.ಟಿ ವರ್ಗಕ್ಕೆ ಸೇರಿದ 15 ಮಂದಿ ಶಾಸಕರಿದ್ದಾರೆ. ಹೀಗಾಗಿ ವಾಲ್ಮೀಕಿ ಸಮುದಾಯಕ್ಕೆ ಸಚಿವ ಸ್ಥಾನ ಕೊಡಬೇಕು ಎಂದು ಒತ್ತಾಯಿಸಿದರು.

## ಬಲವಂತದ ಡಿಎನ್‌ಎ ಪರೀಕ್ಷೆ ಮದುವೆ ಪಾವಿತ್ರ್ಯತೆಗೆ ಧಕ್ಕೆ

• ಉದಯವಾಹಿನಿ, ಬೆಂಗಳೂರು


ಸಕಾರಣ ಮತ್ತು ಅಗತ್ಯವಿಲ್ಲದೇ ಮಗುವಿನ ಪಿತೃತ್ವ ನಿರ್ಧರಿಸಲು ಡಿಎನ್‌ಎ ಪರೀಕ್ಷೆಗೆ ಒತ್ತಾಯಿಸುವುದು ವಿವಾಹದ ಪಾವಿತ್ರ್ಯತೆಗೆ ಧಕ್ಕೆ ಆಗಲಿದೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಆಸ್ತಿ ಪಾಲುದಾರಿಕೆಯ ಪ್ರಕರಣವೊಂದರಲ್ಲಿ ಶಿವಮೊಗ್ಗದ 39 ವರ್ಷದ ಹರೀಶ್ ಎಂಬುವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಮಂಗಳವಾರ ಪ್ರಕಟಿಸಿದೆ. ಡಿಎನ್‌ಎ ಪರೀಕ್ಷೆ ನಡೆಸುವಂತೆ ಕೋರಿ ಸಲ್ಲಿಸಲಾಗುವ ಅರ್ಜಿಗಳಿಗೆ ಉತ್ತರಿಸುವಾಗ ವಿಚಾರಣಾ ನ್ಯಾಯಾಲಯ, ಈ ತೀರ್ಪಿನಲ್ಲಿ ಮಾಡಲಾಗಿರುವ ಎಲ್ಲಾ ಅವಲೋಕನಾ ಅಂಶಗಳನ್ನು ಮನಸ್ಸಿನಲ್ಲಿಟ್ಟುಕೊಂಡು ಮುಂದುವರಿಯಬೇಕು. ಅಂತೆಯೇ, ಈ ತೀರ್ಪನ್ನು ಸಂಬಂಧಪಟ್ಟ ನ್ಯಾಯಾಲಯಗಳಿಗೆ ರವಾನಿಸಬೇಕು ಎಂದು ಹೈಕೋರ್ಟ್ ರಿಜಿಸ್ಟ್ರಾರ್‌ಗೆ ತಾಕೀತು ಮಾಡಿದೆ.

## ಗ್ರೇಟರ್ ಬೆಂಗಳೂರು ವಾರ್ಡ್‌ಗಳ ಪುನರ್ ವಿಂಗಡಣೆಗೆ ಮಾರ್ಗಸೂಚಿ

• ಉದಯವಾಹಿನಿ, ರಾಮನಗರ

ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ ಈಗಾಗಲೇ ರಚಿಸಿರುವ ಬೆಂಗಳೂರು ಕೇಂದ್ರ, ಪೂರ್ವ, ಪಶ್ಚಿಮ, ಉತ್ತರ ಹಾಗೂ ದಕ್ಷಿಣ ನಗರ ಪಾಲಿಕೆಗಳಿಗೆ ಸಂಬಂಧಿಸಿದ ವಾರ್ಡ್‌ಗಳ ಪುನರ್ ವಿಂಗಡಣೆಗೆ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ರಾಜ್ಯ ಸರಕಾರ ಪ್ರಕಟಿಸಿದೆ. 2011ರ ಜನಗಣತಿ ಪ್ರಕಾರ ಪ್ರಸ್ತುತ ವಿಭಜಿಸಿರುವ ನಗರ ಪಾಲಿಕೆಗಳಲ್ಲಿ ಕನಿಷ್ಠ ಹಾಗೂ ಗರಿಷ್ಠ ಜನಸಂಖ್ಯೆಯನ್ನು ನಿರ್ಧರಿಸಲಾಗಿದೆ. ಅದರಂತೆ, ಪೂರ್ವ ನಗರ ಪಾಲಿಕೆಯಲ್ಲಿ 9 ಲಕ್ಷ, ಪಶ್ಚಿಮ 26 ಲಕ್ಷ, ಕೇಂದ್ರ 15 ಲಕ್ಷ, ಉತ್ತರ 18 ಲಕ್ಷ ಹಾಗೂ ದಕ್ಷಿಣ ನಗರ ಪಾಲಿಕೆ 17 ಲಕ್ಷ ಜನಸಂಖ್ಯೆ ಹೊಂದಿದೆ. ಆದರೆ, 2011ರ ನಂತರ ಜನಗಣತಿ ನಡೆದಿಲ್ಲ. ಹೀಗಾಗಿ, 2011ರ ಜನಸಂಖ್ಯೆಯ ಆಧಾರದಡಿ 2023ರ ಚುನಾವಣೆ ಸಂದರ್ಭದಲ್ಲಿ ಪೂರ್ವ ನಗರ ಪಾಲಿಕೆ 13 ಲಕ್ಷ, ಪಶ್ಚಿಮ 45 ಲಕ್ಷ, ಕೇಂದ್ರ 25 ಲಕ್ಷ, ಉತ್ತರ 31 ಲಕ್ಷ ಹಾಗೂ ದಕ್ಷಿಣ ನಗರ ಪಾಲಿಕೆ 30 ಲಕ್ಷ ಜನಸಂಖ್ಯೆ ಹೊಂದಿವೆ ಎಂದು ಅಂದಾಜಿಸಲಾಗಿದೆ. ಅಲ್ಲದೆ, ಐದು ನಗರ ಪಾಲಿಕೆಗಳಲ್ಲಿನ ಜನಸಾಂದ್ರತೆಯಲ್ಲಿ ವ್ಯತ್ಯಾಸವಿದೆ. ಪ್ರತಿ ಚದರ ಕಿ.ಮೀ ಗೆ ಕೇಂದ್ರ ನಗರ ಪಾಲಿಕೆಯಲ್ಲಿ 32,051, ಉತ್ತರ 19,620, ದಕ್ಷಿಣ 20,408, ಪೂರ್ವ 7738 ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ 27,950 ಜನಸಾಂದ್ರತೆ ಇದೆ. ಈ ಹಿನ್ನೆಲೆಯಲ್ಲಿ ಐದು ನಗರ ಪಾಲಿಕೆಗಳಲ್ಲಿ ಸಮಾನ ಸಂಖ್ಯೆಯ ವಾರ್ಡ್‌ಗಳನ್ನು ರಚಿಸಲು ಸಾಧ್ಯವಿಲ್ಲ.

# ವಿದೇಶದಿಂದ ಹಣ ಸಿದ್ದು ತಿರುಗುಬಾಣ



**ಧರ್ಮಸ್ಥಳ ವಿಚಾರವಾಗಿ ಬಿಜೆಪಿ, ಕಾಂಗ್ರೆಸ್ ವಾಕ್ಸಮರ**

**ಬಿಜೆಪಿ ಆಯ್ತು ಇದೀಗ ಕಾಂಗ್ರೆಸ್‌ನಿಂದ ಧರ್ಮಸ್ಥಳ ಚಲೋ.!**



**ಕುಣಿಗಲ್‌ನಿಂದ 200 ಕಾರುಗಳ ಯಾತ್ರೆ**

**ಧರ್ಮ ಯಾತ್ರೆಯಲ್ಲ ರಾಜಕೀಯ ಯಾತ್ರೆ ಸಿದ್ದರಾಮಯ್ಯ ವ್ಯಂಗ್ಯ**

## ಹೊರ ರಾಜ್ಯ, ಹೊರ ದೇಶದಿಂದ ಬಿಜೆಪಿಗೆ ದುಡ್ಡು ಬಂದಿದೆ: ಸಿಎಂ ಆರೋಪ

• ಉದಯವಾಹಿನಿ, ಬೆಂಗಳೂರು

'ಧರ್ಮಸ್ಥಳ ಪ್ರಕರಣದಲ್ಲಿ ಅಪಪ್ರಚಾರ ಮಾಡುವುದಕ್ಕಾಗಿ ಹೊರದೇಶಗಳಿಂದ ದುಡ್ಡು ಹರಿದು ಬಂದಿದೆ. ಹೀಗಾಗಿ ಪ್ರಕರಣದ ತನಿಖೆ ರಾಷ್ಟ್ರೀಯ ತನಿಖಾ ದಳಕ್ಕೆ ವಹಿಸಬೇಕು' ಎಂಬ ಬಿಜೆಪಿ ಆಗ್ರಹಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀಕ್ಷ್ಣವಾಗಿ ತಿರುಗೇಟು ನೀಡಿದರು. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಬಿಜೆಪಿಯವರಿಗೇ ಹೊರದೇಶ ಹಾಗೂ ಹೊರ ರಾಜ್ಯಗಳಿಂದ ದುಡ್ಡು ಬಂದಿದೆ. ಇಲ್ಲ ಅಂದರೆ, ಇವರು ಇಷ್ಟೆಲ್ಲ ಮಾಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು. ಅಲ್ಲದೆ, ಬಿಜೆಪಿ ಅವರದ್ದು ಕೇವಲ ರಾಜಕೀಯ ಪ್ರೇರಿತ ಹೋರಾಟ ಎಂದರು. ಈಗ ಎಸ್‌ಐಟಿ ತನಿಖೆ ನಡೆಸುತ್ತಿದೆ. ಇವರಿಗೆ (ಬಿಜೆಪಿ) ನಮ್ಮ ಪೊಲೀಸರ ಮೇಲೆ ನಂಬಿಕೆ ಇಲ್ಲವೇ ಒಂದು ಕಡೆ ಸೌಜನ್ಯ ಮನೆಯವರನ್ನು ಎತ್ತಿಕಟ್ಟುತ್ತಿದ್ದಾರೆ. ಮತ್ತೊಂದು ಕಡೆ ಧರ್ಮಸ್ಥಳಕ್ಕೆ ಹೋಗುತ್ತಿದ್ದಾರೆ. ಆ ಪ್ರಕರಣದಲ್ಲಿ (ಸೌಜನ್ಯ) ಸಿಬಿಐ ತನಿಖೆ ನಡೆಸಿತ್ತಲ್ಲವೇ ಸಿಬಿಐ ಯಾರ ಅಧೀನದಲ್ಲಿ ಬರುತ್ತದೆ... ಸುಪ್ರೀಂ ಕೋರ್ಟ್‌ಗೆ ಹೋಗುವುದು ಬಿಡುವುದು ಸೌಜನ್ಯ ತಾಯಿಗೆ ಸಂಬಂಧಪಟ್ಟ ವಿಚಾರ ಎಂದು ಸಿದ್ದರಾಮಯ್ಯ ಹೇಳಿದರು.

**ವಿದೇಶದಿಂದ ಫಂಡಿಂಗ್!:** ಧರ್ಮಸ್ಥಳ ಷಡ್ಯಂತ್ರಕ್ಕೆ , ಬುರುಡೆ ಪ್ರಕರಣದಲ್ಲಿ ವಿದೇಶಿ ಹಣ ಬಳಕೆ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಸಿಎಂ ಬಿಜೆಪಿಗೆ ಹಣ ಬಂದಿದೆ. ಇಷ್ಟೆಲ್ಲಾ ಮಾಡಬೇಕಾದ್ರೆ ಬಿಜೆಪಿಗೆ ಹಣ ಎಲ್ಲಿಂದ ಬರಬೇಕು ಯಾರು ಹಣ ಕೊಡುತ್ತಿದ್ದಾರೆ ಇವರಿಗೆ. ಎಲ್ಲಾ ವಿಚಾರಗಳನ್ನ ರಾಜಕೀಯವಾಗಿ ಬಳಸಿಕೊಳ್ಳಬಾರದು. ಸರ್ಕಾರವನ್ನು ಟೀಕೆ ಮಾಡಲಿ ಆದರೆ, ರಾಜಕೀಯ ಮಾಡಬಾರದು. ವಿಪಕ್ಷಗಳ ಆರೋಪದಲ್ಲಿ ಸತ್ಯ ಇಲ್ಲ ಎಂದಿದ್ದಾರೆ.

**ಅಶೋಕ್ ಸದನದಲ್ಲಿ ಬೇರೆ ಚರ್ಚೆ ಮಾಡಿದ್ದರು:** ಚಿನ್ನಯ್ಯ ಎಂಬ ವ್ಯಕ್ತಿಯನ್ನು ಕರೆತಂದಿರುವುದೇ ಕಾಂಗ್ರೆಸ್ ಎಂದು ಬಿಜೆಪಿ ಆರೋಪಿಸಿರುವ ಬಗ್ಗೆ ಮಾತನಾಡಿ ಸದನದಲ್ಲಿ ಈ ಬಗ್ಗೆ ಚರ್ಚೆಯಾದಾಗ ಬೇರೆ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್.ಅಶೋಕ್ , ಶಾಸಕ ಸುನೀಲ್ ಕುಮಾರ್, ಈಗ ಬೇರೆ ಹೇಳುತ್ತಿದ್ದಾರೆ ಎಂದು ತಿಳಿಸಿದ ಮುಖ್ಯಮಂತ್ರಿಗಳು ದಿನಕ್ಕೊಂದು ಹೇಳಿಕೆ ಕೊಡಬಾರದು. ಅಸತ್ಯದ ಮೇಲೆ ಚರ್ಚೆ ಮಾಡಿದರೆ ಹೀಗೆ ಆಗುವುದು ಎಂದರು.

**ದಸರಾ ಉದ್ಘಾಟಕರನ್ನು ಹಿಂದುಗಳಾಗಿ ಎನ್ನುವುದು ತರವಲ್ಲ:** ಬಾನು ಅವರು ಕುಂಕುಮ ಹಚ್ಚಿಕೊಂಡು ದಸರಾ ಉದ್ಘಾಟಿಸಲಿ ಎಂದು ಬಿಜೆಪಿಯವರು ಒತ್ತಾಯಿಸಿರುವ ಬಗ್ಗೆ ಮಾತನಾಡಿ ಬುಕರ್ ಪ್ರಶಸ್ತಿ ವಿಜೇತರಾದ ಬಾನು ಮುಷ್ತಾಕ್ ಓರ್ವ ಮುಸ್ಲಿಂ ಮಹಿಳೆಯಾಗಿದ್ದು, ಕುಂಕುಮ ಹಚ್ಚಿಕೊಳ್ಳುವುದು ಅವರ ಧರ್ಮದಲ್ಲಿಲ್ಲ. ದಸರಾ ಹಬ್ಬವನ್ನು ನಾಡ ಹಬ್ಬ ಎಂದು ಆಚರಿಸುತ್ತೇವೆ. ಬೇರೆ ಧರ್ಮದವರನ್ನು ಉದ್ಘಾಟಕರನ್ನಾಗಿ ಆಹ್ವಾನಿಸಿದರೆ ಕುಂಕುಮ ಹಚ್ಚಿಕೊಂಡು ಬನ್ನಿ , ಹಿಂದೂಗಳಾಗಿ ಎನ್ನುವುದು ತರವಲ್ಲ ಎಂದರು. ಮುಸ್ಲಿಂ ಗುರುಗಳು ನಾನು ಮುಷ್ತಾಕ್ ಅವರ ವಿರುದ್ಧ ಫತ್ವಾ ಹೊರಡಿಸಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ಮಾಡಿರುವ ಆರೋಪಗಳಿಗೆ ಪ್ರತಿಕ್ರಿಯೆ ನೀಡಿದ ಸಿಎಂ, ದಿವಾನ್ ಮಿರ್ಜಾ ಇಸ್ಮಾಯಿಲ್ ಅವರನ್ನು ಮಹಾರಾಜರು ಅಂಬಾರಿ ಮೇಲೆ ಕೂಡಿಸಿಕೊಂಡು ಮೆರವಣಿಗೆ ಮಾಡುತ್ತಿದ್ದರು. ಆಗ ಆರ್. ಎಸ್. ಎಸ್ ಹಾಗೂ ಬಿಜೆಪಿಯವರು ಎಲ್ಲಿ ಹೋಗಿದ್ದರು.. 2017ರಲ್ಲಿ ಕವಿ ನಿಸಾರ್ ಅಹಮದ್ ಅವರು ದಸರಾ ಉದ್ಘಾಟನೆ ಮಾಡಿದ್ದರು ಆಗ ಇವರೆಲ್ಲ ಎಲ್ಲಿ ಹೋಗಿದ್ದರು ಬಾನು ಅವರು ಕುಂಕುಮದ ಬಗ್ಗೆ ಮಾತನಾಡಿದ್ದಾರೆ ಎನ್ನುವುದು ನನಗೆ ತಿಳಿದಿಲ್ಲ. ಅವರೊಬ್ಬ ಕನ್ನಡದ ಬರಹಗಾರ್ತಿ. ಕನ್ನಡದ ಮೇಲೆ ಅಭಿಮಾನವಿಲ್ಲದೆ ಇದ್ದರೆ , ಪ್ರೀತಿ ಇಲ್ಲದೆ ಬರೆಯಲು ಸಾಧ್ಯವೇ ಎಂದು ಪ್ರಶ್ನಿಸಿದರು.

**ಹತ್ಯೆಗೀಡಾದವರ ಸಮಾಧಿ ತೋರಿಸಲು ಸಿದ್ಧ:** ಧರ್ಮಸ್ಥಳ ಪ್ರಕರಣ ಮತ್ತೊಂದು ತಿರುವು ಪಡೆದುಕೊಳ್ಳುತ್ತಿದ್ದು, ಹತ್ಯೆಗೀಡಾದವರ ಸಮಾಧಿ ತೋರಿಸಲು ಸಿದ್ಧ ಎಂದು ಧರ್ಮಸ್ಥಳ ಗ್ರಾಮಸ್ಥರ ಗುಂಪೊಂದು ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ದಳಕ್ಕೆ ಪತ್ರ ಬರೆದಿದೆ. ಗ್ರಾಮಸ್ಥರ ಪರವಾಗಿ ಧರ್ಮಸ್ಥಳ ನಿವಾಸಿ ತುಕಾರಾಮ ಗೌಡ ಎಂಬುವವರು ಎಸ್‌ಐಟಿಗೆ ಪತ್ರ ಸಲ್ಲಿಸಿದ್ದಾರೆ. ಪ್ರಕರಣ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದು, ನಾವು ಭಯದಲ್ಲಿ ಬದುಕುವಂತಾಗಿದೆ. ಆದರೆ, ನಿಷ್ಪಕ್ಷಪಾತ ಮತ್ತು ಪಾರದರ್ಶಕ ತನಿಖೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಎಸ್‌ಐಟಿ ರಚಿಸಿರುವುದು ನಮ್ಮ ವಿಶ್ವಾಸ ಹೆಚ್ಚಾಗುವಂತೆ ಮಾಡಿದೆ. ಮಾಧ್ಯಮಗಳಲ್ಲಿ ತೋರಿಸಲಾಗಿರುವ ವ್ಯಕ್ತಿಯನ್ನು ನಾವು ಗುರ್ತಿಸಿದ್ದೇವೆ. ಆತ ವಿವಿಧ ಸ್ಥಳಗಳಿಗೆ ಶವಗಳನ್ನು ಸಾಗಿಸುತ್ತಿರುವುದು ಹಾಗೂ ಹೂಳುತ್ತಿರುವುದನ್ನು ನೋಡಿದ್ದೇವೆಂದು ಪತ್ರದಲ್ಲಿ ತಿಳಿಸಿದ್ದಾರೆ.

1 ಬಿಜೆಪಿಯವರದ್ದು ಧರ್ಮ ಯಾತ್ರೆ ಅಲ್ಲ , ರಾಜಕೀಯ ಯಾತ್ರೆ

2 ಹೆಗ್ಗಡೆಯವರೇ ಎಸ್‌ಐಟಿ ತನಿಖೆಯನ್ನ ಸ್ವಾಗತ ಮಾಡಿದ್ದಾರೆ. ಆದರೆ ಬಿಜೆಪಿ ಯಾಕೆ ಈಗ ವಿರೋಧಿಸುತ್ತಿದೆ

3 ಸೌಜನ್ಯ ಪ್ರಕರಣದ ಮರು ತನಿಖೆ ಅಗತ್ಯವಿದ್ದರೆ ನ್ಯಾಯಾಲಯಕ್ಕೆ ಹೋಗಲಿ. ನಾನು ಅದರ ತೀರ್ಪನ್ನು ನೋಡಿಲ್ಲ

**{ಬಿಜೆಪಿಯವರು ಒಮ್ಮೆ ಸೌಜನ್ಯ ಪರ ಅಂತಾರೆ, ಒಮ್ಮೆ ವೀರೇಂದ್ರ ಹೆಗ್ಗಡೆ ಪರ ಅಂತಾರೆ' ಹಾಗಿದ್ರೆ ಯಾರ ಪರ}**

**ಎನ್‌ಐಎಗೆ ಕೊಡುವ ಪ್ರಶ್ನೆಯೇ ಇಲ್ಲ**

'ಧರ್ಮಸ್ಥಳದಲ್ಲಿ ನೂರಾರು ಶವ ಹೂತಿಟ್ಟ ಆರೋಪದ ಪ್ರಕರಣವನ್ನು ರಾಷ್ಟ್ರೀಯ ತನಿಖಾ ಏಜೆನ್ಸಿಗೆ (ಎನ್‌ಐಎ) ನೀಡುವ ಪ್ರಶ್ನೆಯೇ ಇಲ್ಲ' ಎಂದು ಗೃಹ ಸಚಿವ ಜಿ. ಪರಮೇಶ್ವರ ಸ್ಪಷ್ಟಪಡಿಸಿದರು. ಪ್ರಕರಣದ ಕುರಿತಂತೆ ಈಗಾಗಲೇ ಎಸ್‌ಐಟಿ ತನಿಖೆ ನಡೆಸುತ್ತಿದೆ. ಪ್ರಕರಣ ಎನ್‌ಐಎಗೆ ನೀಡುವ ಯೋಚನೆ ಮಾಡಿಲ್ಲ. ಅವರು ತನಿಖೆ ಮಾಡಲೇಬೇಕು ಎಂದಾದರೆ ಅವರದ್ದೇ ಆಯಾಮದಲ್ಲಿ ಮಾಡಲಿ. ನಮ್ಮ ಅಭ್ಯಂತರ ಇಲ್ಲ' ಎಂದರು. 'ಧರ್ಮಸ್ಥಳ ಪ್ರಕರಣವನ್ನು ಬೇರೆ ದಿಕ್ಕಿಗೆ ಕೊಂಡೊಯ್ಯುವ ಪ್ರಯತ್ನ ನಡೆದಿದೆ. ಎಸ್‌ಐಟಿ ತನಿಖೆ ಮುಗಿಯುವ ಮೊದಲು ಯಾವುದೇ ಸಂಸ್ಥೆಗೆ ಪ್ರಕರಣ ನೀಡುವುದಿಲ್ಲ. ಬಿಜೆಪಿಯವರ ಉದ್ದೇಶ ಏನು ಎಂಬುದು ನಮಗೆ ಸ್ಪಷ್ಟವಾಗಿಲ್ಲ. ತನಿಖೆಗೆ ಅಡ್ಡಿ ಮಾಡುವ ಪ್ರಯತ್ನ ಇರಬಹುದು ಎಂದು ಆರೋಪಿಸಿದರು.

**200 ಕಾರುಗಳ ಮೆರವಣಿಗೆ**

ಕುಣಿಗಲ್ ರಂಗನಾಥ್ ನೇತೃತ್ವದಲ್ಲಿ ಧರ್ಮಸ್ಥಳಕ್ಕೆ ಯಾತ್ರೆ ನಡೆಯಲಿದೆ. ಸುಮಾರು 200 ಕಾರುಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಕ್ಷೇತ್ರದ ಜನರು ಧರ್ಮಸ್ಥಳಕ್ಕೆ ತೆರಳಲಿದ್ದಾರೆ. ಈ ಯಾತ್ರೆ ಬಗ್ಗೆ ಕುಣಿಗಲ್ ರಂಗನಾಥ್ ಮಾತನಾಡಿ, ''ಬಿಜೆಪಿಯವರದ್ದು ದ್ವಂದ್ವ ನೀತಿ. ಕೌರವರಿಗೂ ಭಾವ, ಪಾಂಡವರಿಗೂ ಭಾವ ರೀತಿ ಅವರು ವರ್ತಿಸ್ತಿದ್ದಾರೆ. ಮಗುವನ್ನೂ ಚಿವುಟ್ತಾರೆ ತೊಟ್ಲೂ ತೂಗ್ತಾರೆ. ಧರ್ಮಸ್ಥಳ ವಿಚಾರದಲ್ಲಿ ಶಾಸಕರೆಲ್ಲರು ಭಕ್ತರಿದ್ದೇವೆ. ಮಂಜುನಾಥ ಸ್ವಾಮಿ ಪ್ರತಿಯೊಬ್ಬರ ಮನೆಯಲ್ಲಿದ್ದಾನೆ'' ಎಂದರು.

**ಬಿಜೆಪಿಯವರದ್ದೇ ಷಡ್ಯಂತ್ರ**


ಧರ್ಮಸ್ಥಳ ಪ್ರಕರಣ' ಸಂಬಂಧದ ಎಸ್‌ಐಟಿ ತನಿಖೆಯನ್ನು ಧರ್ಮಾಧಿಕಾರಿ ವಿರೇಂದ್ರ ಹೆಗ್ಗಡೆಯವರೇ ಸ್ವಾಗತಿಸಿದ್ದಾರೆ. ಹೀಗಿರುವಾಗ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಸೇರಿದಂತೆ ಪ್ರತಿಪಕ್ಷ ಮುಖಂಡರು ಅನಗತ್ಯ ಗೊಂದಲ ಸೃಷ್ಟಿಸುವ ಮೂಲಕ ಷಡ್ಯಂತ್ರ ಮಾಡುತ್ತಿದ್ದಾರೆ' ಎಂದು ಮಾಜಿ ಸಿಎಂ ಎಂ.ವೀರಪ್ಪ ಮೊಯ್ಲಿ ಇಂದಿಲ್ಲಿ ದೂರಿದ್ದಾರೆ. ಡಿ.ಕೆ.ಶಿವಕುಮಾರ್ ಅವರ ನಿವಾಸಕ್ಕೆ ಖುದ್ದು ಭೇಟಿ ನೀಡಿ ಸಮಾಲೋಚನೆ ನಡೆಸಿದ ಬಳಿಕ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ವೀರಪ್ಪ ಮೊಯ್ಲಿ 'ಬಿಜೆಪಿಯ ರಾಜ್ಯಾಧ್ಯಕ್ಷ ವಿಜಯೇಂದ್ರ, ಸೌಜನ್ಯ ಅವರ ಮನೆಗೆ ಭೇಟಿ ನೀಡುವ ಮೂಲಕ ವಿವಾದವನ್ನು ಅನಗತ್ಯವಾಗಿ ಕೆಣಕುತ್ತಿದ್ದಾರೆ ಎಂದು ಆಕ್ಷೇಪಿಸಿದರು.

## ಲಿಕ್ಕರ್‌ಗೆ ಹೆಚ್ಚಾದ ಡಿಮ್ಯಾಂಡ್! ಅಬಕಾರಿ ಇಲಾಖೆಗೆ ನಿರೀಕ್ಷೆಗೂ ಮೀರಿ ಆದಾಯ

• ಉದಯವಾಹಿನಿ, ಬೆಂಗಳೂರು

■ ಮಹಾರಾಷ್ಟ್ರ, ಗೋವಾದಿಂದ ಅಕ್ರಮ ಮದ್ಯ ಸಾಗಾಣೆ ಮೇಲೆ ಹದ್ದಿನ ಕಣ್ಣು ■ ಅಬಕಾರಿ ಇಲಾಖೆಯಲ್ಲಿ ಕೈಗೊಂಡ ಸುಧಾರಣಾ ಕ್ರಮ

ಅಬಕಾರಿ ಇಲಾಖೆಯ ಇತಿಹಾಸದಲ್ಲೇ ಮೊದಲ ಬಾರಿಗೆ ಸಾಕಷ್ಟು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರು ಹೇಳಿದರು. ಮಂಗಳವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅಬಕಾರಿ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿ ನಡೆಸಿದರು. ಮೊದಲೆರಡು ತ್ರೈಮಾಸಿಕದಲ್ಲಿ ನಿರೀಕ್ಷಿತ ಪ್ರಮಾಣಕ್ಕಿಂತ ಹೆಚ್ಚಿನ ಆದಾಯ ಬಂದಿದೆ. ರೂ 16,290 ಕೋಟಿ ಆದಾಯದ ನಿರೀಕ್ಷೆ ಹೊಂದಲಾಗಿತ್ತು. ಆದರೆ, ರೂ 16,358 ಕೋಟಿ ಆದಾಯ ಬಂದಿದ್ದು, ನಿರೀಕ್ಷೆಗಿಂತ ರೂ 68.78 ಕೋಟಿ ಹೆಚ್ಚಾಗಿದೆ



ಎಂದು ಸಚಿವರು ತಿಳಿಸಿದರು.

ಇದರ ಜೊತೆಗೆ ಅಬಕಾರಿ ಇಲಾಖೆಯಲ್ಲಿ ಸಾಕಷ್ಟು ಬದಲಾವಣೆ ಮಾಡಲಾಗಿದೆ. ತೆರಿಗೆ ಸಂಗ್ರಹಣೆ ಇಲಾಖೆಯಲ್ಲಿ ಮೊದಲ ಬಾರಿಗೆ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿದೆ. ಇದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಬೀಳಲಿದೆ. ಇಲಾಖೆಯಲ್ಲಿ ಡಿಜಿಟಲ್ ವ್ಯವಸ್ಥೆ ಜಾರಿ ಮಾಡಲಾಗುತ್ತಿದ್ದು, ಆನ್‌ಲೈನ್ ಮುಖಾಂತರ ಪರವಾನಿಗೆ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಭ್ರಷ್ಟಾಚಾರಕ್ಕೆ ಅವಕಾಶ ಸಿಗದಂತೆ ಸಿಎಲ್ 7 ಲೈಸನ್ಸ್ ನೀಡುವ ಹಂತಗಳನ್ನು ಕಡಿತಗೊಳಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ಅವರು ಹೇಳಿದರು.

ಅಲ್ಲದೆ, ಅಬಕಾರಿ ಇಲಾಖೆಯಲ್ಲಿ ದಕ್ಷತೆಯ ಆಡಳಿತ ಜಾರಿ ಮಾಡಬೇಕೆಂಬುದು ನಮ್ಮ ಸರ್ಕಾರದ ಧ್ಯೇಯ. ಆದರೂ ಕೆಲವು ಅಧಿಕಾರಿಗಳು ನಿರ್ಲಕ್ಷ್ಯತೆ ತೋರಿದ್ದು ಕಂಡು ಬಂದಿದ್ದು, ಅಂತಹ ಅಧಿಕಾರಿಗಳ ಕ್ರಮ ಕೈಗೊಳ್ಳಲಾಗಿದೆ.

ಎ ವೃಂದದ 31, ಬಿ ವೃಂದದ 20, ಅಬಕಾರಿ ಸಬ್ ಇನ್ಸ್‌ಪೆಕ್ಟರ್ 43 ಮೇಲೆ ಶಿಸ್ತುಕ್ರಮ ಚಾಲ್ತಿಯಲ್ಲಿದೆ ಎಂದು ಸಚಿವರು ತಿಳಿಸಿದರು.

ಇದರ ಜೊತೆಗೆ ಆಡಳಿತ ಸುಧಾರಣಾ ಆಯೋಗ ನೀಡಿದ ಶಿಫಾರಸ್ಸುಗಳನ್ನು ಸಮರ್ಪಕವಾಗಿ ಜಾರಿಗೊಳಿಸಲಾಗುತ್ತಿದೆ.

ಒಟ್ಟು 62 ಶಿಫಾರಸ್ಸುಗಳ ಮೇಲೆ ಆರ್ಥಿಕ ಇಲಾಖೆ ಅಪರ ಮುಖ್ಯಕಾರ್ಯದರ್ಶಿಗಳ ಜೊತೆ ಸಭೆ ನಡೆಸಿ ಶೇ. 95 ಶಿಫಾರಸ್ಸುಗಳಿಗೆ ಒಪ್ಪಿಗೆ ನೀಡಿ ಕಾರ್ಯರೂಪಕ್ಕೆ ತರಲು ಆದೇಶಿಸಿದ್ದೇನೆ. ಈಗಾಗಲೇ 13 ಶಿಫಾರಸ್ಸುಗಳು ಅನುಷ್ಠಾನ ಆಗಿದ್ದು, 49 ಶಿಫಾರಸ್ಸುಗಳು ಅನುಷ್ಠಾನದ ಹಂತದಲ್ಲಿವೆ ಎಂದು ಸಚಿವರು ತಿಳಿಸಿದರು.

ಉಳಿಕೆ ಲೈಸನ್ಸ್‌ಗಳ ಕುರಿತು ಮಾಧ್ಯಮದ ಪ್ರತಿನಿಧಿಗಳ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೆಲವು ಉಳಿಕೆ ಲೈಸೆನ್ಸ್‌ಗಳಿದ್ದು, ಅವುಗಳನ್ನು ಹರಾಜು ಮಾಡಬೇಕೆಂಬ ಚಿಂತನೆಯಲ್ಲಿದ್ದೇವೆ ಎಂದರು.

ಸಭೆಯಲ್ಲಿ ಅಬಕಾರಿ ಆಯುಕ್ತ ವೆಂಕಟೇಶ್, ಅಪರ ಆಯುಕ್ತರಾದ ಮಂಜುನಾಥ್, ನಾಗರಾಜಪ್ಪ, ಸುರೇಶ್, ಎಂಎಸ್‌ಐಎಲ್ ನಿರ್ದೇಶಕ ಚಂದ್ರಪ್ಪ ಸೇರಿದಂತೆ ಅಬಕಾರಿ ಇಲಾಖೆ ಎಲ್ಲಾ ಜಂಟಿ ಆಯುಕ್ತರು, ಎಲ್ಲಾ ಉಪ ಆಯುಕ್ತರು ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳು

**ಡ್ರಗ್ಸ್‌ಗೆ ಕಡಿವಾಣ ಹಾಕ್ಬೇಕು: ಸಚಿವ**

ಸಿಹೆಚ್ ಪೌಡರ್, ಡ್ರಗ್ಸ್ ನಿಯಂತ್ರಣ ಮಾಡುವ ಬಗ್ಗೆ ಅಬಕಾರಿ ಇಲಾಖೆ ಅಧಿಕಾರಿಗಳು ಸಾಕಷ್ಟು ಕ್ರಮವಹಿಸಬೇಕು. ಸಣ್ಣ ಪ್ಯಾಕೇಟ್‌ನಲ್ಲಿ ಸಿಹೆಚ್ ಪೌಡರ್ ತಂದು, ನೂರಾರು ಲೀಟರ್ ಮದ್ಯ ತಯಾರಿಸುವವರನ್ನು ಪತ್ತೆ ಹಚ್ಚಿ, ಕಠಿಣ ಕ್ರಮ ಕೈಗೊಳ್ಳಬೇಕು. ಯುವಕರ ಆರೋಗ್ಯ, ಭವಿಷ್ಯದ ದೃಷ್ಟಿಯಿಂದ ಡ್ರಗ್ಸ್‌ಗೆ ಕಡಿವಾಣ ಹಾಕ್ಬೇಕು. ಎನ್‌ಡಿಪಿಎಸ್ ಕಾಯ್ದೆ ಸಮರ್ಪಕವಾಗಿ, ಮತ್ತಷ್ಟು ಪರಿಣಾಮವಾಗಿ ಜಾರಿಗೊಳಿಸಬೇಕು ಎಂದು ಸಚಿವರು ಸೂಚಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,609/Gram24ct ₹9,725/Gram22ct | ಬೆಳ್ಳಿ: ₹126.10/Gram

# ಪವಿತ್ರಾ, ಗೌಡಾಗೆ ಇನ್ನಷ್ಟು ದಿನ ಪರಪ್ಪನ ಅಗ್ರಹಾರವೇ ಫಿಕ್ಸ್

• **ಉದಯವಾಹಿನಿ, ಬೆಂಗಳೂರು**

ಜಾಮೀನಿಗಾಗಿ ಅರ್ಜಿ ಸಲ್ಲಿಸಿದ್ದ ಕೊಲೆ ಆರೋಪಿ ಪವಿತ್ರಾ, ಗೌಡ ಅರ್ಜಿಯನ್ನು 57 ನೇ ಸೆಷನ್ಸ್ ಕೋರ್ಟ್ ರದ್ದು ಮಾಡಿದೆ. ಈ ಮೂಲಕ ಹಿನ್ನಡೆಯಾಗಿದೆ. ಸುಪ್ರೀಂ ಕೋರ್ಟ್ ನಲ್ಲಿ ಇತ್ತೀಚೆಗಷ್ಟೇ ಪವಿತ್ರಾ, ಗೌಡ ಜಾಮೀನು ರದ್ದಾಗಿತ್ತು. ಯಾವುದೇ ಕಾರಣಕ್ಕೂ ಬೇಲ್ ಬೇಡ ಎಂದು ಸರ್ಕಾರಿ ವಕೀಲರು ವಾದಿಸಿದ್ದರು. ಹೀಗಾಗಿ ಪರಪ್ಪನ ಅಗ್ರಹಾರ ಜೈಲು ಪಾಲಾಗಿದ್ದ ಪವಿತ್ರಾ, ಗೌಡ ಜಾಮೀನಿಗಾಗಿ ಅರ್ಜಿ ಸಲ್ಲಿಸಿದ್ದು, ಕೋರ್ಟ್ ಆದೇಶದಿಂದ ಈಗ ಶಾಕ್ ಆಗಿದೆ. ಪವಿತ್ರಾ, ಗೌಡ ಪರ ವಕೀಲರು ವಾದಿಸಿ, ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿದೆ. ಆದರೆ ಅಸ್ತಿತ್ವದಲ್ಲೇ ಇಲ್ಲದೇ ಇರುವ ಐಪಿಸಿ, ಸಿಆರ್ ಪಿಸಿ ಸೆಕ್ಷನ್‌ಗಳ ಅಡಿಯಲ್ಲಿ ಬಂಧಿಸಲಾಗಿದೆ ಎಂದು ವಾದಿಸಿದ್ದರು. ಆದರೆ ಕೋರ್ಟ್ ಈ ಅರ್ಜಿಯನ್ನು ತಿರಸ್ಕರಿಸಿದೆ.

**ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡುವಂತೆ ಕೋರಿ ಅರ್ಜಿ:** ಆರೋಪಿ ನಟ ದರ್ಶನ್‌ರನ್ನು ಪರಪ್ಪನ ಅಗ್ರಹಾರದಿಂದ ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡುವಂತೆ ಪೊಲೀಸರು ಅರ್ಜಿ ಸಲ್ಲಿಕೆ ಮಾಡಿದ್ದರು.



ಉದಯವಾಹಿನಿ ಚಿತ್ರ

**ದರ್ಶನ್ ಪ್ರಭಾವಿ ಆರೋಪಿ**

**ದರ್ಶನ್ ಸಾಮಾನ್ಯ ಆರೋಪಿಯಲ್ಲ, ಸೆಲೆಬ್ರೆಟಿ ಅಲ್ಲದೆ ರಾಜಕೀಯ ವ್ಯಕ್ತಿಗಳ ಬೆಂಬಲ ಇರುವ ಸೆಲೆಬ್ರೆಟಿ ಇರುವ ಆರೋಪಿ ಹಾಗಾಗಿ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇರುವುದರಿಂದ ಬಳ್ಳಾರಿಗೆ ಶಿಫ್ಟ್ ಮಾಡುವಂತೆ ಕೇಳಿಕೊಂಡಿದ್ದಾರೆ. ದರ್ಶನ್ ಪರ ವಕೀಲ ವಾದ ಮಂಡಿಸಿ, ಆರೋಪಿಗಳನ್ನು ಬೇರೆ ಜೈಲಿಗೆ ಶಿಫ್ಟ್ ಮಾಡುವಂತಿಲ್ಲ, ಯಾವ ಮಾನದಂಡದಲ್ಲಿ ಶಿಫ್ಟ್ ಮಾಡುತ್ತಿದ್ದೀರಾ ಎಂದೂ ಪ್ರಶ್ನಿಸಿದ್ದಾರೆ.**

ಈ ಅರ್ಜಿ ವಿಚಾರಣೆಗೆ ಇನ್ನಷ್ಟೆ ಬರಬೇಕಿದೆ. ಅಲ್ಲದೆ ದರ್ಶನ್‌ಗೆ ಮನೆ ಊಟ, ದಿಂಬು, ಹಾಸಿಗೆ ಕೊಡುವಂತೆ ಕೂಡಾ ದರ್ಶನ್ ಪರ ವಕೀಲರು ಮನವಿ ಮಾಡಿದ್ದರು. ಈ ಎರಡೂ ಅರ್ಜಿ ವಿಚಾರಣೆ ಇನ್ನಷ್ಟೇ ನಡೆಯಬೇಕಿದೆ. ಆಡಳಿತಾತ್ಮಕ, ಭದ್ರತೆ ದೃಷ್ಟಿಯಿಂದ ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡುವಂತೆ ಪೊಲೀಸರು ಅರ್ಜಿ ಹಾಕಿದ್ದರು. ಆದರೆ ವಕೀಲರ ಭೇಟಿ ಕಷ್ಟವಾಗುತ್ತೆ, ವಿಚಾರಣೆಗೆ ಓಡಾಟ ಕೂಡಾ ಹೆಚ್ಚಾಗುತ್ತದೆ ಎಂದು ದರ್ಶನ್ ಪರ ವಕೀಲರು ಬರಹದ ಮೂಲಕ ವಿರೋಧ ವ್ಯಕ್ತಪಡಿಸಿದ್ದರು. ಈ ಹಿಂದೆ ಬೇಲ್ ಸಿಗುವ ಮೊದಲು ಆರೋಪಿಗಳು ಯಾವ್ಯಾವ ಜೈಲಿನಲ್ಲಿದ್ದರೋ ಅಲ್ಲಿಗೇ ವರ್ಗಾವಣೆ ಮಾಡುವಂತೆ ಸರ್ಕಾರಿ ವಕೀಲರು ಮನವಿ ಮಾಡಿದ್ದಾರೆ. ಈ ಹಿಂದೆ ದರ್ಶನ್ ಪರಪ್ಪನ ಅಗ್ರಹಾರದಲ್ಲಿದ್ದಾಗ ಐಷಾರಾಮಿ ಸೌಕರ್ಯ, ರಾಜಾತಿಥ್ಯ ಪಡೆದ ಹಿನ್ನೆಲೆ ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡಲಾಗಿತ್ತು. ಕೈದಿಗಳಿಗೆ ಈ ಸೌಕರ್ಯ ಕೊಡುವ ಬಗ್ಗೆ ಸುಪ್ರೀಂಕೋರ್ಟ್ ತರಾಟೆಗೆ ತೆಗೆದುಕೊಂಡಿತ್ತು.

## ಭರತನಾಟ್ಯ ಪ್ರದರ್ಶನ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಸೆಪ್ಟೆಂಬರ್ 4, ಗುರುವಾರ ಸಂಜೆ 5-15ಕ್ಕೆ ವಿದುಷಿ ಬಿ. ಯು. ಓಜಸ್ವಿನಿ ನಿರ್ದೇಶನದಲ್ಲಿ ಕಲಾ ಸುಸಂಸ್ಕೃತಿ ಅಕಾಡೆಮಿ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ. ಸ್ಥಳ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು41

## ಉದ್ಯಮಿ ಅಪಹರಿಸಿ ಜೀವ ಬೆದರಿಕೆ ಹಾಕಿ 3 ಲಕ್ಷ ರೂ. ಪಡೆದಿದ್ದ 6 ಮಂದಿ ಅರೆಸ್ಟ್

• **ಉದಯವಾಹಿನಿ, ಬೆಂಗಳೂರು**

ಚಲನಚಿತ್ರ ನಿರ್ದೇಶಕರೊಬ್ಬರಿಗೆ ನೀಡಿದ್ದ ಸಾಲವನ್ನು ಹಿಂದಿರುಗಿಸುವುದಾಗಿ ಹೇಳಿ ಉದ್ಯಮಿಯನ್ನು ಕರೆಸಿ ಅಪಹರಿಸಿಕೊಂಡು ಹೋಗಿ ಬೆದರಿಸಿ 3 ಲಕ್ಷ ಹಣವನ್ನು ಮೊಬೈಲ್‌ಗೆ ವರ್ಗಾಹಿಸಿಕೊಂಡಿದ್ದ ನಾಲ್ವರು ರೌಡಿ ಸೇರಿದಂತೆ 6 ಮಂದಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಚಲನಚಿತ್ರ ನಿರ್ದೇಶಕ ರೊಬ್ಬರಿಗೆ ರೌಡಿ ರಾಜೇಶ್ ಎಂಬಾತ ರಿಯಲ್ ಎಸ್ಟೇಟ್ ಉದ್ಯಮಿ ಮನೋಜ್ ಅವರಿಂದ ಸಾಲ ಕೊಡಿಸಿದ್ದ. ಆದರೆ ಹಣ ಪಡೆದ ನಿರ್ದೇಶಕರು ಅಸಲು ಹಾಗೂ ಬಡ್ಡಿ ಹಣ ಹಿಂದಿರುಗಿಸಿರಲಿಲ್ಲ. ಹಾಗಾಗಿ ಮನೋಜ್ ಅವರು ಹಣ ಕೊಡಿಸುವಂತೆ ರಾಜೇಶ್‌ಗೆ ಒತ್ತಾಯಿಸುತ್ತಿದ್ದರು. ಈ ನಡುವೆ ಬಸವೇಶ್ವರ ನಗರದ ನಿರ್ದೇಶಕರ ಮನೆ ಬಳಿ ಬಂದರೆ ನಿಮ ಹಣ ವಾಪಸ್ ಕೊಡಿಸುವುದಾಗಿ ಹೇಳಿ ಮನೋಜ್ ಅವರನ್ನು ಕರೆಸಿಕೊಂಡಿದ್ದಾರೆ. ಮನೋಜ್ ಅವರು ಸ್ಥಳಕ್ಕೆ ಬರುತ್ತಿದ್ದಂತೆ ನಾಲ್ವರು ರೌಡಿಗಳು ಸೇರಿ 6 ಮಂದಿ ದರೋಡೆಕೋರರು ಅವರನ್ನು ಕಾರಿನಲ್ಲಿ ಅಪಹರಿಸಿಕೊಂಡು ಹಲವು ಸ್ಥಳಗಳಲ್ಲಿ ಸುತ್ತಾಡಿಸಿ ಅವರ ಮೊಬೈಲ್‌ನಿಂದಲೇ 3 ಲಕ್ಷ ರೂ. ಹಣವನ್ನು ತಮ ಮೊಬೈಲ್‌ಗಳಿಗೆ ವರ್ಗಾಹಿಸಿಕೊಂಡಿದ್ದಾರೆ. ಇಷ್ಟಕ್ಕೆ ಸುಮನಾಗದ ಅಪಹರಣಕಾರರು ಇನ್ನೂ 10 ಲಕ್ಷ ರೂ. ಕೊಡಬೇಕೆಂದು ಬೆದರಿಕೆ ಹಾಕಿದ್ದಾರೆ. ದರೋಡೆಕೋರರ ವರ್ತನೆಯಿಂದ ಹೆದರಿದ ಮನೋಜ್ ಅವರು 10 ಲಕ್ಷ ರೂ. ಹಣ ಹೊಂದಿಸಿ ಕೊಡುವುದಾಗಿ ಹೇಳಿ ಉಪಾಯದಿಂದ ತಪ್ಪಿಸಿಕೊಂಡು ಬಂದು ಸಿಸಿಬಿ ಪೊಲೀಸರಿಗೆ ದೂರು ನೀಡಿದ್ದಾರೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಸಿಸಿಬಿ ಪೊಲೀಸರು ತನಿಖೆಯನ್ನು ಚುರುಕು ಗೊಳಿಸಿ ನಾಲ್ವರು ರೌಡಿಗಳು ಸೇರಿದಂತೆ ಆರು ಮಂದಿ ದರೋಡೆ ಕೋರರನ್ನು ಬಂಧಿಸಿ ಮುಂದಿನ ಕ್ರಮಕ್ಕೈಗೊಂಡಿದ್ದಾರೆ.

## ತೆರಿಗೆ ಪಾವತಿಸದಿದ್ದರೆ ಆಸ್ತಿ ಜಪ್ತಿ ಬೆಂಗಳೂರಿಗರಿಗೆ ಮೊದಲ ಶಾಕ್

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ಹೆಸರು ಹೋಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾದ ದಿನವೇ ಸಾರ್ವಜನಿಕ ರಿಗೆ ತೆರಿಗೆ ಶಾಕ್ ನೀಡಲಾಗಿದೆ.ತೆರಿಗೆ ಬಾಕಿ ಉಳಿಸಿಕೊಂಡ ವರಿಗೆ ಶಾಕ್ ನೀಡಿರುವ ಜಿಬಿಎ ಅಧಿಕಾರಿಗಳು ಕಳೆದ ಕೆಲವು ವರ್ಷಗಳಿಂದ ತೆರಿಗೆ ಪಾವತಿಸದವರಿಗೆ ನೋಟೀಸ್ ಜಾರಿ ಮಾಡಿದೆ. ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಅವರು ತೆರಿಗೆ ಪಾವತಿಸದವರಿಗೆ ನೋಟೀಸ್ ಜಾರಿ ಮಾಡಿದ್ದಾರೆ. ಒಂದು ವೇಳೆ ತೆರಿಗೆ ಪಾವತಿ ಸದಿದ್ದರೆ ಅಂತಹವರ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳುವುದಾಗಿ ಎಚ್ಚರಿಸಿದ್ದಾರೆ. ಸುಮಾರು 2.75 ಲಕ್ಷ ತೆರಿಗೆದಾರರಿಂದ ಬರೋಬ್ಬರಿ 786 ಕೋಟಿ ಆಸ್ತಿ ತೆರಿಗೆ ಸಂಗ್ರಹವಾಗಬೇಕಿದೆ. ಹೀಗಾಗಿ ಆಸ್ತಿ ಸುಸ್ತಿದಾರರಿಗೆ ಎಲೆಕ್ಟ್ರಾನಿಕ್ ಡಿಮ್ಯಾಂಡ್ ನೋಟಿಸ್ ಕಳುಹಿಸಲಾಗಿದೆ.

ಬಾಕಿ ಇರುವ ತೆರಿಗೆಯನ್ನು ಆನ್ ಲೈನ್ ನಲ್ಲಿ ಪಾವತಿಸುವಂತೆ ಸೂಚನೆ ನೀಡಲಾಗಿದೆ. ತೆರಿಗೆ ಪಾವತಿ ಮಾಡದಿದ್ರೆ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳುವ ಎಚ್ಚರಿಕೆ ನೀಡಲಾಗಿದೆ. ಅತಿ ಹೆಚ್ಚು ಬಾಕಿ ತೆರಿಗೆ ಉಳಿಸಿಕೊಂಡವರ ಮಾಹಿತಿ; ಮಹದೇವಪುರ ವಲಯದಲ್ಲಿ 65,040 ಆಸ್ತಿ ಮಾಲೀಕರಿಂದ 1,97,90,55,057 ಕೋಟಿ ಬಾಕಿ ಇದೆ. ದಕ್ಷಿಣ ವಲಯದಲ್ಲಿ 25162 ಆಸ್ತಿ ಮಾಲೀಕರಿಂದ 1,16,81,67,031 ಕೋಟಿ ಬಾಕಿ ಬರಬೇಕಿದೆ. ಪೂರ್ವ ವಲಯದಲ್ಲಿ 37,574 ಆಸ್ತಿ ಮಾಲೀಕರಿಂದ 1,15,30,83,768 ಕೋಟಿ, ಬೊಮ್ಮನಹಳ್ಳಿ ವಲಯದಲ್ಲಿ 45,293 ಆಸ್ತಿ ಮಾಲೀಕರಿಂದ 1,07,26,67,754 ಕೋಟಿ, ಯಲಹಂಕ ವಲಯದಲ್ಲಿ 28,022 ಆಸ್ತಿ ಮಾಲೀಕರಿಂದ 80,61,44,875 ಕೋಟಿ, ಪಶ್ಚಿಮ ವಲಯದಲ್ಲಿ 25,321 ಆಸ್ತಿ ಮಾಲೀಕರಿಂದ 75,28,89,617 ಕೋಟಿ, ರಾಜರಾಜೇಶ್ವರಿ ನಗರ ವಲಯದಲ್ಲಿ 38,358 ಆಸ್ತಿ ಮಾಲೀಕರಿಂದ 64,84,04,629 ಕೋಟಿ ಹಾಗೂ ದಾಸರಹಳ್ಳಿ ವಲಯದಲ್ಲಿ 11,172 ಆಸ್ತಿ ಮಾಲೀಕರಿಂದ 28,82,26,616 ಕೋಟಿ ಬಾಕಿ ಇದೆ. ಒಟ್ಟು ಎಂಟು ವಲಯದಲ್ಲಿ 2,75,942 ಆಸ್ತಿ ಮಾಲೀಕರಿಂದ 7,86,86,39,351 ಕೋಟಿ ಬಾಕಿ ಬರಬೇಕಿರುವುದನ್ನು ಗಂಭೀರವಾಗಿ ಪರಿಗಣಿಸಿ ಇಂತಹ ಕಡು ನಿರ್ಧಾರಕ್ಕೆ ಬರಲಾಗಿದೆ.

## ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆ ನೀಡಿದ ಮಾಲೀಕರ ವಿರುದ್ಧ ಕ್ರಮ

• **ಉದಯವಾಹಿನಿ, ಬೆಂಗಳೂರು**

ಮನೆ ಮಾಲೀಕರು ವೀಸಾ ನಿಯಮಗಳನ್ನು ಉಲ್ಲಂಘಿಸಿ ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆಗೆ ನೀಡಿದ್ದ ಮನೆ ಮಾಲೀಕರ ವಿರುದ್ಧ ಸಿಸಿಬಿ ಮಹಿಳಾ ಪೊಲೀಸರು ಕ್ರಮಕ್ಕೈಗೊಂಡಿದ್ದಾರೆ. ಇಬ್ಬರು ವಿದೇಶಿ ಪ್ರಜೆಗಳು ವಿವಿಧ ವೀಸಾದಡಿಯಲ್ಲಿ ಭಾರತಕ್ಕೆ ಬಂದು, ಅನಧಿಕೃತವಾಗಿ ನಗರದಲ್ಲಿ ವಾಸವಾಗಿರುವ ಬಗ್ಗೆ ಸಿಸಿಬಿ ಮಹಿಳಾ ಸಂರಕ್ಷಣಾ ದಳದ ಅಧಿಕಾರಿ ಮತ್ತು ಸಿಬ್ಬಂದಿಗೆ ಮಾಹಿತಿ ಲಭಿಸಿದೆ. ಈ ಮಾಹಿತಿಯನ್ನು ಆಧರಿಸಿ, ಅನಧಿಕೃತವಾಗಿ ಇಬ್ಬರು ವಿದೇಶಿ ಮಹಿಳೆಯರು ವಾಸವಾಗಿರುವ ಸ್ಥಳಕ್ಕೆ ದಾವಿಸಿದ ಪೊಲೀಸರು ಆ ಇಬ್ಬರನ್ನು ವಿಚಾರಣೆಗೆ ಒಳಪಡಿಸಿದಾಗ, ಮನೆ ಮಾಲೀಕರು ವಿದೇಶಿ ಪ್ರಜೆಗಳಿಗೆ ಸಂಬಂಧಿಸಿದ ಸಿ ಫಾರಂ, ಇತರೆ ದಾಖಲೆಗಳನ್ನು ಸ್ಥಳೀಯ ಪೊಲೀಸ್ ಠಾಣೆಗೆ ನೀಡದೆ ಇರುವುದು ಕಂಡು ಬಂದಿದೆ. ಮನೆ ಮಾಲೀಕರ ವಿರುದ್ಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ವಿದೇಶಿ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ. ಇಬ್ಬರು ವಿದೇಶಿ ಪ್ರಜೆಗಳನ್ನು ಮುಂದಿನ ಕಾನೂನು ಕ್ರಮಕ್ಕಾಗಿ ಠಾಣೆಯ ಠಾಣಾಧಿಕಾರಿಗಳಿಗೆ ಒಪ್ಪಿಸಲಾಗಿದೆ. ಮನೆ ಮಾಲೀಕರು ತಲೆ ಮರೆಸಿಕೊಂಡಿದ್ದು, ಅವರ ಪತ್ತೆ ಕಾರ್ಯ ಮುಂದುವರೆದಿದ್ದು ತನಿಖೆ ಪ್ರಗತಿಯಲ್ಲಿದೆ.

## ರಾಜಣ್ಣ ಬಿಜೆಪಿಗೆ ಸೇರಲು ಅರ್ಜಿ ಸಲ್ಲಿಸಿದ್ದಾರೆ ಬಾಂಬ್ ಸಿಡಿಸಿದ ಶಾಸಕ ಬಾಲಕೃಷ್ಣ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಮಾಜಿ ಸಚಿವ ಕೆ.ಎನ್. ರಾಜಣ್ಣ ಬಿಜೆಪಿಗೆ ಸೇರಲು ಈಗಾಗಲೇ ಅರ್ಜಿ ಸಲ್ಲಿಸಿದ್ದಾರೆ. ಅವರಿಗೆ ಮಂಪರು ಪರೀಕ್ಷೆ ಮಾಡಿದರೆ ಯಾರ ಜೊತೆಯಲ್ಲಿ ಮಾತುಕತೆಯಾಗಿದೆ ಎಂಬುವುದು ತಿಳಿದು ಬರಲಿದೆ ಎಂದು ಮಾಗಡಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಎಚ್.ಸಿ. ಬಾಲಕೃಷ್ಣ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇಲ್ಲದೇ ಇದ್ದಿದ್ದರೆ ಇಷ್ಟೊತ್ತಿಗೆ ರಾಜಣ್ಣ ಬೇರೆ ಪಕ್ಷಕ್ಕೆ ವಲಸೆ ಹೋಗುತ್ತಿದ್ದರು ಎಂದು ಹೇಳಿದರು.

ಕಾಂಗ್ರೆಸ್‌ನಿಂದ ರಾಜಣ್ಣ ಒಂದು ಕಾಲನ್ನು ಈಗಾಗಲೇ ಹೊರಗಿಟ್ಟಿದ್ದಾರೆ. ಪಕ್ಷ ಬಿಟ್ಟು ಹೋಗುವ ಮುನ್ನ ಡಿ.ಕೆ.ಶಿವಕುಮಾರ್ ಅವರ ಮೇಲೆ ಗೂಬೆ ಕೂರಿಸಲು ಪ್ರಯತ್ನಿಸುತ್ತಿದ್ದಾರೆ. ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸಿರುವುದರ ಹಿಂದೆ ಡಿ.ಕೆ.ಶಿವಕುಮಾರ್ ಅವರ ಪಾತ್ರ ಇಲ್ಲ. ಹೈಕಮಾಂಡ್ ನೇರವಾಗಿ ಕ್ರಮ ತೆಗೆದುಕೊಂಡಿದೆ ಎಂದರು. ಸಚಿವರಾಗಿದ್ದಾಗ ರಾಜಣ್ಣ ಯಾವ ರೀತಿ ನಡೆದುಕೊಂಡಿದ್ದರು ಅವರ ಮಾತು, ನಡವಳಿಕೆಗಳು ಹೇಗಿದ್ದವು ಎಂದು ಎಲ್ಲರೂ ನೋಡಿದ್ದಾರೆ. ಮಾತು ಮನೆ ಕೆಡೆಸಿತ್ತು. ತೂತು ಒಲೆ ಕೆಡಿಸಿತ್ತು ಎಂಬಂತೆ ರಾಜಣ್ಣ ಅಧಿಕಾರ ಕಳೆದುಕೊಂಡರು. ಇದಕ್ಕೆ ನಮ ನಾಯಕರ ಮೇಲೆ ದೂಷಣೆ ಮಾಡುವುದು ಸರಿಯಲ್ಲ ಎಂದರು.

ರಾಜಣ್ಣ ಈಗಾಗಲೇ ಬಿಜೆಪಿಯ ಪ್ರಭಾವಿ ನಾಯಕರ ಜೊತೆ ಮಾತುಕತೆ ನಡೆಸಿದ್ದಾರೆ. ದೆಹಲಿ ಮಟ್ಟದಲ್ಲೂ ಚರ್ಚೆಗಳಾಗಿವೆ. ಮಂಪರು ಪರೀಕ್ಷೆಗೊಳಪಡಿಸಿದರೆ, ಯಾರ ಸಂಪರ್ಕದಲ್ಲಿದ್ದಾರೆ ಎಂದು ಗೊತ್ತಾಗಲಿದೆ ಎಂದರು. ಕೆ.ಎನ್.ರಾಜಣ್ಣ ನಿನ್ನೆಯಷ್ಟೇ ಸುದ್ದಿಗಾರರೊಂದಿಗೆ ಮಾತನಾಡಿ, ನಾನು ಯಾವ ಪಕ್ಷಕ್ಕೂ ಹೋಗುವುದಿಲ್ಲ ಕಾಂಗ್ರೆಸ್‌ನಲ್ಲೇ ಇರುತ್ತೇನೆ. ಸದ್ಯಕ್ಕೆ ಅಸತ್ಯ ಮೇಲುಗೈ ಆಗಿದ್ದರೂ, ಕೊನೆಗೆ ಸತ್ಯಕ್ಕೆ ಜಯ ಸಿಗುತ್ತದೆ. ನಾನು ಈ ಮೊದಲು ಮೂರು ಉಪಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿ, ಹನಿಟ್ರ್ಯಾಪ್ ಬಗ್ಗೆ ಮಾತನಾಡಿದ್ದು, ಸೇರಿದಂತೆ ಹಲವಾರು ವಿಚಾರಗಳು ತಮ ವಿರುದ್ಧ ಕೆಲಸ ಮಾಡಿವೆ ಎಂದಿದ್ದರು. ಅದರ ಬೆನ್ನಲ್ಲೇ ಹೆಚ್.ಸಿ. ಬಾಲಕೃಷ್ಣ ಮಂಗಳವಾರ ರಾಜಣ್ಣ ಅವರು ಪಕ್ಷಾಂತರಕ್ಕೆ ಸಿದ್ಧವಾಗಿದ್ದಾರೆ ಎಂದು ಹೇಳಿರುವುದು ತೀವ್ರ ಕುತೂಹಲ ಕೆರಳಿಸಿದೆ.

## ಸ್ಮಾರ್ಟ್ ಆಗಲಿದೆ ಯಶವಂತಪುರ ರೈಲು ನಿಲ್ದಾಣ

### ಈ ವರ್ಷಾಂತ್ಯಕ್ಕೆ ಕಾಮಗಾರಿ ಮುಗಿಸುವ ಗುರಿ, 380 ಕೋಟಿ ರೂ. ವೆಚ್ಚದಲ್ಲಿ ಕೆಲಸ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ರಾಜಧಾನಿಯಲ್ಲಿಯೇ ಅತ್ಯಂತ ಜನನಿಬಿಡ ಯಶವಂತಪುರ ರೈಲು ನಿಲ್ದಾಣದ ನವೀಕರಣ ಕೆಲಸ ಭರದಿಂದ ಸಾಗುತ್ತಿದ್ದು, ಈ ವರ್ಷಾಂತ್ಯಕ್ಕೆ ಕಾಮಗಾರಿ ಮುಗಿಸುವ ಗುರಿಯನ್ನು ರೈಲ್ವೆ ಇಲಾಖೆ ಹಾಕಿಕೊಂಡಿದೆ. ನಿಲ್ದಾಣದ ಪೂರ್ವ ಮತ್ತು ಪಶ್ಚಿಮ ಭಾಗಗಳಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದ್ದು, ಶೇ.60ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಒಟ್ಟು 380 ಕೋಟಿ ರೂ. ವೆಚ್ಚದಲ್ಲಿ ನವೀಕರಣ ನಡೆಯುತ್ತಿರುವ ಈ ನಿಲ್ದಾಣದಲ್ಲಿ ಹೊಸದಾಗಿ ನಾಲ್ಕು ಅಂತಸ್ತಿನ ನೂತನ ಕಟ್ಟಡ ನಿರ್ಮಿಸಲಾಗುತ್ತಿದೆ. 2022ರ ಜೂನ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಈ ಕಾಮಗಾರಿಗೆ ಚಾಲನೆ ನೀಡಿದ್ದರು. ದಿಲ್ಲಿಯ ಗಿರ್ಧಾರಿ ಲಾಲ್ ಕನ್‌ಸ್ಟ್ರಕ್ಷನ್ಸ್ ಕಂಪನಿ ಕಾಮಗಾರಿ ನಡೆಸುತ್ತಿದೆ.

ಪೂರ್ವಭಾಗ (ಪ್ಲಾಟ್‌ಫಾರ್ಮ್1) ನಡೆಯುತ್ತಿರುವ ಕಾಮಗಾರಿ ಬಹುತೇಕ ಅಂತಿಮ ಹಂತಕ್ಕೆ ಬಂದಿದೆ. ಪ್ರಯಾಣಿಕರ ದಟ್ಟಣೆ ತಡೆಗೆ ನಿಲ್ದಾಣದ ಆಗಮನ-ನಿರ್ಗಮನ ದ್ವಾರಗಳನ್ನು ಪ್ರತ್ಯೇಕವಾಗಿ ನಿರ್ಮಾಣ ಮಾಡಿರುವುದರಿಂದ ವಾಹನ ಸಂಚಾರಕ್ಕೆ ಅನುಕೂಲವಾಗಲಿದೆ. ನಮ್ಮ ಮೆಟ್ರೋ (ಪಶ್ಚಿಮ ಭಾಗ)ದ ಯಶವಂತಪುರ ನಿಲ್ದಾಣ ಕಡೆ ಕಾಮಗಾರಿ ಭರದಿಂದ ಸಾಗಿದೆ. ಈಗಾಗಲೇ ನೆಲಮಹಡಿ ಕೆಲಸ ಪೂರ್ಣಗೊಂಡಿದೆ. ಅಂತಸ್ತುಗಳ ಕೆಲಸ ನಡೆಯುತ್ತಿದೆ.

**ಏನೆಲ್ಲಾ ಸೌಲಭ್ಯ:** ರೈಲು ನಿಲ್ದಾಣದಲ್ಲಿ ವಾಣಿಜ್ಯ ಮಳಿಗೆಗಳು, ಫುಡ್ ಕೋರ್ಟ್, ಮನರಂಜನಾ ಕೇಂದ್ರ, ನಿಲ್ದಾಣದ ಆವರಣದಲ್ಲಿ ಪ್ರಯಾಣಿಕರಿಗೆ ಸುಲಭವಾಗಿ ಪ್ಲಾಟ್‌ಫಾರಂಗೆ ತೆರಳಲು ಎಲ್ಇಡಿ ಆಧಾರಿತ ಫಲಕಗಳನ್ನು ಒದಗಿಸಲಾಗುತ್ತಿದೆ. ಖಾಸಗಿ ವಾಹನ, ಟ್ಯಾಕ್ಸಿಗಳ ಡ್ರಾಪ್, ಪಿಕ್-ಅಪ್ ಪಾಯಿಂಟ್‌ಗಳನ್ನು ಪ್ರತ್ಯೇಕವಾಗಿ ನಿರ್ಮಿಸಲಾಗುತ್ತಿದೆ. ಮೆಟ್ರೊ ನಿಲ್ದಾಣದಿಂದ ನೇರ ರೈಲ್ವೆ ಪ್ಲಾಟ್‌ಫಾರಂಗೆ ಪಾದಚಾರಿ ಮೇಲ್ಸೇತುವೆ ಇರಲಿದೆ. ಜತೆಗೆ, ನಿಲ್ದಾಣ ವಿಶೇಷಚೇತನ ಸ್ನೇಹಿಯಾಗಿರಲಿದೆ. ಲಿಫ್ಟ್‌ಗಳು ಮತ್ತು ವಿಶೇಷಚೇತನರಿಗೆ ಅನುಕೂಲಕರ ಶೌಚಾಲಯಗಳು ಕೂಡ ಇರಲಿವೆ.

ಮೆಟ್ರೊ ನಿಲ್ದಾಣದ ಕಡೆ ಎತ್ತರದ ರಸ್ತೆ, ಪಾರ್ಕಿಂಗ್ ಪ್ರದೇಶ, ಪ್ರವೇಶ, ನಿರ್ಗಮನಕ್ಕಾಗಿ ಪ್ರತ್ಯೇಕ ಮಾರ್ಗ, ಟಿಕೆಟ್ ಕೌಂಟರ್‌ಗಳು, ಡಾರ್ಮಿಟರಿ, ವಿಶ್ರಾಂತಿ ಕೊಠಡಿಗಳು, ನಿರೀಕ್ಷಣಾ ಕೊಠಡಿಗಳು , ಮುಂಗಡ ಟಿಕೆಟ್ ಕಾಯ್ದಿರಿಸುವ ಕೌಂಟರ್‌ಗಳನ್ನು ಹೊಂದಿರುವ ನಾಲ್ಕು ಅಂತಸ್ತಿನ ನಿಲ್ದಾಣದ ಕಟ್ಟಡದ ಕಾಮಗಾರಿ ನಡೆಯುತ್ತಿದೆ. ಈ ನಿಲ್ದಾಣವು 14,800 ಚದರ ಮೀಟರ್ ವಿಸ್ತೀರ್ಣದ ಏರ್ ಕಾನ್ಕೋರ್ಸ್ ಪ್ರದೇಶ ಹೊಂದಿದ್ದು, ವಿಮಾನ ನಿಲ್ದಾಣಗಳಲ್ಲಿರುವ ಲಾಂಜ್‌ಗೆ ಸರಿಸಮನಾಗಿರುವಂತಹ ವ್ಯವಸ್ಥೆ ಕಲ್ಪಿಸಲಾಗುತ್ತಿದೆ.

**ಪರಿಸರ ಸ್ನೇಹಿ ಕಟ್ಟಡ:** ಪರಿಸರ ಸಂರಕ್ಷಣೆ ನಿಟ್ಟಿನಲ್ಲಿ ಹಸಿರು ಕಟ್ಟಡ ಮಾದರಿಯಲ್ಲಿ ವಿನ್ಯಾಸಗೊಳಿಸಲಾಗುತ್ತಿದೆ. ನೀರನ್ನು ಸಂರಕ್ಷಿಸಲು ಮಳೆ ನೀರು ಕೊಯ್ಲು ವ್ಯವಸ್ಥೆ ಇರಲಿದೆ. ಸದ್ಯ ಪ್ರತಿದಿನ 50 ಸಾವಿರಕ್ಕೂ ಹೆಚ್ಚು ಪ್ರಯಾಣಿಕರು ಈ ನಿಲ್ದಾಣವನ್ನು ಬಳಸುತ್ತಿದ್ದಾರೆ. ನವೀಕರಣಗೊಂಡ ಬಳಿಕ ನಿಲ್ದಾಣವು ದಿನಕ್ಕೆ 1 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರ ಓಡಾಟ ಸಾಮರ್ಥ್ಯ ಹೊಂದಲಿದೆ. ಕಾಮಗಾರಿಯು ಈ ವರ್ಷಾಂತ್ಯಕ್ಕೆ ಪೂರ್ಣಗೊಳ್ಳಲಿದೆ ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

**ಮಳೆ ನೀರು ಕೊಯ್ಲು ವ್ಯವಸ್ಥೆ**

**ನಾಲ್ಕು ಅಂತಸ್ತಿನ ಕಟ್ಟಡ**

**ಯಶವಂತಪುರ ರೈಲು ನಿಲ್ದಾಣದ ನವೀಕರಣ ಕಾರ್ಯ ಇದೇ ವರ್ಷದಲ್ಲಿ ಮುಗಿಯಲಿದೆ. ಕಾಮಗಾರಿ ಭರದಿಂದ ಸಾಗುತ್ತಿದ್ದು, ಈ ವರ್ಷಾಂತ್ಯಕ್ಕೆ ಕಾಮಗಾರಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. 380 ಕೋಟಿ ರೂ. ವೆಚ್ಚದಲ್ಲಿ ನಡೆಯುತ್ತಿರುವ ಕಾಮಗಾರಿಯಲ್ಲಿ, ಹೊಸ ನಾಲ್ಕು ಅಂತಸ್ತಿನ ಕಟ್ಟಡ ನಿರ್ಮಾಣವಾಗುತ್ತಿದೆ. ಪ್ರಯಾಣಿಕರ ಅನುಕೂಲಕ್ಕಾಗಿ ಸುಸಜ್ಜಿತ ಪ್ಲಾಟ್‌ಫಾರ್ಮ್‌ಗಳು, ವಾಣಿಜ್ಯ ಮಳಿಗೆಗಳು, ಮೆಟ್ರೊ ನಿಲ್ದಾಣಕ್ಕೆ ನೇರ ಸಂಪರ್ಕ ಕಲ್ಪಿಸುವ ಪಾದಚಾರಿ ಮೇಲ್ಸೇತುವೆ ನಿರ್ಮಾಣವಾಗಲಿದೆ. ನವೀಕರಣದ ನಂತರ, ನಿಲ್ದಾಣವು ದಿನಕ್ಕೆ ಒಂದು ಲಕ್ಷಕ್ಕೂ ಹೆಚ್ಚು ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯ ಹೊಂದಲಿದೆ.**

## ಜಲ ಮಂಡಳಿಗೆ 500 ಕೋಟಿ ರೂ. ಹೆಚ್ಚುವರಿ ಆದಾಯ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ನೀರಿನ ದರ ಪರಿಷ್ಕರಣೆಯಿಂದಾಗಿ ವಾರ್ಷಿಕ 500 ಕೋಟಿ ರೂ. ಹೆಚ್ಚುವರಿ ಆದಾಯ ಬರಲಿದ್ದು, ಬೆಳೆಯುತ್ತಿರುವ ಬೆಂಗಳೂರು ನಗರಕ್ಕೆ 6ನೇ ಹಂತದ ಕಾವೇರಿ ಯೋಜನೆ ಪ್ರಾರಂಭಿಸುವುದು ನಮ್ಮ ಮುಂದಿನ ಗುರಿಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಜಲಮಂಡಳಿಯ ರಜತ ಭವನದಲ್ಲಿ 700 ನೈರ್ಮಲ್ಯೀಕರಣ ಕಾರ್ಮಿಕರಿಗೆ ಜಲಮಂಡಳಿ ಅನ್ನಪೂರ್ಣ ಯೋಜನೆಯಡಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಿ ಅವರು ಮಾತನಾಡಿದರು.

ನಗರದ ಸ್ವಚ್ಛತೆ, ಒಳಚರಂಡಿ ಸುವ್ಯವಸ್ಥೆ ಕಾಪಾಡುವಲ್ಲಿ ಜಲಮಂಡಳಿಯ ನೈರ್ಮಲ್ಯೀಕರಣ ಕಾರ್ಮಿಕರ ಪಾತ್ರ ಹಿರಿದಾಗಿದೆ. ಅವರ ಸೇವೆ ಹಾಗೂ ತ್ಯಾಗವನ್ನು ಗೌರವಿಸುವ ನಿಟ್ಟಿನಲ್ಲಿ ಐತಿಹಾಸಿಕವಾಗಿ ಜಲಮಂಡಳಿ ಅನ್ನಪೂರ್ಣ ಯೋಜನೆ ಅನುಷ್ಠಾನಗೊಳಿಸಿದೆ. ಈ ಮೂಲಕ ಶೇ. 30ರಷ್ಟು ಹಣವನ್ನು ನಿಮ್ಮ ಯೋಗ ಕ್ಷೇಮಕ್ಕೆ ಮೀಸಲಿಟ್ಟಿದೆ. ಸ್ವಚ್ಛತಾ ಕಾರ್ಮಿಕರ ಮಕ್ಕಳೂ ಎಂಜಿನಿಯರ್, ಡಾಕ್ಟರ್, ಅಧಿಕಾರಿಗಳಾಗಬೇಕು. ಈ ನಿಟ್ಟಿನಲ್ಲಿ ನಿಮ್ಮ ಕನಸು ನನಸಾಗಿಸಲು ಸರಕಾರವೂ ನಿಂತಿದೆ, ಎಂದು ಭರವಸೆ ನೀಡಿದರು. ಕಳೆದ 10 ವರ್ಷಗಳಲ್ಲಿ ವಿದ್ಯುತ್, ಸಿಮೆಂಟ್, ಕಬ್ಬಿಣ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಯಿತು. ಆದರೆ, ನೀರಿನ ದರ ಪರಿಷ್ಕರಣೆಯಾಗಲಿಲ್ಲ. ಹಾಗಾಗಿ, ಮಂಡಳಿ ನಷ್ಟದಲ್ಲಿತ್ತು. ನಾನು ಬಂದ ನಂತರ ಎಷ್ಟೇ ವಿರೋಧ ವ್ಯಕ್ತವಾದರೂ ನೀರಿನ ದರ ಪರಿಷ್ಕರಿಸಿದೆ. ಇದರಿಂದಾಗಿ ಮಂಡಳಿಗೆ ವಾರ್ಷಿಕ 500 ಕೋಟಿ ರೂ. ಹೆಚ್ಚುವರಿ ಆದಾಯ ಬರಲಿದೆ. ಟ್ಯಾಂಕರ್ ಮಾಫಿಯಾಗೆ ಕಡಿವಾಣ ಹಾಕಲಾಗಿದೆ. 5ನೇ ಹಂತದ ಕಾವೇರಿ ಯೋಜನೆ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಈಗ ನಮ್ಮ ಕಾವೇರಿ 6ನೇ ಹಂತದ ಯೋಜನೆಯನ್ನು ಪ್ರಾರಂಭಿಸುವುದು ನಮ್ಮ ಗುರಿಯಾಗಿದೆ ಎಂದರು.

ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಪ್ರತಿ ದಿನದ ಉಪಾಹಾರಕ್ಕಾಗಿ ಕಾರ್ಮಿಕರಿಗೆ ನೇರ ಹಣ ಪಾವತಿಸುವ ಈ ವ್ಯವಸ್ಥೆ ಕಾರ್ಮಿಕರ ಗೌರವವನ್ನು ಹೆಚ್ಚಿಸುವುದರೊಂದಿಗೆ ಇತರೆ ನಗರಗಳಿಗೆ ಮಾದರಿಯಾಗಲಿದೆ, ಎಂದು ಅಭಿಪ್ರಾಯಪಟ್ಟರು.

**ನೀರಿನ ದರ ಪರಿಷ್ಕರಣೆಯಿಂದ ಬಿಡಬ್ಲ್ಯೂಎಸ್‌ಎಸ್‌ಬಿಗೆ ವಾರ್ಷಿಕ 500 ಕೋಟಿ ರೂ. ಹೆಚ್ಚುವರಿ ಆದಾಯ ಬರಲಿದ್ದು, ಬೆಂಗಳೂರಿಗೆ 6ನೇ ಹಂತದ ಕಾವೇರಿ ಯೋಜನೆ ಆರಂಭಿಸಲಾಗುವುದು, ಜಲಮಂಡಳಿಯ ಅನ್ನಪೂರ್ಣ ಯೋಜನೆಯಡಿ ನೈರ್ಮಲ್ಯ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಿ, ಕಾರ್ಮಿಕರ ಯೋಗಕ್ಷೇಮಕ್ಕೆ ಸರಕಾರ ಬದ್ಧವಾಗಿದೆ.**

**-ಡಿ.ಕೆ. ಶಿವಕುಮಾರ್, ಡಿಸಿಎಂ**

## ಶಾಸಕ ಪಪ್ಪಿ ಮನೆ ಮೇಲೆ ಮತ್ತೆ ಇಡಿ ದಾಳಿ

• **ಉದಯವಾಹಿನಿ, ಬೆಂಗಳೂರು**



ಆನ್‌ಲೈನ್ ಬೆಟ್ಟಿಂಗ್, ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಪ್ರಸ್ತುತ ಜಾರಿ ನಿರ್ದೇಶನಾಲಯ(ಇಡಿ) ವಶದಲ್ಲಿರುವ ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿ ಅವರ ಮನೆಗಳ ಮೇಲೆ ಮತ್ತೆ ದಾಳಿ ನಡೆಸಲಾಗಿದೆ. ಚಿತ್ರದುರ್ಗ, ಚಳ್ಳಕೆರೆಯಲ್ಲಿರುವ ಸಹೋದರರ ನಿವಾಸ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿರುವ ಇ.ಡಿ. ಅಧಿಕಾರಿಗಳು ಪ್ರಕರಣ ಸಂಬಂಧ ಕೆಲವು ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಹಿಂದೆ ದಾಳಿ ನಡೆಸಿದ ಸಂದರ್ಭದಲ್ಲಿ ವೀರೇಂದ್ರ ಪಪ್ಪಿಗೆ ಸೇರಿರುವ ಬೆಲೆ ಬಾಳುವ ನಾಲ್ಕು ಐಷರಾಮಿ ಕಾರುಗಳ ಕುರಿತು ಮಾಹಿತಿಯನ್ನು ಕಲೆ ಹಾಕಿದ್ದಾರೆಂದು ತಿಳಿದುಬಂದಿದೆ. ಸಿಐಎಸ್‌ಎಫ್ ಭದ್ರತೆಯೊಂದಿಗೆ ಏಕಕಾಲಕ್ಕೆ ಎರಡು ಕಡೆ ದಾಳಿ ನಡೆಸಿರುವ ಅಧಿಕಾರಿಗಳು ಕೋಟ್ಯಂತರ ರೂ. ಬೆಲೆ ಬಾಳುವ ಕಾರುಗಳು ಎಲ್ಲಿಂದ ಬಂದಿದ್ದವು ಯಾವ ವರ್ಷದಲ್ಲಿ ಖರೀದಿಸಲಾಗಿತ್ತು ತೆರಿಗೆ ಕಟ್ಟಲಾಗಿತ್ತೇ ಎಂಬುದರ ಕುರಿತು ಮಾಹಿತಿಯನ್ನು ಪಡೆದುಕೊಂಡಿದ್ದಾರೆ. ಮೂಲಗಳ ಪ್ರಕಾರ ಪ್ರಸ್ತುತ ಇ.ಡಿ ವಶದಲ್ಲಿರುವ ಈ ನಾಲ್ಕು ಕಾರುಗಳನ್ನು ಯಾವುದೇ ಕ್ಷಣದಲ್ಲಿ ಜಪ್ತಿ ಮಾಡುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಕಳೆದ ಆ.22ರಂದು ಚಿತ್ರದುರ್ಗ, ಚಳ್ಳಕೆರೆ, ಬೆಂಗಳೂರು, ಗೋವಾ, ಜೋಧ್‌ಪುರ ಸೇರಿದಂತೆ 30ಕ್ಕೂ ಹೆಚ್ಚು ಸ್ಥಳಗಳಲ್ಲಿ ವೀರೇಂದ್ರ ಪಪ್ಪಿಗೆ ಸೇರಿದ ಕಚೇರಿ, ನಿವಾಸಗಳ ಮೇಲೆ ದಾಳಿ ನಡೆಸಲಾಗಿತ್ತು. ದಾಳಿಯ ವೇಳೆ 12 ಕೋಟಿ ನಗದು, 6 ಕೋಟಿ ರೂ. ಬೆಲೆ ಬಾಳುವ ಚಿನ್ನಾಭರಣ, 10 ಕೆಜಿ ಬೆಳ್ಳಿ ಜಪ್ತಿ ಮಾಡಲಾಗಿದ್ದರೆ, ಕೆ.ಸಿ.ವೀರೇಂದ್ರ ಪಪ್ಪಿ ಅವರ 17 ಬ್ಯಾಂಕ್ ಖಾತೆಗಳು, 2 ಬ್ಯಾಂಕ್ ಲಾಕರ್‌ಗಳನ್ನು ಸ್ಥಗಿತಗೊಳಿಸಲಾಗಿದೆ.

ದಾಳಿ ನಡೆಸಿದ ಸಂದರ್ಭದಲ್ಲಿ ವೀರೇಂದ್ರ ಪಪ್ಪಿ ಸಿಕ್ಕಿಂ ರಾಜಧಾನಿ ಗ್ಯಾಂಗ್ಟಕ್ ತೆರಳಿದ್ದರು. ಕೋಲ್ಕತ್ತಾ ಇ.ಡಿ ಅಧಿಕಾರಿಗಳ ಒಂದು ತಂಡ ಅಲ್ಲಿಗೆ ತೆರಳಿ ಬಂಧಿಸಿ ಬೆಂಗಳೂರಿಗೆ ಕರೆತಂದಿತ್ತು. ಪ್ರಸ್ತುತ ಅವರು ಇಡಿ ವಶದಲ್ಲಿದ್ದಾರೆ. ವೀರೇಂದ್ರ ಪಪ್ಪಿ ಅವರ ಸಹೋದರ ಕೆ. ಸಿ. ನಾಗರಾಜ್ ಮತ್ತು ಅವರ ಮಗ ಪೃಥ್ವಿ.ಎನ್ ರಾಜ್ ಅವರ ಮನೆಗಳಿಂದ ಆಸ್ತಿಗೆ ಸಂಬಂಧಿಸಿದ ಅನೇಕ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ.

## ಧರ್ಮಸ್ಥಳ ಪ್ರಕರಣವನ್ನು ಎನ್‌ಐಎಗೆ ವಹಿಸುವ ಅಗತ್ಯವಿಲ್ಲ

• **ಉದಯವಾಹಿನಿ, ಬೆಂಗಳೂರು**



ಧರ್ಮಸ್ಥಳದ ವಿಚಾರದಲ್ಲಿ ನಡೆಯುತ್ತಿರುವ ಎಸ್‌ಐಟಿ ತನಿಖೆಯಲ್ಲಿ ಯಾವುದೇ ಲೋಪಗಳಿಲ್ಲ. ಹೀಗಾಗಿ ಎನ್‌ಐಎ ತನಿಖೆಗೆ ವಹಿಸುವ ಅಗತ್ಯ ಇಲ್ಲ. ಬಿಜೆಪಿಯವರು ಎಸ್‌ಐಟಿ ತನಿಖೆಗೆ ತೊಂದರೆ ಮಾಡುವ ಉದ್ದೇಶ ಹೊಂದಿರುವಂತೆ ಕಂಡು ಬರುತ್ತಿದೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸುವ ಅಗತ್ಯ ಇಲ್ಲ ಎಂದು ಹಲವಾರು ಸಂದರ್ಭಗಳಲ್ಲಿ ಸ್ಪಷ್ಟಪಡಿಸಿದ್ದೇನೆ.

ಬಿಜೆಪಿಯವರು ಅನೇಕ ರೀತಿಯಲ್ಲಿ ಒತ್ತಾಯ ಮಾಡುವ ಮೂಲಕ ಸ್ವರೂಪ ಬದಲಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಜಾರಿ ನಿರ್ದೇಶನಾಲಯ ಫೇಮಾ ಮತ್ತು ಇತರ ಕಾಯ್ದೆಗಳ ಅಡಿ ತನಿಖೆ ಆರಂಭಿಸಿ ಧರ್ಮಸ್ಥಳದ ವಿರುದ್ಧದ ಷಡ್ಯಂತ್ರಕ್ಕೆ ಎನ್‌ಜಿಓ ಹಣ ಬಳಕೆಯಾಗಿರುವ ಬಗ್ಗೆ ವಿಚಾರಣೆ ನಡೆಸುವುದಾದರೆ ನಮ ಅಭ್ಯಂತ್ರವಿಲ್ಲ. ಅವರು ಹಣಕಾಸಿನ ವಿಚಾರಗಳ ಕುರಿತು ತನಿಖೆ ಮಾಡುತ್ತಾರೆ. ಎಸ್‌ಐಟಿ ತನ್ನ ಪಾಲಿನ ಜವಾಬ್ದಾರಿಯನ್ನು ನಿಭಾಯಿಸುತ್ತದೆ. ಚಿನ್ನಯ್ಯ ಅವರು ನಿಯಮ 164ರ ಅಡಿ ನ್ಯಾಯಾಧೀಶರ ಮುಂದೆ ನೀಡಿರುವ ಹೇಳಿಕೆಗೆ ಸೀಮಿತವಾಗಿ ತನಿಖೆ ನಡೆಸುತ್ತಿದೆ ಎಂದರು.

ಧರ್ಮಸ್ಥಳದ ವಿರುದ್ಧ ಬಿಜೆಪಿ ಷಡ್ಯಂತ್ರ ಮಾಡಿರುವ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ ನೀಡಿರುವುದು ನನಗೆ ಗೊತ್ತಿಲ್ಲ. ಅವರಿಗೆ ಬೇರೆ ರೀತಿಯ ಮಾಹಿತಿಗಳು ಇರಬಹುದು. ನಾನು ಜವಾಬ್ದಾರಿಯುತ ಸಚಿವನಾಗಿ ತನಿಖೆ ನಡೆಯುವ ಸಂದರ್ಭದಲ್ಲಿ ಬೇರೆ ರೀತಿಯ ಹೇಳಿಕೆ ನೀಡಲು ಬಯಸುವುದಿಲ್ಲ. ಬಿಜೆಪಿಯವರು ತನಿಖೆಗೆ ತೊಂದರೆ ಮಾಡಲು ನಾನಾ ರೀತಿಯ ಪ್ರಯತ್ನ ಮಾಡುತ್ತಿರುವಂತಿದೆ ಎಂದರು.

## 6.50 ಲಕ್ಷ ರೂ. ಮೌಲ್ಯದ ದೇವರ ವಿಗ್ರಹಗಳ ವಶ, ಮೂವರ ಬಂಧನ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ದೇವಸ್ಥಾನಗಳನ್ನೇ ಟಾರ್ಗೆಟ್ ಮಾಡಿಕೊಂಡು ಕಳವು ಮಾಡುತ್ತಿದ್ದ ಹೊರ ರಾಜ್ಯದ ಮೂವರು ಖದೀಮರನ್ನು ಕಾಡುಗೋಡಿ ಠಾಣೆ ಪೊಲೀಸರು ಬಂಧಿಸಿ 6.50 ಲಕ್ಷ ರೂ. ಮೌಲ್ಯದ 22 ವಿವಿಧ ದೇವರ ವಿಗ್ರಹಗಳನ್ನು ವಶಪಡಿಸಿಕೊಂಡಿದ್ದಾರೆ. ಕನ್ನಮಂಗಲದ ಖಾಜಿಸೊನ್ನೇನಹಳ್ಳಿ ಗ್ರಾಮದಲ್ಲಿ ವಾಸವಾಗಿದ್ದ ಪಶ್ಚಿಮ ಬಂಗಾಳ ಮೂಲದ ಮೊಹಮದ್ ರಬ್ಬಿ (22),ಮೊಹಮದ್ ಯೂಸೂಫ್ (20) ಮತ್ತು ಮೊಹಮದ್ ಬಾಬು (20) ಬಂಧಿತ ಆರೋಪಿಗಳು.ಈ ಮೂವರು ನಗರದಲ್ಲಿ ವಾಸವಾಗಿದ್ದುಕೊಂಡು ಇಬ್ಬರು ಕಾರು ವಾಷಿಂಗ್ ಕೆಲಸ ಹಾಗೂ ಮತ್ತೊಬ್ಬ ಚಿಂದಿ ಆಯುವ ಕೆಲಸ ಮಾಡುತ್ತಿದ್ದನು. ಖಾಜಿಸೊನ್ನೇನಹಳ್ಳಿ ಗ್ರಾಮದಲ್ಲಿರುವ ಮುನೇಶ್ವರಸ್ವಾಮಿ ದೇವಸ್ಥಾನದ ಬಾಗಿಲು ಮುರಿದು ಒಳನುಗ್ಗಿ ದೇವರ ವಿಗ್ರಹಗಳು, ಹುಂಡಿಯ ಹಣ, ಗಂಟೆಗಳನ್ನು ಕಳ್ಳರು ಕಳ್ಳತನ ಮಾಡಿ ಪರಾರಿಯಾಗಿದ್ದರು.

ಈ ಬಗ್ಗೆ ದೇವಾಲಯದ ಅರ್ಚಕರು ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ವಿವಿಧ ಆಯಾಮಗಳಲ್ಲಿ ಮಾಹಿತಿಗಳನ್ನು ಕಲೆಹಾಕಿ ಅನುಮಾನಾಸ್ಪದವಾಗಿ ತಿರುಗಾಡುತ್ತಿದ್ದ ವ್ಯಕ್ತಿಯೊಬ್ಬನನ್ನು ವಶಕ್ಕೆ ಪಡೆದು ಪರಿಶೀಲಿಸಿದಾಗ ಆತನ ಬಳಿ ಕಟಿಂಗ್ ಪ್ಲೇಯರ್, ಆಕ್ಸೆಲ್ ಬ್ಲೇಡ್, ಕಬ್ಬಿಣದ ರಾಡ್ ಕಂಡು ಬಂದಿದೆ.

ನಂತರ ಆತನನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸಿದಾಗ, ಮತ್ತಿಬ್ಬರು ಸಹಚರರೊಂದಿಗೆ ಸೇರಿಕೊಂಡು ದೇವಸ್ಥಾನದಲ್ಲಿ ಕಳ್ಳತನ ಮಾಡಿರುವುದಾಗಿ, ಹೊಸಕೋಟೆಯ ದೇವಸ್ಥಾನದಲ್ಲಿ, ಆವಲಹಳ್ಳಿಯಲ್ಲಿ ಆಟೋರಿಕ್ಷಾ ಕಳವು ಮಾಡಿರುವುದಾಗಿ ಹೇಳಿದ್ದಾನೆ.

ಆರೋಪಿಯ ಮಾಹಿತಿ ಮೇರೆಗೆ ಇನ್ನಿಬ್ಬರನ್ನು ಬಂಧಿಸಿದ್ದಾರೆ. ಮೂವರನ್ನು ಸುದೀರ್ಘ ವಿಚಾರಣೆಗೆ ಒಳಪಡಿಸಿದಾಗ, ಕಳವು ಮಾಡಿದ್ದ ದೇವರ ವಿಗ್ರಹಗಳನ್ನು ಈರಂಡಹಳ್ಳಿಯಲ್ಲಿರುವ ಗುಜರಿ ವ್ಯಾಪಾರಿಗೆ ನೀಡಿರುವುದಾಗಿ ಹಾಗೂ ಕೃತ್ಯಕ್ಕೆ ಬಳಸಿದ್ದ ಆಟೋರಿಕ್ಷಾವನ್ನು ದಿಣ್ಣೂರು ಪ್ಲಾಂಟೇಷನ್ ಪಕ್ಕದ ಖಾಲಿ ಜಾಗದಲ್ಲಿ ನಿಲ್ಲಿಸಿರುವುದಾಗಿ ತಿಳಿಸಿದ್ದಾರೆ. ಆರೋಪಿಗಳ ಮಾಹಿತಿಯಂತೆ ತನಿಖೆ ಮುಂದುವರೆಸಿದ ಪೊಲೀಸರು 22 ದೇವರ ವಿಗ್ರಹಗಳು, ಆಟೋರಿಕ್ಷಾವನ್ನು ವಶಪಡಿಸಿಕೊಂಡಿದ್ದು, ಅವುಗಳ ಒಟ್ಟು ಮೌಲ್ಯ 6.50 ಲಕ್ಷ ರೂ. ಗಳೆಂದು ಅಂದಾಜಿಸಲಾಗಿದೆ. ಆರೋಪಿಗಳ ಬಂಧನದಿಂದ ಹೊಸಕೋಟೆ, ಆವಲಹಳ್ಳಿ, ಸೂಲಿಬೆಲೆ, ಕಾಡುಗೋಡಿಯ 4 ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ಇನ್ಸ್‌ಪೆಕ್ಟರ್ ರಂಗಸ್ವಾಮಿ, ಸಿಬ್ಬಂದಿ ತಂಡ ಯಶಸ್ವಿಯಾಗಿದೆ.

## ಸೆಟ್‌ಬ್ಯಾಕ್ ಕಡಿತ, ಕಟ್ಟಡದ ಎತ್ತರ ಏರಿಕೆ; ಶೀಘ್ರ ಆದೇಶದ ನಿರೀಕ್ಷೆ

### ಬೆಂಗಳೂರಿನಲ್ಲಿ ಸಣ್ಣ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಸೆಟ್‌ಬ್ಯಾಕ್ ನಿಯಮ ಸಡಿಲಿಕೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಮಹಾನಗರದಲ್ಲಿ ಅತ್ಯಂತ ಕಡಿಮೆ ವಿಸ್ತೀರ್ಣದ ನಿವೇಶನಗಳಲ್ಲಿ ನಿರ್ಮಿಸುವ ಕಟ್ಟಡಗಳಿಗೆ ನಿಗದಿಪಡಿಸಿರುವ ಸೆಟ್‌ಬ್ಯಾಕ್ ಕಡಿತಗೊಳಿಸಿ, ಹೆಚ್ಚುವರಿ ಅಂತಸ್ತುಗಳನ್ನು ಕಟ್ಟಿಕೊಳ್ಳಲು ಅವಕಾಶ ಕಲ್ಪಿಸಲಾಗುತ್ತಿದೆ. ಈ ಸಂಬಂಧ ಶೀಘ್ರದಲ್ಲೇ ಆದೇಶ ಹೊರಬೀಳಲಿದೆ. ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರ 20/30 ಅಡಿ ವಿಸ್ತೀರ್ಣದ ನಿವೇಶನಗಳಲ್ಲಿ ಕಟ್ಟಡದ ಸುತ್ತಲೂ ಒಂದು ಮೀಟರ್ (3.28 ಅಡಿ), 30/40 ಚ.ಅಡಿ ವಿಸ್ತೀರ್ಣದ ನಿವೇಶನಗಳ ಸುತ್ತಲೂ 1.50 ಮೀಟರ್ (5 ಅಡಿ) ಸೆಟ್‌ಬ್ಯಾಕ್ ಬಿಡಬೇಕಿದೆ. ಇದೀಗ ಕಟ್ಟಡದ ಸುತ್ತಲೂ ಬಿಡಬೇಕಾದ ಸೆಟ್‌ಬ್ಯಾಕ್‌ನ ವಿಸ್ತೀರ್ಣವನ್ನು ಕಡಿಮೆ ಮಾಡಲು ವಲಯ ನಿಯಮಗಳಿಗೆ ತಿದ್ದುಪಡಿ ತರಲು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಬಡ, ಮಧ್ಯಮ ವರ್ಗದವರು ದುಬಾರಿ ಬೆಲೆ ತೆತ್ತು ದೊಡ್ಡ ವಿಸ್ತೀರ್ಣದ ನಿವೇಶನಗಳನ್ನು ಖರೀದಿಸಿ ಸೂರು ಕಟ್ಟಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಬಹುತೇಕರು ಕಡಿಮೆ ವಿಸ್ತೀರ್ಣದ ನಿವೇಶನಗಳಲ್ಲಿ ಮನೆ ನಿರ್ಮಿಸುತ್ತಿದ್ದು, ಸೆಟ್‌ಬ್ಯಾಕ್ ಬಿಡದೆ ನಿಯಮಗಳನ್ನು ಉಲ್ಲಂಘಿಸಲಾಗುತ್ತಿದೆ. ಕಟ್ಟಡದ ಸುತ್ತಲೂ ನಿಗದಿತ ಜಾಗ ಬಿಡದಿರುವುದು ಹಲವು ಸಮಸ್ಯೆಗಳಿಗೆ ಕಾರಣವಾಗುತ್ತಿದೆ. ಆದ ಕಾರಣ, ಸೆಟ್‌ಬ್ಯಾಕ್ ವಿಸ್ತೀರ್ಣವನ್ನು ಕಡಿತಗೊಳಿಸಲಾಗುತ್ತಿದೆ.

ಸಾರ್ವಜನಿಕರು ನೆಲಮಹಡಿ, ಸ್ಟಿಲ್ಟ್ ಅಂತಸ್ತನ್ನು ವಾಹನಗಳ ಪಾರ್ಕಿಂಗ್‌ಗೆ ಮೀಸಲಿಡುತ್ತಿಲ್ಲ. ನಿಯಮಗಳನ್ನು ಗಾಳಿಗೆ ತೂರಿ ರಸ್ತೆ, ಫುಟ್‌ಪಾತ್‌ಗಳಲ್ಲೇ ವಾಹನಗಳನ್ನು ನಿಲುಗಡೆ ಮಾಡುವ ಪ್ರವೃತ್ತಿ ಜಾಸ್ತಿಯಾಗಿದೆ. ಇದರಿಂದ ಕಿರಿದಾದ ರಸ್ತೆಗಳಲ್ಲಿ ಟ್ರಾಫಿಕ್‌ಜಾಮ್ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸೆಟ್‌ಬ್ಯಾಕ್ ಅನ್ನು 0.6 ಮೀಟರ್‌ಗೆ ಇಳಿಕೆ ಮಾಡಲು ಚಿಂತಿಸಲಾಗಿದೆ. ಆ ಮೂಲಕ ಹೆಚ್ಚುವರಿ ಅಂತಸ್ತುಗಳ ನಿರ್ಮಾಣಕ್ಕೆ ಅನುವು ಮಾಡಿಕೊಡಲಾಗುತ್ತಿದೆ. ಅಲ್ಲದೆ, ಕಟ್ಟಡಗಳ ಎತ್ತರವನ್ನು 30 ಅಡಿಯಿಂದ 50 ಅಡಿಗೆ ಹೆಚ್ಚಿಸಲಾಗಿದೆ. ಜನರು 1200 ಚ.ಅಡಿ ವಿಸ್ತೀರ್ಣದ ನಿವೇಶನದಲ್ಲಿ 50 ಅಡಿ ಎತ್ತರದವರೆಗೆ ಕಟ್ಟಡ ಕಟ್ಟಿಕೊಳ್ಳಬಹುದಾಗಿದೆ.

**ಶೀಘ್ರದಲ್ಲೇ ಒಸಿ, ಸಿಸಿಯಿಂದ ವಿನಾಯಿತಿ:** ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ 1200 ಚ.ಅಡಿ ವಿಸ್ತೀರ್ಣ ಮೀರದಂತಹ ನಿವೇಶನಗಳಲ್ಲಿ ನಿರ್ಮಿಸುವ ಕಟ್ಟಡಗಳಿಗೆ ಪ್ರಾರಂಭಿಕ ಪ್ರಮಾಣಪತ್ರ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದರಿಂದ ವಿನಾಯಿತಿ ನೀಡಲು ನಿರ್ಧರಿಸಲಾಗಿದೆ. ಈ ಸಂಬಂಧ ಬಿಬಿಎಂಪಿಯ ನಗರ ಯೋಜನೆ ವಿಭಾಗವು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ.

ರಾಜ್ಯ ಸರಕಾರವು ಈ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಂಡು ಆದೇಶ ಹೊರಡಿಸಲಿದೆ. ಇದರಿಂದ ಬಡ, ಮಧ್ಯಮ ವರ್ಗದ ಜನರಿಗೆ ಬಿಗ್ ರಿಲೀಫ್ ಸಿಗಲಿದೆ. ಗ್ರೇಟರ್ ಬೆಂಗಳೂರು ಆಡಳಿತ ಕಾಯಿದೆ-2024, ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯಿದೆ 1976 ಮಾದರಿ ಕಟ್ಟಡ ಬೈಲಾಗೆ ತಿದ್ದುಪಡಿ ತರಲಾಗುತ್ತಿದೆ. 1200 ಚದರಡಿ ವಿಸ್ತೀರ್ಣದ ನಿವೇಶನದಲ್ಲಿ ನೆಲ ಅಂತಸ್ತು, ಎರಡು ಅಂತಸ್ತು, ಸ್ಟಿಲ್ಟ್, ಮೂರು ಅಂತಸ್ತಿನವರೆಗಿನ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ಸಿಗಲಿದೆ. ಇದರಿಂದ ನೀರು, ವಿದ್ಯುತ್ ಸಂಪರ್ಕಕ್ಕೆ ಅಲೆದಾಡುವುದು ತಪ್ಪಲಿದೆ. ಗ್ರೇಟರ್ ಬೆಂಗಳೂರು ಆಡಳಿತ ಕಾಯಿದೆ 2024ರ ಸೆಕ್ಷನ್ 241(7)ರಲ್ಲಿ ಸ್ವಾಧೀನಾನುಭವ ಪ್ರಮಾಣಪತ್ರದಿಂದ ವಿನಾಯಿತಿ ನೀಡುವ ಅಧಿಕಾರವನ್ನು ಸರಕಾರಕ್ಕೆ ನೀಡಲಾಗಿದೆ.

**ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಕೆ**

**ಹೆಚ್ಚುವರಿ ಅಂತಸ್ತು ನಿರ್ಮಾಣಕ್ಕೆ ಅವಕಾಶ**

**ಸದ್ಯ 600 ಮತ್ತು 1200 ಚ.ಅಡಿ ವಿಸ್ತೀರ್ಣದ ನಿವೇಶನಗಳಲ್ಲಿ ನೆಲ ಹಾಗೂ ಎರಡು ಅಂತಸ್ತಿನ ಕಟ್ಟಡ ನಿರ್ಮಾಣಕ್ಕಷ್ಟೇ ಅನುಮತಿ ಇದೆ. ಉದ್ದೇಶಿತ ನಿಯಮಗಳಂತೆ 1200 ಚ.ಅಡಿ ವಿಸ್ತೀರ್ಣದ ನಿವೇಶನಗಳಲ್ಲಿ ತಳ ಮಹಡಿ ಅಥವಾ ಸ್ಟಿಲ್ಟ್ ಹೊರತುಪಡಿಸಿ 4 ಅಂತಸ್ತುಗಳವರೆಗೆ ಮನೆ ಕಟ್ಟಿಕೊಳ್ಳಲು ಅವಕಾಶ ಮಾಡಿಕೊಡಲಾಗುತ್ತಿದೆ. ಇದರಲ್ಲಿ ತಳ, ಸ್ಟಿಲ್ಟ್ ಮಹಡಿಯನ್ನು ಕಡ್ಡಾಯವಾಗಿ ವಾಹನಗಳ ನಿಲುಗಡೆಗೆ ಮೀಸಲಿಡಬೇಕೆಂಬ ಷರತ್ತು ವಿಧಿಸಲಾಗಿದೆ.**

ಅಂತರಾಳದಿಂದ... EDITORIAL

# ಭಾರತ-ಚೀನಾ ಮಾತುಕತೆ ಎಚ್ಚರಿಕೆಯೊಂದಿಗೆ ಆಶಾವಾದ



ವಿವಿಧ ದೇಶಗಳ ನಡುವಿನ ಸಂಬಂಧದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದೆ. ಭಾರತ ಮತ್ತು ಚೀನಾ ನಡುವಿನ ಸಂಬಂಧಕ್ಕೂ ಈ ಮಾತು ಅನ್ವಯವಾಗುತ್ತಿದೆ. ಭಾರತ ಮತ್ತು ಚೀನಾ ನಡುವಿನ ಸ್ನೇಹಬಂಧವು ಶಾಂಘೈನಲ್ಲಿ ಹಾಗೂ ತಿಯಾನ್‌ಜಿನ್‌ನಲ್ಲಿ ಕಳೆದ ಕೆಲವು ದಿನಗಳಲ್ಲಿ ಕಂಡುಬಂದಿದೆ. ಈಗ ಕಾಣಿಸುತ್ತಿರುವ ಬದಲಾವಣೆಗಳು ಭಾರತದ ಪ್ರಧಾನಿ ನರೇಂದ್ರ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್ ಪಿಂಗ್ ಅವರ ನಡುವೆ ಹಸ್ತಲಾಘವದ ಹಂತದಲ್ಲಿ ಮಾತ್ರವೇ ಇವೆ. ಬದಲಾವಣೆಯ ಗಾಳಿ ಬೀಸಲು ಕಾರಣವಾಗಿ ಒದಗಿಬಂದಿದ್ದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಆರಂಭಿಸಿದ ಸುಂಕ ಸಮರ. ಭಾರತ ಮತ್ತು ಚೀನಾ ನಡುವಿನ ಸಂಬಂಧವು ಬಹಳ ಪುರಾತನವಾದುದು, ಅದು ನಾಗರಿಕತೆಗಳ ನಡುವಿನ ಸಂಬಂಧ ಎಂದು ಹೇಳಲಾಗುತ್ತದೆಯಾದರೂ, ಆಧುನಿಕ ಕಾಲಘಟ್ಟದಲ್ಲಿ ಈ ಸಂಬಂಧವು ಹಲವಾರು ಏರಿಳಿತಗಳನ್ನು ಕಂಡಿದೆ. ಗಾಲ್ವನ್ ಕಣಿವೆಯಲ್ಲಿ ಎರಡೂ ದೇಶಗಳ ಯೋಧರ ನಡುವೆ ನಡೆದ ಸಂಘರ್ಷ, ಸಿಂಧೂರ ಕಾರ್ಯಾಚರಣೆ ಸಂದರ್ಭದಲ್ಲಿ ಪಾಕಿಸ್ತಾನಕ್ಕೆ ಚೀನಾ ಬೆಂಬಲ ನೀಡಿದ್ದುದು, ಜಾಗತಿಕ ವೇದಿಕೆಗಳಲ್ಲಿ ಭಾರತದ ವಿರುದ್ಧ ಚೀನಾ ಅಭಿಯಾನ ನಡೆಸಿರುವುದು... ಇವೆಲ್ಲವೂ ಬಹುಶ್ರುತ. ಆದರೆ ಇದೇ ಸಂದರ್ಭದಲ್ಲಿ ಹವಾಮಾನ ಬದಲಾವಣೆ ಕುರಿತ ಮಾತುಕತೆಗಳಲ್ಲಿ ಎರಡೂ ದೇಶಗಳ ನಡುವೆ ಸಹಕಾರ ಇದೆ. ಭಾರತ-ಚೀನಾ ನಡುವಿನ ಸಂಬಂಧವನ್ನು ಉತ್ತಮಪಡಿಸುವ ಯತ್ನವು ಟ್ರಂಪ್ ಅವರ ಸುಂಕ ಸಮರಕ್ಕೂ ಮೊದಲೇ ಶುರುವಾಗಿರಬಹುದು. ಬಹುಶಃ, ಕಾಜನ್‌ನಲ್ಲಿ ಕಳೆದ ವರ್ಷ ನಡೆದ ಬ್ರಿಕ್ಸ್ ದೇಶಗಳ ಶೃಂಗಸಭೆಯ ಸಂದರ್ಭದಲ್ಲಿ ಆ ಯತ್ನಗಳು ನಡೆದಿರಬಹುದು. ವಿಶ್ವದ ಎರಡು ಅತ್ಯಂತ ಜನನಿಬಿಡ ದೇಶಗಳ ನಡುವೆ ಇನ್ನಷ್ಟು ಉತ್ತಮವಾದ ಸಂಬಂಧದ ಅಗತ್ಯ ಇದೆ ಎಂಬುದು ಆಗ ಅನ್ನಿಸಿದ್ದಿರಬಹುದು. ಭಾರತ ಮತ್ತು ಚೀನಾ ಪಾಲುದಾರರೇ ವಿನಾ ಎದುರಾಳಿಗಳಲ್ಲ ಎಂದು ಜಿನ್‌ಪಿಂಗ್ ಅವರು ಹೇಳಿದ್ದಾರೆ. ಇಬ್ಬರೂ ಜೊತೆಯಾಗಿ ಕೆಲಸ ಮಾಡುವುದೇ ಸರಿಯಾದ ಆಯ್ಕೆ ಎಂದು ತಾವು ಭಾವಿಸಿರುವುದಾಗಿಯೂ ಜಿನ್‌ಪಿಂಗ್ ಹೇಳಿದ್ದಾರೆ. ವ್ಯಾಪಾರ ಹಾಗೂ ಹೂಡಿಕೆ ಒಪ್ಪಂದಗಳನ್ನು ಬಲಪಡಿಸಲು ಎರಡೂ ದೇಶಗಳು ಈಗ ಸಹಮತ ವ್ಯಕ್ತಪಡಿಸಿವೆ. ಭಾರತವು ಸಂಬಂಧದಲ್ಲಿ ಸುಧಾರಣೆ ತರಲು ಈಗ ಯತ್ನಿಸುತ್ತಿರುವುದಕ್ಕೆ ಇದೇ ಮುಖ್ಯ ಕಾರಣವಾಗಿರುವಂತಿದೆ. ಸಂಬಂಧವು ಸುಧಾರಣೆ ಕಂಡಲ್ಲಿ, ಜಾಗತಿಕ ಶಕ್ತಿಕೇಂದ್ರಗಳ ನಡುವಿನ ಸಂಬಂಧಗಳಲ್ಲಿ ಹೊಸ ಹೊಂದಾಣಿಕೆಗಳು ಉಂಟಾಗಬಹುದು. ಇಡೀ ಸಮೀಕರಣದಲ್ಲಿ ರಷ್ಯಾವನ್ನು ಒಳಗೊಂಡಿರುವುದು, ಜಾಗತಿಕ ವ್ಯವಸ್ಥೆಯಲ್ಲಿ ಹಿಂದೆ ಕಾಣದಂತಹ ಪರಿಣಾಮಗಳು ಉಂಟಾಗಬಹುದು.

> **ಪರಸ್ಪರ ಸಹಕಾರ ಮತ್ತು ಪರಸ್ಪರರನ್ನು ಅರ್ಥ ಮಾಡಿಕೊಳ್ಳುವ ಕೆಲಸ ಆಗಬೇಕು ಎಂಬ ಸಂದೇಶವನ್ನು ಎರಡೂ ದೇಶಗಳ ನಾಯಕರು ರವಾನಿಸಿದ್ದಾರೆ. ಚೀನಾ ಜೊತೆಗಿನ ಸಂಬಂಧವನ್ನು ಬಲಪಡಿಸುವ ಬಯಕೆ ಭಾರತಕ್ಕೆ ಇದೆ ಎಂದು ಮೋದಿ ಅವರು ಹೇಳಿದ್ದಾರೆ.**

ಆದರೆ, ಯಾವುದೇ ಒಂದು ಒಕ್ಕೂಟದ ಜೊತೆ ಗುರುತಿಸಿಕೊಳ್ಳುವುದು ಭಾರತದ ಹಿತಕ್ಕೆ ಪೂರಕವಾಗಿ ಇಲ್ಲ. ಚೀನಾದ ಕಡೆ ಭಾರತ ಚಾಚಿರುವ ಸ್ನೇಹಹಸ್ತವು ತನ್ನ ಹಿತಕ್ಕೆ ಪೂರಕವಾಗಿ ಇರಬೇಕು. ಚೀನಾ ಜೊತೆ ಹೊಂದಿರುವ ಭಿನ್ನಾಭಿಪ್ರಾಯಗಳು ಯಾವುವು, ಚೀನಾ ಜೊತೆ ಯಾವೆಲ್ಲ ಸಂಗತಿಗಳಲ್ಲಿ ಸಹಮತ ಇದೆ ಎಂಬುದು ಸ್ಪಷ್ಟವಾಗಿರಬೇಕು. ಈಗಿನ ಸಂದರ್ಭದಲ್ಲಿ ಸಹಕಾರದಿಂದ ಸಾಧಿಸಬಹುದಾದುದು ಬಹಳಷ್ಟಿದೆ. ಅಮೆರಿಕವು ವಿಧಿಸಿರುವ ಭಾರೀ ಸುಂಕದ ಪರಿಣಾಮವನ್ನು ನಿಭಾಯಿಸುವಲ್ಲಿ ಚೀನಾದ ಹೂಡಿಕೆಗಳು ನೆರವಿಗೆ ಬರಬಹುದು. ಆದರೆ ಭಾರತ ಮತ್ತು ಚೀನಾ ನಡುವೆ ಗಡಿ ತಕರಾರು ಬಹುಕಾಲದಿಂದಲೂ ಇತ್ಯರ್ಥವಾಗದೆ ಉಳಿದಿದೆ. ಚೀನಾ ದೇಶವು ಭಾರತಕ್ಕೆ ರಫ್ತು ಮಾಡುವ ಸರಕು-ಸೇವೆಗಳ ಮೊತ್ತವು, ಅದು ಇಲ್ಲಿಂದ ಆಮದು ಮಾಡಿಕೊಳ್ಳುವ ಸರಕು ಮತ್ತು ಸೇವೆಗಳ ಮೊತ್ತಕ್ಕಿಂತ ಹೆಚ್ಚು. ಎರಡೂ ದೇಶಗಳ ಮಹತ್ವಾಕಾಂಕ್ಷೆಗಳಲ್ಲಿ ಹಿತಾಸಕ್ತಿಯ ಸಂಘರ್ಷಕ್ಕೆ ಕಾರಣವಾಗುವ ಅಂಶಗಳು ಇರಬಹುದು, ಪಾಕಿಸ್ತಾನದ ಜೊತೆ ಚೀನಾ ಹೊಂದಿರುವ ಗೆಳೆತನವು ಭಾರತಕ್ಕೆ ಪಥ್ಯವಾಗುವಂತೆ ಇಲ್ಲ. ಹೀಗಾಗಿ ಭಾರತವು ತನ್ನ ಎಚ್ಚರಿಕೆಯಲ್ಲಿ ತಾನಿರಬೇಕು. ಚೀನಾದ ಜೊತೆ ವ್ಯವಹರಿಸುವಾಗ ಎಚ್ಚರಿಕೆಯೊಂದಿಗೇ ಆಶಾವಾದವನ್ನು ಹೊಂದಬಹುದು. ಬೇರೆ ದೇಶಗಳ ಜೊತೆಗಿನ ಸಂಬಂಧವನ್ನು ಕೆಲವು ನಾಯಕರ ವೈಯಕ್ತಿಕ ಸಂಬಂಧದ ಜೊತೆ ಜೋಡಿಸುವ ಮೂಲಕ ಭಾರತವು ಈ ಹಿಂದೆ ಕೆಟ್ಟ ಅನುಭವ ಸಂಪಾದಿಸಿದೆ. ಅದು ಭವಿಷ್ಯಕ್ಕೆ ಒಂದು ಪಾಠವಾಗಬೇಕು. ಅಂತರರಾಷ್ಟ್ರೀಯ ಹಾಗೂ ದ್ವಿಪಕ್ಷೀಯ ಸಂಬಂಧಗಳು ರಾಷ್ಟ್ರದ ಹಿತಾಸಕ್ತಿಯನ್ನು ಆಧರಿಸಿರುತ್ತವೆ, ಈ ಹಿತಾಸಕ್ತಿಯು ಬದಲಾಗುತ್ತಿರುತ್ತದೆ.

# ರಾಮಾಯಣ



## ಶ್ರೀ ರಾಮನು ಆಗಸ್ತ್ಯ ಮುನಿಯ ಆಶ್ರಮಕ್ಕೆ ಹೋದದ್ದು

• ಹಿಂದಿನ ಸಂಚಿಕೆಯಿಂದ **120ನೆಯ ಅಧ್ಯಾಯ**

ನಾನಾವಿಧವಾದ ಪರ್ವತಗಳನ್ನೂ ನದಿಗಳನ್ನೂ ವನಗಳನ್ನೂ ಕೊಳಗಳನ್ನೂ ರಮ್ಯವಾದ ಮಳಲೊಟ್ಟುಗಳನ್ನೂ ಅಲ್ಲಲ್ಲಿದ್ದ ಸಾರಸ ಜೊನ್ನವಕ್ಕಿ ನವಿಲು ಹಂಸ ಪಾರಾವತ ಅರಗಿಣಿ ಚಕ್ರವಾಕ ಮೊದಲಾದ ಪಕ್ಷಿಗಳನ್ನೂ ಕಾಡುಕೋಣ ಕಾಡುಹಂದಿ ಕಾಡಾನೆ ಮೊದಲಾದ ಮೃಗಜಾತಿಗಳನ್ನೂ ನೋಡುತ್ತ ಬಹುದೂರ ನಡೆದು ಸಾಯಂಕಾಲದ ಹೊತ್ತಿಗೆ ಒಂದು ಗಾವುದ ಉದ್ದವಿರುವ ಮನೋಹರವಾದ ಒಂದು ಕೆರೆಯನ್ನು ಕಂಡನು.. ಅನೇಕ ತಾವರೆಗಳಿಂದಲೂ ನೀರಾನೆ ಸಾರಸಪಕ್ಷಿ ಕೊಳರ್ವಕ್ಕಿ ನೀರುಕೋಳಿ ಮೊದಲಾದ ಜಲಚರಪ್ರಾಣಿಗಳಿಂದಲೂ ಮನೋಹರವಾಗಿ ನಿರ್ಮಲವಾದ ಉದಕವುಳ್ಳ ಆ ಕೆರೆಯಲ್ಲಿ ರಮಣೀಯವಾದ ಗೀತಧ್ವನಿಯೂ ತಾಳ ಮದ್ದಳ ವೀಣಾಧ್ವನಿಗಳೂ ಕೇಳಲ್ಪಡುತ್ತಿದ್ದುವು. ಅದನ್ನು ಕೇಳಿ ರಾಮಲಕ್ಷ್ಮಣರು ಅತ್ಯಂತ ಆಶ್ಚರ್ಯಪಟ್ಟು ಸಮೀಪದ ಆಶ್ರಮದಲ್ಲಿದ್ದ ಧರ್ಮಧೃತನೆಂಬ ಒಬ್ಬ ಮುನಿಯನ್ನು ಕುರಿತು ಮುನಿಗಳೆ. ಈ ಕೆರೆಯ ಮಧ್ಯದಲ್ಲಿ ತಾಳಾದಿವಾದ್ಯಧ್ವನಿಗಳು ಕೇಳಿಸುತ್ತಿವೆ. ಇದಕ್ಕೆ ಕಾರಣವೇನು ನಿರ್ಮಾನುಷವಾದ ಈ ಸ್ಥಳದಲ್ಲಿ ಹುಟ್ಟುವ ಈ ಧ್ವನಿಯನ್ನು ಕೇಳಿ ನಮಗೆ ಮಹತ್ತಾದ ಆಶ್ಚರ್ಯವುಂಟಾಗಿದೆ. ಇದರ ವೃತ್ತಾಂತವನ್ನು ಹೇಳಬೇಕು ಎಂದು ಕೇಳಿದರು.

ಆ ಮುನೀಶ್ವರನು ಶ್ರೀರಾಮ ಈ ತಟಾಕವು ಪಂಚಾಪ್ಸರವೆಂದು ಖ್ಯಾತಿಗೊಂಡಿದೆ. ಇದು ಯಾವಾಗಲೂ ಬತ್ತುವುದಿಲ್ಲ. ಪೂರ್ವದಲ್ಲಿ ಮಾಂಡಕರ್ಣಿ ಎಂಬ ಮುನಿಯು ಇದನ್ನು ನಿರ್ಮಿಸಿದನು. ಆ ಮುನೀಶ್ವರನು ಹತ್ತು ಸಾವಿರ ವರುಷ ವಾಯ್ವಾಹಾರ ಮಾಡಿಕೊಂಡು ಈ ತಟಾಕದ ತೀರದಲ್ಲಿ ತವಸ್ಸು ಮಾಡುತ್ತಿದ್ದನು. ಅದನ್ನು ನೋಡಿ ಇಂದ್ರಾದಿ ದೇವತೆಗಳು ಆತನು ದಿಕ್ಪಾಲಕರಲ್ಲಿ ಒಬ್ಬರ ಲೋಕವನ್ನು ಬದುಸಿ ಉಗ್ರತಪಸ್ಸನ್ನು ಮಾಡುತ್ತಾನೆಂದೆಣಿಸಿ ಆತನ ತಪಸ್ಸಿಗೆ ವಿಘ್ನವನ್ನು ಮಾಡಬೇಕೆಂದು ಮಿಂಚಿನ ಹೊಳೆಯಂತೆ ಶರೀರಕಾಂತಿಯುಳ್ಳ ಐದುಮಂದಿ ಮುಖ್ಯರಾದ ಅಪ್ಸರ ಸ್ತ್ರೀಯರನ್ನು ಕಳುಹಿಸಿದರು. ಆ ಸ್ತ್ರೀಯರು ಮಾಂಡಕರ್ಣಿಮುನೀಶ್ವರನ ಸಮೀಪಕ್ಕೆ ಬರಲು, ಆತನು ಅವರ ರೂಪಲಾವಣ್ಯಗಳನ್ನು ಕಂಡು ಮನಸೋತನು. ಈ ತಟಾಕದಲ್ಲಿ ಅವರೈದುಮಂದಿಗೂ ಐದು ಶಯ್ಯಾಗೃಹಗಳನ್ನು ಆ ಮುನಿಯು ರಹಸ್ಯವಾಗಿ ನಿರ್ಮಿಸಿದನು. ಆ ಮನೆಗಳಲ್ಲಿ ಅವರನ್ನು ಗೋಪ್ಯವಾಗಿಟ್ಟು ತನಗೆ ಯೌವನವನ್ನು ತಪಸ್ಸಾಮರ್ಥ್ಯದಿಂದ ಉಂಟುಮಾಡಿಕೊಂಡು ಯಥೇಷ್ಟವಾಗಿ ಕ್ರೀಡಿಸಿಕೊಂಡಿದ್ದಾನೆ.

ಆದ್ದರಿಂದ ಇಲ್ಲಿ ಸ್ತ್ರೀಯರ ಗಾನಧ್ವನಿಯೂ ಅದಕ್ಕನುಸಾರವಾದ ತಾಳ ಮರ್ದಳ ಧ್ವನಿಗಳೂ ಕೇಳಿಸುತ್ತಿವೆ ಎಂದು ಹೇಳಿದನು. ಆ ಮಾತನ್ನು ಕೇಳಿ ಶ್ರೀರಾಮನು ಅತ್ಯಂತ ಆಶ್ಚರ್ಯಪಟ್ಟನು. ಅವನು ಸೀತಾಲಕ್ಷ್ಮಣ ಸಮೇತನಾಗಿ ಆ ಆಶ್ರಮದಲ್ಲಿದ್ದ ಋಷಿಗಳು ಮಾಡಿದ ಸತ್ಕಾರವನ್ನು ಕೈಕೊಂಡು ಒಂದು ಆಶ್ರಮದಲ್ಲಿ ಹತ್ತು ತಿಂಗಳೂ ಮತ್ತೊಂದಾಶ್ರಮದಲ್ಲಿ ಒಂದು ವರ್ಷವೂ ಮತ್ತೊಂದಾಶ್ರಮದಲ್ಲಿ ನಾಲ್ಕು ತಿಂಗಳೂ ಒಂದಾಶ್ರಮದಲ್ಲಿ ಆರು ತಿಂಗಳೂ ಮತ್ತೊಂದಾಶ್ರಮದಲ್ಲಿ ಮೂರು ತಿಂಗಳೂ ಈ ರೀತಿ ಯಲ್ಲಿ ಹತ್ತು ವರ್ಷಗಳನ್ನು ಕಳೆದನು. ಆ ಬಳಿಕ ಸುತೀಕ್ಷ್ಣ ಮುನೀಶ್ವರನ ಆಶ್ರಮಕ್ಕೆ ಬಂದನು. ಅಲ್ಲಿ ಕೆಲವು ಕಾಲವಿದ್ದು ಒಂದು ದಿನ ಆ ಮುನೀಶ್ವರನನ್ನು ಕುರಿತು ಮುನೀಶ್ವರರೆ, ಈ ದಂಡ ಕಾರಣ್ಯದಲ್ಲಿ ಆಗಸ್ತ್ರಮುನಿಗಳಿದ್ದಾರೆ ಎಂದು ಕೇಳಿದ್ದೇನೆ. ಈ ಅರಣ್ಯವು ಅತಿವಿಶಾಲವಾಗಿರುವುದರಿಂದ ಅವರೆಲ್ಲಿದ್ದಾರೋ ತಿಳಿಯದಾಗಿದೆ. ಅಗಸ್ಯಮುನೀಶ್ವರರ ಕೃಪೆಯನ್ನು ಪಡೆಯು ವುದಕ್ಕೋಸ್ಕರ ಅವರ ಆಶ್ರಮಕ್ಕೆ ಹೋಗಿ ಅವರನ್ನು ವಂದಿಸಿ ಸೇವೆಯನ್ನು ಮಾಡಿಕೊಂಡಿರ ಬೇಕೆಂದು ಅಪೇಕ್ಷಿಸುತ್ತೇನೆ. ಆ ಮಹರ್ಷಿಗಳಿರುವ ಕಡೆಯನ್ನು ಹೇಳಬೇಕು ಎಂದು ಕೇಳಿದನು.

ಮುಂದುವರಿಯುವುದು...

# ಸಂಪ್ರದಾಯವನ್ನು ಮನೆಗೆ ತರುವುದು ಐಡಿ ಫ್ರೆಶ್ ಫುಡ್ ಸಂರಕ್ಷಕ-ಮುಕ್ತ ಥೆಪ್ಲಾ ಪೂರನ್ ಪೋಲಿಯನ್ನು ಬಿಡುಗಡೆ ಮಾಡಿದೆ

• ಉದಯವಾಹಿನಿ, ಬೆಂಗಳೂರು




ಭಾರತದ ಅತ್ಯಂತ ಪ್ರೀತಿಯ ತಾಜಾ ಆಹಾರ ಬ್ರ್ಯಾಂಡ್ ಆಗಿರುವ ಐಡಿ ಫ್ರೆಶ್ ಫುಡ್, ತನ್ನ ಫ್ಲಾಟ್‌ಬ್ರೆಡ್ ವರ್ಗಕ್ಕೆ ಎರಡು ಅತ್ಯಾಕರ್ಷಕ ಸೇರ್ಪಡೆಗಳನ್ನು ಬಿಡುಗಡೆ ಮಾಡುವುದಾಗಿ ಘೋಷಿಸಿದೆ ಐಡಿ ಥೆಪ್ಲಾ, ಐಡಿ ಪೂರನ್ ಪೋಲಿ. ಈ ಹೊಸ ಕೊಡುಗೆಗಳೊಂದಿಗೆ, ಭಾರತದ ಶ್ರೀಮಂತ ಪಾಕಶಾಲೆಯ ಪರಂಪರೆಯಲ್ಲಿ ಬೇರೂರಿರುವಾಗ, ಆಧುನಿಕ, ವಿಶ್ವಾಸಾರ್ಹ ಲೆನ್ಸ್ ಮೂಲಕ ಪ್ರಾದೇಶಿಕ ಮೆಚ್ಚಿನವು ಮರುಕಲ್ಪಿಸುವ ಮೂಲಕ ಐಡಿ ತನ್ನ ನಾವೀನ್ಯತೆಯ ಪ್ರಯಾಣವನ್ನು ಮುಂದುವರೆಸಿದೆ. ಮೃದು, ಮಸಾಲೆಯುಕ್ತ ಮತ್ತು ಸಂರಕ್ಷಕ-ಮುಕ್ತ, ಐಡಿ ಥೆಪ್ಲಾ ಟಿಫಿನ್‌ಗಳು, ಪ್ರಯಾಣ ಅಥವಾ ತ್ವರಿತ ಊಟಗಳಿಗೆ ಸೂಕ್ತವಾದ ರೆಡಿ-ಟು-ಈಟ್ ಫ್ಲಾಟ್‌ಬ್ರೆಡ್ ಅನ್ನು ನೀಡುತ್ತದೆ.

ಇದರ ಜೊತೆಗೆ, ಐಡಿ ಪೂರನ್ ಪೋಲಿ ಆಧುನಿಕ ಆಹಾರ ಸುರಕ್ಷತೆಯಿಂದ ಬೆಂಬಲಿತವಾದ ಕ್ಲೀನ್-ಲೇಬಲ್ ಸ್ವರೂಪದಲ್ಲಿ ಸಂಪ್ರದಾಯದ ಅಧಿಕೃತ ಮಾಧುರ್ಯವನ್ನು ತರುತ್ತದೆ.ಸಂರಕ್ಷಕಗಳು, ಸೇರ್ಪಡೆಗಳಿಂದ ಮುಕ್ತವಾಗಿ, ಎರಡೂ ಉತ್ಪನ್ನಗಳು ಐಡಿಯ ಶುದ್ಧತೆ, ಸ್ಥಿರತೆ ಮತ್ತು ಸುವಾಸನೆಗೆ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ,

ಇದು ಸಾಮಾನ್ಯವಾಗಿ ಅಸಂಘಟಿತ ಆಯ್ಕೆಗಳಿಂದ ಪ್ರಾಬಲ್ಯ ಹೊಂದಿರುವ ವರ್ಗದಲ್ಲಿದೆ. ಬಿಡುಗಡೆಯ ಕುರಿತು ಪ್ರತಿಕ್ರಿಯಿಸಿದ ಐಡಿ ಫ್ರೆಶ್ ಫುಡ್‌ನ ಭಾರತದ ಸಿಇಒ ರಜತ್ ದಿವಾಕರ್, ಥೆಪ್ಲಾ ಮತ್ತು ಪುರಾನ್ ಪೋಲಿ ಕೇವಲ ಫ್ಲಾಟ್‌ಬ್ರೆಡ್‌ಗಳಿಗಿಂತ ಹೆಚ್ಚಿನವು - ಅವು ಲಕ್ಷಾಂತರ ಜನರಿಗೆ ಆರಾಮದಾಯಕ ಆಹಾರಗಳಾಗಿವೆ. ಆದರೆ ಇಲ್ಲಿಯವರೆಗೆ, ಗ್ರಾಹಕರು ತಾಜಾತನ ಮತ್ತು ಅನುಕೂಲತೆಯ ನಡುವೆ ಆಯ್ಕೆ ಮಾಡಬೇಕಾಗಿತ್ತು. ಈ ಬಿಡುಗಡೆಗಳೊಂದಿಗೆ, ಸಂಘಟಿತ ನಾವೀನ್ಯತೆಯನ್ನು ಕಡಿಮೆ ಕಂಡ ವಿಭಾಗದಲ್ಲಿ ನಾವು ಸ್ಥಿರ, ಸುರಕ್ಷಿತ ಮತ್ತು ರುಚಿಕರವಾದ ಆಯ್ಕೆಗಳನ್ನು ನೀಡುತ್ತಿದ್ದೇವೆ. ಇದು ಭಾರತದ ವೈವಿಧ್ಯಮಯ ಪಾಕಶಾಲೆಯ ಅಗತ್ಯಗಳನ್ನು ಮೂಲ ಮತ್ತು ಸಿದ್ಧ ಉತ್ಪನ್ನಗಳೊಂದಿಗೆ ಪೂರೈಸುವ ನಮ್ಮ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

# ಹಸಿ ಹಾಲನ್ನು ಮುಖಕ್ಕೆ ಹಚ್ಚೋದ್ರಿಂದ ನ್ಯಾಚುರಲ್ ಗ್ಲೋ



ಪ್ರತಿಯೊಬ್ಬ ಮಹಿಳೆಯೂ ಮುಖದ ಚರ್ಮವು ಹೊಳೆಯುವಂತಿರಬೇಕು, ಸುಂದರವಾಗಿರಬೇಕು ಎಂದು ಬಯಸುತ್ತಾರೆ. ಇದಕ್ಕಾಗಿ ಅವರು ವಿವಿಧ ದುಬಾರಿ ಸೌಂದರ್ಯ ಚಿಕಿತ್ಸೆಗಳು, ಉತ್ಪನ್ನಗಳನ್ನು ಬಳಸುತ್ತಾರೆ. ಕೆಲವೊಮ್ಮೆ ಎಲ್ಲಾ ದುಬಾರಿ ಪರಿಹಾರಗಳು ಸಹ ನಿಷ್ಪರಿಣಾಮಕಾರಿ ಆಗಿರುತ್ತವೆ, ಅವುಗಳ ಪರಿಣಾಮವು ನಮ್ಮ ಚರ್ಮದ ಮೇಲೆ ಕೆಲವು ದಿನಗಳವರೆಗೆ ಮಾತ್ರ ಕಂಡುಬರುತ್ತದೆ. ನಾವು ಪಾರ್ಲರ್‌ಗೆ ಹೋಗಿ ಈ ಚಿಕಿತ್ಸೆಗಳನ್ನು ಮಾಡಲು ಭಾರಿ ಮೊತ್ತವನ್ನು ಪಾವತಿಸಬೇಕಾಗುತ್ತದೆ.


**ನೈಸರ್ಗಿಕವಾಗಿ ಮುಖಕ್ಕೆ ಹೊಳಪನ್ನು ನೀಡುವುದು ಹೇಗೆ?:** ಅದರ ಬದಲು ನಿಮ್ಮ ತ್ವಚೆಯು ಪ್ರತಿದಿನ ಕಾಂತಿಯುತವಾಗಿರಬೇಕಾದರೆ ಸೌಂದರ್ಯ ತಜ್ಞೆ ರೇಣು ಮಹೇಶ್ವರಿ ಹೇಳಿದ ಸರಳವಾದ ವಿಷಯದೊಂದಿಗೆ ಚರ್ಮವನ್ನು ತಕ್ಷಣವೇ ಹೊಳೆಯುವಂತೆ ಮಾಡುವ ಕೆಲವೊಂದು ಮಾರ್ಗವನ್ನು ತಿಳಿಸಿದ್ದಾರೆ. ಈ ಮನೆಮದ್ದು ಚರ್ಮವನ್ನು ಹೊಳೆಯುವಂತೆ ಮಾಡುವುದಲ್ಲದೆ, ತ್ವಚೆಯು ಸುಂದರವಾಗಿರಲು ಸಹಾಯ ಮಾಡುತ್ತದೆ. ಅಂತಹ ಒಂದು ಸಾಮಾಗ್ರಿಯೆಂದರೆ ಹಸಿ ಹಾಲು. ಹಸಿ ಹಾಲಿನಿಂದ ನಿಮ್ಮ ಮುಖವನ್ನು ಹೇಗೆ ಹೊಳೆಯುವಂತೆ ಮಾಡಬಹುದು. ಮುಖದ ಮೇಲೆ ಹಸಿ ಹಾಲನ್ನು ಹೇಗೆ ಹಚ್ಚಬೇಕೆಂಬುವುದನ್ನು ತಿಳಿದುಕೊಳ್ಳೋಣ.



**ಹಸಿ ಹಾಲಿನ ಕ್ಲೆನ್ಸರ್ ಮತ್ತು ಸ್ಕ್ರಬ್:** ಮೊದಲನೆಯದಾಗಿ, ನೀವು ಒಂದು ಬಟ್ಟಲಿನಲ್ಲಿ ಸ್ವಲ್ಪ ಹಸಿ ಹಾಲನ್ನು ತೆಗೆದುಕೊಳ್ಳಬೇಕು. ಈಗ ನೀವು ಅದಕ್ಕೆ ಜೇನುತುಪ್ಪವನ್ನು ಸೇರಿಸಿ ಮತ್ತು ಚಮಚದೊಂದಿಗೆ ಚೆನ್ನಾಗಿ ಮಿಶ್ರಣ ಮಾಡಬೇಕು. ಇದರ ನಂತರ ಅದಕ್ಕೆ ಕಾಫಿ ಪುಡಿಯನ್ನು ಸೇರಿಸಿ ಮಿಶ್ರಣ ಮಾಡಿ. ನಂತರ ನೀವು ಈ ಮೂರು ವಸ್ತುಗಳನ್ನು ಬೆರೆಸಿ ಪೇಸ್ಟ್ ತಯಾರಿಸಬೇಕು. ಈ ಪೇಸ್ಟ್ ಅನ್ನು ಎರಡೂ ಕೈಗಳ ಸಹಾಯದಿಂದ ಮುಖದ ಮೇಲೆ ಮಸಾಜ್ ಮಾಡಿ. ಇದು ನೈಸರ್ಗಿಕ ಕ್ಲೆನ್ಸರ್ ಮತ್ತು ಸ್ಕಬ್ ಆಗಿ ಕೆಲಸ ಮಾಡುತ್ತದೆ. ಇದು ನಿಮ್ಮ ಚರ್ಮವನ್ನು ತಕ್ಷಣ ಹೊಳೆಯುವಂತೆ ಮಾಡುತ್ತದೆ.

**ಹಸಿ ಹಾಲಿನ ಪ್ಯಾಕ್:** ಇದಕ್ಕಾಗಿ, ನೀವು ಒಂದು ಬಟ್ಟಲಿನಲ್ಲಿ ಅಕ್ಕಿ ಹಿಟ್ಟನ್ನು ತೆಗೆದುಕೊಳ್ಳಬೇಕು. ಈಗ ಅದಕ್ಕೆ ಸ್ವಲ್ಪ ರೋಸ್ ವಾಟರ್ ಸೇರಿಸಿ ಮಿಶ್ರಣ ಮಾಡಬೇಕು. ನಂತರ ನೀವು ಅದಕ್ಕೆ ಗ್ಲಿಸರಿನ್ ಸೇರಿಸಿ ಮಿಶ್ರಣ ಮಾಡಬೇಕು. ಈಗ ನೀವು ಎಲ್ಲಾ ವಸ್ತುಗಳನ್ನು ಮಿಶ್ರಣ ಮಾಡಿ ನಿಮ್ಮ ಮುಖಕ್ಕೆ ಹಚ್ಚಬೇಕು. ಈ ತ್ವರಿತ ಫೇಸ್ ಪ್ಯಾಕ್ ಒಣಗಿದಾಗ, ಅದನ್ನು ಮಸಾಜ್ ಮಾಡುವ ಮೂಲಕ ತೆಗೆದುಹಾಕಬೇಕು. ಈ ಫೇಸ್ ಪ್ಯಾಕ್ ನಿಮ್ಮ ಮುಖಕ್ಕೆ ತಕ್ಷಣ ಹೊಳಪನ್ನು ತರುತ್ತದೆ.

# ಹಿಮೋಗ್ಲೋಬಿನ್ ಕಡಿಮೆ ಇದ್ಯಾ ?



ನಮ್ಮ ದೇಹದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆಯಾದಾಗ ನಾನಾ ರೀತಿಯ ಕಾಯಿಲೆಗಳು ಕಾಡಲಾರಂಭಿಸುತ್ತದೆ. ಇದನ್ನು ನಿವಾರಿಸಲು ಈ ಕೆಲವು ಆಹಾರಗಳನ್ನು ಸೇವಿಸುವುದು ಉತ್ತಮ. ಇವು ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುತ್ತದೆ. ಹಿಮೋಗ್ಲೋಬಿನ್ ಕೆಂಪು ರಕ್ತ ಕಣಗಳಲ್ಲಿ ಕಂಡು ಬರುವ ಒಂದು ಪ್ರಮುಖ ಪ್ರೋಟೀನ್ ಆಗಿದ್ದು, ದೇಹವನ್ನು ಆರೋಗ್ಯಕರವಾಗಿ ಮತ್ತು ಶಕ್ತಿಯುತವಾಗಿಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ದೇಹದಲ್ಲಿ ಹಿಮೋಗ್ಲೋಬಿನ್ ಕಡಿಮೆಯಾದರೆ ರಕ್ತಹೀನತೆ ಕಾಡಲಾರಂಭಿಸುತ್ತದೆ. ಇದರ ಮುಖ್ಯ ಕಾರ್ಯವೆಂದರೆ ಶ್ವಾಸಕೋಶದಿಂದ ಪ್ರತಿಯೊಂದು ಜೀವಕೋಶ, ಅಂಗಕ್ಕೆ ಆಮ್ಲಜನಕವನ್ನು ಸಾಗಿಸುವುದು, ಅವು ಶಕ್ತಿಯನ್ನು ಉತ್ಪಾದಿಸಬಹುದು ಮತ್ತು ಸರಿಯಾಗಿ ಕಾರ್ಯನಿರ್ವಹಿಸಬಹುದು ಎಂದು ಖಚಿತಪಡಿಸಿಕೊಳ್ಳುವುದು.



**ಹಿಮೋಗ್ಲೋಬಿನ್ ಮಟ್ಟ ಸರಿಯಾಗಿರುವುದು ಯಾಕೆ ಮುಖ್ಯ:** ಇದು ತ್ಯಾಜ್ಯ ಉತ್ಪನ್ನವಾದ ಇಂಗಾಲದ ಡೈಆಕ್ಸೈಡ್ ಅನ್ನು ಶ್ವಾಸಕೋಶಕ್ಕೆ ಮತ್ತೆ ಉಸಿರಾಡಲು ಸಾಗಿಸಲು ಸಹಾಯ ಮಾಡುತ್ತದೆ. ಆದ್ದರಿಂದ, ಆಯಾಸ, ದೌರ್ಬಲ್ಯ ಮತ್ತು ತಲೆತಿರುಗುವಿಕೆಯನ್ನು ತಡೆಗಟ್ಟಲು ದೇಹದಲ್ಲಿ ಉತ್ತಮ ಪ್ರಮಾಣದ ಹಿಮೋಗ್ಲೋಬಿನ್ ಮಟ್ಟವನ್ನು ಹೊಂದಿರುವುದು ಮುಖ್ಯ.ಹಾರ್ವರ್ಡ್ ವೈದ್ಯಕೀಯ ಶಾಲೆಯ ಪ್ರಕಾರ, ವಯಸ್ಕ ಪುರುಷರಿಗೆ ಪ್ರಮಾಣಿತ ಹಿಮೋಗ್ಲೋಬಿನ್ ಮಟ್ಟಗಳು ಪ್ರತಿ ಡೆಸಿಲೀಟರ್‌ಗೆ 13.0 ರಿಂದ 18.0 ಗ್ರಾಂ, ಮಹಿಳೆಯರಿಗೆ ಇದು ದಿನಕ್ಕೆ 12.0 ರಿಂದ 16.0 ಗ್ರಾಂ ಆಗಿರಬೇಕು. ಈ ಮಾಹಿತಿಯು ಹಿಮೋಗ್ಲೋಬಿನ್ ಮಟ್ಟವನ್ನು ನೈಸರ್ಗಿಕವಾಗಿ ಹೆಚ್ಚಿಸಲು ಸಹಾಯ ಮಾಡುವ 5 ಸಸ್ಯಾಹಾರಿ ಆಹಾರಗಳ ಬಗ್ಗೆ ನಾವಿಲ್ಲಿ ತಿಳಿಯೋಣ.



**ಬೀಟ್ರೂಟ್:** ಕೆಂಪು ರಕ್ತ ಕಣಗಳ ಉತ್ಪಾದನೆಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ, ರಕ್ತ ಪರಿಚಲನೆ ಸುಧಾರಿಸುತ್ತದೆ ಎಂದು ಹೇಳಲಾಗುತ್ತದೆ. ದಿನಕ್ಕೆ 2 ಬಾರಿ ಬೀಟ್ರೂಟ್ ರಸವನ್ನು ಸೇವಿಸಿದ 3 ವಾರಗಳ ನಂತರ ಹಿಮೋಗ್ಲೋಬಿನ್ ಮಟ್ಟದಲ್ಲಿ ಗಮನಾರ್ಹ ಹೆಚ್ಚಳವಾಗಿದೆ ಎಂದು ಅಧ್ಯಯನವು ತಿಳಿಸಿದೆ.

ಸರಾಸರಿ ಕಾರ್ಪಸ್ಕುಲರ್ ವಾಲ್ಯೂಮ್, ಸರಾಸರಿ ಕಾರ್ಪಸ್ಕುಲರ್ ಹಿಮೋಗ್ಲೋಬಿನ್, ಸರಾಸರಿ ಕಾರ್ಪಸ್ಕುಲರ್ ಹಿಮೋಗ್ಲೋಬಿನ್ ಸಾಂದ್ರತೆ ಇತರ ಹೆಮಟೋಲಾಜಿಕಲ್ ನಿಯತಾಂಕಗಳು ಸಹ ಸೇವನೆಯ ಅವಧಿಯಲ್ಲಿ ಸ್ವಲ್ಪ ಸುಧಾರಣೆಯನ್ನು ತೋರಿಸಿವೆ, ಬೀಟ್ರೂಟ್ ರಸವು ಅಡ್ಡಪರಿಣಾಮಗಳಿಲ್ಲದೆ ಹಿಮೋಗ್ಲೋಬಿನ್ ಅನ್ನು ಪರಿಣಾಮಕಾರಿಯಾಗಿ ಹೆಚ್ಚಿಸುವ ಮೂಲಕ ರಕ್ತಹೀನತೆಗೆ ಚಿಕಿತ್ಸೆ ನೀಡುತ್ತದೆ.

**ಹೇಗೆ ಸೇವಿಸುವುದು:** ಜ್ಯೂಸ್, ಶೇಕ್, ಸ್ಮೂಥಿ, ಸಲಾಡ್, ಸೂಪ್ ರೂಪದಲ್ಲಿ ಸೇವಿಸಬಹುದು. ಚಿಪ್ಸ್ ಅಥವಾ ಫ್ರೈಸ್ ಮತ್ತು ಡಿಪ್ಸ್ ರೂಪದಲ್ಲಿ ತಿಂಡಿಗಳಾಗಿಯೂ ಅವು ಚೆನ್ನಾಗಿ ಹೊಂದಿಕೊಳ್ಳುತ್ತವೆ.



**ದ್ವಿದಳ ಧಾನ್ಯಗಳು:** ಮಸೂರ, ಕಡಲೆ, ಬೀನ್ಸ್‌ನಂತಹ ದ್ವಿದಳ ಧಾನ್ಯಗಳು ಕಬ್ಬಿಣ, ಪ್ರೋಟೀನ್ ಮತ್ತು ಫೋಲೇಟ್‌ನಲ್ಲಿ ಸಮೃದ್ಧವಾಗಿವೆ, ಇದು ಹಿಮೋಗ್ಲೋಬಿನ್ ಅನ್ನು ಸುಧಾರಿಸಲು ಅತ್ಯುತ್ತಮವಾಗಿದೆ. 2023 ರ ಅಧ್ಯಯನವು ಬಲವರ್ಧಿತ ಮಸೂರಗಳ ಸೇವನೆಯು ಕಬ್ಬಿಣದ ಸ್ಥಿತಿಯನ್ನು ರಕ್ಷಿಸಲು ಸಹಾಯ ಮಾಡುತ್ತದೆ, ನಿಯಂತ್ರಣ ಗುಂಪುಗಳಿಗೆ ಹೋಲಿಸಿದರೆ ಹೆಚ್ಚಿನ ಹಿಮೋಗ್ಲೋಬಿನ್ ಮಟ್ಟವನ್ನು ಉಂಟುಮಾಡುತ್ತದೆ ಎಂದು ತೋರಿಸಿದೆ. ಮಸೂರವು ಕಬ್ಬಿಣ ಮತ್ತು ಜೈವಿಕ ಸಕ್ರಿಯ ಸಂಯುಕ್ತಗಳಲ್ಲಿ ಸಮೃದ್ಧವಾಗಿದೆ. ಇದು ಹಿಮೋಗ್ಲೋಬಿನ್ ಮತ್ತು ಕಬ್ಬಿಣದ ಸ್ಥಿತಿಯನ್ನು ಸುಧಾರಿಸುತ್ತದೆ.

**ಹೇಗೆ ಸೇವಿಸುವುದು:** ಒಬ್ಬರು ಅವರೊಂದಿಗೆ ಕರಿ ಅಥವಾ ಕಬಾಬ್‌ಗಳನ್ನು ತಯಾರಿಸಬಹುದು ಮತ್ತು ಅವುಗಳನ್ನು ತಿಂಡಿ ಅಥವಾ ಮುಖ್ಯ ಕೋರ್ಸ್ ಆಗಿ ಆನಂದಿಸಬಹುದು.

**ದಾಳಿಂಬೆ:** ಅವು ವಿಟಮಿನ್ ಸಿ, ಕಬ್ಬಿಣ ಮತ್ತು ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುವ ಉತ್ಕರ್ಷಣ ನಿರೋಧಕಗಳಿಂದ ತುಂಬಿರುತ್ತವೆ. ಆರೋಗ್ಯವಂತ ವ್ಯಕ್ತಿಗಳಲ್ಲಿ 500 ಮಿಲಿ ದಾಳಿಂಬೆ ರಸವನ್ನು ಪ್ರತಿದಿನ 14 ದಿನಗಳವರೆಗೆ ಸೇವಿಸುವುದರಿಂದ ಕೆಂಪು ರಕ್ತ ಕಣಗಳ ಸಂಖ್ಯೆ, ಹಿಮೋಗ್ಲೋಬಿನ್ ಸಾಂದ್ರತೆ ಮತ್ತು ಹೆಮಟೋಕ್ರಿಟ್ ಮಟ್ಟವನ್ನು ಗಮನಾರ್ಹವಾಗಿ ಹೆಚ್ಚಿಸಬಹುದು ಎಂದು ಅಧ್ಯಯನದಲ್ಲಿ ಉಲ್ಲೇಖಿಸಲಾಗಿದೆ.

**ಹೇಗೆ ಸೇವಿಸಬೇಕು:** ಅವುಗಳನ್ನು ಹಣ್ಣಾಗಿ ಸೇವಿಸುವುದು ಉತ್ತಮ ಅಥವಾ ರಸದ ರೂಪದಲ್ಲೂ ಸೇವಿಸಬಹುದು.

**ಡ್ರೈಸೀಡ್ಸ್:** ಬಾದಾಮಿ, ಕುಂಬಳಕಾಯಿ ಬೀಜಗಳು, ಎಳ್ಳು ಮುಂತಾದ ಬೀಜಗಳು ಮತ್ತು ಬೀಜಗಳು ಕಬ್ಬಿಣ, ತಾಮ್ರ, ಹಿಮೋಗ್ಲೋಬಿನ್ ಮುಂತಾದ ಖನಿಜಗಳಿಂದ ಸಮೃದ್ಧವಾಗಿವೆ. ಬೀಜಗಳ ಸಮಗ್ರ ಅಧ್ಯಯನದ ಪ್ರಕಾರ, ಅವು ಕಬ್ಬಿಣದಲ್ಲಿ ಸಮೃದ್ಧವಾಗಿವೆ. 100 ಗ್ರಾಂ ಪಿಸ್ತಾ 3.9 ಮಿಗ್ರಾಂ ಕಬ್ಬಿಣವನ್ನು ಹೊಂದಿದ್ದರೆ, ಗೋಡಂಬಿ 6.7 ಮಿಗ್ರಾಂ ಕಬ್ಬಿಣವನ್ನು ಹೊಂದಿರುತ್ತದೆ. ಬಾದಾಮಿ 100 ಗ್ರಾಂಗೆ ಸುಮಾರು 5.4 ಮಿಗ್ರಾಂ ಕಬ್ಬಿಣಾಂಶವನ್ನು ಹೊಂದಿರುತ್ತದೆ ಮತ್ತು ಅವುಗಳ ನಿಯಮಿತ ಸೇವನೆಯು ನೈಸರ್ಗಿಕವಾಗಿ ಹಿಮೋಗ್ಲೋಬಿನ್ ಮಟ್ಟವನ್ನು ಸುಧಾರಿಸಲು ಸಹಾಯ ಮಾಡುತ್ತದೆ.

**ಹೇಗೆ ಸೇವಿಸಬೇಕು:** ಅವುಗಳನ್ನು ಹುರಿಯಿರಿ, ರಾತ್ರಿಯಿಡೀ ನೀರಿನಲ್ಲಿ ನೆನೆಸಿಟ್ಟು ಸೇವಿಸಿ.

**ಕೆಂಪು ಅರಿವೆ:** ಇದು ಕಬ್ಬಿಣ, ಫೋಲೇಟ್, ವಿಟಮಿನ್ ಸಿ ಯಲ್ಲಿ ಸಮೃದ್ಧವಾಗಿದ್ದು, ಕೆಂಪು ರಕ್ತ ಕಣಗಳ ಉತ್ಪಾದನೆಯನ್ನು ಬೆಂಬಲಿಸುತ್ತದೆ. ಕೆಂಪು ಅರಿವೆ ರಸದ ಸೇವನೆಯು ಹಿಮೋಗ್ಲೋಬಿನ್ ಮಟ್ಟದಲ್ಲಿ ಗಮನಾರ್ಹ ಹೆಚ್ಚಳಕ್ಕೆ ಸಹಾಯ ಮಾಡುತ್ತದೆ. ಸೌಮ್ಯ ರಕ್ತಹೀನತೆ ಹೊಂದಿರುವ ಗರ್ಭಿಣಿ ಮಹಿಳೆಯರಲ್ಲಿ ಹಿಮೋಗ್ಲೋಬಿನ್ ಮಟ್ಟವನ್ನು ಸುಧಾರಿಸುವಲ್ಲಿ ಪ್ರಮಾಣಿತ ಕಬ್ಬಿಣದ ಪೂರಕಕ್ಕೆ ಪರಿಣಾಮಕಾರಿ ಪೂರಕ ಅಥವಾ ಪರ್ಯಾಯವಾಗಿ ಕೆಂಪು ಪಾಲಕ್ ಸಹಕಾರಿಯಾಗಿದೆ.

# ಪಿರಿಯೆಡ್ಸ್‌ವೇಳೆ ತಲೆಸ್ನಾನ ಮಾಡಬಾರದೇ?

ಮುಟ್ಟಾದಾಗ ತಲೆಸ್ನಾನ ಮಾಡಬಾರದು ಎಂದು ಹಿಂದಿನಕಾಲದವರು ಹೇಳಿರುವುದನ್ನು ನೀವು ಕೇಳಿರಬಹುದು. ಆ ಸಂದರ್ಭದಲ್ಲಿ ತಲೆಸ್ನಾನ ಮಾಡೋದ್ರಿಂದ ನಿಜಕ್ಕೂ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಾ? ಇದರ ಹಿಂದಿನ ವಿಜ್ಞಾನ ಏನು ಹೇಳುತ್ತೆ ಅನ್ನೋದನ್ನು ತಿಳಿಯೋಣ.

ಭಾರತದಲ್ಲಿ ಪ್ರತಿಯೊಂದು ಆಚರಣೆಯ ಹಿಂದೆಯೂ ಒಂದೊಂದು ಧಾರ್ಮಿಕ ಮತ್ತು ಸಾಮಾಜಿಕ ನಂಬಿಕೆಗಳಿರುತ್ತದೆ. ಋತುಚಕ್ರದ ಬಗ್ಗೆಯೂ ಇದೇ ರೀತಿಯ ನಂಬಿಕೆ ಇದೆ. ಋತುಚಕ್ರದ ವೇಳೆ ಜನರು ಈಗಾಗಲೇ ಏನು ತಿನ್ನಬೇಕು, ಯಾವಾಗ ಸ್ನಾನ ಮಾಡಬೇಕು, ದೇವಸ್ಥಾನಕ್ಕೆ ಹೋಗಬೇಕು ಮುಂತಾದ ಎಲ್ಲಾ ವಿಷಯಗಳ ಬಗ್ಗೆ ನಂಬಿಕೆಯನ್ನು ಬೆಳೆಸಿಕೊಂಡಿದ್ದಾರೆ. ಋತುಚಕ್ರದ ಸಮಯದಲ್ಲಿ ಹುಡುಗಿಯರು ಹೆಚ್ಚಾಗಿ ಕೂದಲು ತೊಳೆಯಬಾರದು ಅಥವಾ ತಲೆಸ್ನಾನ ಮಾಡಬಾರದು ಎಂದು ಸಲಹೆ ನೀಡಲಾಗುತ್ತದೆ. ಇದು ಬಹಳ ಹಳೆಯ ನಂಬಿಕೆಯಾಗಿದ್ದು ಇದರ ಹಿಂದಿನ ನಂಬಿಕೆ ಏನು ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

**ಕೂದಲು ತೊಳೆಯೋದರ ಬಗ್ಗೆ ವಿಜ್ಞಾನ ಏನು ಹೇಳುತ್ತೆ?:** ವಿಜ್ಞಾನಿಗಳು ಮತ್ತು ವೈದ್ಯರು ಋತುಚಕ್ರದ ಸಮಯದಲ್ಲಿ ಕೂದಲು ತೊಳೆಯುವುದು ಆರೋಗ್ಯದ ಮೇಲೆ ಯಾವುದೇ ನಕಾರಾತ್ಮಕ ಪರಿಣಾಮ ಬೀರುವುದಿಲ್ಲ ಎಂದು ನಂಬುತ್ತಾರೆ. ಋತುಚಕ್ರದ ಸಮಯದಲ್ಲಿಯೂ ಸಹ ದೇಹದ ನೈರ್ಮಲ್ಯವನ್ನು ಕಾಪಾಡಿಕೊಳ್ಳುವುದು ಬಹಳ ಮುಖ್ಯ. ಕೊಳಕು ಕೂದಲು ಮತ್ತು ನೆತ್ತಿಯು ಬ್ಯಾಕ್ಟೀರಿಯಾ ಮತ್ತು ಸೋಂಕಿನ ಅಪಾಯವನ್ನು ಹೆಚ್ಚಿಸುತ್ತದೆ, ಆದ್ದರಿಂದ ಕೂದಲು ತೊಳೆಯುವುದು ಸುರಕ್ಷಿತ ಮತ್ತು ಪ್ರಯೋಜನಕಾರಿ. ಆದ್ದರಿಂದ ನೀವು ನಿಮ್ಮ ಅನುಕೂಲಕ್ಕೆ ತಕ್ಕಂತೆ ನಿಮ್ಮ ಕೂದಲನ್ನು ತೊಳೆಯಬಹುದು.

**ಕೂದಲು ತೊಳೆಯುವುದರಿಂದ ದೇಹದ ಮೇಲೆ ಪರಿಣಾಮ ಬೀರುತ್ತಾ?:** ಕೆಲವರು ಋತುಚಕ್ರದ ಸಮಯದಲ್ಲಿ ಕೂದಲು ತೊಳೆಯುವುದರಿಂದ ಶೀತ ಅಥವಾ ಹೊಟ್ಟೆ ನೋವು ಉಂಟಾಗುತ್ತದೆ ಎಂದು ನಂಬುತ್ತಾರೆ. ಆದರೆ ಇದು ವೈಜ್ಞಾನಿಕವಾಗಿ ತಪ್ಪು ಕಲ್ಪನೆಯಾಗಿದೆ. ಕೂದಲು ತೊಳೆಯುವುದರಿಂದ ದೇಹದೊಳಗೆ ನಡೆಯುವ ಹಾರ್ಮೋನ್ ಪ್ರಕ್ರಿಯೆಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಬೆಚ್ಚಗಿನ ನೀರಿನಿಂದ ಕೂದಲನ್ನು ಚೆನ್ನಾಗಿ ಒಣಗಿಸಿ, ಇದರಿಂದ ಶೀತ ಅಥವಾ ಕೆಮ್ಮು ಮುಂತಾದ ಯಾವುದೇ ಸಮಸ್ಯೆ ಉಂಟಾಗುವುದಿಲ್ಲ ಎಂಬುದನ್ನು ನೆನಪಿನಲ್ಲಿಡಿ.


**ವೈದ್ಯರು ಏನು ಹೇಳುತ್ತಾರೆ?:** ಸ್ತ್ರೀರೋಗ ತಜ್ಞೆ ಡಾ. ಅನುಷಾ ಪಟೇಲ್ ಅವರ ಪ್ರಕಾರ, ಋತುಚಕ್ರದ ಸಮಯದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಬಹಳ ಮುಖ್ಯ. ಕೂದಲು ತೊಳೆಯುವುದರಿಂದ ಯಾವುದೇ ಹಾನಿಯಾಗುವುದಿಲ್ಲ. ನೈರ್ಮಲ್ಯವನ್ನು ಕಾಪಾಡಿಕೊಳ್ಳಲು, ಕೂದಲನ್ನು ತೊಳೆಯಬೇಕು, ನೆತ್ತಿಯನ್ನು ಸ್ವಚ್ಛವಾಗಿಡಬೇಕು. ಆದ್ದರಿಂದ ಸಾಮಾಜಿಕ ಗ್ರಹಿಕೆಯ ಹೊರತಾಗಿ, ಶುಚಿತ್ವವನ್ನು ಕಾಪಾಡಿಕೊಳ್ಳುವುದು ಮುಖ್ಯ.

ಋತುಚಕ್ರದ ಸಮಯದಲ್ಲಿ ಕೂದಲು ತೊಳೆಯುವುದರಿಂದ ಶೀತ, ಹೊಟ್ಟೆ ನೋವು, ಯಾವುದೇ ಕಾಯಿಲೆಯ ಅಪಾಯ ಹೆಚ್ಚಾಗುವುದಿಲ್ಲ. ಇದು ಕೇವಲ ಒಂದು ಮಿಥ್ಯ. ಸ್ವಚ್ಛತೆ ಮತ್ತು ನೈರ್ಮಲ್ಯವನ್ನು ಕಾಪಾಡಿಕೊಳ್ಳುವುದು ಆರೋಗ್ಯಕ್ಕೆ ಮುಖ್ಯ. ಆದ್ದರಿಂದ ಋತುಚಕ್ರದ ಸಮಯದಲ್ಲಿಯೂ ಸಹ ನಿಮ್ಮ ಕೂದಲನ್ನು ತೊಳೆಯಲು ಹಿಂಜರಿಯ ಬೇಡಿ, ಬೆಚ್ಚಗಿನ ನೀರನ್ನು ಬಳಸಿ ಚೆನ್ನಾಗಿ ಒಣಗಿಸಿ.



## ಮುನ್ನೆಚ್ಚರಿಕೆಗಳು

- ನೀವು ಋತುಚಕ್ರದ ಸಮಯದಲ್ಲಿ ನಿಮ್ಮ ಕೂದಲನ್ನು ತೊಳೆಯುತ್ತಿದ್ದರೆ ನೀವು ಕೆಲವೊಂದು ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕು.
- ಕೂದಲು ತೊಳೆಯುವಾಗ ತುಂಬಾ ತಣ್ಣೀರು ಬಳಸಬೇಡಿ.
- ತೊಳೆದ ನಂತರ ನಿಮ್ಮ ಕೂದಲನ್ನು ಚೆನ್ನಾಗಿ ಒಣಗಿಸಿ.
- ನೀವು ಉದ್ದ ಕೂದಲು ಹೊಂದಿದ್ದರೆ, ಋತುಚಕ್ರದ ಸಮಯದಲ್ಲಿ ಬಾಚಣಿಗೆ ಮತ್ತು ಕೂದಲಿನ ಆರೈಕೆಯನ್ನು ನೋಡಿಕೊಳ್ಳಿ.



# ಎಳನೀರು ಸೇವನೆ ಇರಲಿ



ಎಳನೀರು ಆರೋಗ್ಯಕ್ಕೆ ಪೂರಕವಾಗಿದ್ದು ತೂಕ ಇಳಿಕೆಯ ಪ್ರಯತ್ನಗಳಿಗೆ ಅತಿ ಹೆಚ್ಚಿನ ನೆರವು ನೀಡುತ್ತದೆ. ಅಲ್ಲದೇ ಅಗತ್ಯ ಇರುವಶಕ್ತಿಯನ್ನು ತಕ್ಷಣವೇ ಒದಗಿಸುವುದು,ರೋಗನಿರೋಧಕ ಶಕ್ತಿಯನ್ನು ಬಲಪಡಿಸುವುದು, ಸೂಕ್ಷ್ಮಜೀವಿಗಳಿಂದ ರಕ್ಷಣೆ ಒದಗಿಸುವುದು, ಮೂತ್ರದ ಪ್ರಮಾಣವರ್ಧಿಸಿ ದೇಹದಿಂದ ಕಲ್ಮಶಗಳನ್ನು ನಿವಾರಿಸಲು ನೆರವಾಗುತ್ತದೆ. ನಿತ್ಯವೂ ಬೆಳಗ್ಗಿನ ಪ್ರಥಮ ಆಹಾರವಾಗಿ ಒಂದು ಭರ್ತಿ ಎಳನೀರನ್ನು ಕುಡಿದರೆ ದಿನದ ಅಗತ್ಯದ ಎಲೆಕ್ಟ್ರೋಲೈಟುಗಳು ಲಭಿಸುತ್ತವೆಹಾಗೂ ಇವು ಅಧಿಕ ರಕ್ತದೊತ್ತಡ ಎದುರಾಗದಂತೆ ತಡೆಯುತ್ತವೆ. ಎಳನೀರು ಥೈರಾಯ್ಡ್ ಗ್ರಂಥಿಯ ಸ್ರವಿಕೆಗೆ ಪ್ರಚೋದನೆಒದಗಿಸುತ್ತದೆ. ಪೋಷ ಕಾಂಶಗಳಿಂದ ಸಮೃದ್ಧವಾಗಿದೆ.

ಅವಶ್ಯಕ ಎಲೆಕ್ಟ್ರೋಲೈಟುಗಳ ಹೊರತಾಗಿಕಾಲ್ಸಿಯಂ, ಗಂಧಕ, ಪೊಟ್ಯಾಶಿಯಂ ಮತ್ತು ಸೋಡಿಯಂ ಅಂಶಗಳು ಪ್ರಮುಖವಾಗಿದ್ದು ಆರೋಗ್ಯವನ್ನು ಕಾಪಾಡುವಲ್ಲಿ ನೆರವಾಗುತ್ತವೆ. ತ್ವಚೆಯ ಕಾಂತಿ ಹೆಚ್ಚಿಸುತ್ತದೆ ತ್ವಚೆಯಆರೋಗ್ಯ ಉತ್ತಮ ಆಗಿರಲು ದೇಹದಲ್ಲಿ ಸಾಕಷ್ಟು ಪ್ರಮಾಣದ ಆದ್ರತೆ ಇರಬೇಕು. ಎಳನೀರನ್ನು ಕುಡಿಯುವಹೊರತಾಗಿ ಎಳನೀರನ್ನು ತ್ವಚೆಗೆ ಹಚ್ಚಿಕೊಳ್ಳುವ ಮೂಲಕವೂ ಅಗತ್ಯವಿರುವ ಪೋಷಣೆಯನ್ನು ಒದಗಿಸಬಹುದು.ಪರಿಣಾಮವಾಗಿ ಕ್ಷಿಪ್ರ ಸಮಯದಲ್ಲಿಯೇ ತ್ವಚೆ ಹೊಳೆಯಲಾರಂಭಿಸುತ್ತದೆ. ಎಳನೀರು ನೈಸರ್ಗಿಕ ಹಾಗೂ ಅತ್ಯುತ್ತಮವಾದ ತೇವಕಾರಕವಾಗಿದೆ, ಈ ಗುಣ ಮೊಡವೆಗಳನ್ನು ದೂರವಿಡುತ್ತದೆ. ಎಳನೀರಿನಲ್ಲಿರುವ ಸೈಟೋಕಿನಿನ್‌ಎಂಬ ಪೋಷಕಾಂಶಕ್ಕೆ ಚರ್ಮದ ಸೆಳೆತವನ್ನು ಹೆಚ್ಚಿಸುವ ಗುಣವಿದ್ದು ವೃದ್ಧಾಪ್ಯದ ಚಿಹ್ನೆಗಳು ಆವರಿಸುವುದನ್ನು ತಡವಾಗಿಸಿ ವೃದ್ಧಾಪ್ಯವನ್ನು ಮುಂದೂಡುತ್ತದೆ. ಅಲ್ಲದೇ ಎಕ್ಸಿಮಾ ಎಂಬ ಚರ್ಮರೋಗಕ್ಕೆ ಅತ್ಯುತ್ತಮ ಔಷಧಿಯೂ ಹೌದು. ಬಾಯಾರಿಕೆಗೆ ಎಳನೀರಿಗಿಂತ ಉತ್ತಮವಾದ ಜಲ ಈ ಜಗತ್ತಿನಲ್ಲಿಲ್ಲ. ವಿಶೇಷವಾಗಿ ಇದರಲ್ಲಿರುವ ಎಲೆಕ್ಟ್ರೋಲೈಟುಗಳು ದಣಿದ ದೇಹಕ್ಕೆ ಶಕ್ತಿಯನ್ನು ಒದಗಿಸುವ ಜೊತೆಗೇ ಬೆವರು, ಅತಿಸಾರ, ವಾಂತಿ ಮೊದಲಾದ ಕಾರಣಗಳಿಂದ ದೇಹದಿಂದ ನಷ್ಟವಾಗಿದ್ದ ನೀರಿನಂಶವನ್ನು ಮರುದುಂಬಿಸಿ ಕೋಡುತ್ತದೆ.

ಎಳನೀರಿನಲ್ಲಿಯೂ ವಿಟಮಿನ್ ಸಿ ಉತ್ತಮ ಪ್ರಮಾಣದಲ್ಲಿದ್ದು ಇದರ ಜೊತೆಗೇ ಪೊಟ್ಯಾಶಿಯಂ ಮೆಗ್ನಿಶಿಯಂ ರಕ್ತದೊತ್ತಡವನ್ನು ನಿಯಂತ್ರಿಸಲು ನೆರವಾಗುತ್ತವೆ. ವಿಶೇಷವಾಗಿ ಉಪ್ಪಿನಲ್ಲಿರುವ ಸೋಡಿಯಂ ಅಂಶದಿಂದ ಎದುರಾಗಿದ್ದ ಪರಿಣಾಮಗಳಿಗೆ ವಿರುದ್ಧ ಪರಿಣಾಮವನ್ನು ಪೊಟ್ಯಶಿಯಂ ಒದಗಿಸಿ ಅಧಿಕ ರಕ್ತದೊತ್ತಡವಾಗದಂತೆ ತಡೆಯುತ್ತದೆ. ಎಳನೀರಿನ ಅತ್ಯುತ್ತಮ ಪ್ರಯೋಜನಗಳಲ್ಲಿ ಇದು ಪ್ರಮುಖವಾಗಿದೆ.



### ತೆರೆದ ಸ್ಥಿತಿಯಲ್ಲಿನ ಪರಿಕರಗಳ ಮೂಲಕ ವಿದ್ಯುತ್ ಪ್ರವಹಿಸಿ ಅವಘಡ ಸಂಭವಿಸಿದರೆ ಹೇಗೆ ಎಂಬುದು ಜನರ ಆತಂಕ

# ಜೋತು ಬಿದ್ದ ತಂತಿ, ಹಾಳಾದ ಪರಿಕರ: ಇರಲಿ ಎಚ್ಚರ

• ಉದಯವಾಹಿನಿ ಬೆಳಗಾವಿ

ಒಂದೆಡೆ ಮಳೆ, ಇನ್ನೊಂದೆಡೆ ಹಬ್ಬ, ಮತ್ತೊಂದೆಡೆ ಜನ ಜಂಗುಳಿ. ಈ ಎಲ್ಲದರ ಮಧ್ಯೆ ಎಚ್ಚರಿಕೆ ವಹಿಸಬೇಕಾದದ್ದು ವಿದ್ಯುತ್ ಅವಘಡಗಳ ಬಗ್ಗೆ. ನಗರದ ವಿವಿಧ ಮಾರ್ಗಗಳಲ್ಲಿನ ವಿದ್ಯುತ್ ಮೀಟರ್ ಬಾಕ್ಸ್‌ಗಳು, ಕೇಬಲ್ ಟರ್ಮಿನೇಷನ್ ಬಾಕ್ಸ್‌ಗಳು ತೆರೆದ ಸ್ಥಿತಿಯಲ್ಲಿದ್ದು, ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ಹಲವೆಡೆ ವಿದ್ಯುತ್ ತಂತಿ ಜೋತು ಬಿದ್ದಿರುವುದು ಕಂಡುಬರುತ್ತಿದೆ. ಇಂಥದ್ದೇ ಸ್ಥಿತಿಯಲ್ಲಿ ಗಣೇಶ ಚತುರ್ಥಿ ಸಂಭ್ರಮ ಮನೆ ಮಾಡಿದೆ. ಈ ಸಂಭ್ರಮ ಸಂಕಟಕ್ಕೆ ಆಸ್ಪದ ನೀಡಬಾರದು ಎಂದರೆ ಮುನ್ನೆಚ್ಚರಿಕೆ ಅಗತ್ಯ.

ಕಳೆದ ವರ್ಷ ವಿದ್ಯುತ್ ಮೀಟರ್ ಬಾಕ್ಸ್‌ಗಳು ಹೆಚ್ಚಿನ ಸಂಖ್ಯೆಯಲ್ಲಿ ತೆರೆದ ಸ್ಥಿತಿಯಲ್ಲಿದ್ದವು. ಈ ಪೈಕಿ ಹಲವು ಮುಚ್ಚಿ ಸುರಕ್ಷಾ ಕ್ರಮ ಅನುಸರಿಸಲಾಗಿದೆ. ಆದರೆ, ಪೂರ್ಣ ಪ್ರಮಾಣದಲ್ಲಿ ಈ ಕೆಲಸವಾಗಿಲ್ಲ.

ಗಣೇಶ ಹಬ್ಬದ ಅಂಗವಾಗಿ ವಿವಿಧ ಬಡಾವಣೆಗಳ ಮುಖ್ಯರಸ್ತೆಗಳು, ವೃತ್ತಗಳು ಮತ್ತು ಸಾರ್ವಜನಿಕ ಗಣೇಶ ಮೂರ್ತಿ ಪ್ರತಿಷ್ಠಾಪಿಸಿದ ಸ್ಥಳಗಳು ವಿದ್ಯುದ್ದೀಪಗಳ ಅಲಂಕಾರದಿಂದ ಕಂಗೊಳಿಸುತ್ತಿವೆ.

ನಗರ ಮತ್ತು ಉಪನಗರ ವ್ಯಾಪ್ತಿಯಲ್ಲಿ 378 ಸಾರ್ವಜನಿಕ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದೆ. ಸಂಜೆ ಆಗುತ್ತಿದ್ದಂತೆ ಅವುಗಳ ವೀಕ್ಷಣೆಗಾಗಿ ನಗರ ಮಾತ್ರವಲ್ಲದೆ; ಗ್ರಾಮೀಣ ಭಾಗದಿಂದಲೂ ಜನಸಾಗರವೇ ಹರಿದುಬರುತ್ತಿದೆ. ಆಗಾಗ ತುಂತುರು ಮಳೆಯೂ ಸುರಿಯುತ್ತಿದೆ.


ಉದಯವಾಹಿನಿ ಚಿತ್ರ

ಹೀಗಿರುವಾಗ, 'ತೆರೆದ ಸ್ಥಿತಿಯಲ್ಲಿನ ಪರಿಕರಗಳ ಮೂಲಕ ವಿದ್ಯುತ್ ಪ್ರವಹಿಸಿ ಅವಘಡ ಸಂಭವಿಸಿದರೆ ಹೇಗೆ' ಎಂಬುದು ಜನರ ಆತಂಕ. ಇಲ್ಲಿನ ಸಂಗೊಳ್ಳಿ ರಾಯಣ್ಣ ವೃತ್ತದಿಂದ ರಾಣಿ ಚನ್ನಮ್ಮನ ವೃತ್ತದ ಮಾರ್ಗವಾಗಿ ಕಾಲೇಜು ರಸ್ತೆಗೆ ತೆರಳಿದರೆ ಸಾಕು. ಸ್ಮಾರ್ಟ್‌ಸಿಟಿ ಯೋಜನೆಯಡಿ ರಸ್ತೆ ವಿಭಜಕದಲ್ಲಿ ಅಳವಡಿಸಿದ ಬೀದಿದೀಪಗಳಲ್ಲಿ ಹಲವು ಕೇಬಲ್ ಟರ್ಮಿನೇಷನ್ ಬಾಕ್ಸ್‌ಗಳು ತೆರೆದ ಸ್ಥಿತಿಯಲ್ಲಿರುವುದು ಕಣ್ಣಿಗೆ ಬೀಳುತ್ತದೆ.

ಸದಾಶಿವ ನಗರ, ಹನುಮಾನ ನಗರ, ಕೋಟೆಗೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲೂ ವಿದ್ಯುತ್ ಪರಿಕರ ಅಪಾಯಕ್ಕೆ ಆಹ್ವಾನ ನೀಡುವ ಸ್ಥಿತಿಯಲ್ಲಿವೆ. ಗಣೇಶೋತ್ಸವ 11ನೇ ದಿನ ಸಾರ್ವಜನಿಕ ಗಣೇಶ ಮೂರ್ತಿಗಳನ್ನು ಭವ್ಯ ಮೆರವಣಿಗೆ ಮೂಲಕ ವಿಸರ್ಜಿಸಲಾಗುತ್ತದೆ. ನರಗುಂದಕರ ಭಾವೆ ಚೌಕ್‌ನಿಂದ ಆರಂಭವಾಗುವ ಮೆರವಣಿಗೆ ಕಪಿಲೇಶ್ವರ ದೇವಸ್ಥಾನದ ಹೊಂಡದಲ್ಲಿ ಮುಕ್ತಾಯವಾಗುತ್ತದೆ. ಇದನ್ನು ವೀಕ್ಷಿಸಲು ಅಪಾರ ಸಂಖ್ಯೆಯಲ್ಲಿ ಜನ ಸೇರುತ್ತಾರೆ.

ಆದರೆ, ಮೆರವಣಿಗೆ ಸಾಗುವ ರಾಮಲಿಂಗಖಿಂಡ ಗಲ್ಲಿಯಲ್ಲಿ ವಿದ್ಯುತ್ ಮೀಟರ್ ಬಾಕ್ಸ್‌ವೊಂದು ತೆರೆದ ಸ್ಥಿತಿಯಲ್ಲಿದೆ. ಇನ್ನೊಂದು ಬಾಕ್ಸ್‌ನ ಮುಚ್ಚಳ ಮುರಿದಿದೆ.


ಉದಯವಾಹಿನಿ ಚಿತ್ರ

> ಜನರ ಸುರಕ್ಷತೆಗೆ ಅಗತ್ಯ ಕ್ರಮ ವಹಿಸಿದ್ದೇವೆ. ತೆರೆದ ಸ್ಥಿತಿಯಲ್ಲಿರುವ ಕೇಬಲ್ ಟರ್ಮಿನೇಷನ್ ಬಾಕ್ಸ್‌ಗಳನ್ನು ಮುಚ್ಚಲಾಗುವುದುಬಿ. -ಶುಭ, ಆಯುಕ್ತಮಹಾನಗರ ಪಾಲಿಕೆ

### ಸುರಕ್ಷತೆಗೆ ಕ್ರಮ ವಹಿಸಿದ್ದೇವೆ: ಶಿಂಧೆ

ಗಣೇಶೋತ್ಸವ ಪ್ರಯುಕ್ತ ನಗರದಲ್ಲಿನ ಎಲ್ಲಾ ವಿದ್ಯುತ್ ಪರಿಕರಗಳ ನಿರ್ವಹಣೆ, ದುರಸ್ತಿ ಮಾಡಿದ್ದೇವೆ. ದೋಷಪೂರಿತ ವಿದ್ಯುತ್ ಪರಿವರ್ತಕಗಳನ್ನು ಬದಲಿಸಿದ್ದೇವೆ. ತೆರೆದ ಸ್ಥಿತಿಯಲ್ಲಿದ್ದ ವಿದ್ಯುತ್ ಮೀಟರ್ ಬಾಕ್ಸ್ ಮುಚ್ಚಿದ್ದೇವೆ. ವಿದ್ಯುತ್ ಪರಿಕರಗಳಿಗೆ ತಾಗಿದ್ದ ಮರಗಳನ್ನು ಅರಣ್ಯ ಇಲಾಖೆ ಮೂಲಕ ತೆರವುಗೊಳಿಸಿದ್ದೇವೆ. ಜನರ ಸುರಕ್ಷತೆಗೆ ಅಗತ್ಯ ಕ್ರಮ ವಹಿಸಿದ್ದೇವೆ' ಎಂದು ಹೆಸ್ಕಾಂ ಬೆಳಗಾವಿ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಎ.ಎಂ.ಶಿಂಧೆ ಪ್ರತಿಕ್ರಿಯಿಸಿದರು. ಗಣೇಶನ ಹಬ್ಬದಲ್ಲಿ 11 ದಿನ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡುತ್ತಿದ್ದೇವೆ. ಜನರ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸುತ್ತಿದ್ದೇವೆ. ಆದರೂ, ಯಾವುದಾದರೂ ಸ್ಥಳದಲ್ಲಿ ವಿದ್ಯುತ್ ಪರಿಕರಗಳು ತೆರೆದ ಸ್ಥಿತಿಯಲ್ಲಿದ್ದರೆ ತಕ್ಷಣವೇ ಮುಚ್ಚಲಾಗುವುದು' ಎಂದರು.

**ಕಳವು ಮಾಡುತ್ತಿದ್ದಾರೆ**

ಬೀದಿದೀಪಗಳಲ್ಲಿನ ಕೇಬಲ್ ಟರ್ಮಿನೇಷನ್ ಬಾಕ್ಸ್‌ಗಳನ್ನು ಮುಚ್ಚಿ ನಾವು ಸುರಕ್ಷತೆಗೆ ಕ್ರಮ ವಹಿಸಿದ್ದೆವು. ಆದರೆ, ಚಿಂದಿ ಆಯಲು ಬರುವವರು ಸಂಗೊಳ್ಳಿ ರಾಯಣ್ಣ ವೃತ್ತದಿಂದ ಚನ್ನಮ್ಮನ ವೃತ್ತ, ಆಂಜನೇಯ ನಗರ, ಮಹಾಂತೇಶ ನಗರ ರಸ್ತೆಯಲ್ಲಿನ ಕೇಬಲ್ ಟರ್ಮಿನೇಷನ್ ಬಾಕ್ಸ್‌ಗಳ ಮುಚ್ಚಳ ಕಳವು ಮಾಡುತ್ತಿದ್ದಾರೆ. ಈ ಬಗ್ಗೆ ಪೊಲೀಸರ ಗಮನಕ್ಕೆ ತಂದಿದ್ದೇವೆ' ಎಂದು ಪಾಲಿಕೆ ಅಧಿಕಾರಿಗಳು ಹೇಳಿದ್ದಾರೆ. ಗಣೇಶೋತ್ಸವ ಪ್ರಯುಕ್ತ ನಗರದಲ್ಲಿನ ಎಲ್ಲಾ ವಿದ್ಯುತ್ ಪರಿಕರಗಳ ನಿರ್ವಹಣೆ, ದುರಸ್ತಿ ಮಾಡಿದ್ದೇವೆ. ದೋಷಪೂರಿತ ವಿದ್ಯುತ್ ಪರಿವರ್ತಕಗಳನ್ನು ಬದಲಿಸಿದ್ದೇವೆ. ತೆರೆದ ಸ್ಥಿತಿಯಲ್ಲಿದ್ದ ವಿದ್ಯುತ್ ಮೀಟರ್ ಬಾಕ್ಸ್ ಮುಚ್ಚಿದ್ದೇವೆ. ವಿದ್ಯುತ್ ಪರಿಕರಗಳಿಗೆ ತಾಗಿದ್ದ ಮರಗಳನ್ನು ಅರಣ್ಯ ಇಲಾಖೆ ಮೂಲಕ ತೆರವುಗೊಳಿಸಿದ್ದೇವೆ. ಜನರ ಸುರಕ್ಷತೆಗೆ ಅಗತ್ಯ ಕ್ರಮ ವಹಿಸಿದ್ದೇವೆ' ಎಂದು ಹೆಸ್ಕಾಂ ಬೆಳಗಾವಿ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಎ.ಎಂ.ಶಿಂಧೆ ಪ್ರತಿಕ್ರಿಯಿಸಿದರು.

## ಮಿನಿ ನ್ಯೂಸ್

### ಶರಣಪ್ಪ ಗೌಡ ಪಾಟೀಲ್ ಇವರ ಮನೆಯಲ್ಲಿ ವಿಶಿಷ್ಟ ರೀತಿಯ ಗಣೇಶ

• ಉದಯವಾಹಿನಿ ಗದಗ

ಸೊರಟೂರ ಗ್ರಾಮದ ಶರಣಪ್ಪ ಗೌಡ ಪಾಟೀಲ್ ಇವರ ಮನೆಯಲ್ಲಿ ಸುಮಾರು ಹತ್ತು ವರ್ಷಗಳಿಂದ ಪ್ರತಿವರ್ಷ ವಿಭಿನ್ನ ರೀತಿಯ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸುತ್ತಾ ಬಂದಿರುತ್ತಾರೆ. ಕುಟುಂಬ ಸದಸ್ಯರು ಬಂಧುಗಳು ಹಾಗೂ ಸ್ನೇಹಿತರು ಒಟ್ಟಾಗಿ ಭಕ್ತಿ ಭಾವದಿಂದ ಪೂಜಿಸುತ್ತಾರೆ. ನಂತರ ತಮ್ಮ ಇಷ್ಟಾರ್ಥಗಳನ್ನು ಬೇಡಿಕೊಂಡಾಗ ಹಲವಾರು ಭಕ್ತರ ಇಷ್ಟಾರ್ಥಗಳು ಪೂರೈಕೆ ಆಗಿವೆ ಎಂದು ಕೆಲವರು ಹೇಳುತ್ತಾರೆ. ಈ ವರ್ಷವೂ ಹಲವಾರು ಭಕ್ತರು ತಮ್ಮ ಇಷ್ಟಾರ್ಥಗಳನ್ನು ಬೇಡಿಕೊಂಡರು ಐದು ದಿನಗಳ ಕಾಲ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗೆ ಪ್ರತಿದಿನ ಒಂದೊಂದು ವಿಶೇಷ ಪೂಜೆ ನೈವೇದ್ಯ ಮಾಡಲಾಗುವುದು ಹಲವಾರು ಭಕ್ತರು ಆಗಮಿಸುತ್ತಿರುವುದರಿಂದ ಮನೆಯಲ್ಲಿ ದೇವಸ್ಥಾನದ ವಾತಾವರಣ ನಿರ್ಮಾಣವಾಗಿತ್ತು. 5ನೇಯ ದಿನದಂದು ಭಕ್ತರೆಲ್ಲರೂ ಪಟಾಕಿ ಸಿಡಿಸಿ ಸಂಭ್ರಮದಿಂದ ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡಿದರು. ಈ ಸಂದರ್ಭದಲ್ಲಿ ಶರಣಪ್ಪ ಗೌಡ ಪಾಟೀಲ್ ಇವರ ಮಡದಿ ಮಕ್ಕಳು ಹಾಗೂ ತಾಯಿ ಹಾಗೂ ಸ್ನೇಹಿತರು ಗ್ರಾಮದ ಗುರು ಹಿರಿಯರು ಭಾಗಿಯಾಗಿದ್ದರು.


ಉದಯವಾಹಿನಿ ಚಿತ್ರ

### ಪೂರ್ವ ಸಿದ್ಧತೆ ಇಲ್ಲದ ಕ್ರೀಡಾ ಕೂಟ ಕಾದು ಕೂತ ಕ್ರೀಡಾ ಪಟುಗಳು

• ಉದಯವಾಹಿನಿ ವಾಡಿ,

ಇಲ್ಲಿಗೆ ಸಮೀಪದ ಹೊಸ ವಾಡಿ ಪಟ್ಟಣದಲ್ಲಿ ಜಿಪಂ ಮತ್ತು ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ನಡೆಯ ಬೇಕಿದ್ದ ವಾಡಿ ವಲಯ ಹಾಗು ನಾಲವಾರ ಹೋಬಳಿ ಮಟ್ಟದ ಕ್ರೀಡಾ ಕೂಟದ ಉದ್ಘಾಟನಾ ಸಮಾರಂಭ ಸರಿಯಾಗಿ ಬೆಳಿಗ್ಗೆ8 ಗಂಟೆ ಗೆ ನಡಿಯಬೇಕಿತ್ತು.ಆದರೆ 11 ಗಂಟೆ ಆದರೂ ಉದ್ಘಾಟನೆಯಾಗದಿರುವದು ಕ್ರೀಡಾಪಟುಗಳಿಗೆ ನಿರಾಸೆ ಮೂಡಿಸಿತು. ಬೇರೆ ಬೇರೆ ಹಳ್ಳಿಗಳಿಂದ ಬಂದ ಶಾಲಾ ವಿದ್ಯಾರ್ಥಿಗಳು ಕ್ರೀಡಾಕೂಟ ಆಯೋಜಕರಲ್ಲಿ ಶಿಸ್ತು ಬದ್ಧತೆ ಇಲ್ಲ ಎಂದು ಮಾತಾಡಿ ಕೊಳ್ಳವದು ಕೇಳಿ ಬಂದಿತು.

**ಪೂರ್ವ ಸಿದ್ಧತೆ ಇಲ್ಲದ ಕ್ರೀಡಾಂಗಣ:** ಒಂದು ಎರಡು ದಿನ ಮೊದಲು ಕ್ರೀಡಾಂಗಣ ಸ್ವಚ್ಚತೆ ಹಾಗೂಅಲ್ಲಿನ ವ್ಯವಸ್ಥೆ ನೋಡಿ ಅದಕ್ಕೆ ಸಿದ್ಧತೆ ಮಾಡಿಕೊಂಡು ಕ್ರೀಡಾ ಕೂಟ ಆಯೋಜಿಸಬೇಕು ಇಂತಹ ಯಾವುದೇ ಕೆಲಸ ಮಾಡಿಲ್ಲ.ಹೀಗಾದರೆ ಹೇಗೆ ಎಂದು ಕ್ರೀಡಾಪಟುಗಳು ನಿರಾಸೆ ತೋಡಿಕೊಂಡರು

### ಹಲ್ಲೆ: ಐವರಿಗೆ ಆರು ತಿಂಗಳ ಜೈಲು

• ಉದಯವಾಹಿನಿ ಬೆಳಗಾವಿ

ಖಾಲಿ ನಿವೇಶನದಲ್ಲಿ ಫಲಕ ಅಳವಡಿಸುವುದಕ್ಕೆ ಪಕ್ಕದ ಮನೆಯವರ ಮೇಲೆ ಹಲ್ಲೆ ನಡೆಸಿದ್ದ ಐವರಿಗೆ ಇಲ್ಲಿನ ಜೆಎಂಎಫ್‌ಸಿ ನ್ಯಾಯಾಲಯ ಆರು ತಿಂಗಳ ಜೈಲು ಶಿಕ್ಷೆ ಹಾಗೂ 65 ಸಾವಿರ ದಂಡ ವಿಧಿಸಿ ತೀರ್ಪು ನೀಡಿದೆ. ತಾಲ್ಲೂಕಿನ ಬಸವನ ಕುಡಚಿಯ ಕಿರಣ ಮಾಣಿಕ ಪಾಟೀಲ, ಅಮಿತ ಅಪ್ಪಣ್ಣ ಪಾಟೀಲ, ಶ್ರೀಕಾಂತ ದೇವೇಂದ್ರ ಪಾಟೀಲ, ಮಹೇಂದ್ರ ಬಸವಂತ ಪಾಟೀಲ ಹಾಗೂ ಸುನೀಲ ಬಾಹು ಪಾಟೀಲ ಶಿಕ್ಷೆಗೆ ಗುರಿಯಾದವರು.

2015ರಲ್ಲಿ ಬಸವನ ಕುಡಚಿಯ ನಾಗದೇವ ಗಲ್ಲಿಯಲ್ಲಿನ ಖಾಲಿ ನಿವೇಶನಕ್ಕೆ ಪಾಲಿಕೆಯಿಂದ ಫಲಕ ಅಳವಡಿಸುವ ಕಾರ್ಯ ನಡೆದಿತ್ತು. ಇದಕ್ಕೆ ಸುಜಾತಾ ಅರ್ಜುನ ಯಲ್ಲಮ್ಮನವರ ದಂಪತಿ ಕುಮ್ಮಕ್ಕು ನೀಡಿದ್ದಾರೆ ಎಂದು ಆರೋಪಿಸಿ ಈ ಐವರು ಹಲ್ಲೆ ಮಾಡಿದ್ದರು. ಮಾಳಮಾರುತಿ ಠಾಣೆ ಪೊಲೀಸರು ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ಹಂತದಲ್ಲಿ ಪ್ರಕರಣದ ಮೊದಲ ಆರೋಪಿ ಪ್ರಮೋದ ಮತ್ತು 5ನೇ ಆರೋಪಿ ಮಲ್ಲಸರ್ಜ ಮೃತಪಟ್ಟಿದ್ದಾರೆ. ಐವರಿಗೆ ನ್ಯಾಯಾಧೀಶರಾದ ಗುರುಪ್ರಸಾದ ಅವರು ಶಿಕ್ಷೆ ಪ್ರಕಟಿಸಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕ ಮಹಾಂತೇಶ ಚಳಕ್ಕೊಪ ವಾದ ಮಂಡಿಸಿದ್ದರು.

### ಸೆ.10 ರಂದು ತಹಶೀಲ್ ಚಲೋ

• ಉದಯವಾಹಿನಿ ಭಾಲ್ಕಿ

ತಾಲ್ಲೂಕಿನಲ್ಲಿ ಮಳೆಯಿಂದ ಹಾನಿಗೀಡಾದ ಸಂತ್ರಸ್ತರಿಗೆ ಸೂಕ್ತ ಪರಿಹಾರ ನೀಡುವಂತೆ ಸೆ.10 ರಂದು ತಹಸೀಲ್ ಕಚೇರಿ ಚಲೋ ಹೋರಾಟ ನಡೆಸಿ ಸರಕಾರವನ್ನು ಒತ್ತಾಯಿಸಲಾಗುವುದು ಎಂದು ನಾರಂಜಾ ಸಹಕಾರ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ ಹೇಳಿದರು. ತಾಲ್ಲೂಕಿನ ಆನಂದವಾಡಿ, ನಿಡೇಬಾನ್, ಇಂಚೂರು, ಕೊಂಗಳಿ, ಸಾಯಿಗಾಂವ ಸೇರಿ ಮುಂತಾದ ಕಡೆಗಳಿಗೆ ಭೇಟಿ ನೀಡಿ ರೈತರು, ಸಂತ್ರಸ್ತರಿಂದ ಮಳೆಹಾನಿ ಬಗ್ಗೆ ಮಾಹಿತಿ ಪಡೆದು ಕೊಂಡರು. ತಾಲ್ಲೂಕಿನಲ್ಲಿ ವಾಡಿಕೆಯಿಂದ ಹೆಚ್ಚು ಮಳೆ ಆಗಿರುವುದರಿಂದ ಮುಂಗಾರಿನಲ್ಲಿ ರೈತರು ಬೆಳೆದ ಹೆಸರು, ಉದ್ದು, ಸೋಯಾ ಅವರೆ, ತೊಗರಿ ಸೇರಿ ಕಬ್ಬು, ತರಕಾರಿ ಬೆಳೆಗಳು ನೀರು ಪಾಲಾಗಿ ರೈತರು ಆರ್ಥಿಕವಾಗಿ ಸಂಕಷ್ಟ ಎದುರಿಸುತ್ತಿದ್ದಾರೆ.

ಸಾವಿರಾರೂ ಎಕರೆ ಬೆಳೆಹಾನಿ ಆಗಿದೆ. ನೂರಾರು ಮನೆಗಳು ಕುಸಿತ ಕಂಡಿವೆ. ರಸ್ತೆ, ಸೇತುವೆಗಳು ಮುಳಗಡೆಯಾಗಿವೆ. ಹಲವೆಡೆ ವಿದ್ಯುತ್ ಕಂಬ ಬಿದ್ದು ವಿದ್ಯುತ್ ವ್ಯತ್ಯಯಾಗಿ ಜನರು ಸಂಕಷ್ಟ ಎದುರಿಸಿದ್ದಾರೆ. ಬೆಳೆಹಾನಿ ಸಂಭವಿಸಿದ ರೈತರಿಗೆ ಸೂಕ್ತ ಪರಿಹಾರ, ಬೆಳೆವಿಮೆ ಪರಿಹಾರ ಸೇರಿ ಕಾರಂಜಾ ಜಲಾಶಯದ ಹೆಚ್ಚುವರಿ ನೀರಿನಿಂದ ಪ್ರತಿಬಾರಿ ಮುಳಗಡೆ ಕಾಣುತ್ತಿರುವ ದಾಡಗಿ, ಇಂಚೂರು ಮತ್ತು ಕೊಂಗಳಿ ಸೇತುವೆಗೆ ತಡೆಗೋಡೆ ನಿರ್ಮಾಣ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರು, ಸಂತ್ರಸ್ತರೊಂದಿಗೆ ಸೇರಿ ಉಗ್ರ ಹೋರಾಟ ನಡೆಸಲಾಗುತ್ತಿದೆ ಎಂದು ತಿಳಿಸಿದರು.

### ಎಪ್ಪತ್ತು ವರ್ಷ ಮೀರಿದ ಪತ್ರಿಕಾ ವಿತರಕರಿಗೆ ಐದು ಸಾವಿರ ಪಿಂಚಣಿ ನೀಡಿ

• ಉದಯವಾಹಿನಿ ಕಲಬುರಗಿ


ಎಪ್ಪತ್ತು ವರ್ಷ ಮೀರಿದ ಹಿರಿಯ ಪತ್ರಿಕಾ ವಿತರಕರಿಗೆ ತಿಂಗಳಿಗೆ ಐದು ಸಾವಿರ ರೂಪಾಯಿ ಪಿಂಚಣಿ ಹಣ ನೀಡಬೇಕು, ಪತ್ರಿಕಾ ವಿತರಕರಿಗೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕನ್ನಡ' ರಾಜ್ಯೋತ್ಸವ ಪ್ರಶಸ್ತಿ ನೀಡಬೇಕು, ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವ ಸ್ವ-ನಿಧಿ ಯೋಜನೆಯನ್ನು ಪ್ರಾರಂಭಿಸಬೇಕು, ಪತ್ರಿಕಾ ವಿತರಕರಿಗೆ ಸರ್ಕಾರ ಸಬ್ಸಿಡಿ ದರದಲ್ಲಿ ಇವಿ ಬೈಕ್ ದೊರಕಿಸಿಕೊಡುವ ವ್ಯವಸ್ಥೆ ಮಾಡಬೇಕು, ಸರ್ಕಾರ ಪ್ರತಿಭಾನ್ವಿತ ಬಡ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಧನಸಹಾಯ ಮಾಡಬೇಕು ಎಂದು ಪತ್ರಿಕಾ ವಿತರಕರ ಜಿಲ್ಲಾ ಘಟಕದ ಅಧ್ಯಕ್ಷ ರಮಾಕಾಂತ ಜಿಡಗೇಕರ್, ಉಪಾಧ್ಯಕ್ಷ ಬಸವರಾಜ ಖಾನಾಪುರ ಒತ್ತಾಯಿಸಿದ್ದಾರೆ.

## ಮೂಲಭೂತ ಸೌಕರ್ಯ ಒದಗಿಸಲು ಪುರಸಭೆಗೆ ವಿಶೇಷ ಅನುದಾನಕ್ಕೆ ಸಂಸದರಿಗೆ ಮನವಿ

• ಉದಯವಾಹಿನಿ,ಚಿಂಚೋಳಿ

ಪುರಸಭೆ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು 30ಕೋಟಿ ರೂ.ವಿಶೇಷ ಅನುದಾನ ನೀಡುವಂತೆ ಪೌರಾಡಳಿತ ಸಚಿವರಿಗೆ ಒತ್ತಾಯಿಸಿ ಶಿಫಾರಸ್ಸು ಮಾಡುವಂತೆ ಬೀದರ ಸಂಸದ ಸಾಗರ್ ಖಂಡ್ರೆಯವರಿಗೆ ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ನೇತೃತ್ವದಲ್ಲಿ ಮನವಿಪತ್ರ ಸಲ್ಲಿಸಿದರು.

ಪುರಸಭೆ ವ್ಯಾಪ್ತಿಯಲ್ಲಿ ನೀರು ಶುದ್ಧಿಕರಣ ಘಟಕ, ಪದ್ಮಾ ಕಾಲೇಜಿನಿಂದ ತಾಂಡೂರ ವೃತ್ತದವರೆಗೆ ವಿಭಾಜಕ ಅಳವಡಿಕೆ ಹಾಗೂ ಬೀದಿ ದ್ವೀಪ, ತಾಂಡೂರ ವೃತ್ತದಿಂಜ ಅಂಬೇಡ್ಕರ್ ವೃತ್ತದವರೆಗೆ ಚರಂಡಿ ನಿರ್ಮಾಣ, ವಿವಿಧ ಬಡಾವಣೆಗಳಲ್ಲಿ ಸಿಸಿರಸ್ತೆ, ಚರೌಡಿ ನಿರ್ಮಾಣ, ಗ್ರಾಂಥಾಲಯ ಉಪಕರಣಗಳು ಮತ್ತು ಉನ್ನತ ವ್ಯಾಸಂಗಕ್ಕಾಗಿ ಪುಸ್ತಕ ಖರೀದಿ, ಶಾಲಾಕಟ್ಟಡ, ಅಂಗನವಾಡಿ ಅಭಿವೃದ್ಧಿ, ಬಡಿದರ್ಗಾ ದಿಂದ ಮುಲ್ಲಾಮಾರಿ ಸೇತುವೆ ವರೆಗೆ ತಡೆಗೋಡೆ ನಿರ್ಮಾಣ,ಸ್ಲಂ ಬೋರ್ಡ್ ಮನೆಗಳಿಗೆ ಸೌಕರ್ಯ ಒದಗಿಸುವುದು, ಪ್ರವಾಸಿ ಮಂದಿರ ನಿರ್ಮಾಣ, ಹೈಮಾಸ್ಟ್ ಅಳವಡಿಕೆ ಹೇಗೆ ಹತ್ತಾರು ಕಾಮಗಾರಿಗಳು ಕೈಗೆತ್ತಿಕೊಳ್ಳಲು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅಂದಾಜು 30ಕೋಟಿ ರೂ.ವಿಶೇಷ ಅನುದಾನದ ಅವಶ್ಯಕವಾಗಿದ್ದು ಸಂಸದರು ತಾವು ಪೌರಾಡಳಿತ ಸಚಿವರಿಗೆ ಶಿಫಾರಸು ಮಾಡಿ ಅನುದಾನ ದೊರಕಿಸಿ ಕೊಡಬೇಕು ಎಂದು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಮನವಿ ಮಾಡಿದರು.


ಉದಯವಾಹಿನಿ ಚಿತ್ರ

## ಸಾರ್ವಜನಿಕರ ಸಮಸ್ಯೆ ಆಲಿಸಿದ ಸಚಿವ ಸಂತೋಷ ಲಾಡ್

• ಉದಯವಾಹಿನಿ ಧಾರವಾಡ

ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಕಲಘಟಗಿ ಮತಕ್ಷೇತ್ರ ವ್ಯಾಪ್ತಿಯ ವಿವಿಧ ಹಳ್ಳಿಗಳಿಗೆ, ಬೆಳೆಹಾನಿಯಾದ ರೈತರ ಜಮೀನುಗಳಿಗೆ ಭೇಟಿ ನೀಡಿ, ಕಲಘಟಗಿ ಪಟ್ಟಣದಲ್ಲಿ ಜನಸ್ಪಂದನ ಸಭೆ ಜರುಗಿಸಿ, ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳ ಅಹವಾಲುಗಳನ್ನು ಸ್ವೀಕರಿಸಿದರು.

ನಂತರ ಅವರು ಸ್ಥಳದಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿ, ಕಲಘಟಗಿ ಹಾಗೂ ಧಾರವಾಡ ತಾಲ್ಲೂಕಿನ ಕೆಲವು ಪ್ರದೇಶಗಳು ಮಲೆನಾಡಿನ ಸೆರಗಿನಲ್ಲಿ ಇದ್ದು, ಗುಡ್ಡ, ಕಾಡು ಹೆಚ್ಚಾಗಿವೆ. ಮತ್ತು ಕಾಡುಪ್ರಾಣಿಗಳು ಸಾಕಷ್ಟು ಇವೆ. ರೈತರು ಪ್ರತಿವರ್ಷ ಬೆಳೆದ ಬೆಳೆಯನ್ನು ಸುಸೂತ್ರವಾಗಿ ರಾಶಿ ಮಾಡಿಕೊಂಡು ಬರಲು ತೊಂದರೆಯಾಗುತ್ತಿದೆ. ಈ ಹಿನ್ನಲೆಯಲ್ಲಿ ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಾಣಲು ಕ್ರಮವಹಿಸಬೇಕಿದೆ ಎಂದರು.


ಉದಯವಾಹಿನಿ ಚಿತ್ರ

ರೈತರ ಬೇಡಿಕೆಗಳಾದ ಕಾಡುಪ್ರಾಣಿಗಳ ಹಾನಿಯಿಂದ ರಕ್ಷಣೆ, ಹೆಚ್ಚಿನ ಪರಿಹಾರ ಬಿಡುಗಡೆ, ಕಾಡುಪ್ರಾಣಿಗಳನ್ನು ಹೆದರಿಸಲು ಬಂದೂಕು ಬಳಕೆಗೆ ಅನುಮತಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಸೂಕ್ತ ಪರಿಹಾರ ನೀಡಬೇಕು. ಕಾಡಿನ ಅಂಚಿನಲ್ಲಿರುವ ರೈತರ ಜಮೀನುಗಳ ಪಕ್ಕದ ರಸ್ತೆಗಳಲ್ಲಿ ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ನಿರಂತರವಾಗಿ ಪೆಟ್ರೋಲಿಂಗ್ ಮಾಡಬೇಕು. ಹೆಚ್ಚಿನ ಸದ್ದು ಹಾಗೂ ಬೆಳಕು ನೋಡುವುದರಿಂದ ಪ್ರಾಣಿಗಳು ಹೆದರಿ ರೈತರ ತೋಟಗಳತ್ತ ಬರುವುದು ಕಡಿಮೆಯಾಗುತ್ತದೆ. ರೈತರೊಂದಿಗೆ ಚರ್ಚಿಸಿ, ಅವರೊಡನೆ ಇದ್ದು, ಅರಣ್ಯ ಇಲಾಖೆ ಉತ್ತಮವಾಗಿ ಕೆಲಸ ಮಾಡಬೇಕೆಂದು ಸಚಿವ ಸಂತೋಷ ಲಾಡ್ ಅವರು ಸೂಚಿಸಿದರು.

> ಮುಂದಿನ ಒಂದು ವಾರದಲ್ಲಿ ಪ್ರಾಣಿಗಳಿಂದ ಬೆಳೆ ಹಾನಿಯಾಗಿರುವ ಪ್ರದೇಶದಲ್ಲಿ ಕಲಘಟಗಿ ಹಾಗೂ ಧಾರವಾಡ ತಾಲ್ಲೂಕಿನ ಕಂದಾಯ, ಕೃಷಿ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಸಮೀಕ್ಷೆ ಮಾಡಿ, ವರದಿ ಸಲ್ಲಿಸಬೇಕು. ಮತ್ತು ಸರ್ಕಾರದ ನಿಯಮಾನುಸಾರ ಪ್ರತಿ ಹೇಕ್ಟೆರಿಗೆ ಪರಿಹಾರವನ್ನು ಅರಣ್ಯ ಇಲಾಖೆ ತಕ್ಷಣ ಬಿಡುಗಡೆ ಮಾಡಬೇಕು.
> -ಸಂತೋಷ ಲಾಡ್ , ಸಚಿವ


## ಹಿರಿಯೂರು ತಾಲ್ಲೂಕಿನಲ್ಲಿ ಮಳೆ ಕೊರತೆ, ಬಿತ್ತನೆ ವೈಫಲ್ಯ: ಜಿಲ್ಲಾಧಿಕಾರಿ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನ ಜೂನ್ ಮತ್ತು ಜುಲೈ ತಿಂಗಳಿನಲ್ಲಿ ಶೇ.48 ರಷ್ಟು ಮಳೆಯ ಕೊರತೆಯಾಗಿದೆ. ತಾಲ್ಲೂಕಿನ ಒಟ್ಟು ಕೃಷಿ ಭೂಮಿ ಪೈಕಿ ಶೇ.14.66 ರಷ್ಟು ಮಾತ್ರ ಬಿತ್ತನೆಯಾಗಿದ್ದು, ಬೆಳೆ ವಿಮೆ ತುಂಬಿದ ರೈತರಿಗೆ ನಿಯಮಾನುಸಾರ ಶೇ.25 ರಷ್ಟು ವಿಮಾ ಪರಿಹಾರ ನೀಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು. ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಂದು ಕೃಷಿ ಇಲಾಖೆ, ವಿಮಾ ಕಂಪನಿ ಹಾಗೂ ರೈತ ಮುಖಂಡರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ತಾಲ್ಲೂಕಿನ 40,510 ಹೆಕ್ಟೇರ್ ಕೃಷಿ ಭೂಮಿ ಪೈಕಿ ಕೇವಲ 5,939 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಆಗಸ್ಟ್ ತಿಂಗಳಿನಲ್ಲಿ ಮಳೆಯಿಂದ ಬಿತ್ತನೆಗೆ ಏನು ಪ್ರಯೋಜನವಾಗಿಲ್ಲ. ಹಿರಿಯೂರಿನ ಕಸಬಾ ಹೋಬಳಿಯಲ್ಲಿ 9,045 ಹೆಕ್ಟೇರ್ ಕೃಷಿ ಭೂಮಿ ಪೈಕಿ 947 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಇದೇ ಮಾದರಿಯಲ್ಲಿ ಐಮಂಗಲ ಹೋಬಳಿಯಲ್ಲಿ 9,385 ಹೆಕ್ಟೇರ್ ಪೈಕಿ 1,748 ಹೆಕ್ಟೇರ್, ಜೆ.ಜಿ.ಹಳ್ಳಿ ಹೋಬಳಿಯಲ್ಲಿ 9,965 ಹೆಕ್ಟೇರ್ ಪೈಕಿ, 1,313 ಹೆಕ್ಟೇರ್, ಧರ್ಮಪುರ ಹೋಬಳಿಯಲ್ಲಿ 12,115 ಹೆಕ್ಟೇರ್ ಪೈಕಿ 2,468 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ 9,410 ರೈತರು ನೊಂದಣಿಯಾಗಿದ್ದು, ಸುಮಾರು 1.62 ಕೋಟಿ ವಿಮಾ ಕಂತು ಪಾವತಿಸಿದ್ದಾರೆ.

ಸರ್ಕಾರದ ಅಧಿಸೂಚನೆಯಂತೆ ಶೇ.75 ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡರೆ, ವಿಮಾ ಮೊತ್ತದ ಗರಿಷ್ಠ ಶೇ.25 ರಷ್ಟು ಪರಿಹಾರವನ್ನು ವಿಮಾ ಸಂಸ್ಥೆ ನೀಡಿ, ಮುಂದಿನ ಅವಧಿ ವಿಮೆಯನ್ನು ರದ್ದು ಪಡಿಸಬೇಕು. ಈ ಹಿನ್ನಲೆಯಲ್ಲಿ ಜಂಟಿ ಸಮೀಕ್ಷೆ ವರದಿಯನ್ನು ಅನುಮೋದಿಸಿ ವಿಮಾ ಕಂಪನಿ ನಷ್ಟ ಪರಿಹಾರ ನೀಡುವಂತೆ ಶಿಫಾರಸ್ಸು ಮಾಡಿರುವುದಾಗಿ ತಿಳಿಸಿದರು.


ಉದಯವಾಹಿನಿ ಚಿತ್ರ

> ವಾಡಿಕೆ ಪ್ರಕಾರ ಹಿರಿಯೂರು ತಾಲ್ಲೂಕಿನಲ್ಲಿ ಜೂನ್ ತಿಂಗಳಿನಲ್ಲಿ 49 ಮಿ.ಮೀ ಮಳೆ ನಿರೀಕ್ಷೆ ಇತ್ತು, ಆದರೆ ವಾಸ್ತವದಲ್ಲಿ ಕೇವಲ 17.5 ಮಿ.ಮೀ ಆಗಿದೆ. ಶೇ.64 ರಷ್ಟು ಮಳೆ ಕೊರತೆಯಾಗಿದೆ. ಇದೇ ರೀತಿ ಜುಲೈ ತಿಂಗಳಿನಲ್ಲಿ 53 ಮಿ.ಮೀ ಮಳೆ ನಿರೀಕ್ಷೆ ಇತ್ತು, ವಾಸ್ತವದಲ್ಲಿ 30 ಮಿ.ಮೀ ಮಳೆಯಾಗಿದ್ದು, ಶೇ.42 ರಷ್ಟು ಮಳೆ ಕೊರತೆಯಾಗಿದೆ. ತಾಲ್ಲೂಕಿನ ಕಸಬಾ ಹಾಗೂ ಐಮಂಗಳ ಹೋಬಳಿಯಲ್ಲಿ ಶೇ.57 ರಷ್ಟು, ಧರ್ಮಪುರ ಹೋಬಳಿಯಲ್ಲಿ ಶೇ.34 ರಷ್ಟು ಹಾಗೂ ಜೆ.ಜಿ.ಹಳ್ಳಿ ಹೋಬಳಿಯಲ್ಲಿ ಶೇ. 63 ರಷ್ಟು ಮಳೆ ಕೊರತೆಯಾಗಿದೆ. ಒಟ್ಟಾರೆ ಹಿರಿಯೂರು ತಾಲ್ಲೂಕಿನಲ್ಲಿ ಈ ವರ್ಷ ಜನವರಿಯಿಂದ ಜುಲೈ ತಿಂಗಳಿನವರೆಗೆ ಶೇ. 23 ರಷ್ಟು ಮಳೆ ಕೊರತೆಯಾಗಿದೆ
> -ಮಂಜುನಾಥ, ಜಂಟಿ ಕೃಷಿ ನಿರ್ದೇಶಕ

## ಚವನಭಾವಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಗಿತ: ಗ್ರಾಮಸ್ಥರ ಆಕ್ರೋಶ

• ಉದಯವಾಹಿನಿ ಮುದ್ದೇಬಿಹಾಳ

ತಾಲ್ಲೂಕಿನ ಅಡವಿ ಸೋಮನಾಳ ಗ್ರಾಮ ಪಂಚಾಯತ್ ವ್ಯಾಪ್ತಿಯ ಚವನಭಾವಿ ಗ್ರಾಮದಲ್ಲಿ ಕಳೆದ ಎರಡು ತಿಂಗಳಿಂದ ಶುದ್ಧ ಕುಡಿಯುವ ನೀರಿನ ಘಟಕ ಸ್ಥಗಿತಗೊಂಡಿದ್ದು, ಗ್ರಾಮಸ್ಥರು ಕುಡಿಯುವ ನೀರಿಗಾಗಿ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ಗ್ರಾಮಸ್ಥರು ತಾಪಂ ಇಓ, ಗ್ರಾಮ ಪಂಚಾಯತ್ ಪಿಡಿಓ ಹಾಗೂ ನೀರು ಸರಬರಾಜು ಇಲಾಖೆಯ ಅಧಿಕಾರಿಗಳ ಗಮನಕ್ಕೆ ವಿಷಯವನ್ನು ಹಲವು ಬಾರಿ ತಂದಿದ್ದರೂ, ಘಟಕ ರಿಪೇರಿ ಕುರಿತು ಯಾವುದೇ ಕ್ರಮ ಕೈಗೊಳ್ಳದಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ. ರಿಪೇರಿ ಮಾಡಲು ಸಂಬಂಧಿಸಿದ ಇಲಾಖೆಯವರು ಹಿಂದೇಟು ಹಾಕುತ್ತಿರುವುದೇಕೆ? ಎಂಬ ಪ್ರಶ್ನೆ ಜನರನ್ನು ಕಾಡುತ್ತಿದ್ದು, ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಗ್ರಾಮ ಪಂಚಾಯತ್ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಗ್ರಾಮಸ್ಥರಾದ ಯಲ್ಲಪ್ಪ ಕಾರಕೂರ, ಶಿವಪ್ಪ ಕಾರಕೂರ, ಗದ್ದೆಪ್ಪ ಮದರಿ, ಮಾಳೆಪ್ಪ ಮದರಿ, ಬಸವರಾಜ ಕುಂಬಾರ, ಹಣಮಂತ ಗೋಗಿ, ಹಣಮಂತ ಈಳಗೇರ, ಮಾಳಪ್ಪ ನಾಲತವಾಡ, ಶರಣಬಸಪ್ಪ ಕುಂಬಾರ, ರಾಮಣ್ಣ ಈಳಗೇರ, ಭೀಮಣ್ಣ ಹಡಪದ ಸೇರಿದಂತೆ ಹಲವರು ಎಚ್ಚರಿಕೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

### ಪುನಾರಂಭಿಸಬೇಕೆಂದು ಒತ್ತಾಯ

ಚವನಭಾವಿ ಗ್ರಾಮದ ಈ ವಾಟರ್ ಫಿಲ್ಟರ್ ಸುತ್ತಮುತ್ತಲಿನ ಏಳು-ಎಂಟು ಗ್ರಾಮಗಳಿಗೆ ಮಾತ್ರವಲ್ಲದೆ ಹುಣಸಗಿ ಗಡಿ ತಾಲ್ಲೂಕಿನ ಗ್ರಾಮಸ್ಥರಿಗೂ ಆಧಾರವಾಗಿತ್ತು. ಸದ್ಯ ಅಕಾಲಿಕ ಮಳೆಯಿಂದ ನೀರು ಸರಬರಾಜು ವ್ಯತ್ಯಯಗೊಂಡಿರುವ ಹಿನ್ನಲೆಯಲ್ಲಿ, ಶುದ್ಧ ಕುಡಿಯುವ ನೀರಿಗಾಗಿ ಈ ಘಟಕವನ್ನು ತಕ್ಷಣ ಪುನಾರಂಭಿಸಬೇಕೆಂದು ಒತ್ತಾಯ ವ್ಯಕ್ತವಾಗಿದೆ.

## ವಾಹನ ಡಿಕ್ಕಿ, ಕರಡಿ ಸಾವು

• ಉದಯವಾಹಿನಿ ಕೂಡ್ಲಿಗಿ

ತಾಲ್ಲೂಕಿನ ಅಮಲಾಪುರ ಬಳಿ ರಾಷ್ಟ್ರೀಯ ಹೆದ್ದಾರಿ -50ರಲ್ಲಿ ಅಪರಿಚಿತ ವಾಹನ ಡಿಕ್ಕಿಯಾಗಿ ಕರಡಿ ಮೃತಪಟ್ಟ ಘಟನೆ ಮಂಗಳವಾರ ನಡೆದಿದೆ.

ನಾಲ್ಕರಿಂದ ಐದು ವರ್ಷದ ಗಂಡು ಕರಡಿ ಬೆಳಗಿನ ಜಾವ ಜರಿಮಲೆ ಕಾಡಿನತ್ತ ಹೋಗಲು ಹೆದ್ದಾರಿ ದಾಟುತ್ತಿದ್ದಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದಿದೆ. ಇದರಿಂದ ಕರಡಿ ಸ್ಥಳದಲ್ಲಿಯೇ ಸತ್ತಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕರಡಿಯ ಶವ ಪರೀಕ್ಷೆ ಮಾಡಿಸಿ ನಿಯಮಗಳ ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಕೂಡ್ಲಿಗಿ ವಲಯ ಅರಣ್ಯಾಧಿಕಾರಿ ಸಂದೀಪ್ ನಾಯಕ ಮಾಹಿತಿ ನೀಡಿದ್ದಾರೆ.


ಉದಯವಾಹಿನಿ ಚಿತ್ರ

## ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ: ಅರ್ಜಿ ಆಹ್ವಾನ

• ಉದಯವಾಹಿನಿ ಚಿತ್ರದುರ್ಗ

2025-26ನೇ ಸಾಲಿನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಲು ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸೆ.10 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

2025ರ ಅಕ್ಟೋಬರ್ 07ರಂದು ನಡೆಯಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ರಾಜ್ಯ ಮಟ್ಟದಲ್ಲಿ ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ, ಇನ್ನಿತರೆ ಕ್ಷೇತ್ರಗಳಲ್ಲಿ ಶ್ರಮಿಸಿದ ಅರ್ಹ ವ್ಯಕ್ತಿಗಳಿಗೆ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವ್ಯಕ್ತಿಗಳು ತಮ್ಮ ಪೂರ್ಣ ದಾಖಲಾತಿಗಳೊಂದಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳವರ ಕಚೇರಿ, ಜೆಸಿಆರ್ ಬಡಾವಣೆ, 4ನೇ ಕ್ರಾಸ್ (ಪೂರ್ವ), ಗಣೇಶ ದೇವಸ್ಥಾನದ ಹತ್ತಿರ, ಆಯಾ ತಾಲ್ಲೂಕಿನ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಮತ್ತು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯಲ್ಲಿ ಅರ್ಜಿಗಳನ್ನು ಪಡೆದು ಮಾಹಿತಿಯೊಂದಿಗೆ ಭರ್ತಿಮಾಡಿ ಸೆಪ್ಟೆಂಬರ್ 10 ರಂದು ಸಂಜೆ 5.30 ರೊಳಗಾಗಿ ಆಯಾ ತಾಲ್ಲೂಕಿನ ಕಚೇರಿಗೆ ಸಲ್ಲಿಸಬೇಕು

**ಷರತ್ತುಗಳು:** ಅರ್ಜಿದಾರರ ವಯಸ್ಸು ಕನಿಷ್ಠ 35 ವರ್ಷದವರಾಗಿರಬೇಕು.

ಪ್ರಶಸ್ತಿಗೆ ಅರ್ಜಿ ಸಲ್ಲಿಸಿರುವ ವ್ಯಕ್ತಿಯು ಯಾವುದೇ ಕಾನೂನು ಬಾಹಿರ ಚಟುವಟಿಕೆಯಲ್ಲಿ ತೊಡಗಿರಬಾರದು. ಅರ್ಜಿದಾರರು ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶ್ರಮಿಸಿರುವ ಬಗ್ಗೆ ವೈಯಕ್ತಿಕ ವಿವರಗಳೊಂದಿಗೆ ದಾಖಲೆಗಳ ಸಹಿತ ಅರ್ಜಿ ಸಲ್ಲಿಸುವುದು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### • ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿ, ಅವರ ಬಾಳು ಬೆಳಗಿಸಿ ಕಡಬ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ

# ಶಿಕ್ಷಕರ ಕೊರತೆ, ಶೂನ್ಯ ದಾಖಲಾತಿಯಿಂದ ಮುಚ್ಚುವಂತಾದ ಶಾಲೆ

• ಉದಯವಾಹಿನಿ ಕಡಬ

ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿ, ಅವರ ಬಾಳು ಬೆಳಗಿಸಿದ ಕಡಬ ತಾಲ್ಲೂಕಿನ 2 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಈ ವರ್ಷದ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಶೂನ್ಯ ದಾಖಲಾತಿಯಿಂದ ಬಾಗಿಲು ಮುಚ್ಚಿದೆ. ಶಿಕ್ಷಕರ ಕೊರತೆಯಿಂದಾಗಿ ಶಾಲೆಗೆ ಈ ಸ್ಥಿತಿ ಬಂದಿರುವ ಬಗ್ಗೆ ಗ್ರಾಮಸ್ಥರು, ಶಿಕ್ಷಣ ಪ್ರೇಮಿಗಳು ಬೇಸರ ವ್ಯಕ್ತಪಡಿಸಿದ್ದಾರೆ.

ಕಡಬ ತಾಲ್ಲೂಕಿನ ರೆಂಜಿಲಾಡಿ ಗ್ರಾಮದ ಮೀನಾಡಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮತ್ತು ಬಿಳಿನೆಲೆ ಗ್ರಾಮದ ಚೇರು ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಈ ಶೈಕ್ಷಣಿಕ ವರ್ಷ ಮಕ್ಕಳ ದಾಖಲಾತಿ ಕೊರತೆಯಿಂದ ಚಟುಟವಟಿಕೆ ಸ್ತಬ್ಧವಾಗಿದೆ.

**ಸುವರ್ಣ ಮಹೋತ್ಸವ ಆಚರಿಸಿದ ಶಾಲೆ:** ಸುಮಾರು 60 ವರ್ಷ ದಾಟಿದ, ವಜ್ರ ಮಹೋತ್ಸವದ ಹೊಸ್ತಿಲಲ್ಲಿದ್ದ ಮೀನಾಡಿ ಸರ್ಕಾರಿ ಶಾಲೆಗೆ ಈ ಶೈಕ್ಷಣಿಕ ವರ್ಷ ದಾಖಲಾತಿ ನಡೆದಿಲ್ಲ. ಕಳೆದ ವರ್ಷ ಇಲ್ಲಿ ನಾಲ್ವರು ವಿದ್ಯಾರ್ಥಿಗಳಿದ್ದರು. ಈ ಮಕ್ಕಳ ಮನೆಯ ಇಬ್ಬರು 5 ಮತ್ತು 6ನೇ ತರಗತಿಯಲ್ಲಿ ಬೇರೆ ಶಾಲೆಗೆ ಸೇರಿದ್ದರಿಂದ ಅವರೂ ಈ ಶಾಲೆ ಬಿಟ್ಟಿದ್ದಾರೆ.

ಕೆಲವು ವರ್ಷಗಳ ಹಿಂದೆ ಈ ಶಾಲೆಗೆ ರೈಲುಬೋಗಿಗಳ ಬಣ್ಣ ಬಳಿದು ಮಕ್ಕಳನ್ನು ಆಕರ್ಷಿಸುವಂತೆ ಮಾಡಿ 'ಮೀನಾಡಿ ಎಕ್ಸ್‌ಪ್ರೆಸ್' ಎಂದು ನಾಮಕರಣ ಮಾಡಲಾಗಿತ್ತು. ಶಾಲಾ ಶಿಕ್ಷಕರು, ಎಸ್‌ಡಿಎಂಸಿಯವರು ಮತ್ತು ಸ್ಥಳೀಯ ಶಿಕ್ಷಣ ಪ್ರೇಮಿಗಳು ಮಕ್ಕಳ ದಾಖಲಾತಿ ಹೆಚ್ಚಿಸಲು ಮಾಡಿದ ಪ್ರಯತ್ನ ಫಲ ನೀಡಿಲ್ಲ. ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶಿಕ್ಷಕರನ್ನೂ ಬೇರೆ ಶಾಲೆಗೆ ನಿಯೋಜಿಸಲಾಗಿದೆ.

**ಬಿಳಿನೆಲೆ ಶಾಲೆ:** ಚೇರು ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕಳೆದ ವರ್ಷ 5ನೇ ತರಗತಿಯಲ್ಲಿ ಇಬ್ಬರು, 3 ಹಾಗೂ 4ನೇ ತರಗತಿಯಲ್ಲಿ ತಲಾ ಇಬ್ಬ ವಿದ್ಯಾರ್ಥಿಗಳಿದ್ದರು. 5ನೇ ತರಗತಿಯಲ್ಲಿದ್ದ ಇಬ್ಬರು 6ನೇ ತರಗತಿಗೆ ಬೇರೆ ಶಾಲೆಗೆ ತೆರಳಿದ್ದು, ಈ ವರ್ಷ ಹೊಸ ಸೇರ್ಪಡೆ ಆಗದೆ ಇದ್ದುದರಿಂದ ಆ ಮಕ್ಕಳ ಪೋಷಕರು ಅವರನ್ನು ಬೇರೆ ಶಾಲೆಗೆ ಸೇರಿಸಿದ್ದಾರೆ.


ಉದಯವಾಹಿನಿ ಚಿತ್ರ

**ಶಿಕ್ಷಣ ಪ್ರೇಮಿಗಳು ಬೇಸರ**

### ಶಿಕ್ಷಕರ ಕೊರತೆಯಿಂದಾಗಿ ಮುಚ್ಚುವಂತಾಯಿತು

ಕೆಲ ವರ್ಷಗಳಿಂದ ಇಲ್ಲಿ ಖಾಯಂ ಶಿಕ್ಷಕರೇ ಇಲ್ಲ, ಒಬ್ಬರನ್ನು ಬೇರೆ ಶಾಲೆಯಿಂದ ನಿಯೋಜನೆ ಮಾಡಲಾಗಿತ್ತು. ಅವರು ಶಿಕ್ಷಣ ಸಂಯೋಜಕರಾಗಿದ್ದರು. ಅವರು ಅದೇ ಕೆಲಸದಲ್ಲಿ ತೊಡಗಿಸಿಕೊಂಡಿದ್ದರು. ಹೀಗಾಗಿ ಕಲಿಕಾ ವ್ಯವಸ್ಥೆಯೇ ಸರಿ ಇರಲಿಲ್ಲ, ಖಾಸಗಿ ಶಾಲೆಗಳ ಅಬ್ಬರವೂ ಅಧಿಕವಾಗಿತ್ತು. ಕಳೆದ ಹಲವಾರು ವರ್ಷಗಳಿಂದ ಶಾಲಾಭಿವೃದ್ಧಿ ಸಮಿತಿ ಸದಸ್ಯನಾಗಿ, ದಾನಿಗಳ ಸಹಕಾರ ಪಡೆದು ಶಾಲೆಗೆ ಆವರಣ ಗೋಡೆ, ಕುಡಿಯುವ ನೀರಿನ ವ್ಯವಸ್ಥೆ, ಟೈಲ್ಸ್ ಅಳವಡಿಕೆ, ಆಕರ್ಷಕ ಬಣ್ಣ ಸೇರಿದಂತೆ ಮೂಲ ಸೌಕರ್ಯ ಕಲ್ಪಿಸಿ ಶಾಲೆಯನ್ನು ಉಳಿಸಲು ಬಹಳ ಪ್ರಯತ್ನಿಸಿದೆವು. ಆದರೆ, ಅದು ಫಲ ಕೊಡಲಿಲ್ಲ, ಮುಂದೆ ಶಿಕ್ಷಕರ ವ್ಯವಸ್ಥೆ ಮಾಡಿದರೆ ಮೊದಲಿನಂತೆ ಶಾಲೆಯನ್ನು ಮುನ್ನಡೆಸಬಹುದು ಎಂದು ನೂಜಿಬಾಳ್ತಿಲ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಕೆ.ಜೆ. ಥಾಮಸ್ ಹೇಳಿದರು.

ಹಿರಿಯರು ಕಷ್ಟಪಟ್ಟು ಕಟ್ಟಿದ ಸರ್ಕಾರಿ ಶಾಲೆಗಳು ಇಂದು ವಿವಿಧ ಕಾರಣಗಳಿಂದ ಮುಚ್ಚುತ್ತಿರುವುದು ಬೇಸರದ ವಿಷಯ. ಈ ನಡುವೆ ಮುಚ್ಚಿರುವ ಶಾಲೆಗಳ ಆಸ್ತಿ, ಸ್ವತ್ತು ರಕ್ಷಿಸಲು ಇಲಾಖೆ ಮುಂದಾಗಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

**ತಾತ್ಕಾಲಿಕವಾಗಿ ಮುಚ್ಚಲಾಗಿದೆ:** ಕಡಬ ತಾಲ್ಲೂಕಿನ ಮೀನಾಡಿ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಚೇರು ಕಿರಿಯ ಪ್ರಾಥಮಿಕ ಶಾಲೆ ಈ ಶೈಕ್ಷಣಿಕ ವರ್ಷದಲ್ಲಿ ಶಿಕ್ಷಕರ ಕೊರತೆ, ಮಕ್ಕಳ ದಾಖಲಾತಿ ಆಗದ ಕಾರಣ ತಾತ್ಕಾಲಿಕವಾಗಿ ಮುಚ್ಚಲಾಗಿದೆ. ಮುಂದೆ ಶಿಕ್ಷಕರನ್ನು ವ್ಯವಸ್ಥೆ ಮಾಡಿ ಶಾಲೆಯನ್ನು ತೆರೆಯಲಾಗುವುದು ಎಂದು ಪುತ್ತೂರು ಕ್ಷೇತ್ರ ಶಿಕ್ಷಣಾಧಿಕಾರಿ ಲೋಕೇಶ್ ತಿಳಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ವೃಷಭ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ,ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ.

**ಮಿಥುನ** ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ, ಕಷ್ಟಕರವೂ ಆಗಿರುತ್ತದೆ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು.

**ಕರ್ಕಾಟಕ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಸಿಂಹ** ಮನೆಯ ಕೆಲಸಗಳನ್ನು ಮುಗುಸಿದ ಈ ರಾಶಿಚಕ್ರದ ಗೃಹಿಣಿಯರು ಇಂದು ಉಚಿತ ಸಮಯದಲ್ಲಿ ಟಿವಿ ಅಥವಾ ಮೊಬೈಲ್‌ನಲ್ಲಿ ಚಲನಚಿತ್ರವನ್ನು ವೀಕ್ಷಿಸಬಹುದು.

**ಕನ್ಯಾ** ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ.

**ತುಲಾ** ಪತ್ನಿಯ ವ್ಯವಹಾರಗಳಲ್ಲಿ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು. ಕೋಪ ಭುಗಿಲೇಳುವುದನ್ನು ತಪ್ಪಿಸಲು ಅವಳ ಅನುಮತಿ ತೆಗೆದುಕೊಳ್ಳಿ. ನೀವು ಸುಲಭವಾಗಿ ಸಮಸ್ಯೆಯನ್ನು ತಪ್ಪಿಸಬಹುದು.

**ವೃಶ್ಚಿಕ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಧನಸ್ಸು** ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ.

**ಮಕರ** ಸ್ನೇಹಿತರು ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನಿಮ್ಮ ಹಣವನ್ನು ಉಳಿಸಲು ನೀವು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು.

**ಕುಂಭ** ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ನೀವು ಒಳ್ಳೆಯ ಹಣ ಮಾಡುತ್ತೀರಿ.

**ಮೀನ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ.

● ಧಾರಾಕಾರ ಮಳೆಯಿಂದಾಗಿ ರೈತರು ಬೆಳೆದ ಉದ್ದು, ಹೆಸರು, ಸೋಯಾಬಿನ್, ತೊಗರಿಬೆಳೆಗಳು ಹಾನಿ

# ಬೆಳೆ ಹಾನಿಗೊಳಗಾದ ಪ್ರದೇಶಗಳಿಗೆ ಸಾಗರ್ ಈಶ್ವರ ಖಂಡ್ರೆ ಭೇಟಿ

• ಉದಯವಾಹಿನಿ, ಚಿಂಚೋಳಿ



ಉದಯವಾಹಿನಿ ಚಿತ್ರ

ತಾಲ್ಲೂಕಿನಾದ್ಯಂತ ಸತತವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ರೈತರು ಬೆಳೆದ ಉದ್ದು, ಹೆಸರು, ಸೋಯಾಬಿನ್, ತೊಗರಿಬೆಳೆಗಳು ಹಾನಿಯಾದ ರೈತರ ಜಮೀನು ಪ್ರದೇಶಗಳಿಗೆ ಬೀದರ ಸಂಸದ ಸಾಗರ್ ಈಶ್ವರ ಖಂಡ್ರೆ, ತಾಲ್ಲೂಕಾ ಮಟ್ಟದ ಅಧಿಕಾರಿಗಳ ತಂಡದೊಂದಿಗೆ ವಿವಿಧೆಡೆ ಭೇಟಿಯಾಗಿ ಪರಿಶೀಲಿಸಿದರು.

ತಾಲ್ಲೂಕಿನ ನಾಗಾಯಿದ್ಲಾಯಿ, ಕೊಳ್ಳೂರ, ಚಂದಾಪೂರ, ಪೋಲಕಪಳ್ಳಿ, ಸೋಮನಿಂಗದಳ್ಳಿ, ದಸ್ತಾಪುರ, ಗ್ರಾಮಗಳ ಹೊಲಗದ್ದೆಗಳಿಗೆ ಬೀದರ ಸಂಸದ ಸಾಗರ್ ಈಶ್ವರ ಖಂಡ್ರೆ ತೆರಳಿ ರೈತರಿಗೆ ಧೈರ್ಯ ತುಂಬಿ ಸ್ಥಳದಲ್ಲಿದ್ದ ತಹಶೀಲ್ದಾರ್ ಹಾಗೂ ಕೃಷಿ ಅಧಿಕಾರಿ, ತೋಟಗಾರಿಕೆ ಅಧಿಕಾರಿಗಳಿಗೆ ಸಮರ್ಪಕವಾಗಿ ನ್ಯಾಯಯುತವಾಗಿ ಸರ್ವೆ ನಡೆಸಿ ಶೀಘ್ರದಲ್ಲೇ ವರದಿ ಸಿದ್ದಪಡಿಸಿ ಸರ್ಕಾರಕ್ಕೆ ಸಲ್ಲಿಸಿ ನಾನು ರೈತರಿಗೆ ಶೀಘ್ರದಲ್ಲೇ ಪರಿಹಾರ ದೊರಕುವಂತೆ ಮುಖ್ಯಮಂತ್ರಿ ಹಾಗೂ ಸಂಬಂಧಪಟ್ಟ ಸಚಿವರಿಗೆ ಮಾತನಾಡಿ ಶೀಘ್ರದಲ್ಲೇ ಬೆಳೆಪರಿಹಾರ ಹಣ ಬಿಡುಗಡೆ ಮಾಡುವ ಪ್ರಯತ್ನ ಮಾಡುತ್ತೇನೆ ಎಂದು ಸೂಚಿಸಿದರು. ಮಳೆಯಿಂದಾಗಿ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ, ಸ್ಥಳೀಯ ರೈತರ ಸಮಸ್ಯೆಗಳನ್ನು ಕೇಳಿಕೊಂಡು ಬೆಳೆಹಾನಿಯಾದ ರೈತರು ಬೆಳೆವಿಮೆ ಪಾವತಿ ಮಾಡಿದವರು ಆನ್ಲೈನ್ನಲ್ಲಿ ದೂರು ಸಲ್ಲಿಸಿ ಅಥವಾ ಲಿಖಿತವಾಗಿ ಕೃಷಿ ಇಲಾಖೆಗೆ ದೂರು ಸಲ್ಲಿಸಿ ಎನ್.ಡಿ.ಆರ್.ಆಫ್, ಮತ್ತು ಎಸ್.ಡಿ.ಆರ್.ಎಫ್ ನಲ್ಲಿ ನೀರಾವರಿ ಹಾನಿಪ್ರದೇಶಕ್ಕೆ ಒಂದು ಹೇಕ್ಟರ್ ಗೆ 17,000ರೂ, ನೀರಾವರಿ ಇಲ್ಲದ ಬೆಳೆಹಾನಿ ಪ್ರದೇಶಕ್ಕೆ ಎರಡು ಹೇಕ್ಟರ್‌ಗೆ 17,000ರೂ. ಸರ್ಕಾರ ಬೆಳೆಪರಿಹಾರ ನೀಡುತ್ತೇವೆ ಹಾಗೂ ಬೆಳೆವಿಮೆ ಹಣ ಕೂಡ ರೈತರಿಗೆ ಜಮಾವಾಗಲಿದೆ, ಇಷ್ಟೊಂದು ಹಣ ರೈತರಿಗೆ ಸಾಕಾಗುವುದಿಲ್ಲ ಬರುವ ದಿನಗಳಲ್ಲಿ ನಿಯಮ ಬದಲಾಯಿಸಿ ಹೆಚ್ಚಿನ ಅನುದಾನ ದೊರಕುವಂತೆ ಮಾಡುತ್ತೇನೆ ಎಂದು ಬೀದರ ಸಂಸದ ಸಾಗರ್ ಖಂಡ್ರೆ ಹೇಳಿದರು.

**ತುರ್ತು ಪರಿಹಾರ ಕ್ರಮಕ್ಕೆ ಸೂಚನೆ**

ನಿರಂತರವಾಗಿ ಮಳೆಯಿಂದಾಗಿ ರೈತರು ಬೆಳೆದ ಸೋಯಾ, ತೊಗರಿ, ಉದ್ದು, ಹೆಸರು, ಸಂಪೂರ್ಣ ಶೇಕಡಾ100 ಪ್ರತಿಶತಃ ಬೆಳೆಗಳು ನಾಶವಾಗಿವೆ, ನೂರಾರು ಮನೆಗಳು ಹಾನಿಗೊಳಗಾಗಿದ್ದು ಮನೆಗಳು ಶೇಕಡಾ 20ಪ್ರತಿಶತಃ ಕುಸಿದು ಬಿದ್ದರೆ 3000ರೂ, ಹಾಗೂ ಶೇಕಡಾ 60ಪ್ರತಿಶತಃ ಮೇಲ್ಪಟ್ಟು ಮನೆ ಕುಸಿದರೆ 65000ರೂ.ಪರಿಹಾರ ನೀಡಲಾಗುತ್ತದೆ, ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ ದವಸ ಧಾನ್ಯ ನೀರು ಪಾಲಾಗಿದರೆ 5000ರೂ.ಪರಿಹಾರ ನೀಡಲಾಗುತ್ತದೆ ಸಂಸದ ಸಾಗರ್ ಖಂಡ್ರೆ, ಹೇಳಿದರು.

ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್, ಬಾಬುರಾವ ಪಾಟೀಲ, ಬಸವರಾಜ ಮಾಲಿ, ಲಕ್ಷ್ಮಣ ಆವುಂಟಿ, ಅಬ್ದುಲ್ ಬಾಷೀದ್, ಶರಣುಪಾಟೀಲ, ಆನಂದ ಟೈಗರ್, ಅಬ್ದುಲ್ ರೌಫ್, ಜಗನ್ನಾಥ ಕಟ್ಟಿ, ಜಗನ್ನಾಥ ಇದಲಾಯಿ, ಸುರೇಶ ಭಂಟ್ಹಾ, ಶಬ್ಬೀರ್ ಅಹೇಮದ್, ನಾಗೇಶ ಗುಣಾಜೀ, ಅಜೀತ್ ಪಾಟೀಲ, ಆರ್.ಗಣಪತರಾವ, ಮಂಜು ಲೇವಡಿ, ಸಂತೋಷ ಗುತ್ತೇದಾರ, ಖಲೀಲ್ ಪಟೇಲ, ಮಲ್ಲಿಕಾರ್ಜುನ ಕೋಟಪಳ್ಳಿ, ವೀರಶೆಟ್ಟಿ ಪಾಟೀಲ, ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು, ಜನಪ್ರತಿನಿಧಿಗಳು, ಗ್ರಾಮಸ್ಥರು ಹಾಗೂ ರೈತರು ಇದ್ದರು.

### 4ಕೋಟಿ ರೂ.ರಸ್ತೆ ಅಭಿವೃದ್ಧಿಗೆ ಮೀಸಲು

**ತಾಲ್ಲೂಕಿನಲ್ಲಿ ನಿರಂತರ ಸುರಿಯುತ್ತಿರುವ ಮಳೆಗೆ ರಸ್ತೆಗಳು ಹದಗೆಟ್ಟಿದ್ದು ಕೆಕೆಆರ್ ಡಿ.ಬಿಯಲ್ಲಿ 4.90ಕೋಟಿ ರಸ್ತೆ ನಿರ್ಮಾಣ ಮಂಜೂರುವಾಗಿದ್ದು ಚಿಂಚೋಳಿ ರಸ್ತೆಗಳಿಗೆ 4ಕೋಟಿ ರೂ.ಮೀಸಲಿಡಲಾಗಿದೆ. ಪಿಎಂಜಿವೈಎಸ್ ಯೋಜನೆಯಲ್ಲಿ ಕೇಂದ್ರ ಸರ್ಕಾರ ಅನುದಾನ ಬರುತ್ತದೆ ಆದರೆ ಈವರ್ಷ ನಮಗೆ ಅನುದಾನವೆ ನೀಡಿಲ್ಲ, ನ್ಯಾಷನಲ್ ಹೈವೇಗೆ 6 ಕೋಟಿ ರೂ.ಬಿಡುಗಡೆಯಾಗಿದೆ ರಸ್ತೆ ನಿರ್ಮಾಣಕ್ಕೆ ಇಡಲಾಗಿದೆ, ಜೆಜೆಎಂ ಯೋಜನೆಯು ಈಡಿ ದೇಶದಾದ್ಯಂತ ಕಾಮಗಾರಿಗಳ ಸಮಸ್ಯೆವಿದ್ದು ಬರುವ ಅಧಿವೇಶನದಲ್ಲಿ ಪ್ರಶ್ನೆ ಮಾಡುತ್ತೇನೆ, 80ಪ್ರತಿಶತಃ ಮನೆಹಾನಿ 65ಸಾವಿರ ರೂ.ಶೇಕಡಾ 20 ಪ್ರತಿಶತಃ 03ಸಾವಿರ ರೂ, ಪರಿಹಾರ ನೀಡಲಾಗುತ್ತದೆ, ಮನೆಯಲ್ಲಿ ಮಳೆನೀರು ಹೋಗಿ ಧವಸ ಧಾನ್ಯಗಳು ಹಾನಿ 5000ರೂ ಪರಿಹಾರ ನೀಡಲಾಗುತ್ತದೆ, ಬಳೆಹಾನಿ ಪರಿಹಾರ ನೀರಾವರಿ ಒಂದು ಹೇಕ್ಟರ್ 17ಸಾವಿರ ರೂ.ನೀರಾವರಿ ಇಲ್ಲದ ಜಮೀನು ಬೆಳೆಹಾನಿ ಎರಡು ಹೇಕ್ಟರ್ 17ಸಾವಿರ ರೂ.ಬೆಳೆಪರಿಹಾರ ನೀಡಲಾಗುತ್ತದೆ, ಬರುವ ದಿನಗಳಲ್ಲಿ ನಿಯಮ ಬದಲಾಯಿಸಿ ಹೆಚ್ಚಿನ ಪರಿಹಾರ ನೀಡುವಂತೆ ಮಾಡಲಾಗುತ್ತದೆ. ಕುಂಚಾವರಂ, ಎತ್ತಿಪೋತ, ಶಾಧಿಪೂರ ಗಡಿಯಲ್ಲಿ ಗಡಿವಿವಾದ ಸಮಸ್ಯೆವಿದ್ದು ಅಧಿವೇಶನದಲ್ಲಿ ಪ್ರಶ್ನೆ ಮಾಡಿ ಸಮಸ್ಯೆಗೆ ಪರಿಹರಿಸಲಾಗುವುದು ಎಂದು ಸಾಗರ್ ಈಶ್ವರ ಖಂಡ್ರೆ, ಹೇಳಿದರು.**

## ಮಾಜಿ ಪ್ರಧಾನಿ ದೇವೇಗೌಡರ ಮಾರ್ಗದರ್ಶನದಲ್ಲಿ ರಾಜ್ಯದಾದ್ಯಂತ ಪಕ್ಷ ಸಂಘಟನೆಗೆ ಸೇವಾದಳ ಬದ್ಧ

• ಚಹಾಸನ


ಉದಯವಾಹಿನಿ ಚಿತ್ರ

ಇಡೀ ದೇಶದಲ್ಲಿ ತೃತೀಯ ರಂಗ ಸ್ಥಾಪನೆ ಮಾಡಿ ಪ್ರಾದೇಶಿಕ ಶಕ್ತಿಗಳನ್ನು ಒಗ್ಗೂಡಿಸಿ ಕರ್ನಾಟಕ ರಾಜ್ಯದಲ್ಲಿ ಜನತಾ ಪಕ್ಷ ಜನತಾ ರಂಗ ಜನತಾದಳ ಕರ್ನಾಟಕ ರಾಜ್ಯದಲ್ಲಿ ಬಹಳಷ್ಟು ಅಭಿವೃದ್ಧಿ ಬಗ್ಗೆ ರೈಲ್ವೆ ನೀರಾವರಿ ಇಂತಹ ಬಹಳಷ್ಟು ಅಭಿವೃದ್ಧಿ ಯೋಜನೆಗಳ ಬಗ್ಗೆ ದೇಶದ ಪ್ರಧಾನ ಮಂತ್ರಿ, ನರೇಂದ್ರ ಮೋದಿಜಿ ಅವರು ದೇವೇಗೌಡಜಿ ರವರ ಸಲಹೆಗಳನ್ನು ಪರಿಗಣಿಸಿ ರಾಜಕೀಯ ಅಭಿವೃದ್ಧಿ ಕಾರ್ಯಗಳನ್ನು ನೀಡುತ್ತಿದ್ದಾರೆ.

ಇಡೀ ದೇಶದಲ್ಲಿ ಪ್ರಪ್ರಥಮ ಬಾರಿಗೆ ಏತಾ ನೀರಾವರಿ ಜಾರಿಗೆ ತಂದಿದ್ದು ಕರ್ನಾಟಕದಲ್ಲಿ ದೇವೇಗೌಡರು ಪ್ರಪ್ರಥಮವಾಗಿ ಲಕ್ಷಾಂತರ ರೈತರಿಗೆ ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ದೇವೇಗೌಡರ ಪ್ರತಿಮೆ ನಿರ್ಮಾಣ ಮಾಡಿರುವುದು

ಇತರೆ ರಾಜ್ಯಗಳಲ್ಲಿಯೂ ದೇವೇಗೌಡರ ನೀರಾವರಿಯ ಕೊಡುಗೆಯನ್ನು ಕಂಡು ಅವರ ಪ್ರತಿಮೆಯನ್ನು ನಿರ್ಮಾಣ ಮಾಡಲಾಗಿದೆ ಅವರ ನೀರಾವರಿ ಕಾಳಜಿ ರೈತರ ಕಾಳಜಿ ನಾವು ಜಾತ್ಯಾತೀತವಾಗಿ ಪಕ್ಷಾತೀತವಾಗಿ ವ್ಯಕ್ತಿಗತವಾಗಿ ಅವರ ಕೆಲಸ ಕಾರ್ಯಗಳನ್ನು ಸ್ಮರಿಸಬೇಕಾಗಿದೆ ಎಂದು ಕರ್ನಾಟಕ ರಾಜ್ಯ ಪ್ರದೇಶ ಜನತಾದಳ ಜಾತ್ಯತೀ ಪಕ್ಷದ ಸೇವಾದಳ ವಿಭಾಗದ ರಾಜ್ಯಾಧ್ಯಕ್ಷರು ಹಾಗೂ ವಕ್ತಾರರು ಆಗಿರುವ ಬಿ ಎನ್ ಬಸವರಾಜ್ ಪಾದಯಾತ್ರೆ ಹೇಳಿದರು.

ರಾಜ್ಯ ಸೇವಾದಳ ಪ್ರಧಾನ ಕಾರ್ಯದರ್ಶಿ ಎಮ್ ವೆಂಕಟೇಶಯ್ಯ, ಯಲಹಂಕ ಹೋಬಳಿ ಅಧ್ಯಕ್ಷರಾದ ಸುರೇಶ್. ಪಕ್ಷದ ಮುಖಂಡರಾದ ಗೋಪಾಲಗೌಡ ಆನಂದ್ ಉಪಸ್ಥಿತರಿದ್ದರು.

**ಜಾತ್ಯತೀತ ಜನತಾದಳ ಪಕ್ಷದ ವತಿಯಿಂದ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ನಡೆದ ಧರ್ಮಸ್ಥಳ ಸತ್ಯ ಯಾತ್ರೆಯಲ್ಲಿ ಪಾಲ್ಗೊಂಡು ತಾಲ್ಲೂಕಿನ ಶ್ರೀ ಕೋಡಿಮಠ ಶ್ರೀಗಳ ಆಶೀರ್ವಾದ ಪಡೆದು ನಂತರ ಬೆಂಗಳೂರಿಗೆ ತೆರಳುವ ವೇಳೆಯಲ್ಲಿ ಉದಯವಾಹಿನಿಯೊಂದಿಗೆ ಮಾತನಾಡಿದ ಅವರು ರಾಜ್ಯದಲ್ಲಿ ಬರುವ ದಿನಗಳಲ್ಲಿ ಎಚ್ ಡಿ ದೇವೇಗೌಡರ ಮಾರ್ಗದರ್ಶನದಲ್ಲಿ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ರಾಜ್ಯದಾದ್ಯಂತ ಜೆಡಿಎಸ್ ಸೇವಾದಳ ದಿಂದ ಪಕ್ಷ ಸಂಘಟನೆಗೆ ಬದ್ಧ ಇರುವುದಾಗಿ ಶೀಘ್ರದಲ್ಲೇ ರಾಜ್ಯದಾದ್ಯಂತ ಪ್ರವಾಸ ಕೈಗೊಂಡು ಸೇವಾದಳದ ಕಾರ್ಯಕರ್ತರು ಸೈನಿಕರಂತೆ ಕೆಲಸ ನಿರ್ವಹಿಸಲಾಗುವುದು**

**-ಬಿ ಎನ್ ಬಸವರಾಜ್** ಕರ್ನಾಟಕ ರಾಜ್ಯ ಪ್ರದೇಶ ಜನತಾದಳ ಜಾತ್ಯಾತೀತ ಪಕ್ಷದ ಸೇವಾದಳ ವಿಭಾಗದ ರಾಜ್ಯಾಧ್ಯಕ್ಷರು ಹಾಗೂ ವಕ್ತಾರರು

## ನೇತಾಜಿ ಭಾರತದ ನಿಜವಾದ ಹೀರೋ

• ಉದಯವಾಹಿನಿ, ಮಂಗಳೂರು


ಉದಯವಾಹಿನಿ ಚಿತ್ರ

ಸ್ವಾತಂತ್ರ್ಯ ಹೋರಾಟದಲ್ಲಿ ಅಪ್ರತಿಮ ಸಾಹಸ ಮೆರೆದ ನೇತಾಜಿ ಸುಭಾಶ್ಚಂದ್ರ ಬೋಸ್ ಮಹಾನ್ ದೇಶಭಕ್ತ. ದೇಶಕ್ಕಾಗಿ ಸರ್ವಸ್ವವನ್ನೂ ತ್ಯಾಗ ಮಾಡಿದ್ದ ನೇತಾಜಿ ಭಾರತದ ನಿಜವಾದ ಹೀರೋ ಎಂದು ಆರೋಗ್ಯ ಮತ್ತು ದ.ಕ. ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರು ವಿವಿ, ಹಂಪನಕಟ್ಟೆ ವಿವಿ ಕಾಲೇಜು ವತಿಯಿಂದ ಮಹಾತ್ಮಾ ಗಾಂಧಿ ಶಾಂತಿ ಪ್ರತಿಷ್ಠಾನ ಸಹಯೋಗದೊಂದಿಗೆ ನಗರದ ವಿವಿ ಕಾಲೇಜು ರವೀಂದ್ರ ಕಲಾಭವನದಲ್ಲಿ ಭಾನುವಾರ ಪ್ರೊ.ಕೆ.ಈ. ರಾಧಾಕೃಷ್ಣ ಅನುವಾದಿಸಿರುವ ನೇತಾಜಿ ಸುಭಾಶ್‌ಚಂದ್ರ ಬೋಸ್ ಅವರ ಮೂರು ಪುಸ್ತಕಗಳ ಲೋಕಾರ್ಪಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಈಗ ಎಲ್ಲಗೂ ತಾವೇ ದೇಶಭಕ್ತರ ಪೋಸು ಕೊಡುತ್ತಾರೆ, ಆದರೆ ಎಲ್ಲವನ್ನೂ ತ್ಯಾಗ ಮಾಡಿದ ನೇತಾಜಿ ಮಾತ್ರ ಅಪ್ಪಟ ದೇಶಭಕ್ತರಾಗಿದ್ದರು ಎಂದು ದಿನೇಶ್ ಗುಂಡೂರಾವ್ ಹೇಳಿದರು.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರಾಗಿ ಎರಡನೇ ಅವಧಿಗೆ ಸ್ಪರ್ಧಿಸಿದ್ದ ನೇತಾಜಿ ಅವರು ಮಹಾತ್ಮಾ ಗಾಂಧಿ ಅವರ ಅಭ್ಯರ್ಥಿಯನ್ನೇ ಸೋಲಿಸಿ ಗೆದ್ದಿದ್ದರು. ಮಹಾತ್ಮಾ ಗಾಂಧೀಜಿ ಅವರಿಗೆ 'ರಾಷ್ಟ್ರಪಿತ' ಎಂದು ಮೊದಲು ಸಂಬೋಧಿಸಿದ್ದು ನೇತಾಜಿ. ಅತಿ ಸಣ್ಣ ವಯಸ್ಸಿನಲ್ಲೇ ಅಸಾಮಾನ್ಯ ಸಾಧನೆ ಮಾಡಿದ ಅವರ ಜೀವನಯಾತ್ರೆ ಎಲ್ಲರಿಗೂ ಸ್ಫೂರ್ತಿದಾಯಕ ಎಂದರು.

### ಪ್ರೊ. ಸುಮಂತ್ರ ಬೋಸ್ ಭಾಗಿ

**ಕಾರ್ಯಕ್ರಮದಲ್ಲಿ ನೇತಾಜಿ ಸುಭಾಶ್ಚಂದ್ರ ಬೋಸ್ ಅವರ ಅಣ್ಣ ಶರತ್‌ಚಂದ್ರ ಬೋಸ್ ಅವರ ಮೊಮ್ಮಗ, ಕೋಲ್ಕತ್ತಾದ ನೇತಾಜಿ ಸುಭಾಶ್ಚಂದ್ರ ಬೋಸ್ ಟ್ರಸ್ಟ್‌ನ ನಿರ್ದೇಶಕ ಪ್ರೊ. ಸುಮಂತ್ರ ಬೋಸ್ ಭಾಗವಹಿಸಿದ್ದರು. ನೇತಾಜಿ ಅವರ ಕುರಿತಾದ ಮೂರು ಪುಸ್ತಕಗಳಾದ ಭಾರತೀಯ ಹೋರಾಟ, ಓರ್ವ ಭಾರತೀಯ ಯಾತ್ರಿಕ ಒಂದು ಅಪೂರ್ಣ ಆತ್ಮಕಥೆ', ಅಸಾಮಾನ್ಯ ದಿನಚರಿಯನ್ನು ಅವರು ಬಿಡುಗಡೆಗೊಳಿಸಿದರು.**

ಈ ವೇಳೆ ಮಾತನಾಡಿದ ಪ್ರೊ. ಸುಮಂತ್ರ ಬೋಸ್, ನೇತಾಜಿ ಅವರು ಆಳವಾದ ಚಿಂತಕ , ತತ್ವಜ್ಞಾನಿಯಾಗಿದ್ದರು. ಸ್ವತಂತ್ರ ಭಾರತ ಹೇಗಿರಬೇಕು ಎಂಬ ಬಗ್ಗೆ ಅವರಲ್ಲಿ ಸ್ಪಷ್ಟವಾದ ವಿಚಾರಗಳಿದ್ದವು ಎಂದರು.

## ಅಂಜುಮನ್ ಎ ಇಸ್ಲಾಂ ಸಂಸ್ಥೆ ಚುನಾವಣೆ ತ್ವರಿತ ನಡೆಸುವ ಭರವಸೆ

• ಉದಯವಾಹಿನಿ ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಮುದ್ದೇಬಿಹಾಳ ಅಂಜುಮನ್ ಎ ಇಸ್ಲಾಂ ಸಂಸ್ಥೆಯ ಚುನಾವಣೆಗಳನ್ನು ತ್ವರಿತವಾಗಿ ನಡೆಸಬೇಕೆಂದು ಆಗ್ರಹಿಸಿ ಹೋರಾಟಗಾರರು ಆಗಸ್ಟ್ 29ರಿಂದ ತಹಶೀಲ್ದಾರ ಕಚೇರಿ ಆವರಣದಲ್ಲಿ ಧರಣಿ ಸತ್ಯಾಗ್ರಹ ಆರಂಭಿಸಿದ್ದರು.

ಸೆಪ್ಟೆಂಬರ್ 1ರಂದು ಧರಣಿ ಸ್ಥಳಕ್ಕೆ ಆಗಮಿಸಿದ ಶಾಸಕ ಹಾಗೂ ಕೆಎಸ್ಡಿ ನಿಗಮ ಅಧ್ಯಕ್ಷ ಸಿ.ಎಸ್ ನಾಡಗೌಡ ಅಪ್ಪಾಜಿ ಮತ್ತು ತಹಶೀಲ್ದಾರ ಕೀರ್ತಿ ಚಾಲಕ ಅವರು ಹೋರಾಟಗಾರರೊಂದಿಗೆ ಮಾತುಕತೆ ನಡೆಸಿದರು. ಈ ವೇಳೆ ಒಂದು ತಿಂಗಳೊಳಗೆ ಚುನಾವಣೆಯನ್ನು ನಡೆಸುವುದಾಗಿ ಭರವಸೆ ನೀಡಲಾಯಿತು. ಇದರಿಂದ ಹೋರಾಟಗಾರರು ತಮ್ಮ ಸತ್ಯಾಗ್ರಹವನ್ನು ಹಿಂತೆಗೆದುಕೊಂಡರು.


ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ನಾಡಗೌಡ ಅಪ್ಪಾಜಿ ಅವರು, ವಸತಿ ಮತ್ತು ವಕ್ಫ ಅಲ್ಪಸಂಖ್ಯಾತರ ಕಲ್ಯಾಣ ಸಚಿವರೊಂದಿಗೆ ಚರ್ಚಿಸಿ ಮುದ್ದೇಬಿಹಾಳ ಅಂಜುಮನ್ ಎ ಇಸ್ಲಾಂ ಸಂಸ್ಥೆಯ ಚುನಾವಣೆ ಪ್ರಕ್ರಿಯೆ ಶೀಘ್ರದಲ್ಲಿ ಪೂರ್ಣಗೊಳ್ಳುವಂತೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

**ಧರಣಿ ಸತ್ಯಾಗ್ರಹ ಹಿಂದಕ್ಕೆ**

ತಹಶೀಲ್ದಾರ ಕೀರ್ತಿ ಚಾಲಕ ಅವರು, ವಿಜಯಪುರ ವಕ್ಫ ಅಲ್ಪಸಂಖ್ಯಾತರ ಅಧಿಕಾರಿಗಳು ಮುದ್ದೇಬಿಹಾಳ ಅಂಜುಮನ್ ಇಸ್ಲಾಂ ಕಮಿಟಿಯ ಆಡಳಿತಾಧಿಕಾರಿಗಳು ಒಂದು ತಿಂಗಳ ಅವಧಿ ಕೇಳಿದ್ದಾರೆ, ಆ ಅವಧಿಯೊಳಗೆ ಚುನಾವಣೆ ನಡೆಸುವಂತೆ ಸೂಚನೆ ನೀಡಿರುವುದಾಗಿ ಸ್ಪಷ್ಟಪಡಿಸಿದರು. ಈ ಹಿನ್ನೆಲೆಯಲ್ಲಿ ಧರಣಿ ನಿರತರಾದ ಹೋರಾಟಗಾರರು ತಮ್ಮ ಸತ್ಯಾಗ್ರಹ ಹಿಂತೆಗೆದುಕೊಂಡರು.

## ಜಲಾಶಯ ಹಾಗೂ ಕೆರೆಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆಗೆ: ಶಾಸಕ ಡಾ.ಅವಿನಾಶ ಜಾಧವ ಒತ್ತಾಯ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿ ಯೋಜನೆಯ ನಾಗರಾಳ ಜಲಾಶಯ ಮತ್ತು ಸಾಲೆಬೀರನಳ್ಳಿಯ ಸಣ್ಣ ನೀರಾವರಿ ಇಲಾಖೆಯ ಕೆರೆಯನ್ನು ಶಾಸಕ ಡಾ.ಅವಿನಾಶ ಜಾಧವ ಅವರು ಭೇಟಿ ನೀಡಿ ವಿಕ್ಷಿಸಿ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ರೈತರಿಗೆ ಅನುಕೂಲವಾಗುವಂತೆ ನೀರಿನ ಪ್ರಮಾಣ ಮತ್ತು ಕಾಲುವೆಗಳ ದುರಸ್ತಿ ಕಾರ್ಯ ಸೇರಿದಂತೆ ಅಭಿವೃದ್ಧಿಗಾಗಿ ಅನುದಾನಕ್ಕಾಗಿ ಸರ್ಕಾರಕ್ಕೆ ಪತ್ರ ಬರೆದು ಒತ್ತಾಯಿಸಲಾಗಿದೆ ಎಂದು ಶಾಸಕ ಡಾ.ಅವಿನಾಶ ಜಾಧವತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿ, ತಾಪಂ.ಇಓ ಸಂತೋಷ ಚವ್ಹಾಣ, ಪಿಡಬ್ಲ್ಯೂಡಿ ಎಇಇ ಅಂಬರಾಯ ಪಾಟೀಲ, ಕೃಷಿ ವೀರಶೆಟ್ಟಿ ರಾಠೋಡ್, ತೋಟಗಾರಿಕೆ ರಾಜಕುಮಾರ, ಟಿಹೆಚ್‌ಓ ಮಹ್ಮದ್ ಗಫಾರ್, ಸಿಡಿಪಿಓ ಸವಿತಾ ಮಡಿವಾಳ, ಶಿಕ್ಷಣಾಧಿಕಾರಿ ಲಕ್ಷ್ಮಯ್ಯ, ಅನೇಕರಿದ್ದರು.

## ಕಾಮಗಾರಿಗೆ ಗುದ್ದಲಿ ಪೂಜೆ

• ಉದಯವಾಹಿನಿ, ಚನ್ನಮ್ಮನ ಕಿತ್ತೂರು

ಅಭಿವೃದ್ಧಿ ಕೆಲಸ ಕಾರ್ಯಗಳಿಗೆ ಎಲ್ಲರೂ ಕೈಜೋಡಿಸುವುದರ ಜೊತೆಯಲ್ಲಿ ಗುಣಮಟ್ಟದ ಕಾಮಗಾರಿಗಳು ನಡೆಯುವಂತೆ ನೋಡಿ ಕೊಳ್ಳಬೇಕು ಎಂದು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು. ತಾಲ್ಲೂಕಿನ ದೇವಗಾಂವ ಗ್ರಾಪಂ ವ್ಯಾಪ್ತಿಯ ಹೊಸೂರಿನಿಂದ ದೇಗಲೋಳ್ಳಿಗೆ ಸಂಪರ್ಕಿಸುವ ರಸ್ತೆ. ಮತ್ತು ಶಿವಾನಂದ ಮಠದ ಕಾಂಕ್ರೀಟ್ ರಸ್ತೆ ಹಾಗೂ ಸ್ಮಶಾನಕ್ಕೆ ಕಾಂಕ್ರೀಟ್ ರಸ್ತೆ ಮತ್ತಿತರ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ನಾನು ಕ್ಷೇತ್ರಾಧ್ಯಂತ ವಿವಿಧ ಕಾಮಗಾರಿಗಳನ್ನು ಪ್ರಾರಂಭಿಸಿದ್ದೇನೆ ಸಾರ್ವಜನಿಕರು ಅಭಿವೃದ್ಧಿ ಕೆಲಸಗಳಿಗೆ ಮುಕ್ತ ಮನಸ್ಸಿನಿಂದ ಸಹಕಾರ ನೀಡಿದರೆ ಮಾತ್ರ ಅಭಿವೃದ್ಧಿ ಕೆಲಸ ಕಾರ್ಯಗಳು ನಡೆಯಲು ಸಾಧ್ಯ. ನಿಮ್ಮ ಸಹಕಾರ ಬಹಳ ಮುಖ್ಯ. ಕಾಮಗಾರಿ ಗುಣಮಟ್ಟದ ವಿಷಯದಲ್ಲಿ ಯಾವುದೇ ರಾಜಿಯಲ್ಲ ಪ್ರತಿಯೊಂದು ಕಾಮಗಾರಿ ಪ್ರಗತಿಯನ್ನು ಖುದ್ದಾಗಿ ಪರೀಕ್ಷಿಸಿ ಬಿಲ್ಲುಗಳ ಮಂಜೂರಾತಿಗೆ ಶಿಫಾರಸ್ಸು ಮಾಡಲಾಗುವುದೆಂದರು.

## ಬಸವ ಜಯಂತಿಯನ್ನು ಸರಕಾರ ಬಸವನ ಬಾಗೇವಾಡಿಯಲ್ಲಿ ಆಚರಿಸಲಿ

• ಉದಯವಾಹಿನಿ ಬಸವನಬಾಗೇವಾಡಿ


ಉದಯವಾಹಿನಿ ಚಿತ್ರ

ಬಸವ ಸಂಸ್ಕೃತಿ ಅಭಿಯಾನದ ಹಿನ್ನೆಲೆ ಪಟ್ಟಣದ ಬಸವೇಶ್ವರ ದೇವಾಲಯದ ಸಿಬಿಎಸ್‌ಸಿ ಶಾಲಾ ಆವರಣದ ಫ ಗು ಹಳಕಟ್ಟಿ ವೇದಿಕೆಯಲ್ಲಿ ವಿವಿಧ ಮಠಾಧೀಶರು ಶಾಲಾ ವಿದ್ಯಾರ್ಥಿಗಳೊಂದಿಗೆ ಹಾಗೂ ಸಾರ್ವಜನಿಕರೊಂದಿಗೆ ಬಸವ ಸಂಸ್ಕೃತಿಯ ಸಂವಾದ ಕಾರ್ಯಕ್ರಮ ನಡೆಯಿತು .

ಭಾಲ್ಕಿ ಬಸವಲಿಂಗಪಟ್ಟದೇವರು ಮಾತನಾಡಿ ಕರ್ನಾಟಕ ಸರ್ಕಾರ ಬಸವಣ್ಣವರನ್ನು ನಾಡಿನ ಸಂಸ್ಕೃತಿಕ ನಾಯಕ ಎಂದು ಘೋಷಿಸಿದಂತೆ ಸರಕಾರ ಪ್ರತಿ ವರ್ಷ ಬಸವ ಜಯಂತಿಯಂದು ರಾಜ್ಯದ ಬಸವ ಜಯಂತಿ ಉತ್ಸವವನ್ನು ಬಸವನ ಬಾಗೇವಾಡಿಯಲ್ಲಿ ಆಚರಿಸಬೇಕು ಅಂದಾಗ ಬಸವನ ಬಾಗೇವಾಡಿಗೆ ಒಂದು ಐತಿಹಾಸಿಕ ಮೆರಗು ನೀಡಿದಂತಾಗುತ್ತದೆ ಎಂದು ಮಾತನಾಡಿದರು ಸಾಣೆಹಳ್ಳಿ ಪಂಡಿತಾರಾಧ್ಯ ಸ್ವಾಮೀಜಿ ಮಾತನಾಡಿ 12ನೇ ಶತಮಾನದಲ್ಲಿ ಬಸವಾದಿ ಶಿವಶರಣರು ಅನುಭವ ಮಂಟಪ ಮೂಲಕ ಸಂವಾದ ಆರಂಭಿಸಿದರು ಆದರೆ ಇಂದು ಸಂವಾದ ಕಡಿಮೆಯಾಗಿ ವಾದ ವಿವಾದಗಳು ನಡೆಯುತ್ತಿವೆ ಸಂವಾದಗಳು ನಡೆದಾಗ ಮಾತ್ರ ವಿಷಯದ ಬಗ್ಗೆ ಆಳವಾದ ಜ್ಞಾನ ಮಕ್ಕಳಿಗೆ ಬರುತ್ತದೆ ಎಂದರು.

ವಿದ್ಯಾರ್ಥಿಗಳಾದ ತಾವು ವಿದ್ಯಾವಂತರಾಗಿದ್ದೇವೆ ಎಂದ ಮಾತ್ರಕ್ಕೆ ಸಾಲದು ತಾವು ವಿವೇಕಸ್ಥರಾಗಿ ಬಾಳಬೇಕು ವಿದ್ಯೆ ನಮ್ಮಲ್ಲಿ ಅಹಂಕಾರ ಸ್ವಾರ್ಥ ತೊಡೆದು ಹಾಕಿ ಸಮಾಜಮುಖಿ ಕೆಲಸಕ್ಕೆ ಪ್ರೇರಣೆ ನೀಡಬೇಕು ಎಂದು ಮಾತನಾಡಿದರು. ಗದುಗಿನ ತೋಂಟದ ಸಿದ್ದರಾಮ ಸ್ವಾಮೀಜಿ ದೇವರಕ್ಕಿಂತ ಹಿರಿದಾದದ್ದು ಯಾವುದು ಎಂದರೆ ಅದು ಕಾಯಕ ಕಾಯಕದ ಜೊತೆಗೆ ಪರಿಶ್ರಮ ಸಂಸ್ಕೃತಿಯನ್ನು ಗೌರವಿಸುವುದು ಅದುವೇ ಬಸವ ಸಂಸ್ಕೃತಿ ತಾಲ್ಲೂಕಿನ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ವೇದಿಕೆ ಮೇಲೆ ಆಶೀನರಾದ ಸ್ವಾಮೀಜಿಯವರು ಉತ್ತರಿಸಿದರು.

## ಮಳೆ ಹಾನಿ: ಬೆಳೆ ಪರಿಶೀಲನೆ

• ಉದಯವಾಹಿನಿ, ನವಲಗುಂದ

ತಾಲ್ಲೂಕಿನಾದ್ಯಂತ ಇತ್ತೀಚೆಗೆ ಸುರಿದ ಮಳೆಯಿಂದಾಗಿ ಹಾನಿಗೊಳಗಾದ ಬೆಳೆಗಳನ್ನು ರಾಜ್ಯ, ಕಂದಾಯ, ಕೃಷಿ ಹಾಗೂ ತೋಟಗಾರಿಕಾ ಇಲಾಖೆಯ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು.

ತಹಶೀಲ್ದಾರ ಸುಧೀರ ಸಾಹುಕಾರ ತಂಡದ ಅಧಿಕಾರಿಗಳನ್ನು ತಾಲ್ಲೂಕಿನ ಖನ್ನೂರು, ಕಾಲವಾಡ, ಕರ್ಲವಾಡ, ಆರೆಕುರಟ್ಟಿ, ನವಲಗುಂದ, ತಡಹಾಳ ಗ್ರಾಮಗಳ ಜಮೀನುಗಳಿಗೆ ಭೇಟಿ ಕೊಟ್ಟು ಮಳೆಯಿಂದ ಹಾನಿಗೊಳಗಾದ ಉದ್ದು, ಹೆಸರು, ಮೆಣಸಿಣಕಾಯಿ ಸೇರಿದಂತೆ ಇತರೆ ಬೆಳಗಳನ್ನು ಪರಿಶೀಲಿಸಿದರು. ನಂತರ ಸರಕಾರಕ್ಕೆ ವರದಿ ಸಲ್ಲಿಸಲಾಗುವುದೆಂದು ತಂಡದ ಅಧಿಕಾರಿ ಆರ, ಮಂಜುಳಮ್ಮ ಸಹಾಯಕ ಕೃಷಿ ನಿರ್ದೇಶಕ ರವೀದ್ರಗೌಡ ಪಾಟೀಲ್, ತೋಟಗಾರಿಕೆ ಇಲಾಖೆಯ ಯೋಗೇಶ ಕಿಲಾರಿ, ಸಂಜೀವಕುಮಾರ ಗುಡಿಮನಿ, ಗ್ರಾಮ ಲೆಕ್ಕಾಧಿಕಾರಿಗಳಾದ ರಾಜು ನಾಯ್ಕ, ಉಮೇಶ ನವಲಗುಂದ ಮತ್ತಿತರರು ಉಪಸ್ಥಿತರಿದ್ದರು.

## ಕೋರ್ಟ್ ಆದೇಶ: ಎಸಿ ವಾಹನ ಜಪ್ತಿ

• ಉದಯವಾಹಿನಿ, ಜಮಖಂಡಿ

ಭೂಸ್ವಾಧೀನ ಪರಿಹಾರ ನೀಡದ ಹಿನ್ನೆಲೆಯಲ್ಲಿ ನ್ಯಾಯಾಲಯವು ಉಪವಿಭಾಗಾಧಿಕಾರಿಗಳ ಪಿಠೋಪಕರಣ ಜಪ್ತಿ ಮಾಡಲು ಆದೇಶ ಮಾಡಿದೆ. ನ್ಯಾಯಾಲಯದ ಆದೇಶದ ಮೇರೆಗೆ ನ್ಯಾಯವಾದಿ ಎಲ್. ಎನ್. ಸುನಗದ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಅವರ ಓಡಾಡುವ ವಾಹನವನ್ನು ಜಪ್ತಿ ಮಾಡಿದ ಘಟನೆ ನಡೆದಿದೆ. ಮುಧೋಳ ತಾಲ್ಲೂಕಿನ ಬೆಳಗಲಿ ಗ್ರಾಮದ ಬಾಳಪ್ಪ ನಿಂಗಪ್ಪ ಕಪ್ಪಲಗುದ್ದಿ ದರೆಪ್ಪ ಮುತ್ತಪ್ಪ ಕಪ್ಪಲಗುದ್ದಿ ಎಂಬುವರಿಗೆ ಸೇರಿದ 4.ಎಕರೆ 28 ಗುಂಟೆ ಜಮೀನನ್ನು ಕೆರೆ ನಿರ್ಮಾಣಕ್ಕೆಂದು 2005-06 ರಲ್ಲಿ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು.

ಘಟನೆ ನಡೆದು ಹಲವು ವರ್ಷ ಕಳೆದರೂ ಈ ವರೆಗೂ ಸರ್ಕಾರ ಪರಿಹಾರ ನೀಡಿಲ್ಲ. ಆದ್ದರಿಂದ ಬಾಳಪ್ಪ ಮತ್ತು ದರೆಪ್ಪ ಕಪ್ಪಲಗುದ್ದಿ ಎಂಬ ರೈತರು ತಮ್ಮ ಜಮೀನಿಗೆ ಪರಿಹಾರ ದೊರಕಿಸಿಕೊಡುವಂತೆ ನ್ಯಾಯಲಕ್ಕೆ ಮನವಿ ಸಲ್ಲಿಸಿದ್ದರು. ಪ್ರಕರಣದ ತನಿಖೆ ನಡೆಸಿದ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶ ಸುಶಾಂತ ಮಹಾವೀರ ಚೌಗಲೇ ಅವರು ಬಡ್ಡಿ ಸಮೇತ 43.33,306ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಆದೇಶ ನೀಡಿದ್ದರು. ಆದರೆ ಇದುವರೆಗೂ ಪರಿಹಾರ ನೀಡದ ಹಿನ್ನೆಲೆಯಲ್ಲಿ ಉಪವಿಭಾಗಾಧಿಕಾರಿಗಳ ಕಚೇರಿಯ ಚರಾಸ್ತಿ ಮುಟ್ಟುಗೋಲು ಹಾಕಿಕೊಳ್ಳಲು ಕೋರ್ಟ್ ಆದೇಶನೀಡಿತ್ತು.

ಡಾ.ಶಿವರಾಜ ಪಾಟೀಲ್ ಕೈಗುಣ ಚೆನ್ನಾಗಿದೆ. ಮಕ್ಕಳು ಬೇಗ ಆರಾಮ.. ಸಹನಾ ಆಸ್ಪತ್ರೆಗೆ ಮುಗಿಬಿದ್ದ ತಂದೆ -ತಾಯಂದಿರು

# ತಂದೆ ತಾಯಂದಿರು ಮಕ್ಕಳ ಬಗ್ಗೆ ಎಚ್ಚರಿಕೆವಹಿಸಬೇಕು: ಡಾ.ಶಿವರಾಜ ಪಾಟೀಲ್


• ಉದಯವಾಹಿನಿ ಸಿಂಧನೂರು

**ಕಲ್ಯಾಣ ಕರ್ನಾಟಕದಲ್ಲಿ ಭಾಗದಲ್ಲಿ ಮಕ್ಕಳ ಆಸ್ಪತ್ರೆಗಳೇ ಇರಲಿಲ್ಲ.ಅಗ ಡಾ. ಶಿವರಾಜ ಪಾಟೀಲ್ ಅವರು ಸಿಂಧನೂರು ನಗರದಲ್ಲಿ ಮೊಟ್ಟ ಮೊದಲು ಬಾರಿಗೆ ಮಕ್ಕಳ ಸಹನಾ ಆಸ್ಪತ್ರೆಯನ್ನು ಹುಟ್ಟು ಹಾಕುತ್ತಾರೆ ಇದಕ್ಕೆ ಸುಮಾರು 30 ವರ್ಷಗಳು ಕಾಲ ಇತಿಹಾಸವನ್ನು ಹೊಂದಿದ್ದು. ಡಾ. ಶಿವರಾಜ ಪಾಟೀಲ್‌ನವರು ಸಾರ್ಥಕ ವೈದ್ಯಕೀಯ ಸೇವೆಯ ಎಂದರೆ ತಪ್ಪಾಗಲಾರದು ಎಂದು ಸಾರ್ವಜನಿಕರು ಕೊಂಡಾಡುತ್ತಾರೆ.**

**ಸಾರ್ಥಕ ವೈದ್ಯಕೀಯ ಸೇವೆ**



ಉದಯವಾಹಿನಿ ಚಿತ್ರ



ರಾಜ್ಯದಲ್ಲಿ ಇತ್ತೀಚಿನ ಹವಾಮಾನ ವೈಪರೀತ್ಯದಿಂದಾಗಿ ಮಕ್ಕಳಲ್ಲಿ ಶೀತ. ಜ್ವರ. ಕೆಮ್ಮು ವಿವಿಧ ರೀತಿಯ ಸೋಂಕುಗಳು ಕಾಣಿಸಿಕೊಳ್ಳುತ್ತವೆ. ಆದ್ದರಿಂದ ತಂದೆ ತಾಯಂದಿರು ಮಕ್ಕಳ ಬಗ್ಗೆ ಎಚ್ಚರಿಕೆವಹಿಸಬೇಕು ಎಂದು ಸಹನಾ ಆಸ್ಪತ್ರೆಯ ವೈದ್ಯರಾದ ಡಾ. ಶಿವರಾಜ ಪಾಟೀಲ್ ಅವರು ತಿಳಿಸಿದರು.

ಸಹನಾ ಆಸ್ಪತ್ರೆಯ ಡಾ.ಶವರಾಜ ಪಾಟೀಲ್ ಅವರು ಕೈಗುಣದಿಂದ ನಮ್ಮ ಮಕ್ಕಳು ಬೇಗ ಗುಣಮುಖರಾಗುತ್ತಾರೆ ತಂದೆ ತಾಯಿಗಳ ಹೇಳಿಕೆ ನಗರದ ಸಹನಾ ಆಸ್ಪತ್ರೆಯ ವೈದ್ಯರು ಕೈಗುಣ ಚೆನ್ನಾಗಿದೆ ಮಕ್ಕಳ ಜ್ವರ ಕೆಮ್ಮು ಶೀತ ವಿವಿಧ ಸೋಂಕುಗಳು ಕಂಡು ಬಂದರೆ ತಕ್ಷಣ ಸಹನಾ ಆಸ್ಪತ್ರೆಗೆ ಬಂದು ಎಷ್ಟು ಗಂಟೆ ಯಾದರೂ ಸಹ ಸಹನೆಯಿಂದ ಮಕ್ಕಳನ್ನು ಚೆನ್ನಾಗಿ ನೋಡುತ್ತಾರೆ.

ಮಕ್ಕಳು ಸಹ ಬೇಗ ಗುಣಮುಖರಾಗುತ್ತಾರೆ ಹಾಗಾಗಿ ಇಲ್ಲಿಗೆ ಬರುತ್ತವೆ. ಟೈಮ್ ನೋಡಿದೆ ಮಕ್ಕಳನ್ನು ಸರಿಯಾಗಿ ನೋಡಿ ಚಿಕಿತ್ಸೆ ನೀಡುತ್ತಾರೆ. ಎಂದು ಮಕ್ಕಳ ತಂದೆ ತಾಯಿಗಳು ಹೇಳಿಕೆಯಾಗಿದೆ.

**ವೈದ್ಯರ ಕೈಗುಣ ಚೆನ್ನಾಗಿದೆ**

ದಕ್ಷಿಣ ಆಫ್ರಿಕಾ ಏಷ್ಯಾದಲ್ಲಿ ಅತಿ ಹೆಚ್ಚು ಟ್ರ್ಯಾಕ್ಟರ್ ಮಾರಾಟದಲ್ಲಿ ಜವಳಗೇರಾ ಹೋಬಳಿಯಲ್ಲಿ ಸುಮಾರು 7 ಸಾವಿರ ಸಿಎಸ್‌ಎಫ್ ಫಾರಂ ಹೊಂದಿರುವ ದೊಡ್ಡ ವಾಣಿಜ್ಯೋದ್ಯಮಿ ಸಿಂಧನೂರು ತಾಲ್ಲೂಕು ಎಂದು ಹೆಸರಾಗಿದ್ದು. ಆದರೆ ತಾಲ್ಲೂಕಿನಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಕೊರತೆ ಕಂಡು ಬಂದಿತ್ತು ಆ ಸಂದರ್ಭದಲ್ಲಿ ಡಾ. ಶಿವರಾಜ ಪಾಟೀಲ್ ಅವರು ಸಂಜೀವಿನಿಯಾಗಿ ಬಂದು. ಸುಮಾರು ಲಕ್ಷಾಂತರ ರೋಗಿಗಳಿಗೆ ಚಿಕಿತ್ಸೆ ನೀಡುವುದರ ಮೂಲಕ ಆಸರೆಯಾದರು.

ಸಿಂಧನೂರು ಜಿಲ್ಲೆಯನ್ನಾಗಿ ಮಾಡಲು ಡಾ.ಶಿವರಾಜ ಪಾಟೀಲ್ ಹೋರಾಟದಲ್ಲಿ ಸಲಹೆ ಸೂಚನೆಗಳನ್ನು ನೀಡಿದರು. ಸಾಮಾಜಿಕ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಸಿಂಧನೂರು ತಾಲ್ಲೂಕು ಜಿಲ್ಲೆಯನ್ನಾಗಿ ಮಾಡಬೇಕೆಂದು ಹೋರಾಟದಲ್ಲಿ ಭಾಗವಹಿಸಿ ಸಲಹೆ ಸೂಚನೆಗಳು ನೀಡುತ್ತಿದ್ದರು ಹಾಗಾಗಿ ಮುಂದೆ ದಿನಮಾನಗಳಲ್ಲಿ ಸಿಂಧನೂರು ಜಿಲ್ಲೆಯಾಗಿ ಪರಿವರ್ತನೆಗೊಳ್ಳಲಿ. ಎಂದು ಸಿಂಧನೂರು ಜನಪ್ರತಿನಿಧಿಗಳು ಹಾಗೂ ಜನರು ಆಸೆಯಾಗಿದೆ.

ವಿವಿಧ ತಾಲ್ಲೂಕುಗಳಿಂದ ಜನರು ಸಹನಾ ಆಸ್ಪತ್ರೆಗೆ ಬರುತ್ತಾರೆ ಆಗಮನ ರಾಯಚೂರು ಜಿಲ್ಲೆಯ ದೇವದುರ್ಗ ಲಿಂಗಸುಗೂರು. ಮಸ್ಕಿ . ಕವಿತಾಳ. ಮಾನ್ವಿ. ಸಿರುಗುಪ್ಪ. ಕಾರಟಗಿ ಸೇರಿ ಸುತ್ತ ಮುತ್ತಲಿನ ಜನರು ತಮ್ಮ ಮಕ್ಕಳನ್ನು ಕರೆದುಕೊಂಡು ಸಿಂಧನೂರು ಸಹನಾ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆದುಕೊಳ್ಳುತ್ತಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಸರಿಯಾಗಿ ಡಾಕ್ಟರ್ ಗಳು ಇದ್ದರೂ ಸಮಯಕ್ಕೆ ಸರಿಯಾಗಿ ಬಾರದಂತೆ ಡಾಕ್ಟರ್‌ಗಳು ಮತ್ತು ಆಸ್ಪತ್ರೆಯಲ್ಲಿ ಮಕ್ಕಳಿಗೆ ಯಾವುದೇ ವ್ಯವಸ್ಥೆ ಇಲ್ಲದೆ ಜನರು ಶುಲ್ಕವನ್ನು ಗಮನಿಸಿದ ಖಾಸಗಿ ಆಸ್ಪತ್ರೆಗೆ ಮುಗಿಬಿದ್ದಿದ್ದಾರೆ.

● ಭಾರತದ ಮೇಲೆ ಮತ್ತೆ ಕೋಪ ಪ್ರದರ್ಶಿಸಿದ ಅಮೆರಿಕ ಅಧ್ಯಕ್ಷ, ಏಕಪಕ್ಷೀಯ ಸಂಬಂಧ ಬೇಡವಂತೆ

# ಭಾರತ, ರಷ್ಯಾ ಮತ್ತು ಚೀನಾ ದೋಸ್ತಿ ಕಂಡು ದಂಗಾದ ಟ್ರಂಪ್

**ವಾಷಿಂಗ್ಟನ್ ಡಿಸಿ:** ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ)ದ ಶೃಂಗಸಭೆಯಲ್ಲಿ, ಭಾರತ, ಚೀನಾ ಮತ್ತು ರಷ್ಯಾದ ಸ್ನೇಹ ಸಂಬಂಧವನ್ನು ಕಂಡು, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಕ್ಷರಶಃ ಕುದ್ದು ಹೋಗಿದ್ದಾರೆ. ಭಾರತದೊಂದಿಗಿನ ತಮ್ಮ ದೇಶದ ಸಂಬಂಧವನ್ನು ಏಕಪಕ್ಷೀಯ ಎಂದು ಕರೆಯುವಷ್ಟರ ಮಟ್ಟಿಗೆ ಟ್ರಂಪ್ ಕೋಪಗೊಂಡಿದ್ದಾರೆ.



ಟಿಯಾಂಜಿನ್‌ನಲ್ಲಿ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಒಗ್ಗಟ್ಟು ಪ್ರದರ್ಶಿಸಿದ್ದು, ಈ ಒಗ್ಗಟ್ಟನ್ನು ಡೊನಾಲ್ಡ್ ಟ್ರಂಪ್ ಅವರಿಗೆ ಅರಗಿಸಿಕೊಳ್ಳಲಾಗುತ್ತಿಲ್ಲ. ಇದೇ ಕಾರಣಕ್ಕೆ ಎಸ್‌ಸಿಒ ಸಭೆ ಮುಕ್ತಾಯವಾದ ಕೆಲವೇ ಗಂಟೆಗಳಲ್ಲಿ, ಅಮೆರಿಕ ಅಧ್ಯಕ್ಷರು ಈ ಬೆಳವಣಿಗೆಗಳ ಬಗ್ಗೆ ತಮ್ಮ ಅಸಮಾಧಾನವನ್ನು ಹೊರಹಾಕಿದ್ದಾರೆ. ಎಸ್‌ಸಿಒ ಶೃಂಗಸಭೆ ವೇದಿಕೆಯಲ್ಲಿ ತ್ರಿಮೂರ್ತಿಗಳ ಆತ್ಮೀಯ ಮಿಲನ ಅಮೆರಿಕ ಅಧ್ಯಕ್ಷರ ನಿದ್ದೆಗೆಡಿಸಿದೆ. ಭಾರತ-ಅಮೆರಿಕ ಸಂಬಂಧ ಏಕಪಕ್ಷೀಯವಾಗಿದೆ ಎಂದು ಟೀಕಿಸಿರುವ ಡೊನಾಲ್ಡ್ ಟ್ರಂಪ್, ಭಾರತ ಅಮೆರಿಕದಿಂದ ಲಾಭವನ್ನು ಮಾತ್ರ ನಿರೀಕ್ಷಿಸುತ್ತಿದೆ ಎಂದು ದೂಷಿಸಿದ್ದಾರೆ. ಮುಂದುವರೆದು,

**ಹೆಚ್ಚುವರಿ ಸುಂಕಗಳಿಗೆ ಸಮರ್ಥನೆ**

ದ್ವಿಪಕ್ಷೀಯ ವ್ಯಾಪಾರ ಸಂಬಂಧದಲ್ಲಿ ಇರುವ ಅಸಮಾನತೆಯನ್ನು ಹೋಗಲಾಡಿಸಲೆಂದೇ ಭಾರತದ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸಲಾಗುತ್ತಿದೆ ಎಂದು ಅಮೆರಿಕ ಅಧ್ಯಕ್ಷರು ಸ್ಪಷ್ಟಪಡಿಸಿದ್ದಾರೆ. ಮುಂದುವರೆದರು, ಭಾರತ-ಯುಎಸ್ ವ್ಯಾಪಾರವನ್ನು ಕೆಲವೇ ಜನರು ಅರ್ಥಮಾಡಿಕೊಂಡಿದ್ದಾರೆ. ಭಾರತವು ನಮ್ಮೊಂದಿಗೆ ಅಪಾರ ಪ್ರಮಾಣದ ವ್ಯವಹಾರವನ್ನು ಮಾಡುತ್ತದೆ. ಅವರು ನಮಗೆ ಬೃಹತ್ ಪ್ರಮಾಣದ ಸರಕುಗಳನ್ನು ಮಾರಾಟ ಮಾಡುತ್ತಾರೆ. ಆದರೆ ನಾವು ಅವರೊಂದಿಗೆ ಕಡಿಮೆ ವ್ಯಾಪಾರ ಮಾಡುತ್ತೇವೆ. ಈ ಅಸಮಾನತೆ ಏಕೆ? ಎಂದು ಡೊನಾಲ್ಡ್ ಟ್ರಂಪ್ ಪ್ರಶ್ನಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಅವರ ಆರೋಪಗಳಲ್ಲಿ ಭಾರತ-ರಷ್ಯಾ-ಚೀನಾ ಸಂಬಂಧ ಸುಧಾರಣೆಯ ಹೊಟ್ಟೆಯುರಿ ಸ್ಪಷ್ಟವಾಗಿ ಕಂಡುಬರುತ್ತದೆ. ಏಕೆಂದರೆ ಅವರು ಪದೇ ಪದೇ ಭಾರತ ರಷ್ಯಾದಿಂದ ಮಿಲಿಟರಿ ಉಪಕರಣಗಳನ್ನು ಹೆಚ್ಚಿನ

- ಎಸ್‌ಸಿಒ ಶೃಂಗಸಭೆಯಲ್ಲಿ ಭಾರತ, ರಷ್ಯಾ ಮತ್ತು ಚೀನಾ ದೋಸ್ತಿ ಕಂಡು ದಂಗಾದ ಡೊನಾಲ್ಡ್ ಟ್ರಂಪ್.
- ಭಾರತದ ಮೇಲೆ ಮತ್ತೆ ಕೋಪ ಪ್ರದರ್ಶಿಸಿದ ಅಮೆರಿಕ ಅಧ್ಯಕ್ಷ, ಏಕಪಕ್ಷೀಯ ಸಂಬಂಧ ಬೇಡವಂತೆ.
- ಭಾರತದ ಮೇಲಿನ ಹೆಚ್ಚುವರಿ ಸುಂಕಗಳಿಗೆ ಸಮರ್ಥನೆ ನೀಡುವುದರಲ್ಲೇ ಕಾಲ ಕಳೆದ ಡೊನಾಲ್ಡ್ ಟ್ರಂಪ್.

ಪ್ರಮಾಣದಲ್ಲಿ ಆಮದು ಮಾಡಿಕೊಳ್ಳುತ್ತದೆ, ನಮ್ಮೊಂದಿಗೆ ಬಹಳ ಕಡಿಮೆ ಪ್ರಮಾಣದ ವ್ಯಾಪಾರ ಹೊಂದಿದೆ ಎಂದು ಹೇಳುತ್ತಿದ್ದು ತಮಗೆ ಲಾಭ ಸಿಗದಿರುವುದಕ್ಕೆ ಇಷ್ಟೆಲ್ಲಾ ರೇಗಾಡುತ್ತಿದ್ದಾರೆ ಎಂಬುದು ಸ್ಪಷ್ಟವಾಗಿದೆ.

**ಎಸ್‌ಸಿಒ ವೇದಿಕೆಯಲ್ಲಿ ಆಗಿದ್ದು:** ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಎಸ್‌ಸಿಒ ಶೃಂಗಸಭೆ, ಭಾರತ, ರಷ್ಯಾ ಮತ್ತು ಚೀನಾದ ಗಟ್ಟಿ ಸ್ನೇಹಕ್ಕೆ ಮುನ್ನುಡಿ ಬರೆದಿದೆ. ಅಮೆರಿಕದ ಸುಂಕ ಸಮರವನ್ನು ಒಗ್ಗಟ್ಟಾಗಿ ಎದುರಿಸಲು ಈ ಮೂರೂ ರಾಷ್ಟ್ರಗಳು ನಿರ್ಧರಿಸಿದ್ದು, ಅಮೆರಿಕ ಹೊರತಾದ ಜಾಗತಿಕ ಕ್ರಮ ರಚನೆ ಮಾಡುವ ಪ್ರಯತ್ನಗಳನ್ನು ಆರಂಭಿಸಿವೆ.



**ಕೋಪ ಪ್ರದರ್ಶನದ ಪರಿ:**

ಭಾರತದಿಂದ ರಷ್ಯಾದ ತೈಲ ಮತ್ತು ಮಿಲಿಟರಿ ಉಪಕರಣಗಳ ನಿರಂತರ ಖರೀದಿಯನ್ನು ಖಂಡಿಸಿರುವ ಡೊನಾಲ್ಡ್ ಟ್ರಂಪ್, ಭಾರತವು ಅಮೆರಿಕದೊಂದಿಗೆ ವ್ಯಾಪಾರ ಮಾಡುವ ರೀತಿ ಮತ್ತು ರಷ್ಯಾದೊಂದಿಗೆ ವ್ಯಾಪಾರ ಮಾಡುವ ರೀತಿಯ ನಡುವೆ ಅಂತರವಿದೆ. ನಮ್ಮದು ಏನಿದ್ದರೂ ಏಕಪಕ್ಷೀಯ ಸಂಬಂಧವಾಗಿದ್ದು, ಭಾರತದಿಂದ ಉತ್ತಮ ಸಂಬಂಧದ ಪ್ರಯತ್ನಗಳನ್ನು ಇದುವರೆಗೂ ಕಂಡಿಲ್ಲ ಎಂದು ಪ್ರತಿಪಾದಿಸಿದ್ದಾರೆ.

## ಸುಡಾನ್‌ನಲ್ಲಿ ಭೂಕುಸಿತ 1000ಕ್ಕೂ ಹೆಚ್ಚು ಮಂದಿ ಸಾವು

**ಸುಡಾನ್:** ದೇಶದ ಪಶ್ಚಿಮ ಭಾಗದ ಮರ್ರಾ ಪರ್ವತಗಳಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಕನಿಷ್ಠ 1,000 ಜನರು ಸಾವನ್ನಪ್ಪಿದ್ದಾರೆ ಎಂದು ಬಂಡುಕೋರ ಗುಂಪು ತಿಳಿಸಿದೆ. ದಿನಗಟ್ಟಲೆ ಸುರಿದ ಭಾರೀ ಮಳೆಯಿಂದ ಭೂಕುಸಿತ ಸಂಭವಿಸಿದ್ದು, ತಾರಾಸಿನ್ ಗ್ರಾಮದ ಬಹುಭಾಗ ನೆಲಸಮವಾಗಿದೆ. ವಿಶ್ವಸಂಸ್ಥೆ ಮತ್ತು ಇತರ ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳಿಂದ ಮಾನವೀಯ ಸಹಾಯಕ್ಕಾಗಿ ಮನವಿ ಮಾಡಿದೆ.




ಸುಡಾನ್ ಸೈನ್ಯ ಮತ್ತು ಅರೆಸೈನಿಕ ಕ್ಷಿಪ್ರ ಬೆಂಬಲ ಪಡೆಗಳು ನಡುವಿನ ಯುದ್ಧದ ನಂತರ, ಉತ್ತರ ಡಾರ್ಫರ್ ರಾಜ್ಯದ ಅನೇಕ ನಿವಾಸಿಗಳು ಮರ್ರಾ ಪರ್ವತ ಪ್ರದೇಶದಲ್ಲಿ ಆಶ್ರಯ ಪಡೆದಿದ್ದರು. ಡಾರ್ಫರ್‌ನ ಸೈನ್ಯದೊಂದಿಗೆ ಮೈತ್ರಿ ಮಾಡಿಕೊಂಡ ಗವರ್ನರ್ ಮಿನ್ನಿ ಮಿನ್ನಾವಿ, ಭೂಕುಸಿತವನ್ನು ಮಾನವೀಯ ದುರಂತ ಎಂದು ಕರೆದಿದ್ದಾರೆ. ಸುಡಾನ್ ಸೈನ್ಯ ಮತ್ತು ಆರ್‌ಎಸ್‌ಎಫ್ ನಡುವೆ ಏಪ್ರಿಲ್ 2023 ರಲ್ಲಿ ಭುಗಿಲೆದ್ದ ಅಂತರ್ಯುದ್ಧವು ದೇಶವನ್ನು ಕ್ಷಾಮಕ್ಕೆ ದೂಡಿದೆ ಮತ್ತು ಪಶ್ಚಿಮ ಡಾರ್ಫರ್ ಪ್ರದೇಶದಲ್ಲಿ ನರಮೇಧದ ಆರೋಪಗಳಿಗೆ ಕಾರಣವಾಗಿದೆ.

ಅಂತರ್ಯುದ್ಧದಿಂದ ಸಾವನ್ನಪ್ಪಿದವರ ಸಂಖ್ಯೆ ಗಮನಾರ್ಹವಾಗಿ ಬದಲಾಗುತ್ತದೆ, ಆದರೆ ಕಳೆದ ವರ್ಷ ಅಮೆರಿಕದ ಅಧಿಕಾರಿಯೊಬ್ಬರು 2023 ರಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ 150,000 ಜನರು ಸಾವನ್ನಪ್ಪಿದ್ದಾರೆ ಎಂದು ಅಂದಾಜಿಸಿದ್ದಾರೆ. ಸುಮಾರು 12 ಮಿಲಿಯನ್ ಜನರು ತಮ ಮನೆಗಳನ್ನು ತೊರೆದಿದ್ದಾರೆ.

## ಸಹದ್ಯೋಗಿ ಸಂಗದಿಂದ ನೆಸ್ಲೆ ಸಿಇಒ ಹುದ್ದೆ ಕಳೆದುಕೊಂಡ ಫ್ರೀಕ್ಸ್

**ನವದೆಹಲಿ:** ತನ್ನ ಕೈಕೆಳಗೆ ಕೆಲಸ ಮಾಡುವ ಸಹೋದ್ಯೋಗಿ ಜೊತೆ ಪ್ರೇಮ ಸಂಬಂಧ ಇರಿಸಿಕೊಂಡಿದ್ದ ನೆಸ್ಲೆ ಸಿಇಒ ಲಾರೆಂಟ್ ಫ್ರೀಕ್ಸ್ ಅವರನ್ನು ಸೇವೆಯಿಂದ ವಜಾಗೊಳಿಸಲಾಗಿದೆ. ಸಹೋದ್ಯೋಗಿ ಜೊತೆಗಿನ ಸಂಬಂಧವನ್ನು ಮುಚ್ಚಿಟ್ಟ ಕಾರಣಕ್ಕೆ ಈ ಕ್ರಮ ತೆಗೆದುಕೊಳ್ಳಲಾಗಿದೆ. ನೆಸ್ಲೆ ಕಂಪನಿಯಲ್ಲೇ ಹಿರಿಯ ಎಕ್ಸಿಕ್ಯೂಟಿವ್ ಆಗಿರುವ ಫಿಲಿಪ್ ನವ್ರಾಟಿಲ್ ಅವರನ್ನು ನೂತನ ಸಿಇಒ ಆಗಿ ನೇಮಕ ಮಾಡಲಾಗಿದೆ.

ಸ್ವಿಟ್ಜರ್‌ಲ್ಯಾಂಡ್ ಮೂಲದ ನೆಸ್ಲೆ ಕಂಪನಿಯಲ್ಲೇ ಸಹೋದ್ಯೋಗಿ ಜೊತೆ ಲಾರೆಂಟ್ ಫ್ರೀಕ್ಸ್ ಅವರಿಗೆ ರೋಮ್ಯಾಂಟಿಕ್ ರಿಲೇಶನ್‌ಶಿಪ್ ಇರುವುದಾಗಿ ರಹಸ್ಯವಾಗಿ ದೂರೊಂದು ದಾಖಲಾಗಿತ್ತು. ಕಂಪನಿಯ ಛೇರ್ಮನ್ ಪೌಲ್ ಬುಲ್ಕೆ ಮತ್ತು ಸ್ವತಂತ್ರ ನಿರ್ದೇಶಕ ಪಾಬ್ಲೊ ಇಸ್ಲಾ ಅವರ ಕಣ್ಗಾವಲಿನಲ್ಲಿ ಆಂತರಿಕ ಮತ್ತು ಬಾಹ್ಯ ತನಿಖೆ ನಡೆಸಲಾಯಿತು. ಅದರಲ್ಲಿ ಲಾರೆಂಟ್ ಅವರು ಸಹೋದ್ಯೋಗಿ ಜೊತೆ ಸಂಬಂಧ ಹೊಂದಿರುವುದು ಗೊತ್ತಾಗಿತ್ತು. ನಂತರ ಅವರನ್ನು ತತ್‌ಕ್ಷಣದಿಂದಲೇ ಜಾರಿಗೆ ಬರುವಂತೆ ಸಿಇಒ ಸ್ಥಾನದಿಂದ ವಜಾಗೊಳಿಸುವ ನಿರ್ಧಾರ ಕೈಗೊಳ್ಳಲಾಗಿದೆ.




ಲಾರೆಂಟ್ ಅವರು ನೆಸ್ಲೆಯಲ್ಲಿ ನಾಲ್ಕು ದಶಕಗಳಿಂದ ಕೆಲಸ ಮಾಡಿದ್ದಾರೆ. ಕಳೆದ ವರ್ಷ ಸಿಇಒ ಆಗಿದ್ದ ಮಾರ್ಕ್ ಶ್ನೀಡರ್ ಅವರನ್ನು ಮ್ಯಾನೇಜ್ಮೆಂಟ್ ಕಿತ್ತು ಹಾಕಿತ್ತು. ಅವರ ಜಾಗಕ್ಕೆ ಲಾರೆಂಟ್ ಅವರನ್ನು ಸಿಇಒ ಆಗಿ ನೇಮಕ ಮಾಡಲಾಯಿತು. ಒಂದು ವರ್ಷದ ಅಂತರದಲ್ಲಿ ಲಾರೆಂಟ್ ಕೂಡ ನಿರ್ಗಮಿಸುತ್ತಿದ್ದಾರೆ. ಸಿಇಒ ಸ್ಥಾನ ಮಾತ್ರವಲ್ಲ, ನೌಕರಿಯಿಂದಲೇ ಅವರನ್ನು ತೆಗೆಯಲಾಗಿದೆ. ಇಷ್ಟು ಮಾತ್ರವಲ್ಲ, ಅವರಿಗೆ ಎಕ್ಸಿಟ್ ಪ್ಯಾಕೇಜ್ ಕೂಡ ನೀಡದೇ ಕಳುಹಿಸಲಾಗಿದೆ.

ಇದು ಅಗತ್ಯವಾಗಿರುವ ನಿರ್ಧಾರ. ನೆಸ್ಲೆಯ ಬಲ ಇರುವುದೇ ಅದರ ಮೌಲ್ಯಗಳಲ್ಲಿ. ಇಷ್ಟು ವರ್ಷ ಕಂಪನಿಗೆ ಸೇವೆ ಸಲ್ಲಿಸಿದ ಲಾರೆಂಟ್ ಅವರಿಗೆ ಧನ್ಯವಾದ ಹೇಳಬಯಸುತ್ತೇನೆ ಎಂದು ಛೇರ್ಮನ್ ಪೌಲ್ ಬಲ್ಕೆ ತಿಳಿಸಿದ್ದಾರೆ. ನೆಸ್ಲೆ ಛೇರ್ಮನ್ ಅವರು ಮುಂದಿನ ವರ್ಷದವರೆಗೂ ಕಂಪನಿಯ ಸೇವೆಯಲ್ಲಿ ಮುಂದುವರಿಯುತ್ತಾರೆ.

## ಜೈಲಾಧಿಕಾರಿಗಳ ಮೇಲೆ ಗುಂಡು ಹಾರಿಸಿ ಶಾಸಕ ಪರಾರಿ

**ಚಂಡೀಘಡ:** ಅತ್ಯಾಚಾರ ಮತ್ತು ವಂಚನೆ ಆರೋಪದ ಮೇಲೆ ಬಂಧಿಸಲ್ಪಟ್ಟಿದ್ದ ಪಂಜಾಬ್‌ನ ಆಡಳಿತಾರೂಢ ಎಎಪಿ ಪಕ್ಷದ ಶಾಸಕ ಹರ್ಮೀತ್ ಸಿಂಗ್ ಧಿಲ್ಲೋನ್ ಪಠಾಣ ಮಾಜ್ರಾ ಕರ್ನಾಲ್‌ನಲ್ಲಿ ಅಧಿಕಾರಿಗಳ ಮೇಲೆ ಗುಂಡು ಹಾರಿಸಿ ಜೈಲಿನಿಂದ ಪರಾರಿಯಾಗಿದ್ದಾರೆ. ಪಟಿಯಾಲದ ಸನೂರ್ ಕ್ಷೇತ್ರವನ್ನು ಪ್ರತಿನಿಧಿಸುವ ಶಾಸಕರನ್ನು ಸ್ಥಳೀಯ ಠಾಣೆಗೆ ಕರೆದೊಯ್ಯುತ್ತಿದ್ದಾಗ ಶಾಸಕರ ಸಹಾಯಕರು ಗುಂಡು ಹಾರಿಸಿ ಒಬ್ಬ ಪೊಲೀಸ್ ಅಧಿಕಾರಿಗೆ ಗಾಯಗೊಳಿಸಿದ್ದಾರೆ. ಪಠಾಣ್ ಮಜ್ರಾ ಮತ್ತೊಬ್ಬ ಅಧಿಕಾರಿಯ ಮೇಲೆ ವಾಹನ ಚಲಾಯಿಸಿ ನಂತರ ಸ್ಕಾರ್ಪಿಯೋ ಎಸ್‌ಯುವಿಯಲ್ಲಿ ತನ್ನ ಸಹಚರರೊಂದಿಗೆ ಪರಾರಿಯಾಗಿದ್ದಾರೆ. ಪರಾರಿಯಾಗಲು ಬಳಸಲಾದ ಫಾರ್ಚೂನರ್ ಅನ್ನು ನಂತರ ವಶಪಡಿಸಿಕೊಳ್ಳಲಾಗಿದೆ. ಪರಾರಿಯಾಗಿರುವ ಶಾಸಕನ ಪತ್ತೆಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

ಜಿರಾಕ್‌ಪುರ ಮೂಲದ ಮಹಿಳೆಯೊಬ್ಬರು, ತನ್ನ ಜೊತೆ ಸಂಬಂಧ ಬೆಳೆಸುವ ಮೊದಲು ತಾನು ವಿಚ್ಛೇದಿತ ಎಂದು ತಪ್ಪಾಗಿ ಬಿಂಬಿಸಿಕೊಂಡಿದ್ದಕ್ಕಾಗಿ ಪಠಾಣ್‌ಮಜ್ರಾನ ವಿರುದ್ಧ ಎಫ್‌ಐಆರ್ ದಾಖಲಿಸಿ ಬಂಧಿಸಲಾಗಿತ್ತು.



ಆದಾಗ್ಯೂ, ಶಾಸಕರು ಈ ಪ್ರಕರಣವು ರಾಜಕೀಯ ಪ್ರೇರಿತವಾಗಿದೆ ಎಂದು ಹೇಳಿದ್ದಾರೆ. ಎಪಿಯ ದೆಹಲಿ ನಾಯಕತ್ವವು ಪಂಜಾಬ್ ಅನ್ನು ಅಕ್ರಮವಾಗಿ ಆಳುತ್ತಿದೆ ಎಂದು ಧ್ವನಿ ಎತ್ತಿದ್ದಕ್ಕಾಗಿ ಗುರಿಯಾಗಿಸಿಕೊಳ್ಳಲಾಗಿದೆ. ಅವರು ನನ್ನ ವಿರುದ್ಧ ಎಫ್‌ಐಆರ್ ದಾಖಲಿಸಬಹುದು, ನಾನು ಜೈಲಿನಲ್ಲಿ ಉಳಿಯಬಹುದು, ಆದರೆ ನನ್ನ ಧ್ವನಿಯನ್ನು ನಿಗ್ರಹಿಸಲು ಸಾಧ್ಯವಿಲ್ಲ ಎಂದು ಫೇಸ್‌ಬುಕ್‌ನಲ್ಲಿ ಪೋಸ್ಟ್ ಮಾಡಿದ್ದರು. ಅವರ ವಕೀಲ ಸಿಮ್ರನ್‌ಜೀತ್ ಸಿಂಗ್ ಸಗ್ಗು ಕೂಡ ದೂರುದಾರರು ನ್ಯಾಯಾಲಯದಲ್ಲಿ ಲಿವ್-ಇನ್ ಸಂಬಂಧವನ್ನು ಒಪ್ಪಿಕೊಂಡಿದ್ದಾರೆ, ಆರೋಪಗಳು ಆಧಾರರಹಿತವೆಂದು ಕರೆದಿದ್ದಾರೆಂದು ವಾದಿಸಿದ್ದರು.

ಪಟಿಯಾಲದಲ್ಲಿ ಪ್ರವಾಹ ನಿರ್ವಹಣೆ ಕುರಿತು

**ಕ್ರಿಮಿನಲ್ ಬೆದರಿಕೆ ಆರೋಪ**

**2021ರಲ್ಲಿ ವಿವಾಹಿತನಾಗಿದ್ದಾಗಲೇ ಪಠಾಣ್ ಮಜ್ರಾ ತನ್ನನ್ನು ಮದುವೆಯಾಗಿದ್ದ, ಲೈಂಗಿಕವಾಗಿ ಶೋಷಿಸಿದ್ದ. ಅಶ್ಲೀಲ ವಸ್ತುಗಳನ್ನು ಕಳುಹಿಸಿದ ಮತ್ತು ಬೆದರಿಕೆ ಹಾಕಿದ್ದ ಎಂಬ ಆರೋಪವಿದ್ದು, ಎಫ್‌ಐಆರ್‌ನಲ್ಲಿ ಅತ್ಯಾಚಾರ, ವಂಚನೆ ಮತ್ತು ಕ್ರಿಮಿನಲ್ ಬೆದರಿಕೆ ಆರೋಪಗಳನ್ನು ಉಲ್ಲೇಖಿಸಲಾಗಿದೆ.**

ಶಾಸಕರು ಇತ್ತೀಚೆಗೆ ತಮದೇ ಸರ್ಕಾರದೊಂದಿಗೆ ಘರ್ಷಣೆ ನಡೆಸಿದ್ದರು. ಟ್ಯಾಂಗ್ರಿಯಂತಹ ನದಿಗಳನ್ನು ಹೂಳೆತ್ತುವಂತೆ ಪದೇ ಪದೇ ಮಾಡಿದ ಮನವಿಗಳನ್ನು ಹಿರಿಯ ಅಧಿಕಾರಿಗಳು ನಿರ್ಲಕ್ಷಿಸಿದ್ದಾರೆ ಎಂದು ಅವರು ಆರೋಪಿಸಿದರು. ಇದು ಹಳ್ಳಿಗಳಲ್ಲಿ ಪ್ರವಾಹವನ್ನು ಇನ್ನಷ್ಟು ಹದಗೆಡಿಸಿದೆ ಎಂದು ಎಚ್ಚರಿಸಿದರು. ಭದ್ರತೆಯನ್ನು ಹಿಂತೆಗೆದುಕೊಳ್ಳಲಾಯಿತು ಸ್ಥಳೀಯ ಅಧಿಕಾರಿಗಳನ್ನು ವರ್ಗಾಯಿಸಲಾಯಿತು ಎಂದು ಆರೋಪಿಸಿದರು.

## ಸೆ.13ರಂದು ಮಣಿಪುರಕ್ಕೆ ಮೋದಿ ಭೇಟಿ ಸಾಧ್ಯತೆ..?

**ಐಜ್ವಾಲ್:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸೆಪ್ಟೆಂಬರ್ 13 ರಂದು ಮಿಜೋರಾಂ ಮತ್ತು ಮಣಿಪುರಕ್ಕೆ ಭೇಟಿ ನೀಡುವ ಸಾಧ್ಯತೆ ಇದೆ ಎಂದು ಐಜ್ವಾಲ್‌ನಲ್ಲಿನ ಅಧಿಕಾರಿಗಳು ತಿಳಿಸಿದ್ದಾರೆ. ಮೋದಿ ಅವರು ಮೊದಲು ಮಿಜೋರಾಂಗೆ ಭೇಟಿ ನೀಡಿ ನೂತನ ಬೈರಾಬಿ-ಸಾಯಿರಂಗ್ ರೈಲ್ವೆ ಮಾರ್ಗವನ್ನು ಉದ್ಘಾಟಿಸಲಿದ್ದಾರೆ.

ಪ್ರಧಾನಿ ಮೋದಿ ಐಜ್ವಾಲ್‌ನಿಂದ ಮಣಿಪುರಕ್ಕೆ ವಿಮಾನದಲ್ಲಿ ತೆರಳಲಿದ್ದಾರೆ ಎಂಬ ಮಾಹಿತಿ ಬಂದಿರುವುದಾಗಿ ಮಿಜೋರಾಂ ಸರ್ಕಾರದ ಅನೇಕ ಅಧಿಕಾರಿಗಳು ಹೇಳಿದ್ದಾರೆ. ಇದು 2023ರ ಮೇನಲ್ಲಿ ರಾಜ್ಯದಲ್ಲಿ ಜನಾಂಗೀಯ ಹಿಂಸೆ ಭುಗಿಲೆದ್ದ ಬಳಿಕ ಅಲ್ಲಿಗೆ ಮೋದಿ ನೀಡುತ್ತಿರುವ ಪ್ರಥಮ ಭೇಟಿಯಾಗಿದೆ. ಹೀಗಿದ್ದರೂ ಪ್ರಧಾನಿಯವರ ಭೇಟಿಯ ಅಂತಿಮ ದೃಢೀಕರಣವನ್ನು ಇನ್ನಷ್ಟೇ ಸ್ವೀಕರಿಸಬೇಕಾಗಿದೆ ಎಂದು ಅವರು ನುಡಿದಿದ್ದಾರೆ.

ಆದರೆ ಇಂಫಾಲದಲ್ಲಿನ ಅಧಿಕಾರಿಗಳು ಪ್ರಧಾನಿಯವರ ಭೇಟಿಯನ್ನು ಖಚಿತಪಡಿಸಿಲ್ಲ. ಪ್ರಧಾನಿಯವರ ಭೇಟಿಗಾಗಿ ಪೂರ್ವಸಿದ್ಧತಾ ಕ್ರಮಗಳನ್ನು ಪರಿಶೀಲಿಸಲು ಮಿಜೋರಾಂ ಮುಖ್ಯ ಕಾರ್ಯದರ್ಶಿ ಖಿಲ್ಲಿರಾಂ ಮೀನಾ ಅವರು ವಿವಿಧ ಇಲಾಖೆಗಳು ಮತ್ತು ಕಾನೂನು ಜಾರಿ ಸಂಸ್ಥೆಗಳ ಸಭೆ ನಡೆಸಿದರು. ಸಭೆಯಲ್ಲಿ ಭದ್ರತಾ ಕ್ರಮಗಳು, ಸಂಚಾರ ನಿರ್ವಹಣೆ, ಸ್ವಾಗತ ಮತ್ತು ರಸ್ತೆಗಳ ಅಲಂಕಾರ ಸೇರಿದಂತೆ ವಿವಿಧ ವಿಷಯಗಳ ಚರ್ಚೆ ನಡೆಯಿತು ಎಂದು ಹೇಳಿಕೆ ನೀಡಲಾಗಿದೆ. ಮಣಿಪುರದಲ್ಲಿ ಜನಾಂಗೀಯ ಹಿಂಸೆ ಸ್ಫೋಟಗೊಂಡು ಗಲಭೆ-ದೊಂಬಿಗಳು ನಡೆದು ಅಪಾರ ಸಾವು-ನೋವು ಸಂಭವಿಸಿತ್ತು. ಆಸ್ತಿಪಾಸ್ತಿಗಳಿಗೆ ಅಗಾಧ ಹಾನಿಯಾಗಿತ್ತು.



ಇಷ್ಟಾದರೂ ಪ್ರಧಾನಿಯವರು ಮಣಿಪುರಕ್ಕೆ ಭೇಟಿ ನೀಡಲಿಲ್ಲ ಮತ್ತು ಈ ಬಗ್ಗೆ ಮೌನ ಮುರಿಯಲಿಲ್ಲ ಎಂದು ವ್ಯಾಪಕ ಟೀಕೆಗಳು ವ್ಯಕ್ತವಾಗಿದ್ದವು. ಈ ಹಿನ್ನೆಲೆಯಲ್ಲಿ ಮೋದಿ ಅವರ ಮಣಿಪುರ ಭೇಟಿ ಕುತೂಹಲ ಕೆರಳಿಸಿದೆ.

## ಮಸೀದಿಯಲ್ಲಿ ಗಣೇಶ ಪ್ರತಿಷ್ಠಾಪನೆ

**ಸಾಂಗ್ಲಿ:** ಮಹಾರಾಷ್ಟ್ರದಲ್ಲಿರುವ ಹಳ್ಳಿಯ ಮಸೀದಿಯಲ್ಲಿ ಗಣೇಶ ವಿಗ್ರಹವನ್ನು ಸ್ಥಾಪಿಸುವ ಮೂಲಕ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ವಿಶಿಷ್ಟವಾದ ಗಣೇಶ ಹಬ್ಬದ ಆಚರಣೆಗೆ ಸಾಕ್ಷಿಯಾಗುತ್ತ ಬರುತ್ತಿದೆ. ಸಾಂಗ್ಲಿ ಜಿಲ್ಲೆಯ ಗೋಟ್ಖಿಂಡಿ ಗ್ರಾಮದ ನಿವಾಸಿಗಳ ಮೇಲೆ ಬೇರೆಡೆ ಧಾರ್ಮಿಕ ಉದ್ವಿಗ್ನತೆಗಳು ಎಂದಿಗೂ ಪರಿಣಾಮ ಬೀರಿಲ್ಲ, ಮುಸ್ಲಿಂ ಸಮುದಾಯಕ್ಕೆ ಸೇರಿದ 100 ಕುಟುಂಬಗಳು ಸೇರಿದಂತೆ ಸುಮಾರು 15,000 ಜನಸಂಖ್ಯೆಯನ್ನು ಹೊಂದಿವೆ ಎಂದು ಸ್ಥಳೀಯ ಗಣೇಶ ಮಂಡಲದ ಸಂಸ್ಥಾಪಕ ಅಶೋಕ್ ಪಾಟೀಲ್ ಪಿಟಿಐಗೆ ತಿಳಿಸಿದ್ದಾರೆ. ಮುಸ್ಲಿಮರು ಸಹ ಮಂಡಲದ ಸದಸ್ಯರಾಗಿದ್ದಾರೆ. ಅವರು ಪ್ರಸಾದ (ನೈವೇದ್ಯ) ತಯಾರಿಕೆಯಲ್ಲಿ ಭಾಗವಹಿಸುತ್ತಾರೆ, ಪ್ರಾರ್ಥನೆಗಳಲ್ಲಿ ಸೇರುತ್ತಾರೆ ಮತ್ತು ಹಬ್ಬದ ವ್ಯವಸ್ಥೆಗಳಲ್ಲಿ ಸಹಾಯ ಮಾಡುತ್ತಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಭಾರಿ ಮಳೆಯಿಂದಾಗಿ ಸಾಂಗ್ಲಿ ಜಿಲ್ಲೆಯ ಗೋಟ್ಖಿಂಡಿ ಗ್ರಾಮದಲ್ಲಿ ಮಸೀದಿಯೊಳಗೆ ಗಣಪತಿ ಮೂರ್ತಿಯನ್ನು ಸ್ಥಳಾಂತರಿಸಲು ಹಿಂದೂ, ಮುಸ್ಲಿಂ ಸಮುದಾಯಗಳ ಸದಸ್ಯರು ನಿರ್ಧರಿಸಿದಾಗ ಈ ಸಂಪ್ರದಾಯವು 1980 ರಲ್ಲಿ ಪ್ರಾರಂಭವಾಯಿತು ಎಂದು ಅವರು ಹೇಳಿದರು. ಅಂದಿನಿಂದ ಈ ಪದ್ಧತಿ ಶಾಂತಿಯುತವಾಗಿ ಮುಂದುವರೆದಿದೆ ಮತ್ತು ಮುಸ್ಲಿಂ ಸಮುದಾಯದ ಸಕ್ರಿಯ ಭಾಗವಹಿಸುವಿಕೆಯೂ ಇದೆ. ಗ್ರಾಮದ ಜುಂಜಾರ್ ಚೌಕ್‌ನಲ್ಲಿರುವ ಹೊಸ ಗಣೇಶ ತರುಣ ಮಂಡಲವನ್ನು 1980 ರಲ್ಲಿ ಸ್ಥಾಪಿಸಲಾಯಿತು



ಎಂದು ಪಾಟೀಲ್ ಹೇಳಿದರು. 10 ದಿನಗಳ ಆಚರಣೆಗಾಗಿ ವಿಗ್ರಹವನ್ನು ಮಸೀದಿಯಲ್ಲಿ ಇರಿಸಲಾಗುತ್ತದೆ ಮತ್ತು ನಂತರ ಅನಂತ ಚತುರ್ದಶಿಯಂದು ಹಬ್ಬದ ಅಂತ್ಯದ ಸಮಯದಲ್ಲಿ ಸ್ಥಳೀಯ ಜಲಮೂಲದಲ್ಲಿ ಮುಳುಗಿಸಲಾಗುತ್ತದೆ. ಬಕ್ರೀದ್ ಮತ್ತು ಗಣೇಶ ಚತುರ್ಥಿ ದಿನಾಂಕಗಳು ಹೊಂದಿಕೆಯಾದ ನಂತರ, ಮುಸ್ಲಿಮರು ಕುರ್ಬಾನಿ ಅಲ್ಲ, ನಮಾಜ್ ಮಾಡುವ ಮೂಲಕ ಮಾತ್ರ ತಮ ಹಬ್ಬವನ್ನು ಆಚರಿಸಲು ಪ್ರೇರೇಪಿಸಿದರು ಎಂದು ಪಾಟೀಲ್ ಹೇಳಿದರು. ಅವರು ಹಿಂದೂ ಹಬ್ಬಗಳ ಸಮಯದಲ್ಲಿ ಮಾಂಸವನ್ನು ಸಹ ತಪ್ಪಿಸುತ್ತಾರೆ ಎಂದು ಅವರು ಹೇಳಿದರು. ಇಡೀ ದೇಶವು ಇಲ್ಲಿನ ಸಾಮಾಜಿಕ ಮತ್ತು ಧಾರ್ಮಿಕ ಸಾಮರಸ್ಯದಿಂದ ಸ್ಫೂರ್ತಿ ಪಡೆಯಬೇಕು ಎಂದು ಅವರು ಹೇಳಿದರು.

# ಭಾರತ ಎಸ್‌ಸಿಒ ಪೂರ್ಣ ಸದಸ್ಯತ್ವ ಪಡೆಯಲು ಬಿಡಲಿಲ್ಲ: ಅಜೆರ್ಬೈಜಾನ್

● ಪಾಕಿಸ್ತಾನವನ್ನು ಬೆಂಬಲಿಸಿದ್ದಕ್ಕಾಗಿ ಭಾರತ ಸೇಡು ತೀರಿಸಿಕೊಂಡಿದೆ ಎಂದು ಆರೋಪಿಸಿದ ಪಾಕಿಸ್ತಾನದ ಕಟ್ಟಾ ಬೆಂಬಲಿಗ ರಾಷ್ಟ್ರ

**ಬಾಕು:** ಪಾಕಿಸ್ತಾನದೊಂದಿಗಿನ ನಿಕಟ ಸಂಬಂಧದಿಂದಾಗಿ, ಭಾರತವು ಜಾಗತಿಕ ವೇದಿಕೆಗಳಲ್ಲಿ ಬಾಕು ವಿರುದ್ಧ ಸೇಡು ತೀರಿಸಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಅಜೆರ್ಬೈಜಾನ್ ಆರೋಪಿಸಿದೆ. ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ)ದ ಪೂರ್ಣ ಸದಸ್ಯತ್ವಕ್ಕಾಗಿ ಬಾಕು ಮಾಡಿದ ಪ್ರಯತ್ನವನ್ನು ಭಾರತ ನಿರ್ಬಂಧಿಸಿದೆ ಎಂದು ಅಜೆರ್ಬೈಜಾನ್ ಗಂಭೀರ ಆರೋಪ.

ಅಲ್ಲದೇ ನವದೆಹಲಿಯ ನಿರ್ಧಾರವು ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಸಮಯದಲ್ಲಿ, ಪಾಕಿಸ್ತಾನಕ್ಕೆ ಬಾಕು ನೀಡಿದ ಬೆಂಬಲಕ್ಕೆ ಸಂಬಂಧಿಸಿದೆ ಎಂದು ಅಜೆರ್ಬೈಜಾನ್ ಮಾಧ್ಯಮಗಳು ಆರೋಪ ಮಾಡಿವೆ. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಸಂದರ್ಭದಲ್ಲಿ, ಪಾಕಿಸ್ತಾನಕ್ಕೆ ಬೆಂಬಲ ಘೋಷಿಸಿದ್ದ ಅಜೆರ್ಬೈಜಾನ್ ವಿರುದ್ಧ ಭಾರತೀಯರು ಪ್ರವಾಸ ರದ್ದುಗೊಳಿಸುವ ಮೂಲ ಸೇಡು ತೀರಿಸಿಕೊಂಡಿದ್ದರು.

ಅಜೆರ್ಬೈಜಾನ್ ಅಧ್ಯಕ್ಷ ಇಲ್ಹಾಮ್ ಅಲಿಯೆವ್, ಚೀನಾದ ಟಿಯಾಂಜಿನ್ ನಗರದಲ್ಲಿ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರೊಂದಿಗೆ ಪ್ರತ್ಯೇಕ ಸಭೆ ನಡೆಸಿದ್ದರು. ಈ ಸಭೆಯಲ್ಲಿ ಮಿಲಿಟರಿ ಸಂಘರ್ಷದ ಸಮಯದಲ್ಲಿ ಭಾರತದ ವಿರುದ್ಧ ಪಾಕಿಸ್ತಾನದ ವಿಜಯಕ್ಕಾಗಿ ಇಸ್ಲಾಮಾಬಾದ್‌ನ್ನು ಅವರು ಅಭಿನಂದಿಸಿದರು. ಅಜೆರ್ಬೈಜಾನ್ ದೇಶವು ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯಲ್ಲಿ ಪಾಕಿಸ್ತಾನ ಗೆಲುವು ಸಾಧಿಸಿದೆ ಎಂದು ಪ್ರತಿಪಾದಿಸುತ್ತಿದೆ.

- ಭಾರತದ ವಿರುದ್ಧ ಗಂಭೀರ ಆರೋಪ ಮಾಡಿದ ಅಜೆರ್ಬೈಜಾನ್.
- ಎಸ್‌ಸಿಒ ಪೂರ್ಣ ಸದಸ್ಯತ್ವ ಪಡೆಯುವ ಪ್ರಯತ್ನಕ್ಕೆ ಭಾರತ ಅಡ್ಡಗಾಲು ಹಾಕಿದೆ ಎಂದ ಅಜೆರ್ಬೈಜಾನ್.
- ಪಾಕಿಸ್ತಾನವನ್ನು ಬೆಂಬಲಿಸಿದ್ದಕ್ಕಾಗಿ ಭಾರತ ಸೇಡು ತೀರಿಸಿಕೊಂಡಿದೆ ಎಂದು ಆರೋಪಿಸಿದ ಅಜೆರ್ಬೈಜಾನ್.

ಜಾಗತಿಕ ವೇದಿಕೆಗಳಲ್ಲಿ ನವದೆಹಲಿಯ ಕ್ರಮಗಳ ಹೊರತಾಗಿಯೂ, ಬಾಕು ಇಸ್ಲಾಮಾಬಾದ್‌ನೊಂದಿಗಿನ ಸಹೋದರತ್ವಕ್ಕೆ ಆದ್ಯತೆ ನೀಡುತ್ತದೆ ಎಂದು ಇಲ್ಹಾಮ್ ಅಲಿಯೆವ್ ಸ್ಪಷ್ಟಪಡಿಸಿದ್ದಾರೆ ಎಂದು ಟರ್ಕಿಶ್ ದಿನಪತ್ರಿಕೆ ಡೈಲಿ ಸಬಾ ವರದಿ ಮಾಡಿದೆ.

ಪಾಕಿಸ್ತಾನದೊಂದಿಗಿನ ಅಜೆರ್ಬೈಜಾನ್‌ನ ಸಂಬಂಧವು ನಿಕಟ ರಾಜಕೀಯ, ಸಾಂಸ್ಕೃತಿಕ ಮತ್ತು ಕಾರ್ಯತಂತ್ರದ ಸಂಬಂಧಗಳಲ್ಲಿ ಬೇರೂರಿದೆ ಎಂದು ಅಲಿಯೆವ್ ಹೇಳಿದ್ದಾರೆ. ಷರೀಫ್ ಅವರೊಂದಿಗೆ ನಡೆದ ಸಭೆಯಲ್ಲಿ, ಅಜೆರ್ಬೈಜಾನಿ-ಪಾಕಿಸ್ತಾನ ಅಂತರ ಸರ್ಕಾರಿ ಆಯೋಗದೊಳಗೆ, ವ್ಯಾಪಾರ ಮತ್ತು ಆರ್ಥಿಕ ಸಹಕಾರವನ್ನು ವಿಸ್ತರಿಸುವ ಬಗ್ಗೆಯೂ ಇಲ್ಹಾಮ್ ಅವಿಯೆವ್ ಚರ್ಚಿಸಿದ್ದಾರೆ ಎಂದು ವರದಿ ತಿಳಿಸಿದೆ.

ಇದಕ್ಕೂ ಮೊದಲು, ಅಜೆರ್ಬೈಜಾನಿ ಟಿವಿ ಪ್ರಸಾರಕರಾದ ಅನ್ಯೂಝುಡ್, ನವದೆಹಲಿಯು ಎಸ್‌ಸಿಒ ಪೂರ್ಣ ಸದಸ್ಯತ್ವಕ್ಕಾಗಿ ಬಾಕು ಸಲ್ಲಿಸಿದ ಅರ್ಜಿಯನ್ನು ಮತ್ತೊಮ್ಮೆ ನಿರ್ಬಂಧಿಸಿದೆ ಎಂದು ವರದಿ ಪ್ರಸಾರ ಮಾಡಿದೆ. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಸಂದರ್ಭದಲ್ಲಿ, ಟರ್ಕಿ ಕೂಡ ಭಾರತ ವಿರೋಧಿ ನಿಲುವು ತಳೆದಿತ್ತು.



ಶಾಂಘೈ ಸಹಕಾರ ಸಂಸ್ಥೆಯಲ್ಲಿ ಪೂರ್ಣ ಸದಸ್ಯತ್ವಕ್ಕಾಗಿ ಅಜೆರ್ಬೈಜಾನ್ ಸಲ್ಲಿಸಿದ ಅರ್ಜಿಯನ್ನು ಭಾರತ ಮತ್ತೊಮ್ಮೆ ನಿರ್ಬಂಧಿಸಿದೆ. ಆದರೆ ಅರ್ಮೇನಿಯಾದೊಂದಿಗಿನ ರಾಜತಾಂತ್ರಿಕ ಸಂಬಂಧಗಳನ್ನು ಪರಿಗಣಿಸುವ ಪಾಕಿಸ್ತಾನದ

**ಅಜೆರ್ಬೈಜಾನ್ ಗಂಭೀರ ಆರೋಪ**

**ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕ ನೆಲೆಗಳ ಮೇಲೆ ಭಾರತ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ನಡೆಸಿತ್ತು. ಈ ಸಮಯದಲ್ಲಿ ಅಜೆರ್ಬೈಜಾನ್ ಪಾಕಿಸ್ತಾನಕ್ಕೆ ಬಹಿರಂಗವಾಗಿ ಬೆಂಬಲ ನೀಡಿತ್ತು. ಈಗ ಎಸ್‌ಸಿಒ ಶೃಂಗಸಭೆ ಪೆಹಲ್ಗಾಮ್ ದಾಳಿಗೆ ಖಂಡನೆ ವ್ಯಕ್ತಪಡಿಸಿರುವುದು, ಪಾಕಿಸ್ತಾನ ಮತ್ತು ಅಜೆರ್ಬೈಜಾನ್‌ಗೆ ಮುಜುಗರ ತರಿಸಿದೆ.**

ಇತ್ತೀಚಿನ ನಿರ್ಧಾರವನ್ನು, ಅಜೆರ್ಬೈಜಾನ್‌ನ ಶಾಂತಿ ಕಾರ್ಯಸೂಚಿಯ ಭಾಗವಾಗಿ ಬಾಕು ಜೊತೆ ಸಂಯೋಜಿಸಲಾಗಿದೆ ಎಂದು ಅನೆವ್ಝುಡ್ ವರದಿ ಮಾಡಿದೆ.

ಭಾರತ ಗಣರಾಜ್ಯ ಮತ್ತು ಪಾಕಿಸ್ತಾನ ಇಸ್ಲಾಮಿಕ್ ಗಣರಾಜ್ಯ ನಡುವಿನ ಉದ್ವಿಗ್ನತೆ ಮತ್ತಷ್ಟು ಹೆಚ್ಚಾಗುತ್ತಿರುವ ಬಗ್ಗೆ ಅಜೆರ್ಬೈಜಾನ್ ಗಣರಾಜ್ಯವು ತನ್ನ ಕಳವಳವನ್ನು ವ್ಯಕ್ತಪಡಿಸುತ್ತದೆ ಎಂದು ಆ ಸಮಯದಲ್ಲಿ ಅಧ್ಯಕ್ಷ ಇಲ್ಹಾಮ್ ಅಲಿಯೆವ್ ಹೇಳಿಕೆ ನೀಡಿದ್ದರು. ಇತ್ತೀಚಿನ ವರ್ಷಗಳಲ್ಲಿ, ಬಾಕು ಮತ್ತು ಇಸ್ಲಾಮಾಬಾದ್ ನಡುವೆ ರಕ್ಷಣೆ, ವ್ಯಾಪಾರ ಮತ್ತು ಪ್ರಾದೇಶಿಕ ಭದ್ರತಾ ಸಹಕಾರ ವಿಸ್ತರಣೆಗೊಂಡಿದೆ.

## ಮಿನಿ ನ್ಯೂಸ್

### ಹೆಲಿಕಾಪ್ಟರ್ ಪತನ, ಐವರ ಸಾವು

**ಇಸ್ಲಾಮಾಬಾದ್:** ನೂತನವಾಗಿ ನಿರ್ಮಾಣವಾಗಿದ್ದ ಹೆಲಿಪ್ಯಾಡ್ ಮೇಲೆ ಲ್ಯಾಂಡಿಂಗ್ ಟೆಸ್ಟ್ ನಡೆಸುತ್ತಿದ್ದಾಗ ಪಾಕಿಸ್ತಾನದ ಸರ್ಕಾರಿ ಹೆಲಿಕಾಪ್ಟರ್ ಪತನಗೊಂಡು ಐವರು ಸಾವನ್ನಪ್ಪಿರುವ ಘಟನೆ ಗಿಲ್ಗಿಟ್-ಬಾಲ್ಟಿಸ್ತಾನ್‌ನಲ್ಲಿ ನಡೆದಿದೆ. ಡೈಮರ್ ಜಿಲ್ಲೆಯ ಚಿಲಾಸ್‌ನ ಥೋರ್ ಪ್ರದೇಶದ ಬಳಿ ಈ ಅವಘಡ ಸಂಭವಿಸಿದ್ದು, ದುರಂತದಲ್ಲಿ ಪರಿಣಾಮ ಇಬ್ಬರು ಪೈಲಟ್ ಸೇರಿ ಮೂವರು ತಂತ್ರಜ್ಞರು ಸಾವನ್ನಪ್ಪಿದ್ದಾರೆ. ಘಟನೆ ಕುರಿತು ತನಿಖೆ ನಡೆಸಲಾಗುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇತ್ತೀಚಿಗೆ ಖೈಬರ್ ಪ್ರಾಂತ್ಯದಲ್ಲಿ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಸುತ್ತಿದ್ದ ಇದೇ ಮಾದರಿಯ ಎಂಐ-17 ಸರ್ಕಾರಿ ಹೆಲಿಕಾಪ್ಟರ್ ಪತನಗೊಂಡಿತ್ತು. ಅದಾದ ಕೆಲವು ದಿನಗಳ ನಂತರ ಇದೀಗ ಮತ್ತೊಂದು ಹೆಲಿಕಾಪ್ಟರ್ ಪತನಗೊಂಡಿದೆ. ಹೆಲಿಕಾಪ್ಟರ್ ಭೂಸ್ಪರ್ಷ ಮಡುವಾಗ ತಾಂತ್ರಿಕ ದೋಷ ಕಂಡುಬಂದಿದ್ದು ಸುಮಾರು 100 ಅಡಿಯಿಂದ ನೆಲಕ್ಕೆ ಅಪ್ಪಳಿಸಿದೆ ಎಂದು ಮೂಲಗಳು ತಿಳಿಸಿವೆ. ಸ್ಥಳದಲ್ಲಿದ್ದ ಕೆಲವರು ದೂರ ಓಡಿ ಜೀವ ಉಳಿಸಿಕೊಂಡಿದ್ದಾರೆ.

### 232 ಕೋಟಿ ವಂಚನೆ ಪ್ರಕರಣದಲ್ಲಿ ರಾಹುಲ್ ವಿಜಯ್ ಅರೆಸ್ಟ್

**ನವದೆಹಲಿ:** ಬರೊಬ್ಬರಿ 232 ಕೋಟಿ ರೂ. ವಂಚನೆ ಪ್ರಕರಣದಲ್ಲಿ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಹಿರಿಯ ಮ್ಯಾನೇಜರ್ ರಾಹುಲ್ ವಿಜಯ್ ಅವರನ್ನು ಸಿಬಿಐ ಬಂಧಿಸಿದೆ. ರಾಹುಲ್ ವಿಜಯ್ ಸುಮಾರು 232 ಕೋಟಿ ರೂ. ಸರ್ಕಾರದ ಹಣವನ್ನು ನೇರವಾಗಿ ತನ್ನ ವೈಯಕ್ತಿಕ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿಕೊಂಡು, ನಂತರ ಆ ಹಣವನ್ನು ಬ್ಯುಸಿನೆಸ್ ಖಾತೆಗಳಿಗೆ ವರ್ಗಾಯಿಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ. ತನಿಖಾಧಿಕಾರಿಗಳು ಈ ಪ್ರಕರಣವನ್ನು ವರ್ಷದ ಅತಿದೊಡ್ಡ ಹಣಕಾಸು ಹಗರಣಗಳಲ್ಲಿ ಒಂದು ಎಂದು ಹೇಳಿದ್ದಾರೆ.2019 ಮತ್ತು 2023ರ ನಡುವೆ ಡೆಹ್ರಾಡೂನ್ ವಿಮಾನ ನಿಲ್ದಾಣದಲ್ಲಿ ವಿಜಯ್ ಅವರು ಕಾರ್ಯನಿರ್ವಹಿಸುತ್ತಿದ್ದಾಗ ನಡೆದ ಅಕ್ರಮಗಳ ಬಗ್ಗೆ ಎಎಐ ದೂರು ನೀಡಿತ್ತು. ಬಳಿಕ ತನಿಖೆ ಆರಂಭಿಸಲಾಗಿತ್ತು. ಅವರು ಡಿಜಿಟಲ್ ದಾಖಲೆಗಳನ್ನು ವ್ಯವಸ್ಥಿತವಾಗಿ ಚಾಣಾಕ್ಷತನದಿಂದ ನಿರ್ವಹಿಸಿದ್ದಾರೆ.

ಬಿಲ್‌ಗಳನ್ನು ನಕಲು ಮಾಡುವುದು ಮತ್ತು ಆಕಸ್ಮಿಕವಾಗಿ ಹೆಚ್ಚುವರಿ ಸೊನ್ನೆಗಳನ್ನು ಸೇರಿಸುವ ಮೂಲಕ ಭಾರೀ ಅವ್ಯವಹಾರ ಮಾಡಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.ಆ.28 ರಂದು ಜೈಪುರದಲ್ಲಿರುವ ವಿಜಯ್ ಅವರ ನಿವಾಸ ಮತ್ತು ಕಚೇರಿಯ ಮೇಲೆ ಸಿಬಿಐ ದಾಳಿ ನಡೆಸಿ ದಾಖಲೆಗಳನ್ನು ವಶಪಡಿಸಿಕೊಂಡಿತ್ತು. ಇನ್ನೂ ಆರೋಪಿಯನ್ನು ಈಗ ಬಂಧಿಸಲಾಗಿದೆ. ತನಿಖೆ ಬಳಿಕ ಮತ್ತಷ್ಟು ವಿಚಾರಗಳು ತಿಳಿದು ಬರಬೇಕಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

### ಭಾರತ-ಅಮೆರಿಕ ಯುದ್ಧಾಭ್ಯಾಸ ಪ್ರಾರಭ

**ಅಲಾಸ್ಕಾ:** ಸುಂಕ ಯುದ್ಧದ ನಡುವೆಯೂ ಭಾರತ ಮತ್ತು ಅಮೆರಿಕ ನಡುವಿನ ಮಿಲಿಟರಿ ಸಹಕಾರದ 21ನೇ ಯುದ್ಧ ಅಭ್ಯಾಸ 2025 ನಡೆಸಿದ್ದಾರೆ. (ಜಂಟಿ ಮಿಲಿಟರಿ ವ್ಯಾಯಾಮ 2025) ಭಾರತೀಯ ಸೇನಾ ತುಕಡಿಯು ಅಮೆರಿಕದ ಅಲಾಸ್ಕಾದ ಫೋರ್ಟ್ ವೈನ್‌ರೈಟ್ ತಲುಪಿದೆ. ಈ ಅಭ್ಯಾಸ 14ರವರೆಗೆ ನಡೆಯಲಿದ್ದು, ಎರಡೂ ದೇಶಗಳ ಸೇನೆಗಳು ಜಂಟಿಯಾಗಿ ಹೆಲಿಕಾಪ್ಟರ್ ಲ್ಯಾಂಡಿಂಗ್, ಪರ್ವತ ಯುದ್ಧ, ಡ್ರೋನ್ ಕಾರ್ಯಾಚರಣೆಗಳು ಮತ್ತು ಡ್ರೋನ್ ವಿರೋಧಿ ತಂತ್ರಗಳನ್ನು ಪ್ರದರ್ಶಿಸಲಿವೆ. ಈ ಯುದ್ಧಾಭ್ಯಾಸದ ಪ್ರಮುಖ ಉದ್ದೇಶವೆಂದರೆ ಎರಡೂ ದೇಶಗಳ ಸೈನ್ಯವನ್ನು ವಿಶ್ವಸಂಸ್ಥೆಯ ಶಾಂತಿ ಕಾರ್ಯಾಚರಣೆಗಳಿಗೆ ಸಿದ್ಧಪಡಿಸುವುದು. ಅಲ್ಲದೆ, ಈ ವ್ಯಾಯಾಮವು ಸೈನಿಕರಿಗೆ ಬಹು-ಡೊಮೇನ್ ಸವಾಲುಗಳನ್ನು ಎದುರಿಸಲು ಆಧುನಿಕ ಯುದ್ಧದ ತಂತ್ರಗಳನ್ನು ಪರಿಚಯಿಸುತ್ತದೆ.

ಅಮೆರಿಕದ ಅಲಾಸ್ಕಾದ ಹಿಮಭರಿತ ಕಣಿವೆಗಳಲ್ಲಿ ಭಾರತ ಮತ್ತು ಅಮೆರಿಕಾದ ಸೈನ್ಯಗಳು ಮತ್ತೊಮ್ಮೆ ತಮ್ಮ ಯುದ್ಧ ಕೌಶಲ್ಯವನ್ನು ಹೆಗಲಿಗೆ ಹೆಗಲು ಕೊಟ್ಟು ಪ್ರದರ್ಶಿಸಲು ಸಿದ್ಧವಾಗಿವೆ. ಭಾರತೀಯ ಸೇನಾ ತುಕಡಿಯು ಮದ್ರಾಸ್ ರೆಜಿಮೆಂಟ್‌ನ ಬೆಟಾಲಿಯನ್ ಅನ್ನು ಒಳಗೊಂಡಿದೆ. ಈ ಬೆಟಾಲಿಯನ್ ಅಮೆರಿಕದ 11 ನೇ ವಾಯುಗಾಮಿ ವಿಭಾಗದ ಬಾಬ್‌ಕ್ಯಾಟ್ಸ್ ದೊಂದಿಗೆ ತರಬೇತಿ ಪಡೆಯುತ್ತದೆ. ಸೈನಿಕರು ಯುದ್ಧ ತಂತ್ರಗಳನ್ನು ಕಲಿಯುವುದಲ್ಲದೆ, ಪರಸ್ಪರರ ಅನುಭವಗಳು , ತಂತ್ರಗಳೊಂದಿಗೆ ಪರಿಚಯ ಮಾಡಿಕೊಳ್ಳುತ್ತಾರೆ. ಈ ಸಹಕಾರವು ಎರಡೂ ದೇಶಗಳ ಸೇನೆಗಳ ನಡುವಿನ ಸಿನರ್ಜಿ ಮತ್ತು ವಿಶ್ವಾಸವನ್ನು ಮತ್ತಷ್ಟು ಬಲಪಡಿಸುತ್ತದೆ.

### ಬಿಆರ್‌ಎಸ್ ಪಕ್ಷದಿಂದ ಎಂಎಲ್‌ಸಿ ಕೆ ಕವಿತಾ ಅಮಾನತು

**ಹೈದರಾಬಾದ್:** ಪಕ್ಷ ವಿರೋಧಿ ಚಟುವಟಿಕೆಗಳಿಗಳಲ್ಲಿ ಭಾಗಿಯಾಗಿದ್ದಕ್ಕಾಗಿ ಬಿಆರ್‌ಎಸ್ ತನ್ನ ಎಂಎಲ್‌ಸಿ ಕೆ. ಕವಿತಾ ಅವರನ್ನು ಪಕ್ಷದಿಂದ ಅಮಾನತುಗೊಳಿಸಿದೆ. ಕವಿತಾ ಅವರ ತಂದೆ ಮತ್ತು ಬಿಆರ್‌ಎಸ್ ಅಧ್ಯಕ್ಷ ಕೆ ಚಂದ್ರಶೇಖರ್ ರಾವ್ ಅವರು ತಕ್ಷಣದಿಂದ ಜಾರಿಗೆ ಬರುವಂತೆ ಕವಿತಾ ಅವರನ್ನು ಅಮಾನತುಗೊಳಿಸಲು ನಿರ್ಧರಿಸಿದ್ದಾರೆ ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಟಿ ರವೀಂದರ್ ರಾವ್ ಮತ್ತು ಮತ್ತೋರ್ವ ಪ್ರಧಾನ ಕಾರ್ಯದರ್ಶಿ (ಶಿಸ್ತು ವ್ಯವಹಾರಗಳ ಉಸ್ತುವಾರಿ) ಸೋಮ ಭರತ್ ಕುಮಾರ್ ಮಾಧ್ಯಮಗಳಿಗೆ ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕವಿತಾ ಅವರ ನಡವಳಿಕೆ , ಪಕ್ಷ ವಿರೋಧಿ ಚಟುವಟಿಕೆಗಳು ಬಿಆರ್‌ಎಸ್‌ಗೆ ಹಾನಿಯನ್ನುಂಟುಮಾಡುತ್ತಿವೆ. ಪಕ್ಷದ ನಾಯಕತ್ವವು ಇದನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ಅದು ಹೇಳಿದೆ. ಸೆಪ್ಟೆಂಬರ್ 1 ರಂದು, ಕೆ. ಕವಿತಾ ಅವರು, ಕಾಳೇಶ್ವರಂ ಯೋಜನೆಯ ಬಗ್ಗೆ ಸಿಬಿಐ ತನಿಖೆಗೆ ಆದೇಶಿಸಿರುವ ತೆಲಂಗಾಣ ಸರ್ಕಾರದ ನಿರ್ಧಾರಕ್ಕೆ ಪ್ರತಿಕ್ರಿಯಿಸುತ್ತಾ, ಕಾಳೇಶ್ವರಂ ವಿಷಯಕ್ಕೆ ಸಂಬಂಧಿಸಿದಂತೆ ಕೆಸಿಆರ್ ಅವರ ವರ್ಚಸ್ಸಿನ ಮೇಲೆ ಯಾವುದೇ ಕಳಂಕ ಬಂದಿದ್ದರೆ, ಅದಕ್ಕೆ ಬಿಆರ್‌ಎಸ್ ನಾಯಕರಾದ ಹರೀಶ್ ರಾವ್ ಮತ್ತು ಸಂತೋಷ್ ರಾವ್ ಕಾರಣ ಎಂದು ಆರೋಪಿಸಿದರು. ಅವರು ತಮ್ಮ ಮತ್ತು ಕೆಸಿಆರ್ ವಿರುದ್ಧ ಪಿತೂರಿ ನಡೆಸಿದ್ದಾರೆ ಎಂದು ಆರೋಪಿಸಿದ್ದರು.





# ಕೊನೆವರೆಗೂ ಕೊಲೆಗಾರನ ಊಹಿಸೋಕಾಗಲ್ಲ

ಈ ಹಿಂದಿ ಸಸ್ಪೆನ್ಸ್ ಸಿನಿಮಾ ನೆಟ್‌ಫ್ಲಿಕ್ಸ್‌ನಲ್ಲಿ ಲಭ್ಯವಿದೆ. ರಾಜ್‌ಕುಮಾರ್ ರಾವ್, ಹುಮಾ ಖುರೇಶಿ ಮತ್ತು ರಾಧಿಕಾ ಆಪ್ಟೆ ಅಭಿನಯಿಸಿರುವ ಈ ಚಿತ್ರವು ಕ್ರೈಮ್ ಮತ್ತು ಥ್ರಿಲ್ಲರ್‌ನ ಅಂಶಗಳನ್ನು ಹೊಂದಿದೆ. ರೋಬೋಟಿಕ್ ಇಂಜಿನಿಯರ್ ಆಗಿರುವ ಜೈ ಕೊಲೆಯಲ್ಲಿ ಭಾಗಿ ಯಾಗುವುದು ಹಾಗೂ ನಂತರದ ಘಟನೆಗಳು ಕುತೂಹಲ ಮೂಡಿಸುತ್ತವೆ. ಸಸ್ಪೆನ್ಸ್ ಮತ್ತು ಮನರಂಜನೆಯಿಂದ ಕೂಡಿದ ಈ ಸಿನಿಮಾನ ಮಿಸ್ ಮಾಡಲೇಬಾರದು. ಒಟಿಟಿಯ ವ್ಯಾಪ್ತಿ ಈಗ ವಿಸ್ತಾರಗೊಂಡಿದೆ. ಹಲವು ಒಟಿಟಿಗಳು ತಲೆ ಎತ್ತಿವೆ. ಅದೇ ರೀತಿ ವಿವಿಧ ರೀತಿಯ ಸಿನಿಮಾಗಳು, ವೆಬ್ ಸೀರಿಸ್‌ಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಅದರಲ್ಲೂ ಒಟಿಟಿಯಲ್ಲಿ ಸಸ್ಪೆನ್ಸ್, ಕ್ರೈಮ್ ಹಾಗೂ ಥ್ರಿಲ್ಲರ್ ರೀತಿಯ ಸಿನಿಮಾಗಳು ಹೆಚ್ಚು ವೀಕ್ಷಣೆ ಕಾಣುತ್ತವೆ. ಈಗ ಒಟಿಟಿಯಲ್ಲಿರೋ ಈ ಚಿತ್ರವನ್ನು ಮಿಸ್ ಮಾಡಲೇಬೇಡಿ. ಇದರಲ್ಲಿ ಕ್ರೈಮ್, ಸಸ್ಪೆನ್ಸ್ ಜೊತೆ ಒಂದಷ್ಟು ಫನ್ ಕೂಡ ಇದೆ. ಆ ಬಗ್ಗೆ ಇಲ್ಲಿದೆ ವಿವರ. ಈ ಸಿನಿಮಾದ ಹೆಸರೇ 'ಮೋನಿಕಾ, ಓ ಮೈ ಡಾರ್ಲಿಂಗ್'. ಈ ಚಿತ್ರ ಹಿಂದಿ ಭಾಷೆಯಲ್ಲಿದೆ. ಜನಪ್ರಿಯ ಒಟಿಟಿ ನೆಟ್‌ಫ್ಲಿಕ್ಸ್‌ನಲ್ಲಿ ಈ ಸಿನಿಮಾ ವೀಕ್ಷಣೆಗೆ ಲಭ್ಯ. 2022ರ ಚಿತ್ರ ಇದಾಗಿದ್ದು, ಇದನ್ನು ಇನ್ನೂ ವೀಕ್ಷಿಸದೆ ಇರುವವರು ನೋಡಬಹುದು. ಇದರ ರನ್ ಟೈಮ್ 2 ಗಂಟೆ 10 ನಿಮಿಷ ಮಾತ್ರ.

**ಕ್ರೈಮ್ ಥ್ರಿಲ್ಲರ್ ಸಿನಿಮಾ**



# ಪ್ರಭಾಸ್ ಜೊತೆ ಸ್ವೀಟಿ ಸಿನಿಮಾ

ಅನುಷ್ಕಾ ಶೆಟ್ಟಿ ಮತ್ತು ಪ್ರಭಾಸ್ ಅವರದ್ದು ತೆಲುಗು ಚಿತ್ರರಂಗದ ಬಲು ಹಿಟ್ ಜೋಡಿ. ಪ್ರಭಾಸ್ ಮತ್ತು ಅನುಷ್ಕಾ ಶೆಟ್ಟಿ ಅಭಿಮಾನಿಗಳು ಈ ಇಬ್ಬರೂ ಮತ್ತೆ ಸಿನಿಮಾ ಮಾಡಬೇಕೆಂದು ಒತ್ತಾಯಿಸುತ್ತಿದ್ದಾರೆ. ಇದೀಗ ಅನುಷ್ಕಾ ಶೆಟ್ಟಿಯ 'ಘಾಟಿ' ಸಿನಿಮಾ ಬಿಡುಗಡೆ ಆಗುತ್ತಿದ್ದು, ಪ್ರಭಾಸ್ ಜೊತೆಗಿನ ಸಿನಿಮಾ ಬಗ್ಗೆ ಅನುಷ್ಕಾ ಶೆಟ್ಟಿ ಮಾತನಾಡಿದ್ದಾರೆ. ಪ್ರಭಾಸ್ ಈಗ ಪ್ಯಾನ್ ಇಂಡಿಯಾ ಸ್ಟಾರ್ ನಟ. ಬಾಲಿವುಡ್‌ನ ಮೋಸ್ಟ್ ಹಾಟ್, ಗ್ಲಾಮರಸ್ ನಟಿಯರು ಸಹ ಪ್ರಭಾಸ್ ಜೊತೆಗೆ ಮನಟಿಸಲು ಅವಕಾಶ ಸಿಕ್ಕರೆ ಸಾಕೆಂದು ಕಾಯುತ್ತಿದ್ದಾರೆ. ಆದರೆ ತೆಲುಗು ಸಿನಿಮಾ ಅಭಿಮಾನಿಗಳಿಗೆ ಪ್ರಭಾಸ್ ಜೊತೆಗೆ ಜೋಡಿಯಾಗಿ ಅನುಷ್ಕಾ ಶೆಟ್ಟಿಯಲ್ಲಿ ನೋಡುವುದೇ ಇಷ್ಟ. ಪ್ರಭಾಸ್ ಹಾಗೂ ಅನುಷ್ಕಾ ಶೆಟ್ಟಿಯದ್ದು ತೆಲುಗಿನ ಬಹಳ ಇಷ್ಟದ ಜೋಡಿ. ಆದರೆ ಈ ಇಬ್ಬರು ಒಟ್ಟಿಗೆ ನಟಿಸಿ ವರ್ಷಗಳೇ ಆಗಿವೆ. ಇದೀಗ ಅನುಷ್ಕಾ ಶೆಟ್ಟಿ ಇದೀಗ ಈ ಬಗ್ಗೆ ಮಾತನಾಡಿದ್ದಾರೆ. ಅನುಷ್ಕಾ ಶೆಟ್ಟಿ ನಟನೆಯ 'ಘಾಟಿ' ಸಿನಿಮಾ ಕೆಲವೇ ದಿನಗಳಲ್ಲಿ ಬಿಡುಗಡೆ ಆಗುತ್ತಿದೆ. ಸಿನಿಮಾದ ಪ್ರಚಾರ ಚಾಲ್ತಿಯಲ್ಲಿದೆ. ಆದರೆ ಅನುಷ್ಕಾ ಶೆಟ್ಟಿ ಬಹಿರಂಗ ಪ್ರಚಾರದಲ್ಲಿ ಭಾಗವಹಿಸಿಲ್ಲ. ಆದರೆ ಫೋನ್ ಮೂಲಕ ಪತ್ರಕರ್ತರಿಗೆ ಸಂದರ್ಶನ ನೀಡಿದ್ದಾರೆ. ಈ ವೇಳೆ ಪ್ರಭಾಸ್ ಜೊತೆಗೆ ಮುಂದಿನ ಸಿನಿಮಾನಲ್ಲಿ ನಟಿಸುತ್ತೀರ ಎಂಬ ಪ್ರಶ್ನೆಗೂ ಸಹ ಅನುಷ್ಕಾ ಶೆಟ್ಟಿ ಉತ್ತರ ನೀಡಿದ್ದಾರೆ. 'ಪ್ರಭಾಸ್ ಜೊತೆಗೆ ನಟಿಸುವುದೆಂದರೆ ನನಗೆ ಬಹಳ ಖುಷಿ. ನಾನೂ ಸಹ ಆ ಅವಕಾಶಕ್ಕಾಗಿ ಕಾಯುತ್ತಿದ್ದೇನೆ. 'ಬಾಹುಬಲಿ' ಅಂಥಹಾ ಸಿನಿಮಾದ ಬಳಿಕ ಮತ್ತೆ ನಾವಿಬ್ಬರೂ ಒಟ್ಟಿಗೆ ನಟಿಸಬೇಕೆಂದರೆ ಆ ಸಿನಿಮಾ ಭಿನ್ನವಾಗಿಯೂ, ವಿಶೇಷವಾಗಿಯೂ ಆಗಿರಬೇಕು. ಒಳ್ಳೆಯ ಚಿತ್ರಕತೆ ಬಂದರೆ ನಾನಂತೂ ತಯಾರಿದ್ದೇನೆ' ಎಂದಿದ್ದಾರೆ ಅನುಷ್ಕಾ ಶೆಟ್ಟಿ. 'ಬಾಹುಬಲಿ' ಸಿನಿಮಾದ ಬಗ್ಗೆಯೂ ಮಾತನಾಡಿದ

# ಸಿನಿಮಾ ನಿರ್ಮಾಣ ತ್ಯಜಿಸಿದ ವೆಟ್ರಿಮಾರನ್

**ಕಾರಣ ಏನು ಗೊತ್ತಾ**



ವೆಟ್ರಿಮಾರನ್ ಭಾರತದ ಅತ್ಯುತ್ತಮ ಸಿನಿಮಾ ನಿರ್ದೇಶಕರಲ್ಲಿ ಒಬ್ಬರು. ನಿರ್ದೇಶಕರಾಗಿ ಮಾತ್ರವೇ ಅಲ್ಲದೆ ನಿರ್ಮಾಪಕರಾಗಿಯೂ ಸಹ ಹಲವು ಅತ್ಯುತ್ತಮ ಸಿನಿಮಾಗಳನ್ನು ನೀಡಿದ್ದಾರೆ.

ಆದರೆ ಈಗ ವೆಟ್ರಿಮಾರನ್ ತಮ್ಮ ಸಿನಿಮಾ ನಿರ್ಮಾಣ ಸಂಸ್ಥೆಯನ್ನು ಬಂದ್ ಮಾಡುತ್ತಿರುವುದಾಗಿ ಘೋಷಣೆ ಮಾಡಿದ್ದಾರೆ. ವೆಟ್ರಿಮಾರನ್, ಭಾರತದ ಪ್ರತಿಭಾವಂತ ನಿರ್ದೇಶಕರಲ್ಲಿ ಒಬ್ಬರು. ಈಗಿನ ಹಲವು ಹಿಟ್ ನಿರ್ದೇಶಕರ ರೀತಿ ಕೇವಲ ಮಾಸ್ ಮಸಾಲಾ ಸಿನಿಮಾಗಳನ್ನು ಮಾಡದ ವೆಟ್ರಿಮಾರನ್, ಕಮರ್ಷಿಯಲ್ ಅಂಶಗಳನ್ನು ಒಳಗೊಂಡ ಕಲಾತ್ಮಕ ಸಿನಿಮಾಗಳನ್ನು ನಿರ್ದೇಶಿಸುತ್ತಾ ಬರುತ್ತಿದ್ದಾರೆ. ಆಸ್ಕರ್‌ಗೆ ಭಾರತದ ಎಂಟ್ರಿ ಆಗಿದ್ದ 'ವಿಸಾರನೈ' ಸೇರಿದಂತೆ ರಾಷ್ಟ್ರಪ್ರಶಸ್ತಿ ವಿಜೇತ 'ಆಡುಕುಲಂ', 'ವಿಡುದಲೈ', 'ಅಸುರನ್', 'ವಡ ಚೆನ್ನೈ' ಇನ್ನೂ ಅನೇಕ ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ವೆಟ್ರಿಮಾರನ್ ನಿರ್ದೇಶಿಸಿದ್ದಾರೆ. ದಮನಿತರ ಪರವಾಗಿಯೇ ಸಿನಿಮಾಗಳನ್ನು ಮಾಡುವುದು ವೆಟ್ರಿಮಾರನ್ ಶೈಲಿ. ವೆಟ್ರಿಮಾರನ್ ನಿರ್ದೇಶಕರಾಗಿ ಮಾತ್ರವಲ್ಲದೆ ನಿರ್ಮಾಪಕರಾಗಿಯೂ ಕೆಲವು ಒಳ್ಳೆಯ ಸಿನಿಮಾಗಳನ್ನು ನೀಡಿದ್ದಾರೆ. ಅದರಲ್ಲೂ ಭಿನ್ನ ದನಿಯುಳ್ಳ ನಿರ್ದೇಶಕರಿಗೆ ಅವಕಾಶಗಳನ್ನು ನಿರ್ಮಾಣ ಸಂಸ್ಥೆಯ ಮೂಲಕ ವೆಟ್ರಿಮಾರನ್ ನೀಡಿದ್ದಾರೆ. ಆದರೆ ಇದೀಗ ಅವರೇ ಹೇಳಿರುವಂತೆ ಸಿನಿಮಾ ನಿರ್ಮಾಣ ಸಂಸ್ಥೆಯನ್ನೇ ಮುಚ್ಚುತ್ತಿದ್ದಾರಂತೆ ವೆಟ್ರಿಮಾರನ್. ವೆಟ್ರಿಮಾರನ್ ಸಂದರ್ಶನವೊಂದರಲ್ಲಿ ಈ ವಿಷಯ ಸ್ಪಷ್ಟಪಡಿಸಿದ್ದು, ತಮ್ಮ ನಿರ್ಮಾಣ ಸಂಸ್ಥೆಯನ್ನು ಬಂದ್ ಮಾಡುತ್ತಿರುವುದಾಗಿ ಘೋಷಿಸಿದ್ದಾರೆ. ಅದೂ ಅವರ ನಿರ್ಮಾಣದ ಸಿನಿಮಾಕ್ಕೆ ಸಿಬಿಎಫ್‌ಸಿ ಸಮಸ್ಯೆ ಎದುರಾದ ಬೆನ್ನಲ್ಲೆ ವೆಟ್ರಿಮಾರನ್ ಈ ರೀತಿಯ ಘೋಷಣೆ ಮಾಡಿರುವುದು ಅನುಮಾನಕ್ಕೆ ಕಾರಣವಾಗಿದೆ. ವೆಟ್ರಿಮಾರನ್ 2012 ರಲ್ಲಿ ಗ್ರಾಸ್ ರೂಟ್ ಫಿಲಂ ಹೆಸರಿನಲ್ಲಿ ಸಿನಿಮಾ ನಿರ್ಮಾಣ ಸಂಸ್ಥೆ ಆರಂಭಿಸಿದ್ದರು. ರಾಷ್ಟ್ರಪ್ರಶಸ್ತಿ ವಿಜೇತ 'ಕಾಕ ಮೊಟ್ಟೈ' ಸೇರಿದಂತೆ ಹಲವಾರು ಸಿನಿಮಾಗಳನ್ನು ವೆಟ್ರಿಮಾರನ್ ಅವರು ನಿರ್ಮಾಣ ಮಾಡಿದ್ದರು. ಆದರೆ ಇತ್ತೀಚೆಗೆ ಅವರ ನಿರ್ಮಾಣದ 'ಬ್ಯಾಡ್ ಗರ್ಲ್' ಸಿನಿಮಾಕ್ಕೆ ಸಿಬಿಎಫ್‌ಸಿ ಪ್ರಮಾಣ ಪತ್ರ ನೀಡಲು ತಕರಾರು ಮಾಡಿತ್ತು. ವೆಟ್ರಿಮಾರನ್ ಕೋರ್ಟ್ ಮೆಟ್ಟಿಲೇರಿ ಪ್ರಮಾಣ ಪತ್ರ ತೆಗೆದುಕೊಂಡರು. ಆ ಸಿನಿಮಾದ ಬಿಡುಗಡೆಗೆ ಮುಂಚೆಯೇ ನಿರ್ಮಾಣ ಸಂಸ್ಥೆಯನ್ನು ಬಂದ್ ಮಾಡುತ್ತಿದ್ದಾರೆ.


# ಬಿಲ್ಲ ರಂಗ ಭಾಷಾ ಖಡಕ್ ಅವತಾರದಲ್ಲಿ ಕಿಚ್ಚ



ಸುದೀಪ್ ನಟನೆಯ 'ಬಿಲ್ಲ ರಂಗ ಭಾಷಾ' ಸಿನಿಮಾದ ಪೋಸ್ಟರ್ ಬಿಡುಗಡೆ ಆಗಿದೆ. ನಿರ್ದೇಶಕ ಅನೂಪ್ ಭಂಡಾರಿ ನಿರ್ದೇಶನ ಮಾಡುತ್ತಿರುವ ಈ ಸಿನಿಮಾ ಶೀಘ್ರವೇ ಬಿಡುಗಡೆ ಆಗಲಿದೆ. ಸಿನಿಮಾದ ಬಿಡುಗಡೆಯನ್ನು ಸುದೀಪ್ ನಿನ್ನೆಯೇ ಘೋಷಣೆ ಮಾಡಿದ್ದರು.

ಸುದೀಪ್ ಹುಟ್ಟುಹಬ್ಬದ ಪ್ರಯುಕ್ತ ಸಿನಿಮಾದ ಪೋಸ್ಟರ್ ಸುದೀಪ್ ಹುಟ್ಟುಹಬ್ಬದ ಪ್ರಯುಕ್ತ ಅವರ ನಟನೆಯ ಅವರ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. 'ಬಿಲ್ಲ ರಂಗ ದೊಡ್ಡದಾಗಿ ಸುದ್ದಿಯಾಗಿತ್ತು. ಆದರೆ ಅದಾದ ಬಳಿಕ ಬಿಟ್ಟುಕೊಟ್ಟಿರಲಿಲ್ಲ. ಇದೀಗ ಸುದೀಪ್ ಹುಟ್ಟುಹಬ್ಬದ ಸಿನಿಮಾದ ಪೋಸ್ಟರ್ ಒಂದನ್ನು ಬಿಡುಗಡೆ ಈಗ ಬಿಡುಗಡೆ ಆಗಿರುವ ವಾರಿಯರ್ ರೀತಿ ಹಿಡಿದಿದ್ದಾರೆ. ಬಿಡುಗಡೆ ಆಗಿದೆ. 'ಬಿಲ್ಲ ರಂಗ ಭಾಷಾ' ದಿ ಫಸ್ಟ್ ಬ್ಲಡ್' ಸಿನಿಮಾದ ಸುದೀಪ್ ಭಾಷಾ' ಸಿನಿಮಾದ ಚಿತ್ರೀಕರಣ ಪ್ರಾರಂಭವಾದಾಗ ಸಿನಿಮಾದ ಶೂಟಿಂಗ್ ಬಗ್ಗೆ ಯಾವುದೇ ಅಪ್‌ಡೇಟ್ ಪ್ರಯುಕ್ತ ನಿರ್ದೇಶಕ ಅನೂಪ್ ಭಂಡಾರಿ ಅವರು ಮಾಡಿದ್ದಾರೆ. ಪೋಸ್ಟರ್ ಗಮನ ಸೆಳೆಯುತ್ತಿದೆ. ಪೋಸ್ಟರ್‌ನಲ್ಲಿ ಸುದೀಪ್ ಅವರು ಕಾಣುತ್ತಿದ್ದಾರೆ. ಕೈಯಲ್ಲಿ ರಾಕೆಟ್ ಲಾಂಚರ್ ಬೆನ್ನಿಗೆ ಕತ್ತಿ ಸಿಕ್ಕಿಸಿಕೊಂಡಿದ್ದಾರೆ. ಹಣೆಗೆ ಧರಿಸಿರುವ ಕನ್ನಡಕ ಈ ಸಿನಿಮಾ 40-50ರ ದಶಕದ ಕತೆ ಇರಬಹುದೆಂಬ ಅನುಮಾನ ಮೂಡಿಸುತ್ತಿದೆ.

# ರನ್ಯಾಗೆ 102.55 ಕೋಟಿ ರೂ. ದಂಡ



**ಅಕ್ರಮ ಚಿನ್ನ ಸಾಗಣೆ ಕೇಸ್ ನಟಿ**

ಕನ್ನಡದ ನಟಿ ರನ್ಯಾ ರಾವ್ ಅವರು ಅಕ್ರಮವಾಗಿ 127.3 ಕೆಜಿ ಚಿನ್ನ ಸಾಗಾಟ ಮಾಡಿರುವುದು ತನಿಖೆಯಲ್ಲಿ ದೃಢಪಟ್ಟಿದೆ. ಹಾಗಾಗಿ ಅವರಿಂದ ದಂಡ ವಸೂಲಿ ಮಾಡಲಾಗುತ್ತಿದೆ. ಇದಕ್ಕೆ ಸಂಬಂಧಪಟ್ಟಂತೆ ಅವರಿಗೆ ನೋಟಿಸ್ ನೀಡಲಾಗಿದೆ. ಬರೋಬ್ಬರಿ 102.55 ಕೋಟಿ ರೂ. ದಂಡ ಪಾವತಿಸುವಂತೆ ರನ್ಯಾ ರಾವ್‌ಗೆ ಡಿಆರ್‌ಐ ಸೂಚಿಸಿದೆ. ನಟಿ ರನ್ಯಾ ರಾವ್ ಅವರು ಅಕ್ರಮ ಚಿನ್ನ ಸಾಗಾಣಿಕೆ ಕೇಸ್‌ನಲ್ಲಿ ಸಿಕ್ಕಿ ಬಿದ್ದಿದ್ದಾರೆ. ನೂರಾರು ಕೋಟಿ ರೂಪಾಯಿ ಬೆಲೆ ಬಾಳುವ ಚಿನ್ನವನ್ನು ಅವರು ವಿದೇಶದಿಂದ ಅಕ್ರಮವಾಗಿ ಭಾರತಕ್ಕೆ ತಂದಿದ್ದರು. ಇದರ ತನಿಖೆ ನಡೆದಿದ್ದು, ರನ್ಯಾ ರಾವ್ ಗೋಲ್ಡ್ ಸ್ಮಗ್ಲಿಂಗ್ ಮಾಡಿರುವುದು ದೃಢಪಟ್ಟಿದೆ. ಈ ಹಿನ್ನೆಲೆಯಲ್ಲಿ ರನ್ಯಾ ರಾವ್‌ಗೆ ಡಿಆರ್‌ಐ ಶಾಕ್ ಕೊಟ್ಟಿದೆ. ಬರೋಬ್ಬರಿ 102.55 ಕೋಟಿ ರೂ. ದಂಡ ಪಾವತಿಸುವಂತೆ ಡಿಆರ್‌ಐ ನೋಟಿಸ್ ನೀಡಿದೆ. ಡಿಆರ್‌ಐ ಅಧಿಕಾರಿಗಳು ಅಡ್ ಜುಡಿಕೇಷನ್ ಮಾಡಿ ನೋಟಿಸ್ ನೀಡಿದ್ದಾರೆ. ಮಾರ್ಚ್ 4ರಂದು ಗೋಲ್ಡ್ ಸೀಜ್ ಮಾಡಿ ರನ್ಯಾ ರಾವ್ ಅವರನ್ನು ಡಿಆರ್‌ಐ ಬಂಧಿಸಿತ್ತು. ಕಳ್ಳಸಾಗಣೆ ವಸ್ತುಗಳನ್ನು 6 ತಿಂಗಳಲ್ಲಿ ಡಿಆರ್‌ಐ ಅಧಿಕಾರಿಗಳು ವಸೂಲಿ ಮಾಡಬೇಕಿದೆ. ರನ್ಯಾ ರಾವ್ ಅವರು ಅಕ್ರಮವಾಗಿ 127.3 ಕೆಜಿ ಚಿನ್ನ ಸಾಗಾಟ ಮಾಡಿರುವುದು ತನಿಖೆಯಿಂದ ದೃಢಪಟ್ಟಿದೆ. 102.55 ಕೋಟಿ ರೂ. ದಂಡ ಪಾವತಿಸುವಂತೆ ಆಖಖನಿಂದ ನೋಟಿಸ್ ಜಾರಿ ಆಗಿದೆ. ಸೆಪ್ಟೆಂಬರ್ 2 ಜೈಲಿಗೆ ತೆರಳಿ ರನ್ಯಾ ಸೇರಿ ನಾಲ್ವರೂ ಆರೋಪಿಗಳಿಗೆ ನೋಟಿಸ್ ನೀಡಲಾಗಿದೆ. ದಂಡ ಪಾವತಿ ಮಾಡದಿದ್ದರೆ ಆಸ್ತಿ ಮುಟ್ಟುಗೋಲು ಹಾಕಲು ಅವಕಾಶವಿದೆ. ಎ2 ಆರೋಪಿ ತರುಣ್ ಕೊಂಡುರು ರಾಜು 67.6 ಕೆಜಿ ಚಿನ್ನ ಕಳ್ಳಸಾಗಣೆ ಮಾಡಿರುವುದು ಧೃಡವಾಗಿದೆ. ತರುಣ್ ಕೊಂಡುರು ರಾಜು ಗೆ 62 ಕೋಟಿ ರೂಪಾಯಿ ದಂಡ ವಿಧಿಸಲಾಗಿದೆ. ಸಾಹಿಲ್ ಜೈಲ್ ಮತ್ತು ಭರತ್ ಜೈನ್ ತಲಾ 63.61 ಕೆಜಿ ಚಿನ್ನ ಕಳ್ಳಸಾಗಣೆ ಮಾಡಿರುವುದು ಧೃಡಪಟ್ಟಿದೆ. ಭರತ್ ಜೈನ್ ಹಾಗೂ ಸಾಹಿಲ್ ಜೈನ್ 53 ಕೋಟಿ ದಂಡ ಪಾವತಿ ಮಾಡಬೇಕು ಎಂದು ಸೂಚನೆ ನೀಡಲಾಗಿದೆ. ಜೊತೆಗೆ ಕ್ರಿಮಿನಲ್ ಕೇಸ್ ಕೂಡ ಮುಂದುವರಿಯುತ್ತೆ.

# ಕಿವೀಸ್ ಸರಣಿಗೆ ಬಲಿಷ್ಠ ಆಸ್ಟ್ರೇಲಿಯಾ ಟಿ20 ತಂಡ ಪ್ರಕಟ

ಸೌತ್ ಆಫ್ರಿಕಾ ವಿರುದ್ಧದ ಏಕದಿನ ಸರಣಿಯನ್ನು 2-1 ಅಂತರದಿಂದ ಸೋತಿರುವ ಆಸ್ಟ್ರೇಲಿಯಾ ತಂಡವು ಅಕ್ಟೋಬರ್‌ನಲ್ಲಿ ನ್ಯೂಝಿಲೆಂಡ್ ತಂಡವನ್ನು ಎದುರಿಸಲಿದೆ. ನ್ಯೂಝಿಲೆಂಡ್‌ನಲ್ಲಿ ನಡೆಯಲಿರುವ ಈ ಸರಣಿಯಲ್ಲಿ ಒಟ್ಟು 3 ಟಿ20 ಪಂದ್ಯಗಳನ್ನಾಡಲಿದೆ. ಈ ಪಂದ್ಯಗಳಿಗೆ ಬಲಿಷ್ಠ ಆಸ್ಟ್ರೇಲಿಯಾ ತಂಡವನ್ನು ಹೆಸರಿಸಲಾಗಿದೆ. ನ್ಯೂಝಿಲೆಂಡ್ ವಿರುದ್ಧದ ಟಿ20 ಸರಣಿಗಾಗಿ ಬಲಿಷ್ಠ ಆಸ್ಟ್ರೇಲಿಯಾ ತಂಡವನ್ನು ಪ್ರಕಟಿಸಲಾಗಿದೆ. 14 ಸದಸ್ಯರುಗಳ ಈ ತಂಡವನ್ನು ಮಿಚೆಲ್ ಮಾರ್ಷ್ ಮುನ್ನಡೆಸಲಿದ್ದಾರೆ. ಇನ್ನು ಟಿ20 ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿರುವ ಮಿಚೆಲ್ ಸ್ಟಾರ್ಕ್ ಅವರನ್ನು ಈ ಸರಣಿಗೆ



ಆಯ್ಕೆ ಮಾಡಲಾಗಿಲ್ಲ. ಹಾಗೆಯೇ ಕಳೆದ ಕೆಲ ಸರಣಿಗಳಿಂದ ಹೊರಗುಳಿದಿದ್ದ ಮಾರ್ಕಸ್ ಸ್ಟೊಯಿನಿಸ್ ಈ ಸರಣಿಯ ಮೂಲಕ ಕಂಬ್ಯಾಕ್ ಮಾಡಲಿದ್ದಾರೆ. ಮತ್ತೊಂದೆಡೆ ಮುಂಬರುವ ಆಯಶಸ್ ಸರಣಿಯನ್ನು ಗಮನದಲ್ಲಿರಿಸಿ ಈ ಸರಣಿಯಿಂದ ಪ್ಯಾಟ್ ಕಮಿನ್ಸ್ ಹಾಗೂ ಕ್ಯಾಮರೋನ್ ಗ್ರೀನ್‌ಗೆ ವಿಶ್ರಾಂತಿ ನೀಡಲಾಗಿದೆ. ಹಾಗೆಯೇ ವಿಕೆಟ್ ಕೀಪರ್ ಬ್ಯಾಟರ್ ಅಲೆಕ್ಸ್ ಕ್ಯಾರಿ ಕೂಡ ಸರಣಿಗೆ ಅಲಭ್ಯರಾಗಿದ್ದಾರೆ. ಅದರಂತೆ ಆಸ್ಟ್ರೇಲಿಯಾ ಟಿ20 ತಂಡ ಈ ಕೆಳಗಿನಂತಿದೆ

**ಕ್ಯಾರಿ ಕೂಡ ಸರಣಿಗೆ ಅಲಭ್ಯ**

**ಆಸ್ಟ್ರೇಲಿಯಾ ಟಿ20 ತಂಡ:** ಮಿಚೆಲ್ ಮಾರ್ಷ್ (ನಾಯಕ), ಶಾನ್ ಅಬಾಟ್, ಕ್ಸೇವಿಯರ್ ಬಾರ್ಟ್ಲೆಟ್, ಟಿಮ್ ಡೇವಿಡ್, ಬೆನ್ ದ್ವಾರ್ಶುಯಿಸ್, ಜೋಶ್ ಹೇಝಲ್‌ವುಡ್, ಟ್ರಾವಿಸ್ ಹೆಡ್, ಜೋಶ್ ಇಂಗ್ಲಿಸ್ (ವಿಕೆಟ್ ಕೀಪರ್), ಮ್ಯಾಟ್ ಕುಹ್ನೆಮನ್, ಗ್ಲೆನ್ ಮ್ಯಾಕ್ಸ್‌ವೆಲ್, ಮಿಚೆಲ್ ಓವನ್, ಮ್ಯಾಥ್ಯೂ ಶಾರ್ಟ್, ಮಾರ್ಕಸ್ ಸ್ಟೊಯಿನಿಸ್, ಆಯಡಂ ಝಂಪಾ. ಆಸ್ಟ್ರೇಲಿಯಾ-ನ್ಯೂಝಿಲೆಂಡ್ ನಡುವಣ ಟಿ20 ಸರಣಿಯು ಅಕ್ಟೋಬರ್ 1 ರಿಂದ ಶುರುವಾಗಲಿದೆ. ಈ ಸರಣಿಯಿಂದ ನ್ಯೂಝಿಲೆಂಡ್‌ನ ಮೂವರು ಆಟಗಾರರು ಹೊರಗುಳಿಯಲಿದ್ದಾರೆ.

ಬೆನ್ನಿನ ನೋವಿನಿಂದ ಬಳಲುತ್ತಿರುವ ಪ್ರಮುಖ ವೇಗಿ ವಿಲಿಯಂ ಒರೋಕ್ ಕನಿಷ್ಠ ಮೂರು ವಾರಗಳ ಕಾಲ ಕ್ರಿಕೆಟ್ ಅಂಗಳದಿಂದ ದೂರ ಉಳಿಯಲಿದ್ದಾರೆ. ಇನ್ನು ಸ್ಫೋಟಕ ಆರಂಭಿಕ ದಾಂಡಿಗ ಫಿನ್ ಅಲೆನ್ ಅವರ ಬಲಗಾಲಿಗೆ ಗಾಯವಾಗಿದ್ದು, ಹೀಗಾಗಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ. ಇದೇ ಕಾರಣದಿಂದಾಗಿ ಆಸ್ಟ್ರೇಲಿಯಾ ವಿರುದ್ಧದ ಸರಣಿಗೆ ಅಲಭ್ಯರಾಗಿದ್ದಾರೆ. ಮತ್ತೊಂದೆಡೆ ಆಲ್‌ರೌಂಡರ್ ಗ್ಲೆನ್ ಫಿಲಿಪ್ಸ್ ತೊಡೆಸಂದು ನೋವಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಇದೀಗ ಚಿಕಿತ್ಸೆ ಪಡೆಯುತ್ತಿರುವ ಫಿಲಿಪ್ಸ್ ಕೂಡ ಇನ್ನೂ ಒಂದು ತಿಂಗಳ ಕಾಲ ಮೈದಾನಕ್ಕಿಳಿಯಲ್ಲ. ಅದರಂತೆ ನ್ಯೂಝಿಲೆಂಡ್ ಟಿ20 ತಂಡ ಈ ಕೆಳಗಿನಂತಿದೆ..

**ನ್ಯೂಝಿಲೆಂಡ್ ಟಿ20 ತಂಡ:** ಮಿಚೆಲ್ ಸ್ಯಾಂಟ್ನರ್ (ನಾಯಕ), ಮೈಕೆಲ್ ಬ್ರೇಸ್‌ವೆಲ್, ಮಾರ್ಕ್ ಚಾಪ್‌ಮನ್, ಜೇಕಬ್ ಡಫಿ, ಜ್ಯಾಕ್ ಫೌಲ್ಕ್ಸ್, ಮ್ಯಾಟ್ ಹೆನ್ರಿ, ಬೆವೊನ್ ಜೇಕಬ್ಸ್, ಆಡಮ್ ಮಿಲ್ನ್, ಡ್ಯಾರಿಲ್ ಮಿಚೆಲ್, ರಚಿನ್ ರವೀಂದ್ರ, ಟಿಮ್ ಸೀಫರ್ಟ್, ಇಶ್ ಸೋಧಿ, ವಿಲಿಯಂ ಒರೋಕ್ (ಅಲಭ್ಯ), ಗ್ಲೆನ್ ಫಿಲಿಪ್ಸ್ (ಅಲಭ್ಯ), ಫಿನ್ ಅಲೆನ್ (ಅಲಭ್ಯ).



# ಟಿ20 ಕ್ರಿಕೆಟ್‌ನಲ್ಲಿ ಹೊಸ ಇತಿಹಾಸ ಸೃಷ್ಟಿಸಿದ ರಶೀದ್

ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ರಶೀದ್ ಖಾನ್ ಭರ್ಜರಿ ದಾಖಲೆ ಬರೆದಿದ್ದಾರೆ. ಈ ದಾಖಲೆಯೊಂದಿಗೆ ರಶೀದ್ ನ್ಯೂಝಿಲೆಂಡ್ ವೇಗಿ ಟಿಮ್ ಸೌಥಿ ಅವರ ವಿಶ್ವ ದಾಖಲೆಯನ್ನು ಮುರಿದಿದ್ದಾರೆ. ಅಷ್ಟೇ ಅಲ್ಲದೆ ಟಿ20 ಕ್ರಿಕೆಟ್‌ನಲ್ಲಿ ಯಾರು ಮಾಡಲಾಗದ ವಿಶೇಷ ಸಾಧನೆಯ ಮೈಲುಗಲ್ಲನ್ನು ಮುಟ್ಟಿದ್ದಾರೆ. ಅಫ್ಘಾನಿಸ್ತಾನದ ಸ್ಪಿನ್ ಮೋಡಿಗಾರ ರಶೀದ್ ಖಾನ್ ಟಿ20 ಕ್ರಿಕೆಟ್‌ನಲ್ಲಿ ಹೊಸ ವಿಶ್ವ ದಾಖಲೆ ಬರೆದಿದ್ದಾರೆ. ಅದು ಸಹ ಅತ್ಯಧಿಕ ವಿಕೆಟ್ ಕಬಳಿಸುವ ಮೂಲಕ ಎಂಬುದು ವಿಶೇಷ. ಶಾರ್ಜಾದಲ್ಲಿ ನಡೆದ ವಿರುದ್ಧದ ಪಂದ್ಯದಲ್ಲಿ ರಶೀದ್ ಖಾನ್ 4 ಓವರ್‌ಗಳಲ್ಲಿ 21 ರನ್ ನೀಡಿ 3 ವಿಕೆಟ್ ಕಬಳಿಸಿದ್ದರು. ಈ ಮೂರು ವಿಕೆಟ್‌ಗಳೊಂದಿಗೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ವಿಕೆಟ್ ಕಬಳಿಸಿದ ಬೌಲರ್ ಎಂಬ ವಿಶ್ವ ದಾಖಲೆಯನ್ನು ರಶೀದ್ ಖಾನ್ ತಮ್ಮದಾಗಿಸಿಕೊಂಡಿದ್ದಾರೆ.

ಇದಕ್ಕೂ ಮುನ್ನ ಈ ವರ್ಲ್ಡ್ ರೆಕಾರ್ಡ್ ನ್ಯೂಝಿಲೆಂಡ್‌ನ ಟಿಮ್ ಸೌಥಿ ಹೆಸರಿನಲ್ಲಿತ್ತು. ನ್ಯೂಝಿಲೆಂಡ್ ವೇಗಿ ಟಿಮ್ ಸೌಥಿ 123 ಇನಿಂಗ್ಸ್‌ಗಳಲ್ಲಿ 458.5 ಓವರ್ ಎಸೆದಿದ್ದಾರೆ. ಈ ವೇಳೆ ಎಸೆದ 2753 ಎಸೆತಗಳಲ್ಲಿ 164 ವಿಕೆಟ್ ಕಬಳಿಸಿದ್ದರು. ಈ ಮೂಲಕ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ವಿಕೆಟ್ ಪಡೆದ ಬೌಲರ್ ಎಂಬ ದಾಖಲೆ ನಿರ್ಮಿಸಿದ್ದರು. ಇದೀಗ ಈ ದಾಖಲೆಯನ್ನು ರಶೀದ್ ಖಾನ್ ಮುರಿದಿದ್ದಾರೆ. 2015 ರಿಂದ ಅಂತಾರಾಷ್ಟ್ರೀಯ ಟಿ20 ಪಂದ್ಯವಾಡುತ್ತಿರುವ ರಶೀದ್ 98 ಟಿ20 ಪಂದ್ಯಗಳಲ್ಲಿ 373.2 ಓವರ್‌ಗಳನ್ನು ಎಸೆದಿದ್ದಾರೆ. ಈ ಓವರ್‌ಗಳಲ್ಲಿ ಎಸೆದ 2240 ಎಸೆತಗಳ ಮೂಲಕ 165 ವಿಕೆಟ್ ಕಬಳಿಸಿ ಹೊಸ ಇತಿಹಾಸ ನಿರ್ಮಿಸಿದ್ದಾರೆ.

**ಅತೀ ಹೆಚ್ಚು ವಿಕೆಟ್ ಪಡೆದ ಬೌಲರ್**

# ನಾನು ಹೋಗಿ ಹುಕ್ಕಾ ಇಡುತ್ತಿರಲಿಲ್ಲ



**ಧೋನಿ ವಿರುದ್ಧ ಪಠಾಣ್ ಗಂಭೀರ ಆರೋಪ**

ಸೌರವ್ ಗಂಗೂಲಿ ನಾಯಕತ್ವದಲ್ಲಿ ಟೀಮ್ ಇಂಡಿಯಾ ಪರ ಪಾದಾರ್ಪಣೆ ಮಾಡಿದ ಇರ್ಫಾನ್ ಪಠಾಣ್ 29 ಟೆಸ್ಟ್, 120 ಏಕದಿನ ಹಾಗೂ 24 ಟಿ20 ಪಂದ್ಯಗಳನ್ನಾಡಿದ್ದಾರೆ. ಅದರಲ್ಲೂ 2007ರ ಟಿ20 ವಿಶ್ವಕಪ್ ಗೆಲ್ಲುವಲ್ಲಿ ಇರ್ಫಾನ್ ಪಠಾಣ್ ಪ್ರಮುಖ ಪಾತ್ರವಹಿಸಿದ್ದರು. ಇದಾದ ಬಳಿಕ ಭಾರತ ಟಿ20 ತಂಡದಲ್ಲಿ ಅವರಿಗೆ ಹೆಚ್ಚಿನ ಅವಕಾಶ ಸಿಕ್ಕಿರಲಿಲ್ಲ. ಟೀಮ್ ಇಂಡಿಯಾದ ಮಾಜಿ ಆಲ್‌ರೌಂಡರ್ ಇರ್ಫಾನ್ ಪಠಾಣ್ ಭಾರತ ತಂಡದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಅದು ಕೂಡ ಆಟಗಾರರ ಆಯ್ಕೆ ವಿಷಯದಲ್ಲಿ ಧೋನಿ ಪಕ್ಷಪಾತ ಮಾಡುತ್ತಿದ್ದರು ಎಂಬ ಆರೋಪದೊಂದಿಗೆ! ಹೌದು, ಖಾಸಗಿ ಚಾನೆಲ್‌ವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಇರ್ಫಾನ್ ಪಠಾಣ್ ತಮ್ಮ ಟೀಮ್ ಇಂಡಿಯಾದ ದಿನಗಳನ್ನು ನೆನಪಿಸಿಕೊಂಡಿದ್ದಾರೆ. ಈ ವೇಳೆ ತಾನು ಹೇಗೆ ಅವಕಾಶ ವಂಚಿತನಾದೆ ಎಂಬುದನ್ನು ಸಹ ಪ್ರಸ್ತಾಪಿಸಿದ್ದಾರೆ. 2008 ರ ಆಸ್ಟ್ರೇಲಿಯಾ ಸರಣಿಯ ಸಮಯದಲ್ಲಿ, ಇರ್ಫಾನ್ ಚೆನ್ನಾಗಿ ಬೌಲಿಂಗ್ ಮಾಡುತ್ತಿಲ್ಲ ಎಂದು ಧೋನಿ ಹೇಳಿಕೆ ನೀಡಿದ್ದರು. ಆದರೆ ಆ ಸರಣಿಯುದ್ದಕ್ಕೂ ನಾನು ಉತ್ತಮವಾಗಿ ಬೌಲಿಂಗ್ ಮಾಡಿದ್ದೆ. ಕೆಲವೊಮ್ಮೆ, ಹೇಳಿಕೆಗಳನ್ನು ಮಾಧ್ಯಮಗಳಲ್ಲಿ ತಿರುಚಲಾಗುತ್ತದೆ. ಆದ್ದರಿಂದ ನಾನು ಈ ಬಗ್ಗೆ ಸ್ಪಷ್ಟನೆ ಕೇಳಲು ಬಯಸಿದ್ದೆ. ಹೀಗಾಗಿ ನಾನು ಅವರನ್ನೇ, ಇದಕ್ಕಿಂತ ಚೆನ್ನಾಗಿ ಬೌಲಿಂಗ್ ಮಾಡುವುದು ಹೇಗೆ ಎಂದು ಕೇಳಿದ್ದೆ.

ಧೋನಿ, ಆ ಥರ ಏನೂ ಇಲ್ಲ. ಎಲ್ಲವೂ ಯೋಜನೆಯಂತೆ ಚೆನ್ನಾಗಿ ನಡೀತಿದೆ ಎಂದರು. ನಾಯಕನಿಂದಲೇ ಈ ಬಗ್ಗೆ ಸ್ಪಷ್ಟನೆ ಸಿಕ್ಕ ಮೇಲೆ ನಾವು ನಮ್ಮ ಕೆಲಸ ಮಾಡಿಕೊಂಡು ಹೋಗಬೇಕಷ್ಟೇ. ಆದರೆ ಇದಾದ ಬಳಿಕ ಕೂಡ ನೀವು ಮತ್ತೆ ಮತ್ತೆ ವಿವರಣೆಗಳನ್ನು ಕೇಳುತ್ತಿದ್ದರೆ, ಅದು ನಿಮ್ಮ ಸ್ವಾಭಿಮಾನಕ್ಕೆ ಧಕ್ಕೆಯನ್ನುಂಟು ಮಾಡುತ್ತದೆ. ನಮಗೂ ಸ್ವಾಭಿಮಾನ ಇರುತ್ತಲ್ವಾ ನನಗೆ ಯಾರದ್ದಾದರೂ ಕೋಣೆಗೆ ಹೋಗಿ ಹುಕ್ಕಾ ಸೆಟ್ ಮಾಡಿಕೊಡುವ ಅಥವಾ ಅದರ ಬಗ್ಗೆ ಮಾತನಾಡುವ ಅಭ್ಯಾಸ ಇರಲಿಲ್ಲ. ಇವೆಲ್ಲವೂ ಎಲ್ಲರಿಗೂ ತಿಳಿದಿರುವ ವಿಷಯ. ಕೆಲವೊಮ್ಮೆ ನೀವು ಅದರ ಬಗ್ಗೆ ಮಾತನಾಡದಿದ್ದರೆ, ಅದು ಉತ್ತಮ. ಒಬ್ಬ ಕ್ರಿಕೆಟಿಗನ ಕೆಲಸವೆಂದರೆ ಮೈದಾನದಲ್ಲಿ ಪ್ರದರ್ಶನ ನೀಡುವುದು ಮತ್ತು ನಾನು ಅದನ್ನೇ ಕೇಂದ್ರೀಕರಿಸುತ್ತಿದ್ದೆ ಎಂದು ಪಠಾಣ್ ಹೇಳಿದ್ದಾರೆ. ಇಲ್ಲಿ ಇರ್ಫಾನ್ ಪಠಾಣ್, ಮಹೇಂದ್ರ ಸಿಂಗ್ ಧೋನಿ ತನ್ನ ಪರವಿರುವವರಿಗೆ ಅವಕಾಶ ನೀಡುತ್ತಿದ್ದರು ಎಂದು ಪರೋಕ್ಷವಾಗಿ ಆರೋಪಿಸಿದ್ದಾರೆ.



# ಭಾರತದ ವಿರುದ್ಧದ ಸರಣಿಯಿಂದ ಸ್ಟಾರ್ ಆಟಗಾರ ಔಟ್

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಏಕದಿನ ಸರಣಿಯು ಅಕ್ಟೋಬರ್ 19 ರಿಂದ ಶುರುವಾಗಲಿದ್ದು, ಈ ಸರಣಿಯಲ್ಲಿ ಉಭಯ ತಂಡಗಳು ಮೂರು ಪಂದ್ಯಗಳನ್ನಾಡಲಿದೆ. ಈ ಸರಣಿಯ ಬಳಿಕ ಉಭಯ ತಂಡಗಳು 5 ಪಂದ್ಯಗಳ ಟಿ20 ಸರಣಿ ಆಡಲಿದೆ. ಈ ಎರಡು ಸರಣಿಗಳಿಗೆ ಆಸ್ಟ್ರೇಲಿಯಾ ತಂಡದ ನಾಯಕ ಪ್ಯಾಟ್ ಕಮಿನ್ಸ್ ಅಲಭ್ಯರಾಗಲಿದ್ದಾರೆ.

ಆಸ್ಟ್ರೇಲಿಯಾ ತಂಡದ ಸ್ಟಾರ್ ಆಲ್‌ರೌಂಡರ್ ಪ್ಯಾಟ್ ಕಮಿನ್ಸ್ ಭಾರತದಿಂದ ವಿರುದ್ಧ ಸರಣಿಯಿಂದ ಹೊರಗುಳಿಯುವುದು ಖಚಿತವಾಗಿದೆ. ಸೊಂಟದ ಮೂಳೆಯ ನೋವಿನಿಂದ ಬಳಲುತ್ತಿರುವ ಕಮಿನ್ಸ್ ಅವರಿಗೆ ವೈದ್ಯರು ಹೆಚ್ಚಿನ ವಿಶ್ರಾಂತಿ ಸೂಚಿಸಿದ್ದಾರೆ. ಇದೇ ಕಾರಣದಿಂದ ಕಮಿನ್ಸ್ ನ್ಯೂಝಿಲೆಂಡ್ ವಿರುದ್ಧದ ಸರಣಿಯಿಂದ ಹೊರಗುಳಿದಿದ್ದಾರೆ. ಅಲ್ಲದೆ ಮುಂಬರುವ ಭಾರತದ ವಿರುದ್ಧದ ಏಕದಿನ ಹಾಗೂ ಟಿ20 ಸರಣಿಗಳಿಗೂ ಅವರು ಅಲಭ್ಯರಾಗಲಿದ್ದಾರೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಸರಣಿಯು ಅಕ್ಟೋಬರ್ 19 ರಿಂದ ಶುರುವಾಗಲಿದೆ. ಈ ಸರಣಿಯಿಂದ ಕಮಿನ್ಸ್ ಹೊರಗುಳಿಯುತ್ತಿರುವ ಕಾರಣ ಮಿಚೆಲ್ ಮಾರ್ಷ್ ತಂಡವನ್ನು ಮುನ್ನಡೆಸುವ ಸಾಧ್ಯತೆಯಿದೆ. ಇನ್ನು ನವೆಂಬರ್ ವೇಳೆಗೆ ಸಂಪೂರ್ಣವಾಗಿ ಗುಣಮುಖರಾದರೆ ಮಾತ್ರ ಪ್ಯಾಟ್ ಕಮಿನ್ಸ್ ಆಯಶಸ್ ಸರಣಿಯಲ್ಲಿ ಕಣಕ್ಕಿಳಿಯಲಿದ್ದಾರೆ. ಇಂಗ್ಲೆಂಡ್ ಹಾಗೂ ಆಸ್ಟ್ರೇಲಿಯಾ ನಡುವಣ ಪ್ರತಿಷ್ಠಿತ ಟೆಸ್ಟ್ ಸರಣಿಯು ನವೆಂಬರ್ 21 ರಿಂದ ಶುರುವಾಗಲಿದೆ. ಈ ಸರಣಿಯು ಆಸ್ಟ್ರೇಲಿಯಾ ಪಾಲಿಗೆ ಮಹತ್ವದ್ದಾಗಿದ್ದು, ಹೀಗಾಗಿ ಪ್ಯಾಟ್ ಕಮಿನ್ಸ್ ಅವರ ಗಾಯದ ಬಗ್ಗೆ ನಿಗಾವಹಿಸಲು ಕ್ರಿಕೆಟ್ ಆಸ್ಟ್ರೇಲಿಯಾ ವೈದ್ಯರುಗಳಿಗೆ ಸೂಚಿಸಿದ್ದಾರೆ ಎಂದು ತಿಳಿದು ಬಂದಿದೆ. ಹೀಗಾಗಿ ಕಮಿನ್ಸ್ ಮುಂದಿನ ಒಂದೆರಡು ತಿಂಗಳುಗಳು ಕಾಲ ಮೈದಾನದಿಂದ ಹೊರಗುಳಿಯುವುದು ಖಚಿತ ಎಂದೇ ಹೇಳಬಹುದು.

**ಆಸ್ಟ್ರೇಲಿಯಾಗೆ ಬಿಗ್ ಶಾಕ್**

**ನ್ಯೂಝಿಲೆಂಡ್ ವಿರುದ್ಧದ ಸರಣಿಗೆ ಆಸ್ಟ್ರೇಲಿಯಾ ಟಿ20 ತಂಡ:** ಮಿಚೆಲ್ ಮಾರ್ಷ್ (ನಾಯಕ), ಶಾನ್ ಅಬಾಟ್, ಕ್ಸೇವಿಯರ್ ಬಾರ್ಟ್ಲೆಟ್, ಟಿಮ್ ಡೇವಿಡ್, ಬೆನ್ ದ್ವಾರ್ಶುಯಿಸ್, ಜೋಶ್ ಹೇಝುಲ್ ವುಡ್, ಟ್ರಾವಿಸ್ ಹೆಡ್, ಜೋಶ್ ಇಂಗ್ಲಿಸ್ (ವಿಕೆಟ್ ಕೀಪರ್), ಮ್ಯಾಟ್ ಕುಹ್ನೆಮನ್, ಗ್ಲೆನ್ ಮ್ಯಾಕ್ಸ್‌ವೆಲ್, ಮಿಚೆಲ್ ಓವನ್, ಮ್ಯಾಥ್ಯೂ ಶಾರ್ಟ್, ಮಾರ್ಕಸ್ ಸ್ಟೊಯಿನಿಸ್, ಆಯಡಂ ಝಂಪಾ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966